**ಸಂಪುಟ:** 05 **ಸಂಚಿಕೆ:** 69 **ಪುಟಗಳು:** 08 **ಶುಕ್ರವಾರ** 23 ಮೇ 2025

www.udayavahini.in | epaper.udayavahini.in | Udaya vahini news | Udaya vahini news | Udayavahini news youtube | udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ  RNI No. KARKAN/2021/80833  9448225696  +91 8035841833  ₹5

**ಮುಂಜಾನೆ ಮಾತು**

ನಿಮ್ಮ ಬಗ್ಗೆ ನಿಮಗೆ ವಿಶ್ವಾಸವಿರಬೇಕು. ನೀವು ಅದನ್ನು ಹೊಂದಿಲ್ಲದಿದ್ದರೆ ನೀವು ಯಾವುದೇ ಯಶಸ್ಸನ್ನು ಸಾಧಿಸಲು ಸಾಧ್ಯವಿಲ್ಲ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಗೃಹಲಕ್ಷ್ಮಿ ಸಂಘ ರಚನೆಗೆ ಮುಂದಾದ ರಾಜ್ಯ ಸರ್ಕಾರ

• **ಉದಯವಾಹಿನಿ, ಬೆಂಗಳೂರು**

ಗೃಹಲಕ್ಷ್ಮಿ ಯಜಮಾನಿಯರನ್ನು ಆರ್ಥಿಕವಾಗಿ ಮತ್ತಷ್ಟು ಸದೃಢರನ್ನಾಗಿ ಮಾಡುವ ಉದ್ದೇಶದಿಂದ ಗೃಹಲಕ್ಷ್ಮಿ ಸಂಘಗಳನ್ನು ರಚಿಸಲು ಕಾರ್ಯ ಯೋಜನೆ ರೂಪಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಗುರುವಾರ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮಹಿಳೆಯರಿಂದ ಸ್ವಸಹಾಯ/ಸ್ತ್ರೀ ಶಕ್ತಿ ಗುಂಪುಗಳನ್ನು ರಚಿಸುವ ಸಂಬಂಧ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಸಚಿವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೂಲಕ 'ಗೃಹಲಕ್ಷ್ಮಿ' ಸಂಘವನ್ನು ರಚಿಸಲಾಗುವುದು



ಎಂದರು. ರಾಜ್ಯದಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 1.25 ಕೋಟಿ ಫಲಾನುಭವಿಗಳಿದ್ದಾರೆ. ಪ್ರತಿ ತಿಂಗಳು ಸಂದಾಯ ಆಗುತ್ತಿರುವ 2 ಸಾವಿರ ರೂಪಾಯಿ ಹಣವನ್ನು ಇನ್ನಷ್ಟು ಸದುಪಯೋಗ ಪಡಿಸಿಕೊಳ್ಳುವ ನಿಟ್ಟಿನಲ್ಲಿ ಗೃಹಲಕ್ಷ್ಮಿ ಸಂಘಗಳನ್ನು ರಚಿಸಲಾಗುವುದು. ಈ ಮೂಲಕ ಗೃಹಲಕ್ಷ್ಮಿ ಯಜಮಾನಿಯರನ್ನು ಆರ್ಥಿಕವಾಗಿ ಮತ್ತಷ್ಟು ಸದೃಢರನ್ನಾಗಿ ಮಾಡುವುದೇ ಉದ್ದೇಶವಾಗಿದೆ ಎಂದು ಹೇಳಿದರು.

### ಮೈಸೂರು, ಬೆಂಗಳೂರಿನಲ್ಲಿ ಬೃಹತ್ ಕಾರ್ಯಕ್ರಮಕ್ಕೆ ಯೋಜನೆ

**ರಾಜ್ಯದಲ್ಲಿ ಅಂಗನವಾಡಿಗಳು ಅಸ್ತಿತ್ವಕ್ಕೆ ಬಂದು ಐವತ್ತು ವರ್ಷಗಳಾಗಿವೆ. ಹಾಗಾಗಿ, ಇಲಾಖೆ ವತಿಯಿಂದ 'ಅಂಗನವಾಡಿಗಳ ಸುವರ್ಣೋತ್ಸವ' ವನ್ನು ಅಕ್ಟೋಬರ್ ತಿಂಗಳಿನಲ್ಲಿ ಆಚರಿಸಲು ಈಗಾಗಲೇ ತೀರ್ಮಾನಿಸಲಾಗಿದೆ. ಮೈಸೂರು ಅಥವಾ ಬೆಂಗಳೂರಿನಲ್ಲಿ ದೊಡ್ಡ ಮಟ್ಟದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಅದೇ ಸಂದರ್ಭದಲ್ಲಿ ಗೃಹಲಕ್ಷ್ಮಿ ಸಂಘಗಳನ್ನು ಉದ್ಘಾಟಿಸಲಾಗುವುದೆಂದು ಸಚಿವರು ತಿಳಿಸಿದರು.**

ರಾಜ್ಯದಲ್ಲಿ ಈ ಹಿಂದೆ ಮೋಟಮ್ಮನವರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಾಗಿದ್ದಾಗ ಸ್ತ್ರೀಶಕ್ತಿ ಸಂಘಗಳನ್ನು ಹುಟ್ಟುಹಾಕಿ, ಮಹಿಳೆಯರಲ್ಲಿ ಆರ್ಥಿಕ ಕ್ರಾಂತಿಕಾರಿ ಬದಲಾವಣೆಗಳನ್ನು ತಂದಿದ್ದರು. ಅದೇ ರೀತಿ ಈಗ ಗೃಹಲಕ್ಷ್ಮಿ ಸಂಘಗಳ ಮೂಲಕ ಕುಟುಂಬದ ಯಜಮಾನಿಯರಲ್ಲಿ ಆರ್ಥಿಕ ಬದಲಾವಣೆ ತರಬೇಕೆಂಬ ಉದ್ದೇಶದಿಂದ ಪ್ರತಿ ಹಳ್ಳಿ ಹಳ್ಳಿಗಳಲ್ಲೂ ಸಂಘ ರಚಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಗೃಹಲಕ್ಷ್ಮಿ ಸಂಘಗಳನ್ನು ಆಯ್ದ ನಾಲ್ಕೈದು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಆರಂಭಿಸಲು ಉದ್ದೇಶ ಹೊಂದಲಾಗಿದೆ. ನಂತರದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನಗರ- ಗ್ರಾಮೀಣ ಪ್ರದೇಶಗಳಲ್ಲಿ ಗೃಹಲಕ್ಷ್ಮಿ ಸಂಘಗಳನ್ನು ಅಸ್ತಿತ್ವಕ್ಕೆ ತರಲಾಗುವುದು ಎಂದು ಸಚಿವರು ಹೇಳಿದರು. ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಇಲಾಖೆಯ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಕೌಶಲ್ಯ ಅಭಿವೃದ್ಧಿ ಇಲಾಖೆಯ ವ್ಯವಸ್ಥಾಪಕ ನಿರ್ದೇಶಕಿ ಶ್ರೀವಿದ್ಯಾ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ ದಿಲೀಶ್ ಸಸಿ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಕ್ಯಾಮೆರಾಗಳ ಮುಂದೆ ಮಾತ್ರ ನಿಮ್ಮ ರಕ್ತ ಕುದಿಯುತ್ತದೆ

• **ಉದಯವಾಹಿನಿ, ನವದೆಹಲಿ**

ನನ್ನ ಮೈಯಲ್ಲಿ ಹರಿಯುತ್ತಿರುವುದು ರಕ್ತವಲ್ಲ, ಕುದಿಯುತ್ತಿರುವ ಸಿಂಧೂರ ಎಂದು ಇಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಭಾಷಣದಲ್ಲಿ ಹೇಳಿದ್ದರು. ಇದಕ್ಕೆ ಟೀಕಾಪ್ರಹಾರ ನಡೆಸಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಕ್ಯಾಮೆರಾಗಳ ಮುಂದೆ ಮಾತ್ರ ನಿಮ್ಮ ರಕ್ತ ಕುದಿಯುವುದೇಕೆ ಎಂದು ಪ್ರಶ್ನಿಸಿದ್ದಾರೆ. ಪಾಕಿಸ್ತಾನದ ವಿರುದ್ಧದ ಮಿಲಿಟರಿ ಯುದ್ಧವನ್ನು ನಿಲ್ಲಿಸಲು ಒಪ್ಪುವ ಮೂಲಕ ಮೋದಿ ಭಾರತದ ಪ್ರತಿಷ್ಠೆಯೊಂದಿಗೆ ರಾಜಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ. ಮೋದಿಯವರೇ, ಸುಳ್ಳು ಭಾಷಣಗಳನ್ನು ನಿಲ್ಲಿಸಿ. ಭಯೋತ್ಪಾದನೆಯ ಬಗ್ಗೆ ಪಾಕಿಸ್ತಾನದ ಹೇಳಿಕೆಯನ್ನು ನೀವು ಏಕೆ ನಂಬಿದ್ದೀರಿ ಟ್ರಂಪ್‌ಗೆ ತಲೆಬಾಗುವ ಮೂಲಕ ನೀವು ಭಾರತದ ಹಿತಾಸಕ್ತಿಗಳನ್ನು ಏಕೆ ತ್ಯಾಗ ಮಾಡಿದ್ದೀರಿ ಕ್ಯಾಮೆರಾಗಳ ಮುಂದೆ ಮಾತ್ರ ಏಕೆ ನಿಮ್ಮ ರಕ್ತ ಕುದಿಯುತ್ತಿದೆ ನೀವು ಭಾರತದ ಪ್ರತಿಷ್ಠೆಯೊಂದಿಗೆ ರಾಜಿ ಮಾಡಿಕೊಂಡಿದ್ದೀರಿ! ಎಂದು ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಭಯೋತ್ಪಾದನೆ ಅಥವಾ ಮಿಲಿಟರಿ ಕ್ರಮಕ್ಕೆ ಯಾವುದೇ ಬೆಂಬಲ ನೀಡುವುದಿಲ್ಲ ಎಂಬ ಪಾಕಿಸ್ತಾನದ ಭರವಸೆಯನ್ನು ಭಾರತ ಗಮನಿಸಿದೆ ಎಂದು ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿಯವರ ವಿಡಿಯೋವನ್ನು ಸಹ ಹಂಚಿಕೊಂಡಿದ್ದಾರೆ. ಸಿಂಧೂರ ಎಂದು ಹೇಳಿದ್ದರು.

## ಕನ್ನಡದ ನಟಿಯರನ್ನ ಹಾಕೊಂಡ್ರೆ, ಲಾಭ ಬರಲ್ವಾ

• **ಉದಯವಾಹಿನಿ, ಬೆಂಗಳೂರು**




ಮೈಸೂರು ಸ್ಯಾಂಡಲ್ ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ಕಂಪನಿಯ ಪ್ರಾಥಮಿಕ ಗ್ರಾಹಕರು ಕರ್ನಾಟಕದ ಕನ್ನಡಿಗರಾಗಿದ್ದಾರೆ. ಕನ್ನಡ ನಟಿಯರನ್ನ ಹಾಕೊಂಡ್ರೆ ಲಾಭ ಬರಲ್ವಾ ಎಂದು ಕರವೇ ರಾಜ್ಯಾಧ್ಯಕ್ಷ ನಾರಾಯಣ ಗೌಡ ಆಕ್ರೋಶ ಹೊರಹಾಕಿದ್ದಾರೆ. ಪರಭಾಷಾ ನಟಿ ತಮನ್ನಾ ಭಾಟಿಯಾ ಅವರನ್ನು ಮೈಸೂರು ಸ್ಯಾಂಡಲ್ ಸೋಪ್‌ನ ರಾಯಭಾರಿಯಾಗಿ ಮಾಡಿದ ಬಗ್ಗೆ ಮಾತನಾಡಿದರು. ಮೈಸೂರು ಸ್ಯಾಂಡಲ್ ಸೋಪ್ ಕಂಪನಿ ತನ್ನ ಬ್ರಾಂಡ್ ಅಂಬಾಸೆಡರ್ ಆಗಿ ಬಾಲಿವುಡ್ ನಟಿ ತಮನ್ನಾ ಭಾಟಿಯಾ ಅವರನ್ನು 6.2 ಕೋಟಿ ರೂ. ತೆತ್ತು ನೇಮಕ ಮಾಡಿರುವುದು ಅವಿವೇಕದ, ಅಸಂಬದ್ಧ, ಅನೈತಿಕ, ಬೇಜವಾಬ್ದಾರಿಯುತ ತೀರ್ಮಾನವಾಗಿದೆ ಕಿಡಿಕಾರಿದ್ದಾರೆ. ಇದು ಕರ್ನಾಟಕ ಸರ್ಕಾರದ ಸ್ವಾಮ್ಯದ ಕಂಪನಿ. 1916ರಲ್ಲಿ ಮೈಸೂರು ಸಂಸ್ಥಾನದ ಮಹಾರಾಜ ಕೃಷ್ಣರಾಜ ಒಡೆಯರ್ ಅವರು ಸ್ಥಾಪಿಸಿದ್ದಾರೆ. ಈ ಕಂಪನಿಯು ಕರ್ನಾಟಕದಲ್ಲಿ ಅತ್ಯಂತ ಜನಪ್ರಿಯ ಬ್ರಾಂಡ್‌ಗಳಲ್ಲಿ ಒಂದಾಗಿದೆ. ಇದರ ಪ್ರಾಥಮಿಕ ಗ್ರಾಹಕರು ಕನ್ನಡಿಗರಾಗಿದ್ದಾರೆ ಎನ್ನುವ ಕನಿಷ್ಠ ತಿಳಿವಳಿಕೆ ಈ ನೇಮಕ ಮಾಡುವಾಗ ಇರಲಿಲ್ಲವೇ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮೌಲ್ಯವುಳ್ಳ ಕಂಪನಿಯ ಬ್ರಾಂಡ್ ಅಂಬಾಸಿಡರ್ ಆಗಿ ಬಾಲಿವುಡ್ ನಟಿ ತಮನ್ನಾ ಭಾಟಿಯಾ ಅವರೇ ಬೇಕಿತ್ತಾ ಎಂದು ಪ್ರಶ್ನಿಸಿದ್ದಾರೆ.

## ಡಿಕೆಶಿ ಬದಲು ಸತ್ಯಹರಿಶ್ಚಂದ್ರ ಅಂತ ಬದಲಿಸಿಕೊಂಡ್ರೆ...

• **ಉದಯವಾಹಿನಿ, ಬೆಂಗಳೂರು**

ರಾಮನಗರದ ಹೆಸರನ್ನು ಬೆಂಗಳೂರು ದಕ್ಷಿಣ ಎಂದು ಇಂದಿನಿಂದ ಘೋಷಣೆ ಮಾಡಲಾಗುತ್ತದೆ ಎಂದು ಸರ್ಕಾರ ತಿಳಿಸಿದೆ. ಈ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿದ ವಿಪಕ್ಷ ನಾಯಕ ಆರ್ ಅಶೋಕ್, ಹೆಸರು ಬದಲಾಯಿಸಿದರೆ ಏನಾಗುತ್ತೆ ಡಿಕೆ ಶಿವಕುಮಾರ್ ಬದಲು ಸತ್ಯ ಹರಿಶ್ಚಂದ್ರ ಅಂತ ಹೆಸರಿಟ್ಕೊಂಡ್ರೆ ಸತ್ಯವಂತ ಆಗ್ತಾರಾ ಎಂದು ಲೇವಡಿ ಮಾಡಿದ್ದಾರೆ. ರಾಮನಗರ ರಾಮನಗರ ಆಗಿಯೇ ಇರಬೇಕು ಹೌದು, ಬೆಂಗಳೂರಿನಲ್ಲಿ ರಾಮನಗರ ಜಿಲ್ಲೆಗೆ ಬೆಂಗಳೂರು ದಕ್ಷಿಣ ಎಂದು ನಾಮಕರಣ ಮಾಡುವುದಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಾಮನಗರ ರಾಮನಗರ ಆಗಿಯೇ ಇರಬೇಕು. ಮೊದಲು ಅಭಿವೃದ್ಧಿ ಬಗ್ಗೆ ಯೋಚಿಸಿ. ಗ್ರೇಟರ್ ಬೆಂಗಳೂರು ಆಯ್ತು, ವಾಟರ್ ಬೆಂಗಳೂರು, ಲೂಟಿ ಬೆಂಗಳೂರು ಆಯ್ತು. ಬೆಂಗಳೂರು ಅಭಿವೃದ್ಧಿಗೆ 5000 ಕೋಟಿ ಕೊಟ್ಟಿದೀವಿ ಅಂದ್ರಾ, ಸತ್ತವರಿಗೆ ಪರಿಹಾರ ಕೊಟ್ಟರಾ ಇಲ್ಲ. ಲೂಟಿಗೆ ಏನುಬೇಕೋ ಅಷ್ಟನ್ನು ಡಿಕೆಶಿ ಮಾಡ್ತಿದ್ದಾರೆ ಎಂದು ಕಿಡಿಕಾರಿದರು.

# ಪರಂಗೆ ರನ್ಯಾ ನಂಟು ಸಚಿವರಿಗೆ ಇಡಿ ಕಗ್ಗಂಟು



**ರನ್ಯಾ ರಾವ್ ವಿಚಾರಣೆಯಲ್ಲಿ ಸಿಕ್ಕ ಮಾಹಿತಿಯ ಆಧಾರದಲ್ಲಿ ಈ ದಾಳಿ**

**ರನ್ಯಾ ರಾವ್ ಅವರಿಗೆ ಪರಮೇಶ್ವರ್ ಅವರು 15 ರಿಂದ 25 ಲಕ್ಷದ ಗಿಫ್ಟ್**

**ಗೃಹ ಸಚಿವ ಪರಮೇಶ್ವರ್ ಒಡೆತನದ ಸಂಸ್ಥೆಗಳ ಮೇಲೆ ಇ.ಡಿ. ದಾಳಿ, ಎರಡನೇ ದಿನವೂ ತಲಾಶ್!**

• **ಉದಯವಾಹಿನಿ, ಬೆಂಗಳೂರು**

ಗೃಹ ಸಚಿವ ಹಾಗೂ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಉಪ ಕುಲಪತಿಯೂ ಆಗಿರುವ ಡಾ. ಜಿ ಪರಮೇಶ್ವರ್ ವಿರುದ್ಧ ಜಾರಿ ನಿರ್ದೇಶನಾಲಯ ದಾಳಿ ನಡೆಸಿದೆ. ಬುಧವಾರ ತುಮಕೂರು ಹಾಗೂ ಇತರ ಭಾಗಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಲಾಗಿತ್ತು. ಗುರುವಾರವೂ ಇ.ಡಿ ಅಧಿಕಾರಿಗಳು ತಪಾಸಣೆಯನ್ನು ನಡೆಸಿದ್ದಾರೆ. ಮಹತ್ವದ ದಾಖಲೆಗಳನ್ನು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ. ಹಾಗಾದರೆ ಎರಡು ದಿನಗಳಲ್ಲಿ ಏನೆಲ್ಲಾ ಬೆಳವಣಿಗೆಗಳು ನಡೆದಿವೆ ಎಂಬುವುದರ ವಿವರ ಇಲ್ಲಿದೆ.

**ಬೆಂಬಲಕ್ಕೆ ನಿಂತ ಕೈಮುಖಂಡರು:** ಇದು ಸಂಪೂರ್ಣ ರಾಜಕೀಯ ಪ್ರೇರಿತ ದಾಳಿಯಾಗಿದೆ. ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ವಿಪಕ್ಷ ನಾಯಕರ ಮೇಲೆ ಇಡಿ ಐಟಿ

### ಪರಮೇಶ್ವರ್ ನಿವಾಸಕ್ಕೆ ದೌಡಾಯಿಸಿದ್ದ ಸಚಿವರು

**ಇಡಿ ದಾಳಿ ಪ್ರಕರಣ ಗಂಭೀರ ಸ್ವರೂಪ ಪಡೆದುಕೊಳ್ಳುವ ಸುಳಿವು ದೊರೆತ ಬೆನ್ನಲ್ಲೇ ಗೃಹ ಸಚಿವ ಡಾ. ಜಿ ಪರಮೇಶ್ವರ್ ನಿವಾಸಕ್ಕೆ ಗುರುವಾರ ಬೆಳಗ್ಗೆ ಸಚಿವರ ದಂಡು ದೌಡಾಯಿಸಿದೆ. ಡಿಸಿಎಂ ಡಿಕೆ ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಚಲುವರಾಯಸ್ವಾಮಿ ಅವರು ಬೆಂಗಳೂರಿನ ಸದಾಶಿವನಗರದಲ್ಲಿರುವ ಪರಮೇಶ್ವರ್ ನಿವಾಸಕ್ಕೆ ತೆರಳಿ ಸಮಾಲೋಚನೆ ನಡೆಸಿದ್ದಾರೆ. ಅದಾದ ನಂತರ ಮಾಧ್ಯಮ ಪ್ರತಿನಿಧಿಗಳ ಬಳಿ ಮಾತನಾಡಿದ ಡಿಕೆ ಶಿವಕುಮಾರ್, ಮಾಹಿತಿ ನೀಡಿದ್ದಾರೆ.**

ದಾಳಿ ಮೂಲ ಧ್ವನಿ ಅಡಗಿಸುವ ಕೆಲಸ ನಡೆಸುತ್ತಿದೆ ವಿಧಾನಪರಿಷತ್ ಸದಸ್ಯ ಬಿ.ಕೆ ಹರಿಪ್ರಸಾದ್ ಆರೋಪಿಸಿದ್ದಾರೆ. ಬಿಜೆಪಿಯವರು ಇಡಿ ಸಿಬಿಐ ಐಟಿಯನ್ನ ಕೈಗೊಂಬೆ ತರಹ ಬಳಸಿಕೊಂಡು ಕೆಲಸ ಮಾಡುತ್ತಿದ್ದಾರೆ. ದಲಿತ ಸಚಿವರನ್ನು ನೋಡಿದ್ರೆ ಬಿಜೆಪಿಯವರಿಗೆ ತಡೆದುಕೊಳ್ಳಲು ಆಗಲ್ಲ. ಆದರೆ ನಾವು ಈ ದಾಳಿಗೆ ಜಗ್ಗಲ್ಲ, ಬಗ್ಗಲ್ಲ.ಇಡಿ, ಸಿಬಿಐ ಮೂಲಕ ಕಾಂಗ್ರೆಸ್ ನಾಯಕರನ್ನ ಹೆದರಿಸುವ ಬೆದರಿಸುವ ಕೆಲಸ ಮಾಡುತ್ತಿದ್ದಾರೆ. ಇದನ್ನ ಎದುರಿಸುವ ಶಕ್ತಿ ನಮ್ಮಗೆ ಇದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಆರೋಪಿಸಿದ್ದಾರೆ. ಇದು ರಾಜಕೀಯ ಪ್ರೇರಿತ ದಾಳಿ ಅಲ್ಲದೆ ಮತ್ತೇನು ಸಿದ್ಧಾರ್ಥ ಸಂಸ್ಥೆ ಬಹಳ ಹಳೇ ಸಂಸ್ಥೆಯಾಗಿದೆ. ಪದೇ ಪದೇ ಇಡಿ, ಐಟಿ ದಾಳಿಮಾಡಿದ್ರೆ, ರಾಜಕೀಯ ಪ್ರೇರಿತ ಅಂತಲೇ ಎಲ್ಲಾರೂ ಮಾತನಾಡೋದು. ದಾಳಿಯಾದ್ರೆ, ಗಾಬರಿಯಾಗುವಂತದ್ದು ಏನಿದೆ ಕಾನೂನು ಪ್ರಕಾರ ಏನು ಆಗಬೇಕೋ ಆಗುತ್ತದೆ. ಪರಮೇಶ್ವರ್ ಅವರ ಸಂಸ್ಥೆಗಳ ವಹಿವಾಟು ಕಾನೂನು ಬದ್ಧವಾಗಿದೆ, ಆತಂಕ ಪಡುವ ಅಗತ್ಯ ಇಲ್ಲ ಎಂದು ಸಚಿವ ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

### ಗಿಫ್ಟ್ ಕೊಟ್ರಾ ಪರಂ

**ರನ್ಯಾ ರಾವ್ ಜೊತೆಗೆ ಹಣಕಾಸು ವ್ಯವಹಾರ ನಡೆಸಲಾಗಿದೆ ಎಂಬ ಆರೋಪ ಈ ದಾಳಿಗೆ ಕಾರಣವಾಗಿದೆ ಎಂಬುವುದು ಸದ್ಯ ಹೊರಬರುತ್ತಿರುವ ಮಾಹಿತಿಯಾಗಿದೆ. ರನ್ಯಾ ರಾವ್ ಜೊತೆಗೆ ಹಣಕಾಸು ವಹಿವಾಟು ನಡೆಸಿದ್ದ ಖಾಸಗಿ ಭದ್ರತಾ ಏಜೆನ್ಸಿಯೊಂದರ ಜೊತೆಗೆ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯೂ ನಂಟು ಹೊಂದಿದೆ ಎನ್ನಲಾಗಿದೆ. ಈ ಕಂಪನಿ ರನ್ಯಾ ರಾವ್ ಅವರ ಕ್ರೆಡಿಟ್ ಕಾರ್ಡ್ ಬಿಲ್ 40 ಲಕ್ಷವನ್ನು ಪಾವತಿಸಿದೆ. ಅಲ್ಲದೆ ಇದೇ ಕ್ರೆಡಿಟ್ ಕಾರ್ಡ್ ನಿಂದ ರನ್ಯಾ ರಾವ್ ಅವರು ರಷ್ಯಾ ಏರ್ ಟಿಕೆಟ್ ಖರೀದಿ ಮಾಡಿದ್ದರು.**


**ಈ ನಡುವೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಕೂಡಾ ಅಚ್ಚರಿಯ ಹೇಳಿಕೆ ನೀಡಿದ್ದಾರೆ. ರನ್ಯಾ ರಾವ್ ಅವರಿಗೆ ಪರಮೇಶ್ವರ್ ಅವರು 15 ರಿಂದ 25 ಲಕ್ಷದ ಗಿಫ್ಟ್ ಕೊಟ್ಟಿರಬಹುದು. ಅದು ಮದುವೆಗೆ ಕೊಟ್ಟ ಉಡುಗೊರೆಯಾಗಿದೆ. ಹಾಗಂತ ರನ್ಯಾ ರಾವ್ ಚಿನ್ನದ ಅಕ್ರಮ ಸಾಗಾಟಕ್ಕೂ ಇದಕ್ಕೂ ಯಾವುದೇ ಸಂಬಂಧ ಇಲ್ಲ ಎಂದಿದ್ದಾರೆ.**

### ಎಲ್ಲೆಲ್ಲಿ ದಾಳಿ

- ತುಮಕೂರಿನ ಮರಳೂರು ದಿಣ್ಣೆಯ ಸಿದ್ಧಾರ್ಥ ಎಂಜಿನಿಯರಿಂಗ್ ಕಾಲೇಜು.
- ತುಮಕೂರು ಹೊರವಲಯದ ಸಿದ್ಧಾರ್ಥ ನಗರದಲ್ಲಿರುವ ವೈದ್ಯಕೀಯ ಕಾಲೇಜು.
- ನೆಲಮಂಗಲದ ಟಿ. ಬೇಗೂರಿನಲ್ಲಿರುವ ಸಿದ್ಧಾರ್ಥ ವೈದ್ಯಕೀಯ ಕಾಲೇಜು ಕಚೇರಿ.
- ಕೊಪ್ಪಳ ಜಿಲ್ಲೆಯ ಕುದರಿಮೋತಿ ಸಮೀಪದಲ್ಲಿರುವ ಕೋಳಿ ಸಾಕಾಣಿಕೆ ಮತ್ತು ಮೊಟ್ಟೆ ಉತ್ಪಾದನಾ ಕಂಪನಿ ಕಚೇರಿ.

### 30 ಅಧಿಕಾರಿಗಳಿಂದ ದಾಳಿ, ಕಾರಣ ಏಕೆ

**ಇ.ಡಿಯ ಒಟ್ಟು 30 ಅಧಿಕಾರಿಗಳು ಏಕಕಾಲದಲ್ಲಿ ಈ ದಾಳಿಯನ್ನು ನಡೆಸಿದ್ದಾರೆ. ಸಿಆರ್‌ಪಿಎಫ್ ಬೆಂಗಾವಲಿನೊಂದಿಗೆ ಈ ದಾಳಿ ನಡೆಸಲಾಗಿದೆ. ಅಕ್ರಮ ಚಿನ್ನ ಸಾಗಾಟ ಪ್ರಕರಣದಲ್ಲಿ ಬಂಧಿತರಾಗಿರುವ ರನ್ಯಾ ರಾವ್ ವಿಚಾರಣೆಯಲ್ಲಿ ಸಿಕ್ಕ ಮಾಹಿತಿಯ ಆಧಾರದಲ್ಲಿ ಈ ದಾಳಿ ನಡೆಸಲಾಗಿದೆ ಎಂಬುವುದು ಪ್ರಾಥಮಿಕ ಮಾಹಿತಿಯಾಗಿದೆ.**




### ಕುಟುಂಬದವರಿಗೆಂದು ಆ ಹಣ ಕೊಟ್ಟಿರಬಹುದು

**ನಟಿ ರನ್ಯಾ ರಾವ್‌ಗೆ ಪರಮೇಶ್ವರ್ 15 ರಿಂದ 25 ಲಕ್ಷ ರೂ. ನೀಡಿದ್ದಾರಂತೆ. ಇದನ್ನು ಅವರೇ ತಿಳಿಸಿದ್ದಾರೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ಪರಮೇಶ್ವರ್ ಜೊತೆ ಮಾತನಾಡಿದ್ದೇನೆ ರನ್ಯಾಗೆ 25 ಲಕ್ಷ ರೂ. ವರೆಗೆ ನೀಡಿದ್ದಾರಂತೆ. ಕುಟುಂಬದವರಿಗೆಂದು ಆ ಹಣ ಕೊಟ್ಟಿರಬಹುದು. ಪರಮೇಶ್ವರ್ ಪ್ರಭಾವಿ ವ್ಯಕ್ತಿ. ಆದರೆ, ರನ್ಯಾರಂಥ ಹೆಣ್ಮಗಳು ತಪ್ಪು ಮಾಡಿದ್ದರೆ ಕ್ರಮ ಆಗಲಿ. ಪರಮೇಶ್ವರ್ ಮೇಲೆ ಜವಾಬ್ದಾರಿ ಇದೆ, ಅವರು ಗೃಹ ಸಚಿವರು. ನಾನು ಅವರನ್ನು ಭೇಟಿ ಮಾಡಿ ಮಾತನಾಡಿದ್ದೇನೆ. ಅವರು ಆರೋಗ್ಯವಾಗಿ ಇದ್ದಾರೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಚಾರಿಟೇಬಲ್ ಟ್ರಸ್ಟ್‌ಗಳು ಸಾಕಷ್ಟು ನೆರವು ನೀಡುವ ಕೆಲಸ ಮಾಡುತ್ತಿವೆ. ಶಾಲಾ, ಕಾಲೇಜು ಫೀಸ್, ಮದುವೆ ಕಾರ್ಯಗಳಿಗೆ ನೆರವು ನೀಡಲಾಗುತ್ತದೆ. ಈ ರೀತಿಯ ಸಣ್ಣಪುಟ್ಟ ಚಾರಿಟಿ ನಡೆದಿರಬಹುದು, ಅದು ಇಲ್ಲ ಅಂತ ಹೇಳುವುದಿಲ್ಲ. ಮದುವೆ, ಆಸ್ಪತ್ರೆ ಬಿಲ್‌ನಂತಹ ಸಂದರ್ಭದಲ್ಲಿ ನೆರವಾಗಿರಬಹುದು. ಉಳಿದ ವಿಚಾರದ ಬಗ್ಗೆ ಏನು ಮಾಡುತ್ತಾರೋ ನೋಡೋಣ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ಆ ಮೂಲಕ ರನ್ಯಾಗೆ ಪರಮೇಶ್ವರ್ ಒಡೆತನದ ಸಂಸ್ಥೆಯಿಂದ ಹಣ ವರ್ಗಾವಣೆ ಮಾಡಿರುವ ವಿಚಾರವನ್ನು ಸಮರ್ಥಿಸಿಕೊಂಡಿದ್ದಾರೆ.**

### ಯಾರೇ ತಪ್ಪು ಮಾಡಿದರೂ ಕಾನೂನು ಕ್ರಮ

**ಇಡಿ ದಾಳಿ ಹಿಂದೆ ಕಾಂಗ್ರೆಸ್ ನಾಯಕರ ಕೈವಾಡ ಇದೆ. ಪರಮೇಶ್ವರ್ ವಿರುದ್ಧ ಕಾಂಗ್ರೆಸ್‌ನ ಒಂದು ಗುಂಪು ದೂರು ನೀಡಿದೆ. ಹೀಗಾಗಿ ಇಡಿ ಅಧಿಕಾರಿಗಳು ದಾಳಿ ಮಾಡಿದ್ದಾರೆ. 2013ರಲ್ಲಿ ಡಾ.ಜಿ.ಪರಮೇಶ್ವರ್‌ರನ್ನು ಸೋಲಿಸಿದ್ದು ಯಾರು ಡಾ.ಜಿ.ಪರಮೇಶ್ವರ್‌ರನ್ನು ಇದೇ ಸಿದ್ದರಾಮಯ್ಯ ಸೋಲಿಸಿದ್ದರು. ಚಿನ್ನ ಕಳ್ಳತನ ಸೇರಿ ಎಲ್ಲಾ ಪ್ರಕರಣಗಳ ಬಗ್ಗೆ ತನಿಖೆ ಮಾಡುವಂತೆ ಇಡಿ ಅಧಿಕಾರಿಗಳಿಗೆ ಪತ್ರ ಬರೆದಿದ್ದು ಯಾರು ನಮಗೆ ಪರಮೇಶ್ವರ್ ಮೇಲೆ ಗೌರವ ಇದೆ, ಸಭ್ಯ ರಾಜಕಾರಣಿ. ಏನಾಗಿದೆ ಅನ್ನೋದನ್ನು ಇಡಿ ಅಧಿಕಾರಿಗಳು ಹುಡುಕುತ್ತಿದ್ದಾರೆ ಎಂದರು.**



**ಎರಡನೇ ದಿನವೂ ತಲಾಶ್!** ಗೃಹ ಸಚಿವ ಜಿ.ಪರಮೇಶ್ವರ್ ಒಡೆತನದ ಶಿಕ್ಷಣ ಸಂಸ್ಥೆಗಳ ಮೇಲೆ ನಡೆದ ಇ.ಡಿ. ಅಧಿಕಾರಿಗಳ ತಪಾಸಣೆ ಎರಡನೇ ದಿನವೂ ಮುಂದುವರೆದಿದೆ. ಪರಮೇಶ್ವರ್ ಒಡೆತನದ ಕುಣಿಗಾಲ್ ರಸ್ತೆಯಲ್ಲಿರೋ ಶ್ರೀ ಸಿದ್ಧಾರ್ಥ್ ತಾಂತ್ರಿಕ ಮಹಾವಿದ್ಯಾಲಯದ ಮೇಲೆ ಇ.ಡಿ ಅಧಿಕಾರಿಗಳು ತೀವ್ರ ಶೋಧ ನಡೆಸುತ್ತಿದ್ದಾರೆ. ಬುಧವಾರ ಬೆಳಗ್ಗೆ ದಾಳಿ ಮಾಡಿದ ಅಧಿಕಾರಿಗಳು ಸತತವಾಗಿ ನಿನ್ನೆ ತಡರಾತ್ರಿವರೆಗೂ ಕೂಡ ಶೋಧ ನಡೆಸಿದ್ದಾರೆ. ಗುರುವಾರ ಬೆಳಗ್ಗೆ ಮತ್ತೆ ಪರಿಶೀಲನೆ ಆರಂಭಿಸಿರೋ ಇ.ಡಿ ಅಧಿಕಾರಿಗಳು ಇಂಚಿಂಚೂ ಶೋಧ ನಡೆಸುತ್ತಿದ್ದಾರೆ. ತುಮಕೂರಿನ ತಾಂತ್ರಿಕ ಮಹಾವಿದ್ಯಾಲಯ, ಹೆಗ್ಗರೆಯ ಮೆಡಿಕಲ್ ಕಾಲೇಜು, ಕ್ಯಾತ್ಸಂದ್ರದ ಇಂಜಿನಿಯರ್ ಕಾಲೇಜು ಹಾಗೂ ನೆಲಮಂಗಲದ ಟಿ ಬೇಗೂರು ಕಾಲೇಜಿನಲ್ಲೂ ಇ.ಡಿ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಆಸ್ತಿ ನೋಂದಣಿ ಸೇರಿ ಹಣ ವರ್ಗಾವಣೆ ವಿಚಾರಕ್ಕೆ ಸಂಬಂಧಿಸಿದಂತೆ ಶೋಧ ನಡೆಸಲಾಗುತ್ತಿದೆ ಎಂದು ಹೇಳಲಾಗಿದೆ.

# ಬೆಂಗಳೂರಿಗೆ ಬರಲಿವೆ 4500 ಹೊಸ ಎಲೆಕ್ಟ್ರಿಕ್ ಬಸ್‌ಗಳು

**● ಯೋಜನೆ ಪಿಎಂ ಇ-ಡ್ರೈವ್ ಅಡಿಯಲ್ಲಿ ಮೊದಲ ಹಂತದಲ್ಲಿಯೇ ರಾಷ್ಟ್ರದ ಐದು ಪ್ರಮುಖ ನಗರಗಳಿಗೆ 10,900 ಎಲೆಕ್ಟ್ರಿಕ್ ಬಸ್‌ಗಳನ್ನು ಹಂಚಿಕೆ**

• **ಉದಯವಾಹಿನಿ, ಹೊಸದಿಲ್ಲಿ**

ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆ ಯೋಜನೆ ಪಿಎಂ ಇ-ಡ್ರೈವ್ ಅಡಿಯಲ್ಲಿ ಮೊದಲ ಹಂತದಲ್ಲಿಯೇ ರಾಷ್ಟ್ರದ ಐದು ಪ್ರಮುಖ ನಗರಗಳಿಗೆ 10,900 ಎಲೆಕ್ಟ್ರಿಕ್ ಬಸ್‌ಗಳನ್ನು ಹಂಚಿಕೆ ಮಾಡಲು ನಿರ್ಧರಿಸಲಾಗಿದೆ. ಈ ಪೈಕಿ ಬೆಂಗಳೂರು ನಗರಕ್ಕೆ 4500 ಬಸ್‌ಗಳನ್ನು ಹಂಚಿಕೆ ಮಾಡುವ ಭರವಸೆ ನೀಡಲಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್‌ಡಿ ಕುಮಾರಸ್ವಾಮಿ ಅವರು ತಿಳಿಸಿದರು. ಬೃಹತ್ ಕೈಗಾರಿಕೆ ಸಚಿವಾಲಯದಲ್ಲಿ ಎಲೆಕ್ಟ್ರಿಕ್ ಬಸ್ ಹಂಚಿಕೆಯ ಸಂಬಂಧ ಕರ್ನಾಟಕ, ತೆಲಂಗಾಣ, ಗುಜರಾತ್ ಹಾಗೂ ದೆಹಲಿ ರಾಜ್ಯಗಳ ಅಧಿಕಾರಿಗಳ ಜತೆ ಕೇಂದ್ರ ಸಚಿವರು ಸಭೆ ನಡೆಸಿದರು.

ಎಲೆಕ್ಟ್ರಿಕ್ ಬಸ್‌ಗಳ ಬಳಕೆ ಹಾಗೂ ಅವುಗಳ ನಿರ್ವಹಣೆಗೆ ಅಗತ್ಯವಾದ ಪೂರಕ ಮೂಲಸೌಕರ್ಯವನ್ನು ಒದಗಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಚಿವರು; ಮಾಲಿನ್ಯರಹಿತ ಸಮೂಹ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವುದು ರಾಷ್ಟ್ರೀಯ ಅಗತ್ಯ ಎಂದು ಪ್ರತಿಪಾದಿಸಿದರು. ಬಸ್ ಹಂಚಿಕೆಯಲ್ಲಿ ಬೇಡಿಕೆ, ಜನಸಂಖ್ಯೆ ಹಾಗೂ ಹಳೆಯ ಬಸ್‌ಗಳ ವಿಲೇವಾರಿ ಅಂಶಗಳನ್ನು ಪರಿಗಣಿಸಲಾಗಿದೆ ಎಂದು ಅವರು ಹೇಳಿದರು.

**ಕರ್ನಾಟಕಕ್ಕೆ 4500 ಬಸ್ ಹಂಚಿಕೆ:** ಕರ್ನಾಟಕದ ಪರವಾಗಿ ಸಭೆಯಲ್ಲಿ ಹಾಜರಿದ್ದ ಸಾರಿಗೆ ಇಲಾಖೆಯ ಕಾರ್ಯದರ್ಶಿ ಎನ್.ವಿ.ಪ್ರಸಾದ್ ಅವರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗಾಗಿ 7,000 ಎಲೆಕ್ಟ್ರಿಕ್ ಬಸ್‌ಗಳಿಗೆ ಬೇಡಿಕೆ ಸಲ್ಲಿಸಿದರು. ಕೆಲ ದಿನಗಳ ಹಿಂದೆ




ನವದೆಹಲಿಯಲ್ಲಿ ಸಚಿವರನ್ನು ಭೇಟಿಯಾಗಿದ್ದ ರಾಜ್ಯದ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಕೂಡ ಇಷ್ಟೇ ಸಂಖ್ಯೆಯ ಬಸ್‌ಗಳಿಗೆ ಬೇಡಿಕೆ ಸಲ್ಲಿಸಿದರು. ಈ ಬೇಡಿಕೆ ಹಾಗೂ ಜನಸಂಖ್ಯೆಯನ್ನು ಪರಿಗಣಿಸಿ ಮೊದಲ ಹಂತದಲ್ಲಿಯೇ ಬಿಎಂಟಿಸಿಗೆ 4,500 ಬಸ್‌ಗಳನ್ನು ಒದಗಿಸುವ ಭರವಸೆಯನ್ನು ಕೇಂದ್ರ ಸಚಿವರು ನೀಡಿದರು. ದೇಶದ ಇತರೆ ನಗರಗಳಿಗೆ ಹೋಲಿಸಿದರೆ ಬೆಂಗಳೂರು ನಗರಕ್ಕೆ ಅತ್ಯಧಿಕ



ಬಸ್‌ಗಳನ್ನು ಹಂಚಿಕೆ ಮಾಡುವ ಭರವಸೆಯನ್ನು ಅವರು ನೀಡಿದರು.

**ದೆಹಲಿಗೆ 2800 ಬಸ್:** ಉಳಿದಂತೆ ದೆಹಲಿ ಸಾರಿಗೆ ಸಂಸ್ಥೆ 2800 ಬಸ್‌ಗಳಿಗೆ ಬೇಡಿಕೆ ಇಟ್ಟಿದ್ದು, ಅಷ್ಟೂ ಬಸ್‌ಗಳನ್ನು ಒದಗಿಸುವ ಭರವಸೆಯನ್ನು ಕೇಂದ್ರ ಸಚಿವರು ನೀಡಿದರು. ದೇಶದ ಇತರೆ ನಗರಗಳಿಗೆ ಹೋಲಿಸಿದರೆ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಜನಸಂಖ್ಯೆ ಅಧಿಕವಾಗಿದೆ. ಜತೆಗೆ ಇನ್ನೂ ಕೆಲ ಅಂಶಗಳನ್ನು ಪರಿಗಣಿಸಿ ಬೇಡಿಕೆ ಇಟ್ಟಿರುವಷ್ಟೂ ಸಂಖ್ಯೆಯ ಬಸ್‌ಗಳನ್ನು ಹಂಚಿಕೆ ಮಾಡುವಂತೆ ಕೇಂದ್ರ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಸೂರತ್‌ಗೆ 600 ಬಸ್:** ಉಳಿದಂತೆ ಸೂರತ್ ನಗರ ಸಾರಿಗೆ ಸಂಸ್ಥೆ 600 ಬಸ್‌ಗಳಿಗೆ ಬೇಡಿಕೆ ಇಟ್ಟಿದ್ದು, ಅಷ್ಟೂ ಬಸ್‌ಗಳನ್ನು ಹಂಚಿಕೆ ಮಾಡುವ ಭರವಸೆ ನೀಡಲಾಗಿದೆ. ಅಹಮದಾಬಾದ್ ನಗರಕ್ಕೆ 1000 ಬಸ್‌ಗಳನ್ನು ಕೇಳಲಾಗಿದ್ದು, ಅಷ್ಟೂ ಬಸ್‌ಗಳನ್ನೂ ಹಂಚಿಕೆ ಮಾಡುವುದಕ್ಕೆ ಸಚಿವರು ಒಪ್ಪಿಗೆ ನೀಡಿದರು.

**ಹೈದರಾಬಾದ್‌ಗೆ 2800 ಬಸ್:** ತೆಲಂಗಾಣದ ರಾಜಧಾನಿ ಹೈದರಾಬಾದ್ ನಗರ ಸಾರಿಗೆ ಸಂಸ್ಥೆ 2800 ವಿದ್ಯುತ್ ಚಾಲಿತ ಬಸ್‌ಗಳಿಗೆ ಬೇಡಿಕೆ ಇಟ್ಟಿತ್ತು, ಆ ಪೈಕಿ 2000 ಬಸ್‌ಗಳನ್ನು ಹಂಚಿಕೆ ಮಾಡುವ ಬಗ್ಗೆ ಸಚಿವರು ಭರವಸೆ ನೀಡಿದರು. ಒಟ್ಟಾರೆಯಾಗಿ ಐದೂ ನಗರಗಳಿಂದ 14,200 ಬಸ್‌ಗಳಿಗೆ ಬೇಡಿಕೆ ಬಂದಿತ್ತು. ಆ ಪೈಕಿ 10,900 ಬಸ್‌ಗಳನ್ನು ಮೊದಲ ಹಂತದಲ್ಲಿ ಹಂಚಿಕೆ ಮಾಡಲಾಗುತ್ತಿದೆ ಎಂದ ಕೇಂದ್ರ ಸಚಿವರು; ಎಲೆಕ್ಟ್ರಿಕ್ ಬಸ್‌ಗಳನ್ನು ಹಂಚಿಕೆ ಮಾಡುವ ಮುನ್ನ ಐದೂ ನಗರಗಳ ಸಾರಿಗೆ ಸಂಸ್ಥೆಗಳು ಡಿಪೋಗಳಲ್ಲಿ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸುವುದು ಸೇರಿದಂತೆ ಅಗತ್ಯವಾದ ಮೂಲಸೌಕರ್ಯವನ್ನು ಸಿದ್ಧ ಮಾಡಿಟ್ಟುಕೊಳ್ಳಬೇಕು. ಈಗಾಗಲೇ ಅಸ್ತಿತ್ವದಲ್ಲಿರುವ ಡಿಪೋಗಳನ್ನು ಮೇಲ್ದರ್ಜೆಗೆ ಏರಿಸುವುದು ಹಾಗೂ ಅಗತ್ಯವಾದರೆ ಹೊಸ ಡಿಪೋಗಳನ್ನು ಸ್ಥಾಪಿಸುವ ಬಗ್ಗೆ ತ್ವರಿತಗತಿಯಲ್ಲಿ ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

### ಬೆಂಗಳೂರಿಗೆ ಸಿಕ್ಕಿದ್ದೆಷ್ಟು

- ಬಿಎಂಟಿಸಿ ಒಟ್ಟು ಬೇಡಿಕೆಯ ಮೂರನೇ ಎರಡರಷ್ಟು (67%) ಬಸ್ ಗಳ ಬೇಡಿಕೆ ಪೂರೈಕೆ
- ಹಂಚಿಕೆ ಮಾಡುತ್ತಿರುವ 10,900 ಬಸ್ ಗಳಲ್ಲಿ 4,500 ಬಸ್ ಗಳು ಬೆಂಗಳೂರಿಗೆ
- ಮೊದಲ ಹಂತದಲ್ಲಿ ಉದ್ಯಾನ ನಗರಿಗೆ ಸಿಂಹಪಾಲು
- ಬೆಂಗಳೂರು ಹೆಚ್ಚು ಜನಸಂಖ್ಯೆಯುಳ್ಳ ನಗರ ಎಂದು ಪರಿಗಣನೆ
- ಸುಮಾರು 800 ಕಿ ಮಿ ವ್ಯಾಪ್ತಿಯಲ್ಲಿ ಬಿಎಂಟಿಸಿ ಬಸ್ ಕಾರ್ಯಾಚರಣೆ ನಡೆಸುತ್ತಿದೆ.

**ಮಾಲಿನ್ಯರಹಿತ ಸಮೂಹ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸುವುದು ರಾಷ್ಟ್ರೀಯ ಅಗತ್ಯ. ಈ ಕಾರಣಕ್ಕಾಗಿಯೇ ಪ್ರಧಾನಿ ನರೇಂದ್ರ ಮೋದಿ ಅವರು ಈ ಯೋಜನೆಗೆ ಹೆಚ್ಚು ಒತ್ತು ನೀಡಿದ್ದು, ಅವರ ಮಾರ್ಗದರ್ಶನದಲ್ಲಿ ಗುರಿ ಸಾಧಿಸುತ್ತೇವೆ.**

**-ಎಚ್.ಡಿ. ಕುಮಾರಸ್ವಾಮಿ**
**ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರು**

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,791/Gram24ct ₹8,975/Gram22ct | ಬೆಳ್ಳಿ: ₹101.00/Gram

## ಮರದ ಕೊಂಬೆ ಬಿದ್ದು ಎಲೆಕ್ಟ್ರಿಷಿಯನ್ ಸಾವು, ಮತ್ತೋರ್ವನಿಗೆ ಗಾಯ

• ಉದಯವಾಹಿನಿ, ಬೆಂಗಳೂರು

ದ್ವಿಚಕ್ರ ವಾಹನದ ಮೇಲೆ ಮರದ ಕೊಂಬೆ ಬಿದ್ದು ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದು, ಮತ್ತೋರ್ವ ಗಾಯಗೊಂಡಿರು ಘಟನೆ ಕೋರಮಂಗಲದ ಪ್ರಿಂಟೊ ಜಂಕ್ಷನ್ ಬಳಿಯ 60 ಅಡಿ ರಸ್ತೆಯಲ್ಲಿ ನಡೆದಿದೆ. ಮೃತನನ್ನು ಮೂಡಲ ಗಿರಿಯಪ್ಪ (48) ಎಂದು ಗುರುತಿಸಲಾಗಿದ್ದು, ಗಾಯಗೊಂಡ ವ್ಯಕ್ತಿಯನ್ನು ರಮೇಶ್ ಎಂದು ಗುರ್ತಿಸಲಾಗಿದೆ. ಇಬ್ಬರೂ ಆಡುಗೋಡಿಯ ನಿವಾಸಿಗಳಾಗಿದ್ದು, ಎಲೆಕ್ಟ್ರಿಷಿಯನ್ ಆಗಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಮಧ್ಯಾಹ್ನ 2.45 ರ ಸುಮಾರಿಗೆ ಗಿರಿಯಪ್ಪ ಮತ್ತು ರಮೇಶ್ ಕೋರಮಂಗಲ 5ನೇ ಬ್ಲಾಕ್ ರಸ್ತೆಯಲ್ಲಿ ತಮ್ಮ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದಾಗ ಮರದ ಕೊಂಬೆ ಗಿರಿಯಪ್ಪ ಅವರ ತಲೆಯ ಮೇಲೆ ಬಿದ್ದಿದ್ದು, ಈ ವೇಳೆ ಗಿರಿಯಪ್ಪ ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕೂಡಲೇ ಸ್ಥಳೀಯರು ಗಾಯಾಳು ರಮೇಶ್ ಅವರನ್ನು ರಕ್ಷಿಸಿದ್ದು, ಸ್ಥಳೀಯ ಆಸ್ಪತ್ರೆ ದಾಖಲಿಸಿದ್ದಾರೆ. ರಮೇಶ್ ನೀಡಿದ ದೂರಿನ ಆಧಾರದ ಮೇಲೆ ಬಿಬಿಎಂಪಿ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ.

## ರೂ5 ಲಕ್ಷ ಲಂಚ ಪಡೆಯುತ್ತಿದ್ದ ವೇಳೆ ಎಇಇ, ಎಇ ಬಂಧನ

• ಉದಯವಾಹಿನಿ, ಬೆಂಗಳೂರು

ನಿರ್ಮಾಣ ಕಾಮಗಾರಿಗೆ ನಿರಪೇಕ್ಷಣಾ ಪತ್ರ (ಎನ್‌ಸಿ) ನೀಡಲು ರೂ 5 ಲಕ್ಷ ಲಂಚ ಪಡೆಯುತ್ತಿದ್ದ ವೇಳೆ ಬಿಬಿಎಂಪಿಯ ಹೆಬ್ಬಾಳ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ಮಾಧವ ರಾವ್, ಸಹಾಯಕ ಎಂಜಿನಿಯರ್ (ಎಇ) ಸುರೇಂದ್ರ, ಅವರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ. ಆರ್‌ಎಂವಿ ಬಡಾವಣೆಯಲ್ಲಿ ಸಂಜಯ್ ಎಂಬುವವರು ವಾಣಿಜ್ಯ ಸಂಕೀರ್ಣ ನಿರ್ಮಿಸುತ್ತಿದ್ದು, ವಿದ್ಯುತ್ ಕೇಬಲ್ ಅಳವಡಿಕೆಗೆ ಎನ್‌ಒಸಿ ಪಡೆಯಲು ಬಿಬಿಎಂಪಿಗೆ ಅರ್ಜಿ ಸಲ್ಲಿಸಿದ್ದರು. ಈ ಕೆಲಸ ಮಾಡಿಕೊಡಲು ಎಇಇ ಮತ್ತು ಇಎ ರೂ 10 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಮೊದಲು ರೂ5 ಲಕ್ಷ ಮತ್ತು ಎನ್‌ಒಸಿ ನೀಡಿದ ನಂತರ ರೂ,5 ಲಕ್ಷ ನೀಡುವಂತೆ ಸೂಚಿಸಿದ್ದರು ಎಂದು ಲೋಕಾಯುಕ್ತ ಪೊಲೀಸರು ಮಾಹಿತಿ ನೀಡಿದ್ದಾರೆ. ಸಂಜಯ್ ಅವರು ಈ ಸಂಬಂಧ ದೂರು ನೀಡಿದ್ದರು. ಲೋಕಾಯುಕ್ತ ಡಿವೈಎಸ್‌ಪಿ ಸಿ.ವಸಂತ್ ಅವರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ರೂಪಿಸಲಾಗಿತ್ತು. ಅದರಂತೆ ಎಇಇ ಅವರ ಕಚೇರಿಗೆ ತೆರಳಿ ಹಣ ನೀಡುವಂತೆ ಸಂಜಯ್ ಅವರಿಗೆ ಸೂಚಿಸಲಾಗಿತ್ತು' ಎಂದು ತಿಳಿಸಿದ್ದಾರೆ. ಅದರಂತೆ ಎಇಇ ಕಚೇರಿಗೆ ತೆರಳಿದ ಸಂಜಯ್ ಅವರು ಎಇ ಸುರೇಂದ್ರ, ಅವರಿಗೆ 5 ಲಕ್ಷ ನೀಡಿದ್ದರು. ಈ ವೇಳೆ ದಾಳಿ ನಡೆಸಿ ಅವರನ್ನು ಬಂಧಿಸಲಾಯಿತು. ಸುರೇಂದ್ರ, ಅವರ ಹೇಳಿಕೆ ಆಧರಿಸಿ, ಎಇಇ ಮಾಧವ ರಾವ್ ಅವರನ್ನೂ ಬಂಧಿಸಲಾಯಿತು. ಹಣವನ್ನು ವಶಕ್ಕೆ ಪಡೆದಿದ್ದು, ತನಿಖೆ ಮುಂದುವರೆದಿದೆ' ಎಂದು ತಿಳಿಸಿದ್ದಾರೆ.

## ರೇಣುಕಸ್ವಾಮಿ ಪ್ರಕರಣ: ಹೆಚ್ಚುವರಿ ದೋಷಾರೋಪ ಪಟ್ಟಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಸ್ವಾಮಿ ಕೊಲೆ ಪ್ರಕರಣದ ಸಂಬಂಧ 57ನೇ ಎಸಿಎಂಎಂ ನ್ಯಾಯಾಲಯಕ್ಕೆ ತನಿಖಾಧಿಕಾರಿಗಳು, 132 ಪುಟಗಳ ಹೆಚ್ಚುವರಿ ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ.2024ರ ಜೂನ್ 8ರಂದು ಪಟ್ಟಣಗೆರೆಯ ಶೆಡ್‌ನಲ್ಲಿ ರೇಣುಕಸ್ವಾಮಿ ಅವರ ಕೊಲೆ ನಡೆದಿತ್ತು. ಕೊಲೆಯ ಆರೋಪದ ಮೇರೆಗೆ ದರ್ಶನ್, ಪವಿತ್ರಾಗೌಡ ಸೇರಿ 17 ಆರೋಪಿಗಳನ್ನು ಜೂನ್ 11ರಂದು ಪೊಲೀಸರು ಬಂಧಿಸಿದ್ದರು. ತನಿಖೆ ನಡೆಸಿ 90 ದಿನಗಳ ಒಳಗೆ ದೋಷಾರೋಪ ಪಟ್ಟಿಯನ್ನು ಪೊಲೀಸರು ಸಲ್ಲಿಸಿದ್ದರು. ಇದೀಗ ಕೆಲವು ಸಾಕ್ಷಾಧಾರ ಸಹಿತ ನ್ಯಾಯಾಲಯಕ್ಕೆ ಹೆಚ್ಚುವರಿ ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದಾರೆ. 'ಕೆಲವು ಮಹತ್ವದ ಸಾಕ್ಷ್ಯಗಳನ್ನು ಉಲ್ಲೇಖ ಮಾಡಲಾಗಿದೆ. ಕೃತ್ಯ ನಡೆದ ದಿನ ಆರೋಪಿಗಳು ತೆಗೆದುಕೊಂಡಿದ್ದ ಫೋಟೊಗಳನ್ನು ಡಿಲಿಟ್ ಮಾಡಿದ್ದರು. ಆರೋಪಿ ಗಳ ಮೊಬೈಲ್ ಅನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ರವಾನೆ ಮಾಡಲಾಗಿತ್ತು. ಕೆಲವು ಫೋಟೊಗಳು ಈಗ ಮರುಸಂಗ್ರಹವಾಗಿದ್ದು, ಫೋಟೊ ಸಹಿತ ದೋಷಾರೋಪ ಪಟ್ಟಿ ಸಲ್ಲಿಸಲಾಗಿದೆ' ಎಂದು ಮೂಲಗಳು ತಿಳಿಸಿವೆ.

## ಕರಾವಳಿ ಜಿಲ್ಲೆಗಳಿಗೆ 5 ದಿನ ಆರೆಂಜ್ ಅಲರ್ಟ್ ಎಲ್ಲೆಲ್ಲಿ ಭಾರೀ ಮಳೆಯಾಗಲಿದೆ



• ಉದಯವಾಹಿನಿ, ಬೆಂಗಳೂರು

ಸೇರಿದಂತೆ ಮೇ 26ರ ರವರಿಗೆ ರಾಜ್ಯದ ಹಲವು ಭಾಗಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯಾದ್ಯಂತ ಹಲವು ಕಡೆ ಗುಡುಗು ಸಹಿತ ವ್ಯಾಪಕ ಮಳೆಯಾಗಲಿದ್ದರೆ ಬೆಂಗಳೂರಿನಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಕೊಪ್ಪಳ, ಬೀದರ್, ಚಿಕ್ಕಮಗಳೂರು, ಉಡುಪಿ, ಶಿವಮೊಗ್ಗ, ಕೋಲಾರ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗಲಿದೆ. ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡದಲ್ಲಿ ಮುಂದಿನ 5 ದಿನ ಆರೆಂಜ್ ಅಲರ್ಟ್ ಜಾರಿಯಾಗಿದ್ದು ಗಾಳಿ ಸಹಿತ ಮಳೆಯಾಗಲಿದೆ. ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ತಜ್ಞ ಸಿ.ಎಸ್.ಪಾಟೀಲ್ ಹೇಳಿದ್ದಾರೆ.

# ಮಳೆ ಹಾನಿ ಹೆಚ್ಚಾಗಿದ್ದು ಬಿಜೆಪಿ ಶಾಸಕರ ಕ್ಷೇತ್ರದಲ್ಲೇ ಡಿಕೆಶಿ

### ಬಿಜೆಪಿ ಆರೋಪಗಳಿಗೆ ತೀಕ್ಷ್ಣ ರೀತಿಯಲ್ಲಿ ಡಿಕೆ ಶಿವಕುಮಾರ್ ಅವರು ತಿರುಗೇಟು ನೀಡಿದ್ದಾರೆ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಆಗಿರುವ ಮಳೆ ಹಾನಿ ವಿಚಾರ ಇದೀಗ ಕಾಂಗ್ರೆಸ್ ಮತ್ತು ಬಿಜೆಪಿ ನಡುವಿನ ರಾಜಕೀಯ ಆರೋಪ ಪ್ರತ್ಯಾರೋಪಕ್ಕೆ ಕಾರಣವಾಗಿದೆ. ಬೆಂಗಳೂರಿನಲ್ಲಿ ಮಳೆ ಹಾನಿ ಹೆಚ್ಚಾಗಿದ್ದು ಬಿಜೆಪಿ ಶಾಸಕರ ಕ್ಷೇತ್ರದಲ್ಲೇ ಎಂದಿರುವ ಡಿಕೆಶಿ, ಇದಕ್ಕೆ ಕಾರಣವನ್ನೂ ನೀಡಿದ್ದಾರೆ.

ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಉತ್ತರಿಸಿದರು. ಮಳೆ ನೀರಿನಿಂದಾಗುತ್ತಿರುವ ಅನಾಹುತಗಳನ್ನು ತಪ್ಪಿಸಲು ಶಾಶ್ವತ ಪರಿಹಾರ ಕಂಡುಹಿಡಿಯುವುದು ನಮ್ಮ ಜವಾಬ್ದಾರಿ. ನಾವದನ್ನು ಮಾಡುತ್ತೇವೆ'' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಪುನರುಚ್ಚರಿಸಿದರು. ಮಳೆ ಪ್ರಮಾಣ ಕಡಿಮೆಯಾಗಿದ್ದು, ಪರಿಹಾರ ಕಾರ್ಯ ಕೈಗೊಳ್ಳುವ ಬಗ್ಗೆ ಕೇಳಿದಾಗ, ನಾನು ಹೆಚ್ಚು ಮಳೆಯಾಗಬೇಕು ಎಂದು ಬಯಸುವವನು. ಮಳೆ ಹೆಚ್ಚಾಗಿ ಬಂದಷ್ಟು ನಾವು ಏನೆಲ್ಲಾ ಸರಿಪಡಿಸಿಕೊಳ್ಳಬಹುದು ಎಂದು ತಿಳಿಯುತ್ತದೆ. ಇತ್ತೀಚೆಗೆ ಸಿಎಂ ನೇತೃತ್ವದಲ್ಲಿ ಕೆರೆ ಅಭಿವೃದ್ಧಿ ಪ್ರಾಧಿಕಾರದ ಸಭೆ ಮಾಡಿದ್ದು, ಮುಂಜಾಗ್ರತಾ ಸಭೆಯನ್ನು ಮಾಡಿದ್ದೇವೆ ಎಂದರು.



ಬೆಂಗಳೂರಿನಲ್ಲಿ ಮಳೆನೀರುಗಾಲುವೆಗಳ ಅಭಿವೃದ್ಧಿ ಪೂರ್ಣಗೊಳಿಸಲು 2 ಸಾವಿರ ಕೋಟಿ ಮೊತ್ತದ ಯೋಜನೆ ರೂಪಿಸಲಾಗಿದೆ. ಮಳೆಯಿಂದಾಗುತ್ತಿರುವ ಸಮಸ್ಯೆಗಳ ಬಗ್ಗೆ ಜನರಿಗೆ ಆಕ್ರೋಶವಿದೆ. ಹೀಗಾಗಿ ತಗ್ಗು ಪ್ರದೇಶಗಳಲ್ಲಿ ಯಾವುದೇ ಕಾರಣಕ್ಕೂ ಬೇಸ್ ಮೆಂಟ್ ಪಾರ್ಕಿಂಗ್ ನಿರ್ಮಾಣ ಮಾಡದಿರುವಂತೆ ನಿಯಮ ರೂಪಿಸಲು ನಗರ ಯೋಜನಾ ಪ್ರಾಧಿಕಾರಕ್ಕೆ ಸೂಚಿಸಿದ್ದೇನೆ ಎಂದು ತಿಳಿಸಿದರು.

ಕೆಲವು ಪ್ರದೇಶಗಳಲ್ಲಿ ನೀರಿನ ಪ್ರಮಾಣ ಕಡಿಮೆ ಇದ್ದರೂ ಭೂಮಿಯಿಂದ ಜಲ ಬರುತ್ತಿದೆ. ಇದನ್ನು ತೆಗೆಯುವಾಗ ಇಬ್ಬರು ಮೃತಪಟ್ಟಿದ್ದಾರೆ. ಇಂತಹ ಅನಾಹುತಗಳನ್ನು ತಪ್ಪಿಸಲು ರಾಜಕಾಲುವೆಗಳ ಎರಡೂ ಬದಿಯ ಬಫರ್ ವಲಯದಲ್ಲಿ ರಸ್ತೆ ಮಾಡಲು ತೀರ್ಮಾನಿಸಿದ್ದೇವೆ. ಇದರಿಂದ 50 ಅಡಿಗಳಷ್ಟು ಜಾಗ ಸುರಕ್ಷಿತವಾಗಿರುತ್ತದೆ. ಜತೆಗೆ ರಾಜಕಾಲುವೆಗಳ ಹೂಳೆತ್ತಲು, ಜನರ ಸಂಚಾರಕ್ಕೂ ಅನುಕೂಲವಾಗಲಿದೆ ಎಂದರು.

**ವಿರೋಧ ಪಕ್ಷಗಳಿರುವುದೇ ರಾಜಕೀಯ ಮಾಡಲು:** ಬುಧವಾರ ಮಳೆ ಹಾನಿ ಪ್ರದೇಶಗಳ ವೀಕ್ಷಣೆ ವೇಳೆ ಕೆಲವರು ನಿಮ್ಮನ್ನು ಭೇಟಿ ಮಾಡುವುದಕ್ಕೆ ನಿರಾಕರಿಸಿದರು ಎಂಬ ವಿಚಾರವಾಗಿ ಕೇಳಿದಾಗ, ಅನೇಕರು ನಮ್ಮನ್ನು ಭೇಟಿ ಮಾಡಿದರು, ನಮ್ಮ ಮೇಲೆ ಕೂಗಾಡಿದರು. ನಾನು ಅವರೆಲ್ಲರ ದೂರುಗಳನ್ನು ಆಲಿಸಿದೆ. ಈ ರೀತಿ ಸಮಸ್ಯೆಗೆ ಒಳಗಾದವರು ಕೂಗಾಡುವುದು ಸಹಜ ಎಂದು ತಿರುಗೇಟು ನೀಡಿದರು. ಬೆಂಗಳೂರು ನಗರದಲ್ಲಿ ಮಳೆಯಿಂದ ಸಮಸ್ಯೆಗೆ ಸಿಲುಕುತ್ತಿದ್ದ ಜಾಗಗಳ ಸಂಖ್ಯೆ 211 ಇತ್ತು. ಈ ಪೈಕಿ 166 ಪ್ರದೇಶಗಳಲ್ಲಿ ಸಮಸ್ಯೆ ಬಗೆಹರಿಸಲಾಗಿದೆ. ಉಳಿದ 44 ಕಡೆ ಕೆಲಸ ಬಾಕಿ ಇದ್ದು, ಇದರಲ್ಲಿ 24 ಕಡೆಗಳಲ್ಲಿ ಕಾರ್ಯ ಪ್ರಗತಿಯಲ್ಲಿದೆ. ವಿರೋಧ ಪಕ್ಷದವರು ಇರುವುದೇ ರಾಜಕೀಯ ಮಾಡಲು, ಮಾಡಲಿ. ನಾವು ಅವರ ಸಲಹೆಗಳನ್ನು ಸ್ವಾಗತಿಸುತ್ತೇವೆ ಎಂದು ಹೇಳಿದರು.

**ಬಿಜೆಪಿ ಶಾಸಕರ ಕ್ಷೇತ್ರದಲ್ಲೇ ಇಂತಹ ಸಮಸ್ಯೆ**

**ನಾವು 2 ಸಾವಿರ ಕೋಟಿ ಯೋಜನೆ ಇಟ್ಟಿದ್ದೆವು ಆದರೆ ರಾಜ್ಯ ಸರ್ಕಾರ ಅದನ್ನು ಬಳಸಿಕೊಂಡಿಲ್ಲ ಎಂಬ ಬಿಜೆಪಿ ಆರೋಪದ ಬಗ್ಗೆ ಕೇಳಿದಾಗ, ಅವರ ಕಾಲದಲ್ಲಿ ಯಾವುದೇ ಪರಿಹಾರ ಕಾರ್ಯವನ್ನು ಮಾಡಿಲ್ಲ. ನಮ್ಮ ಸರ್ಕಾರ ಮಳೆನೀರು ಗಾಲುವೆ ಯೋಜನೆಯನ್ನು ಏಕಕಾಲಕ್ಕೆ ಪೂರ್ಣಗೊಳಿಸಲು ಮುಂದಾಗಿದ್ದೇವೆ. ಆರ್. ಅಶೋಕ್ ಅವರಿಗೆ ಒಂದು ಮಾತು ಹೇಳಲು ಬಯಸುತ್ತೇನೆ. ಇಂತಹ ಸಮಸ್ಯೆಗಳು ಆಗುತ್ತಿರುವುದು ಕೇವಲ ಬಿಜೆಪಿ ಶಾಸಕರ ಕ್ಷೇತ್ರಗಳಲ್ಲಿ ಮಾತ್ರ. ಅವರು ತಮ್ಮ ಅವಧಿಯಲ್ಲಿ ಸರಿಯಾಗಿ ಕೆಲಸ ಮಾಡದೇ ಇರುವ ಕಾರಣ ಈ ಸಮಸ್ಯೆ ಎದುರಾಗಿದೆ ಎಂದು ತಿಳಿಸಿದರು.**


## ಸ್ಯಾಂಡಲ್ ಸೋಪ್ ರಾಯಭಾರಿ; ಸಂಭಾವನೆ ಎಷ್ಟು ಗೊತ್ತಾ?

• ಉದಯವಾಹಿನಿ, ಬೆಂಗಳೂರು

ಬಹುಭಾಷಾ ನಟಿ ತಮನ್ನಾ ಭಾಟಿಯಾ ಅವರನ್ನು ಮೈಸೂರು ಸ್ಯಾಂಡಲ್ ಸೋಪ್‌ನ ಅಧಿಕೃತ ರಾಯಭಾರಿಯನ್ನಾಗಿ 2 ವರ್ಷಗಳ ಅವಧಿಗೆ ನೇಮಕ ಮಾಡಲಾಗಿದೆ. ಕರ್ನಾಟಕ ಸರ್ಕಾರದ ಅಧೀನದಲ್ಲಿರುವ ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ ಲಿಮಿಟೆಡ್ ನಿಂದ ಈ ಪ್ರಕಟಣೆ ಹೊರಬಿದ್ದಿದ್ದು ಮೈಸೂರು ಸ್ಯಾಂಡಲ್ ಮತ್ತು ಇತರ ಉತ್ಪನ್ನಗಳಿಗೆ 2 ವರ್ಷಗಳ ಅವಧಿಗೆ ನೇಮಕ ಮಾಡಲಾಗಿದೆ ಎಂದು ವಿವರಿಸಲಾಗಿದೆ.

**ಸಂಭಾವನೆ 6 ಕೋಟಿ:** ಇದಕ್ಕೆ ತಮನ್ನಾ ಭಾಟಿಯಾ ಅವರಿಗೆ 6.2 ಕೋಟಿ ರೂಪಾಯಿ ಸಂಭಾವನೆ ನೀಡಲಾಗಿದ್ದು, ಇಷ್ಟೊಂದು ದೊಡ್ಡ ಮೊತ್ತ ನೀಡಿ ನೇಮಕ ಮಾಡಿಕೊಳ್ಳುವ ಅಗತ್ಯವಿತ್ತೇ ಎಂಬ ಪ್ರಶ್ನೆ ಕೂಡ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

**ಕನ್ನಡಿಗರು ಸಿಗಲಿಲ್ಲವಾ:** ತಮನ್ನಾ ಭಾಟಿಯಾ ದಕ್ಷಿಣ ಭಾರತ ಚಿತ್ರರಂಗ ಸೇರಿದಂತೆ ಬಾಲಿವುಡ್‌ನಲ್ಲಿ ಕೂಡ ಸಾಕಷ್ಟು ಜನಪ್ರಿಯತೆ ಗಳಿಸಿದ್ದಾರೆ. ಜೊತೆಗೆ ಗ್ಲಾಮರಸ್ ಕೂಡ ಆಗಿ ಕಾಣುತ್ತಾರೆ, ಇದನ್ನು ನೋಡಿ ಮಾರುಕಟ್ಟೆ ಲೆಕ್ಕಾಚಾರ ಹಾಕಿ ಕರ್ನಾಟಕ ಸರ್ಕಾರ ಅವರನ್ನು ಸಂಪರ್ಕಿಸಿ ನೇಮಕ ಮಾಡಿಕೊಂಡಿರಬಹುದು. ಆದರೆ ಕನ್ನಡದ ಕಲಾವಿದರು ಯಾರೂ ಸಿಗಲಿಲ್ಲವಾ ಎಂದು ಸಹ ನೆಟ್ಟಿಗರು ಪ್ರಶ್ನಿಸುತ್ತಿದ್ದಾರೆ.




**ವಿಶ್ವಮಟ್ಟದ ಉತ್ಪನ್ನ ಮಾಡಲು ಕಾರ್ಯತಂತ್ರ: ಎಂ ಬಿ ಪಾಟೀಲ:** ಕರ್ನಾಟಕದ ಹೆಮ್ಮೆಯ ಸಂಕೇತವಾಗಿರುವ ಕರ್ನಾಟಕ ಸಾಬೂನು, ಮಾರ್ಜಕಗಳ ನಿಯಮಿತ (ಕೆಎಸ್ಡಿಎಲ್) ಸಂಸ್ಥೆಯನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಉದ್ದೇಶದಿಂದ ತಮನ್ನಾ ಭಾಟಿಯಾ ಅವರನ್ನು ಪ್ರಚಾರ ರಾಯ ಭಾರಿಯನ್ನಾಗಿ ನೇಮಿಸಿಕೊಳ್ಳಲಾಗಿದೆ. ಇದರಲ್ಲಿ ಅವರ ವರ್ಚಸ್ಸು, ಡಿಜಿಟಲ್ ಪ್ರಸ್ತುತಿ ಮತ್ತು ಯುವಜನರೊಂದಿಗೆ ಅವರ ಸಂಪರ್ಕ ಇವುಗಳನ್ನು ಮಾತ್ರ ಪರಿಗಣಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಗುರುವಾರ ಸ್ಪಷ್ಟಪಡಿಸಿದ್ದಾರೆ.

ತಮನ್ನಾ ಅವರನ್ನು 6.2 ಕೋಟಿ ರೂಪಾಯಿ ಸಂಭಾವನೆಯೊಂದಿಗೆ ಎರಡು ವರ್ಷಗಳ ಅವಧಿಗೆ ಕೆಎಸ್ಡಿಎಲ್ ಪ್ರಚಾರ ರಾಯಭಾರಿಯನ್ನಾಗಿ ನೇಮಿಸಿಕೊಂಡಿರುವುದಕ್ಕೆ ಕೆಲವರು ಅಪಸ್ವರ ಎತ್ತಿರುವುದಕ್ಕೆ ಅವರು ಪ್ರತಿಕ್ರಿಯಿಸಿದ್ದಾರೆ.

## ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆ ವಜಾಕ್ಕೆ ಮನವಿ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಶ್ವಾನಕ್ಕೆ ಹೋಲಿಸಿದ್ದರು. ಇದರಿಂದ ಆಕ್ರೋಶಗೊಂಡ ಪ್ರಿಯಾಂಕ್ ಖರ್ಗೆ ಅವರ ಬೆಂಬಲಿಗರು ಕಾಂಗ್ರೆಸ್ ಕಾರ್ಯಕರ್ತರು ಚಿತ್ತಾಪೂರ ಪಟ್ಟಣದ ಪ್ರವಾಸಿ ಮಂದಿರದ ಎದುರುಗಡೆ ಛಲವಾದಿ ನಾರಾಯಣಸ್ವಾಮಿಗೆ ಘೇರಾವ್ ಹಾಕಿದ್ದರು.

ಅಲ್ಲದೇ ಅವರ ಕಾರಿನ ಮೇಲೆ ಬಣ್ಣ ಎರಚಿ, ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದರು. ಇದನ್ನು ಬಿಜೆಪಿ ನಾಯಕರು ಖಂಡಿಸಿದ್ದು, (ಮೇ 22) ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿದರು. ತಕ್ಷಣ ಘಟನೆ ಸಂಬಂಧ ರಾಜ್ಯಪಾಲರು ಮಧ್ಯಪ್ರವೇಶ ಮಾಡಬೇಕು. ಅಲ್ಲದೇ ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆ ಅವರನ್ನು ವಜಾ ಮಾಡಬೇಕು ಎಂದು ಮನವಿ ಮಾಡಿದ್ದಾರೆ.


ಉದಯವಾಹಿನಿ ಚಿತ್ರ

ರಾಜಭವನದಲ್ಲಿ ರಾಜ್ಯಪಾಲರನ್ನು ಭೇಟಿಯಾದ ಬಿಜೆಪಿ ನಿಯೋಗ, ಘಟನೆ ಸಂಬಂಧ ರಾಜ್ಯಪಾಲರು ತಕ್ಷಣ ಮಧ್ಯಪ್ರವೇಶ ಮಾಡಬೇಕು. ಸಚಿವ ಸ್ಥಾನದಿಂದ ಪ್ರಿಯಾಂಕ್ ಖರ್ಗೆಯನ್ನು ವಜಾ ಮಾಡಬೇಕು. ಅಲ್ಲದೇ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಮನವಿ ಪತ್ರ ನೀಡಿದರು. ಈ ವೇಳೆ ವಿಧಾನಸಭೆ ವಿಪಕ್ಷ ನಾಯಕ ಆರ್ ಅಶೋಕ್, ಚಲುವಾದಿ ನಾರಾಯಣಸ್ವಾಮಿ, ರವಿಕುಮಾರ್, ಅಶ್ವತ್ಥ್ ನಾರಾಯಣ ಸೇರಿದಂತೆ ಇತರರು ಇದ್ದರು.

## ಸಿಎಂ ಸಿದ್ದರಾಮಯ್ಯ ಭೇಟಿಯಾದ ಗೃಹ ಸಚಿವ ಡಾ.ಜಿ. ಪರಮೇಶ್ವರ!


• ಉದಯವಾಹಿನಿ, ಬೆಂಗಳೂರು

ತಮ್ಮ ಒಡೆತನದ ಶಿಕ್ಷಣ ಸಂಸ್ಥೆಗಳ ಮೇಲೆ ಇಡಿ ದಾಳಿ ನಡೆಯುತ್ತಿರುವ ನಡುವೆಯೇ ಗೃಹ ಸಚಿವ ಜಿ ಪರಮೇಶ್ವರ ಅವರು ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

ನಿಖರವಾದ ವಿವರಗಳು ತಿಳಿದಿಲ್ಲ. ಆದರೆ, ಕಾಂಗ್ರೆಸ್ ಮೂಲಗಳು ಹೇಳುವಂತೆ ಪರಮೇಶ್ವರ ಅವರು ಚಿನ್ನ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂಗೆ ದಾಳಿಯ ಬಗ್ಗೆ ಮಾಹಿತಿ ನೀಡಿದ್ದಾರೆ ಎನ್ನಲಾಗಿದೆ. ಚಿನ್ನದ ಕಳ್ಳಸಾಗಣೆ ದಂಧೆ ಸೇರಿದಂತೆ ಅಕ್ರಮ ಹಣಕಾಸು ವಹಿವಾಟು ಬಗ್ಗೆ ಇಡಿ ತನಿಖೆ ನಡೆಸುತ್ತಿದೆ.

ಚಿನ್ನ ಕಳ್ಳ ಸಾಗಣೆ ಆರೋಪಿ, ನಟಿ ರನ್ಯಾ ರಾವ್ ಖಾತೆಗೆ ಹವಾಲಾ ಹಣ ವರ್ಗಾವಣೆ ಮಾಡಿದವರನ್ನು ಗುರಿಯಾಗಿಸಿಕೊಂಡು ಇಡಿ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್ಎ) ಅಡಿಯಲ್ಲಿ ರಾಜ್ಯದ 16 ಸ್ಥಳಗಳಲ್ಲಿ ದಾಳಿ ನಡೆಸಿದೆ. ಇದರಲ್ಲಿ ಪರಮೇಶ್ವರ ಅವರಿಗೆ ಸಂಬಂಧಿಸಿದ ಮೂರು ಶಿಕ್ಷಣ ಸಂಸ್ಥೆಗಳೂ ಸೇರಿವೆ. ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಸಿದ್ಧಾರ್ಥ ವೈದ್ಯಕೀಯ ಕಾಲೇಜು ಸೇರಿದಂತೆ ಮೂರು ಸಂಸ್ಥೆಗಳಿಗೆ ಇಡಿ ಅಧಿಕಾರಿಗಳು ಭೇಟಿ ನೀಡಿದ್ದು, ಕಳೆದ ಐದು ವರ್ಷಗಳ ಆರ್ಥಿಕ ದಾಖಲೆಗಳನ್ನು ಕೋರಿದ್ದಾರೆ ಎಂದು ಪರಮೇಶ್ವರ ಹೇಳಿದ್ದಾರೆ. ಉಪ ಡಿ ಕೆ ಶಿವಕುಮಾರ್, ಸತೀಶ್ ಜಾರಕಿಹೊಳಿ, ದಿನೇಶ್ ಗುಂಡೂರಾವ್ ಸೇರಿದಂತೆ ಹಲವು ಸಚಿವರು ಮತ್ತು ಆಡಳಿತ ಪಕ್ಷದ ಶಾಸಕರು ದಾಳಿಯ ನಂತರ ಪರಮೇಶ್ವರ ಅವರ ಸದಾಶಿವನಗರ ನಿವಾಸಕ್ಕೆ ಭೇಟಿ ನೀಡಿ ಬೆಂಬಲ ವ್ಯಕ್ತಪಡಿಸಿದರು. ನಾವೆಲ್ಲರೂ ಸಾರ್ವಜನಿಕ ಜೀವನದಲ್ಲಿ ಇದ್ದೇವೆ. ಅನೇಕ ಜನರು ಟ್ರಸ್ಟ್‌ಗಳನ್ನು ನಡೆಸುತ್ತಿದ್ದು, ಅವರು ಮದುವೆಗೆ ಹಣವನ್ನು ಉಡುಗೊರೆಯಾಗಿ ನೀಡಿರಬಹುದು. ಪರಮೇಶ್ವರ ಅವರಂತಹ ಪ್ರಭಾವಿ ನಾಯಕ ಕಳ್ಳಸಾಗಣೆಯಲ್ಲಿ ತೊಡಗಬಹುದೇ ಎಂದು ಶಿವಕುಮಾರ್ ಪ್ರಶ್ನಿಸಿದರು.

ರನ್ಯಾ ರಾವ್ ಅವರನ್ನು ಮಾರ್ಚ್ 3 ರಂದು ದುಬೈನಿಂದ ಬಂದ ನಂತರ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿತ್ತು. ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದ ಡಿಆರ್‌ಐ ಅಧಿಕಾರಿಗಳು ಆಕೆಯನ್ನು ವಶಕ್ಕೆ ಪಡೆದು 14.2 ಕೆಜಿ ತೂಕದ 12.56 ಕೋಟಿ ಮೌಲ್ಯದ ಚಿನ್ನವನ್ನು ವಶಕ್ಕೆ ಪಡೆದಿದ್ದರು.


ಉದಯವಾಹಿನಿ ಚಿತ್ರ

## ಕೊನೆ ಕ್ಷಣದಲ್ಲಿ ಡಿಜಿಪಿ ಪ್ರಮೋಷನ್‌ಗೆ ತಡೆ

• ಉದಯವಾಹಿನಿ, ಬೆಂಗಳೂರು



31 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ಅವರಿಗೆ ಪೊಲೀಸ್ ಇಲಾಖೆಯೇ ಬೆನ್ನಿಗೆ ಚೂರಿ ಇರಿದ ಆರೋಪ ಕೇಳಿಬಂದಿದೆ.

ಹೌದು. ಎಡಿಜಿಪಿ ಹುದ್ದೆಯಿಂದ ಡಿಜಿಪಿಯಾಗಿ ಅಲೋಕ್ ಕುಮಾರ್ ಬಡ್ತಿ ಪಡೆಯಬೇಕಿತ್ತು. ಆದರೆ ಕುಮಾರಸ್ವಾಮಿ ಮುಖ್ಯಮಂತ್ರಿ ಅವಧಿಯಲ್ಲಿ ನಡೆದಿದೆ ಎನ್ನಲಾದ 5 ವರ್ಷದ ಹಳೆ ಫೋನ್ ಟ್ಯಾಪಿಂಗ್ ಪ್ರಕರಣದ ಬಗ್ಗೆ ಸರ್ಕಾರ ಇಲಾಖಾ ತನಿಖೆಗೆ ಆದೇಶ ನೀಡಿ ಬಡ್ತಿಯನ್ನು ತಡೆ ಹಿಡಿದಿದೆ. ಈ ತಿಂಗಳ 5 ರಂದು ಪ್ರಕರಣ ಇತ್ಯರ್ಥವಾಗಿದೆ ಎಂದು ಸರ್ಕಾರ ಆರ್‌ಟಿಐನಲ್ಲಿ ಉತ್ತರ ನೀಡಿದೆ. ಆದರೆ ಮೇ 9 ರಂದು ಇಲಾಖಾ ತನಿಖೆಗೆ ಆದೇಶಿಸಿ ನೋಟಿಸ್ ನೀಡಲಾಗಿದೆ.

ಈ ನೋಟಿಸ್ ಮೇಲೂ ಅಲೋಕ್ ಕುಮಾರ್ ಅವರು ಕೇಂದ್ರೀಯ ಆಡಳಿತಾತ್ಮಕ ನ್ಯಾಯ ಮಂಡಳಿಯಿಂದ ತಡೆಯಾಜ್ಞೆ ತಂದಿದ್ದು ಮುಂದಿನ ವಿಚಾರಣೆಯನ್ನು ಜೂನ್ 10 ಕ್ಕೆ ಮುಂದೂಡಿಕೆ ಮಾಡಲಾಗಿದೆ.

ಬೆಂಗಳೂರು ನಗರ ಪೊಲೀಸ್ ಆಯುಕ್ತರ ಕುರ್ಚಿ ಮೇಲೆ ಕೆಲ ಎಡಿಜಿಪಿಗಳು ಕಣ್ಣಿಟ್ಟಿದ್ದಾರೆ ಎನ್ನಲಾಗುತ್ತಿದೆ.

ಅಲೋಕ್ ಕುಮಾರ್‌ಗೆ ಈಗ ಪ್ರಮೋಷನ್ ನೀಡಿದರೆ ಪೊಲೀಸ್ ಮಹಾ ನಿರ್ದೇಶಕರಾಗಿ ಹೊಸದಾಗಿ ಅಧಿಕಾರ ಸ್ವೀಕರಿಸಿದ ಸಲೀಂ ಅವರ ನಂತರ ಡಿಜಿ ಅಂಡ್ ಐಜಿಪಿ ರೇಸ್‌ನಲ್ಲಿ ಇವರ ಹೆಸರು ಬರುತ್ತದೆ. ಈ ಹುದ್ದೆಯನ್ನು ತಪ್ಪಿಸಲು ಹುನ್ನಾರ ನಡೆಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ಅಲೋಕ್ ಕುಮಾರ್ ಬಗ್ಗೆ ಇಲ್ಲಸಲ್ಲದ ವಿಚಾರ ಹೇಳಿ ಬಡ್ತಿಯನ್ನು ತಡೆ ಹಿಡಿದಿದ್ದಾರೆ ಎಂಬ ಮಾತುಗಳು ಕೇಳಿ ಬಂದಿದೆ. ಸದ್ಯ ದಯಾನಂದ್ ಅವರು ನಗರ ಪೊಲೀಸ್ ಆಯುಕ್ತರಾಗಿದ್ದಾರೆ. ಇವರಿಗೆ ಡಿಜಿಪಿಯಾಗಿ ಬಡ್ತಿ ನೀಡಿದರೆ ಅವರನ್ನು ಆ ಪಟ್ಟದಿಂದ ಇಳಿಸಬೇಕಾಗುತ್ತದೆ. ದಯಾನಂದ್ ಪಟ್ಟದಿಂದ ಇಳಿದರೆ ತಮಗೆ ಆಯುಕ್ತರ ಹುದ್ದೆ ಸಿಗಬಹುದು ಎಂಬ ಲೆಕ್ಕಾಚಾರವನ್ನು ಕೆಲವರು ಹಾಕಿದ್ದಾರೆ ಎಂಬ ಮಾತುಗಳು ಪೊಲೀಸ್ ವಲಯದಿಂದ ಕೇಳಿ ಬಂದಿದೆ.

## 240 ಆರೋಗ್ಯ ನಿರೀಕ್ಷಕರು, 700 ಸ್ವಯಂಸೇವಕರ ನೇಮಕ

• ಉದಯವಾಹಿನಿ, ಬೆಂಗಳೂರು

ಮಳೆಗಾಲ ಆರಂಭವಾಗುತ್ತಿದ್ದು, ನಗರದಲ್ಲಿ ಡೆಂಗ್ಯೂ ತಡೆಗಟ್ಟಲು ಈ ಬಾರಿ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಲು 700 ಸ್ವಯಂ ಸೇವಕರು, 240 ಆರೋಗ್ಯ ನಿರೀಕ್ಷಣಾಧಿಕಾರಿಗಳನ್ನ ನೇಮಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಹೇಳಿದರು.

ನಗರದ ಪುರಭವನದಲ್ಲಿ ಆರೋಗ್ಯ ಇಲಾಖೆ ಗ್ರೇಟರ್ ಬೆಂಗಳೂರು ವತಿಯಿಂದ ಆಯೋಜಿಸಿದ್ದ ರಾಜ್ಯ ಮಟ್ಟದ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆಯಲ್ಲಿ ಪಾಲ್ಗೊಂಡು ಸಚಿವರು ಮಾತನಾಡಿದರು. ಬೆಂಗಳೂರಿನಲ್ಲಿಯೇ ಶೇ.40ರಿಂದ 50ರಷ್ಟು ಡೆಂಗ್ಯೂ ಪ್ರಕರಣಗಳು ಕಂಡುಬರುತ್ತಿದ್ದು, ನಾಗರಿಕರು ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವುದು ಅಗತ್ಯವಾಗಿದೆ.

ನಮ್ಮ ಆರೋಗ್ಯಕ್ಕೆ ನಾವು ಮೊದಲ ಪ್ರಾಮುಖ್ಯತೆ ನೀಡಬೇಕಾಗಿದೆ. ಜನರು ತಮ್ಮ ಸುತ್ತಮುತ್ತಲಿನ ಪ್ರದೇಶಗಳ ಜವಾಬ್ದಾರಿಯನ್ನು ವಹಿಸಿಕೊಂಡಾಗ ಮಾತ್ರ ನಾವು ನಿಜವಾಗಿಯೂ ಡೆಂಗ್ಯೂ ಹರಡುವಿಕೆಯನ್ನು ನಿಯಂತ್ರಿಸಬಹುದು ಎಂದು ಹೇಳಿದರು. ಬೆಂಗಳೂರನ್ನು ಡೆಂಗ್ಯೂ ಮುಕ್ತ ನಗರವನ್ನಾಗಿ ಮಾಡುವುದು ನಮ್ಮ ಗುರಿಯಾಗಿದ್ದು, ಸ್ವಯಂಸೇವಕರು, ಆಶಾ ಕಾರ್ಯಕರ್ತರು, ಆರೋಗ್ಯ ಸಿಬ್ಬಂದಿ ಆರೋಗ್ಯಕರ ನಗರವನ್ನು ನಿರ್ಮಿಸಲು ಒಟ್ಟಾಗಿ ಕೆಲಸ ಮಾಡಬೇಕೆಂದು ಕರೆ ನೀಡಿದರು. ಇದೇ ವೇಳೆ ಸಚಿವರು ಚಿಕ್ಕಪೇಟೆ ವ್ಯಾಪ್ತಿಯ ಕುಂಬಾರಗುಂಡಿ ಬಡಾವಣೆಯಲ್ಲಿ ಮನೆ-ಮನೆಗೆ ತೆರಳಿ ಡೆಂಗ್ಯೂ ವಿರುದ್ಧ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿದರು. ನೀರಿನ ಘಟಕಗಳು, ನೀರಿನ ಟ್ಯಾಂಕ್, ಮನೆಯಲ್ಲಿನ ಬಿಂದಿಗೆ, ಮನೆಯ ಬಳಿಯ ಹಳೆಯ ಟೈರ್‌ಗಳು, ತೆಂಗಿನ ಚಿಪ್ಪುಗಳಲ್ಲಿ ಈಡಿಸ್ ಸೊಳ್ಳೆ ಲಾರ್ವಾ ಉತ್ಪಾದಿಸಲು ತಾಣವಾಗಿಸಿಕೊಳ್ಳುತ್ತದೆ. ಸಾಧ್ಯವಾದಷ್ಟು ಈ ಎಲ್ಲಾ ತಾಣಗಳ ಶುಚಿತ್ವ ಕಾಪಾಡಿಕೊಳ್ಳಬೇಕು. ಸ್ವಚ್ಛತೆಯಿಂದ ಡೆಂಗಿಯನ್ನು ಸಂಪೂರ್ಣ ನಿಯಂತ್ರಣಕ್ಕೆ ತರಲು ಸಾಧ್ಯವಾಗುತ್ತದೆ. ಮೊದಲು ನಮ್ಮ ಮನೆ ಸುತ್ತಾಮುತ್ತಾ ಪ್ರದೇಶಗಳು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಸಾರ್ವಜನಿಕರಿಗೆ ತಿಳಿಸಿದರು.


ಉದಯವಾಹಿನಿ ಚಿತ್ರ

**ಡೆಂಗ್ಯೂ ತಡೆಗೆ ಸರ್ಕಾರ ಸಜ್ಜು**

**ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ ಎಂಬ ಘೋಷವಾಕ್ಯದೊಂದಿಗೆ ಡೆಂಗ್ಯೂ ಸೋಲಿಸುವ ಅಭಿಯಾನವನ್ನು ಆರೋಗ್ಯ ಇಲಾಖೆ ಹಾಗೂ ಗ್ರೇಟರ್ ಬೆಂಗಳೂರು ಸಹಯೋಗದಲ್ಲಿ ಪ್ರಾರಂಭಿಸಲಾಗಿದ್ದು, ಸಾರ್ವಜನಿಕ ಸ್ಥಳಗಳು, ನೀರು ನಿಲ್ಲುವ ಪ್ರದೇಶಗಳಲ್ಲಿ ಡೆಂಗ್ಯೂ ತರುವ ಸೊಳ್ಳೆಗಳು ಹರಡದಂತೆ ಮುನ್ನೆಚ್ಚರಿಕೆ ವಹಿಸಲು ಕ್ರಮಗಳನ್ನ ತೆಗೆದುಕೊಳ್ಳಲಾಗುತ್ತಿದೆ. ವಿಶೇಷವಾಗಿ ಸಾರ್ವಜನಿಕರು ಸ್ವಯಂ ಸ್ವಚ್ಛತೆಗೆ ಆದ್ಯತೆ ನೀಡಿ, ಸುರಕ್ಷತಾ ಕ್ರಮಗಳನ್ನು ಕೈಗೊಂಡಾಗ ಮಾತ್ರ, ಡೆಂಗ್ಯೂ ನಿಯಂತ್ರಣ ಮಾಡಲು ಸಾಧ್ಯ ಎಂದು ತಿಳಿಸಿದರು.**

# ತೇಜಸ್ವಿ ಸೂರ್ಯ ವಿರುದ್ಧ ಸೋನು ನಿಗಮ್ ಸಿಂಗ್ ಆಕ್ರೋಶ!

### ದಕ್ಷಿಣ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಈ ವಿಷಯದಲ್ಲಿ ಬ್ಯಾಂಕ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯ

• ಉದಯವಾಹಿನಿ, ಬೆಂಗಳೂರು

ಎಸ್ ಬಿಐ ಬ್ಯಾಂಕ್ ಮ್ಯಾನೇಜರ್ ಕನ್ನಡ ವಿರೋಧಿ ವಿಡಿಯೋ ವ್ಯಾಪಕ ವೈರಲ್ ಆಗಿರುವಂತೆಯೇ ಈ ಕುರಿತು ಕಿಡಿಕಾರಿದ್ದ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಸೋನು ನಿಗಮ್ ಸಿಂಗ್ ಕಿಡಿಕಾರಿದ್ದಾರೆ.


ಹೌದು.. ಬೆಂಗಳೂರಿನ ಬ್ಯಾಂಕ್‌ನಲ್ಲಿ ಮ್ಯಾನೇಜರ್ ಕನ್ನಡ ಮಾತನಾಡಲು ನಿರಾಕರಿಸಿದ ಘಟನೆ ವಿವಾದ ಸೃಷ್ಟಿಸಿದ್ದು, ಈ ಕುರಿತು ಕನ್ನಡ ಪರ ಹೋರಾಟಗಾರರ ಪ್ರತಿಭಟನೆಗೆ ಮಣಿದ ಮ್ಯಾನೇಜರ್ ಕ್ಷಮೆ ಕೋರಿದ್ದರೂ ಈ ಕುರಿತ ವಿವಾದ ಮಾತ್ರ ಯಾಕೋ ಇನ್ನೂ ತಣ್ಣಗಾಗುವಂತೆ ಕಾಣುತ್ತಿಲ್ಲ. ಬೆಂಗಳೂರು ದಕ್ಷಿಣ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಈ ವಿಷಯದಲ್ಲಿ ಬ್ಯಾಂಕ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದರು. ಈ ಬೆನ್ನಲ್ಲೇ ಸೋನು ನಿಗಮ್ ಮಾಡಿದ ಟ್ವೀಟ್ ಒಂದು ವೈರಲ್ ಆಗಿದೆ. ಇತ್ತೀಚೆಗೆ ಕನ್ನಡಿಗರನ್ನು ಕೆಣಕಿ ಬಳಿಕ ವ್ಯಾಪಕ ವಿರೋಧ ವ್ಯಕ್ತವಾಗುತ್ತಲೇ ಕ್ಷಮೆ ಕೋರಿದ್ದ ಗಾಯಕ ಸೋನು ನಿಗಮ್ ಇದೀಗ ಮತ್ತೆ ಕನ್ನಡ ವಿಚಾರವಾಗಿ ಸುದ್ದಿಗೆ ಗ್ರಾಸವಾಗಿದ್ದಾರೆ.

**ತೇಜಸ್ವಿ ಸೂರ್ಯ ಹೇಳಿದ್ದೇನು:** ಎಸ್‌ಬಿಐ ಬ್ಯಾಂಕ್‌ನ ಬ್ರ್ಯಾಂಚ್ ಮ್ಯಾನೇಜರ್ ಅವರ ಈ ರೀತಿಯ ದುಂಡಾವರ್ತನೆ ಸಹಿಸಲು ಆಗದು. ಕರ್ನಾಟಕದಲ್ಲಿ ಸೇವೆ ಸಲ್ಲಿಸುತ್ತಿರುವ ಸಂದರ್ಭದಲ್ಲಿ, ಅದರಲ್ಲಿಯೂ ಬ್ಯಾಂಕಿಂಗ್ ವಲಯದಲ್ಲಿ ಗ್ರಾಹಕರು ಮಾತನಾಡುವ ಸ್ಥಳೀಯ ಭಾಷೆಯಲ್ಲಿಯೇ ವ್ಯವಹರಿಸತಕ್ಕದ್ದು. ಕರ್ನಾಟಕದಲ್ಲಿ ಬ್ಯಾಂಕಿಂಗ್ ಸೇವೆಗಳಲ್ಲಿ ಸ್ಥಳೀಯ ಕನ್ನಡಿಗರನ್ನು ಪರಿಗಣಿಸುವಂತೆ ನಾನು ಸಂಸತ್ತಿನ ಒಳಗೆ ಮತ್ತು ಹೊರಗೆ ಹಲವು ಬಾರಿ ಪ್ರಸ್ತಾಪಿಸಿದ್ದೇನೆ.



**ಬ್ಯಾಂಕ್ ಅಧಿಕಾರಿ ವಿರುದ್ಧ ಸೂಕ್ತ ಕ್ರಮ**

ಇತ್ತೀಚೆಗಿನ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಮುಂದೆಯೂ ನಾನು ಇದನ್ನೇ ಪುನರುಚ್ಚರಿಸಿ ಸ್ಥಳೀಯ ಭಾಷೆ ಬಲ್ಲವರನ್ನೇ ನೇಮಕ ಮಾಡಿಕೊಳ್ಳುವಂತೆ ಒತ್ತಾಯಿ ಸಿದ್ದು, ಈ ಕುರಿತಂತೆ DFS ನೀತಿಯಡಿಯಲ್ಲಿಯೇ ನೇಮಕಾತಿ ಕೈಗೊಳ್ಳುವಂತೆ ಎಸ್‌ಬಿಐ ಬಳಿ ವಿನಂತಿಸುತ್ತೇನೆ. ಈ ರೀತಿಯ ವರ್ತನೆ ತೋರಿರುವ ಬ್ಯಾಂಕ್ ಅಧಿಕಾರಿ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಸಂಬಂಧಪಟ್ಟವರ ಬಳಿ ನಾನು ಒತ್ತಾಯಿಸಿದ್ದು, ಕರ್ನಾಟಕದಲ್ಲಿ ಸೇವೆ ಸಲ್ಲಿಸುವ ಬ್ಯಾಂಕಿಂಗ್ ವಲಯ ಸಿಬ್ಬಂದಿಗಳು ಗ್ರಾಹಕರೊಂದಿಗೆ ಕನ್ನಡದಲ್ಲೇ ವ್ಯವಹರಿಸುವ ಅಗತ್ಯತೆ ಇದೆ ಎಂದಿದ್ದರು.


ಉದಯವಾಹಿನಿ ಚಿತ್ರ

ಸೋನು ನಿಗಮ್ ಗಾಯಕ ಅಲ್ಲ ಇಷ್ಟಕ್ಕೂ ಯಾರು ಈತ

ಈ ಪ್ರಕರಣದಲ್ಲಿ ಅನಾವಶ್ಯಕವಾಗಿ ಬಾಲಿವುಡ್ ಗಾಯಕ ಸೋನು ನಿಗಮ್ ಹೆಸರು ತಳುಕು ಹಾಕಿಕೊಂಡಿದೆ. ಏಕೆಂದರೆ ಪ್ರಸ್ತುತ ತೇಜಸ್ವಿ ಸೂರ್ಯ ಕುರಿತು ಟ್ವೀಟ್ ಮಾಡಿರುವ ಸೋನು ನಿಗಮ್ ಬಾಲಿವುಡ್ ಗಾಯಕ ಸೋನು ನಿಗಮ್ ಅಲ್ಲ... ಈತನ ಹೆಸರು ಸೋನು ನಿಗಮ್ ಸಿಂಗ್ . ಈ ಸೋನು ನಿಗಮ್ ಸಿಂಗ್ ಎಕ್ಸ್ ಖಾತೆಯಲ್ಲಿನ ಮಾಹಿತಿಯಂತೆ ಈತ ಬಿಹಾರ ನಿವಾಸಿಯಾಗಿದ್ದು, ವೃತ್ತಿಯಲ್ಲಿ ವಕೀಲ ಎಂದು ಹೇಳಿಕೊಂಡಿದ್ದಾನೆ.

**ಟ್ವೀಟ್ ಮಾಡಿದ್ದು ಗಾಯಕ ಸೋನು ನಿಗಮ್ ಅಲ್ಲ :** ಅಂತೆಯೇ ಈ ಟ್ವೀಟ್ ಮಾಡಿದ್ದು ಗಾಯಕ ಸೋನು ನಿಗಮ್ ಎಂದು ತಪ್ಪಾಗಿ ಅರ್ಥೈಸಲಾಗುತ್ತಿದೆ. ಆದರೆ ಗಾಯಕ ಸೋನು ನಿಗಮ್ ಅವರು ಟ್ವಿಟರ್ ಬಳಕೆ ಮಾಡೋದು ನಿಲ್ಲಿಸಿ ಏಳು ವರ್ಷಗಳು ಕಳೆದಿವೆ. ಆದರೆ, ಅವರ ಹೆಸರಲ್ಲಿ ಬೇರೊಬ್ಬರು ಖಾತೆ ತೆರೆದಿದ್ದಾರೆ. ಈ ಬಗ್ಗೆ ಸೋನು ನಿಗಮ್ ಪ್ರಶ್ನೆ ಮಾಡಿದ್ದರು. ಆದರೆ, ಆ ವ್ಯಕ್ತಿ ನನ್ನ ಹೆಸರು ಸೋನು ನಿಗಮ್ ಎಂದು ದಾಖಲೆ ನೀಡಿದ್ದರು. ಕೆಲವರು ತಪ್ಪಾಗಿ ಅರ್ಥೈಸಿಕೊಂಡು ಸೋನು ನಿಗಮ್‌ಗೆ ಬೈಯ್ಯುತ್ತಿದ್ದಾರೆ.

**ಏನಿದು ಬ್ಯಾಂಕ್ ಘಟನೆ**

**ಬೆಂಗಳೂರಿನ ಚಂದಾಪುರದ ಎಸ್‌ಬಿಐ ಬ್ಯಾಂಕ್‌ಗೆ ಕೆಲಸದ ನಿಮಿತ್ತ ಗ್ರಾಹಕರೊಬ್ಬರು ಹೋದಾಗ ಅಲ್ಲಿನ ಬ್ಯಾಂಕ್ ಮ್ಯಾನೇಜರ್ ಪ್ರಿಯಾಂಕಾ ಉದ್ಧಟತನ ತೋರಿದ್ದರು. ಗ್ರಾಹಕನಿಗೆ ಹಿಂದಿ ಮಾತನಾಡುವಂತೆ ಹೇಳಿದ್ದೂ ಅಲ್ಲದೆ, ಯಾವತ್ತೂ ಕನ್ನಡ ಮಾತನಾಡಲ್ಲ ಎಂದು ದರ್ಪ ತೋರಿದ್ದರು.**

**ಕನ್ನಡದ ಹೀರೋಗಳಿಗೆ ಹೇಳೋ ಗಟ್ಸ್ ಇದೆಯಾ: ಸೋನು ನಿಗಮ್ ಕಿಡಿ**


**ಇನ್ನು ಸಂಸದ ತೇಜಸ್ವಿ ಸೂರ್ಯರ ಈ ಟ್ವೀಟ್ ಗೆ ಸೋನು ನಿಗಮ್ ಸಿಂಗ್ ಕಿಡಿಕಾರಿದ್ದು, 'ಕನ್ನಡ ಸಿನಿಮಾ ಹಿಂದಿಗೆ ಡಬ್ ಮಾಡಬೇಡಿ. ಕನ್ನಡ ಸಿನಿಮಾನ ಪ್ಯಾನ್ ಇಂಡಿಯಾ ಮಟ್ಟದಲ್ಲಿ ರಿಲೀಸ್ ಮಾಡಬೇಡಿ. ತೇಜಸ್ವಿ ಸೂರ್ಯ ಅವರೇ ಇದನ್ನು ಕನ್ನಡ ಹೀರೋಗಳಿಗೆ ಹೇಳುವ ಗಟ್ಸ್ ನಿಮಗೆ ಇದೆಯೇ ಅಥವಾ ನೀವೊಬ್ಬ ಭಾಷಾ ಹೋರಾಟಗಾರ ಅಷ್ಟೆಯೇ' ಎಂದು ಪ್ರಶ್ನೆ ಮಾಡಿದ್ದಾರೆ.**

### ಸಿದ್ದರಾಮಯ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ನಡೆಯದ ಇಲಾಖೆಗಳೇ ಇಲ್ಲ: ಸಿ ಟಿ ರವಿ ವಾಗ್ದಾಳಿ

# ಸಮಾವೇಶದಲ್ಲಿ ಬೆಲೆ ಏರಿಕೆ ಪಟ್ಟಿಯನ್ನು ಕೂಡ ಬಿಡುಗಡೆ ಮಾಡಬೇಕಿತು

• **ಉದಯವಾಹಿನಿ, ಮೈಸೂರು**

ರಾಜ್ಯ ಸರ್ಕಾರ 2 ವರ್ಷ ಪೂರೈಸಿದ್ದಕ್ಕೆ ಸಾಧನಾ ಸಮಾವೇಶ ನಡೆಸಿದ ಹಿನ್ನೆಲೆಯಲ್ಲಿ ಸಿ ಟಿ ರವಿ ವಾಗ್ದಾಳಿ ನಡೆಸಿದರು. ಅಗತ್ಯ ವಸ್ತುಗಳ ಬೆಲೆ ಏರಿಕೆಯೇ ಸಾಧನೆಯಾ? ಭ್ರಷ್ಟಾಚಾರ, ಸರ್ಕಾರಿ ನೌಕರರು, ಗುತ್ತಿಗೆದಾರರ ಆತ್ಮಹತ್ಯೆ, ಕೊಲೆ ಸುಲಿಗೆ, ಪೊಲೀಸ್ ಠಾಣೆಗಳ ಮೇಲೆ ದಾಳಿ ಇವೆಲ್ಲವೂ ಸಂಭ್ರಮ ಪಡುವ ಸಂಗತಿಗಳಾ? ಮಾಜಿ ಸಚಿವ ಸಿ ಟಿ ರವಿ ಮೈಸೂರಿನಲ್ಲಿ ಪ್ರಶ್ನಿಸಿದ್ದಾರೆ. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಸಿದ್ದರಾಮಯ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ನಡೆಯದ ಇಲಾಖೆಗಳೇ ಇಲ್ಲ. ರಾಜ್ಯದಾದ್ಯಂತ 700ಕ್ಕೂ ಹೆಚ್ಚು ಬಾಣಂತಿಯರ ಸಾವು ಸಂಭವಿಸಿದೆ. 3 ಸಾವಿರಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸರ್ಕಾರಿ ಅಧಿಕಾರಿಗಳು ಸಚಿವರು, ಶಾಸಕರ ಹೆಸರು ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದೆಲ್ಲವೂ ರಾಜ್ಯ ಕಾಂಗ್ರೆಸ್ ಸರ್ಕಾರದ ಸಾಧನೆಯಾ? ಇವೆಲ್ಲವೂ ಸಂಭ್ರಮ ಪಡುವ ಸಂಗತಿಗಳಾ? ಎಂದು ಪ್ರಶ್ನಿಸಿದ್ದಾರೆ. ಸಿದ್ದರಾಮಯ್ಯ ಒನ್ ಸರ್ಕಾರಕ್ಕೂ, ಟು ಸರ್ಕಾರಕ್ಕೂ ಬಹಳ ವ್ಯತ್ಯಾಸವಿದೆ. ಒನ್ ಸರ್ಕಾರದಲ್ಲಿ ಲವಲವಿಕೆ ಇತ್ತು. ಟು ಸರ್ಕಾರದಲ್ಲಿ ಕೊರೋನಾ ಬಂದಂತಿದೆ.



ಸಿದ್ದರಾಮಯ್ಯ ಎರಡನೇ ಬಾರಿ ಸಿಎಂ ಆದ ನಂತರ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ. ಎಷ್ಟು ವರ್ಷ ಅಧಿಕಾರ ನಡೆಸಿದಿರಿ ಎಂಬುದು ಸಾಧನೆಯಲ್ಲ. ಎಷ್ಟು ಅಭಿವೃದ್ಧಿ ಮಾಡಿದ್ದೀರಿ ಎಂಬುದು ಸಾಧನೆ. ಎಷ್ಟು ಶಾಶ್ವತ ಕಾಮಗಾರಿಗಳನ್ನು ಮಾಡಿದ್ದೀರಾ ತೋರಿಸಿ. ಸರ್ಕಾರದ ವೈಫಲ್ಯಗಳ ಚಾರ್ಜ್ ಶೀಟ್ ಬಿಡುಗಡೆ ಮಾಡಿದ್ದೇವೆ. ಜನರ ಬಳಿಗೆ ಇದನ್ನು ಕೊಂಡೊಯ್ಯುತ್ತೇವೆ. ಮುಂಬರುವ ಅಧಿವೇಶನದಲ್ಲಿ ಪ್ರಶ್ನೆ ಮಾಡುತ್ತೇವೆ. ಪಂಚ ಗ್ಯಾರಂಟಿಗಳು ಪಂಚರ್ ಆಗಿವೆ. ಗೃಹಲಕ್ಷ್ಮಿ ಹಣವನ್ನು ಪ್ರತಿತಿಂಗಳು ಕೊಡ್ತೀವಿ? ಅಂದಿದ್ವಾ ಎಂದು ಹೇಳುತ್ತಿದ್ದಾರೆ. ಶಕ್ತಿ ಯೋಜನೆಯಿಂದ ಗ್ರಾಮೀಣ ಭಾಗ ನಿಶಕ್ತಿಯಾಗಿದೆ. ಫ್ರೀ ಬಸ್ ಘೋಷಣೆ ಮಾಡಿದ್ದಾರೆ. ಆದರೆ ಬಸ್‌ಗಳೇ ಸಂಚರಿಸುತ್ತಿಲ್ಲ ಎಂದರು.

**ಬೆಲೆ ಏರಿಕೆ ಮಾಡಿದ್ದೇ ಇವರ ಸಾಧನೆಯಾ?**

ವಿದ್ಯುತ್ ದರ ಸೇರಿದಂತೆ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದಾರೆ. ಬೆಲೆ ಏರಿಕೆ ಮಾಡಿದ್ದೇ ಇವರ ಸಾಧನೆಯಾ? ಸಾಧನಾ ಸಮಾವೇಶದಲ್ಲಿ ಬೆಲೆ ಏರಿಕೆ ಪಟ್ಟಿಯನ್ನು ಕೂಡ ಬಿಡುಗಡೆ ಮಾಡಬೇಕಿತ್ತು ಎಂದು ವಾಗ್ದಾಳಿ ನಡೆಸಿದರು. ಈ ಸರ್ಕರದ ಅವಧಿಯಲ್ಲಿ ಕ್ರಿಮಿನಲ್‌ಗಳಿಗೆ, ಕಮ್ಯುನಲ್ ಗಳಿಗೆ ರಾಜಾಶ್ರಯ ಸಿಗುತ್ತಿದೆ. ಕ್ರಿಮಿನಲ್, ಕಮ್ಯುನಲ್‌ಗಳು ಬೀದಿಗೆ ಬಂದಿದ್ದಾರೆ. ಸರ್ಕಾರ ನಮ್ಮನ್ನು ರಕ್ಷಣೆ ಮಾಡುತ್ತದೆ ಎಂದು ಹೇಳಿಕೊಂಡು ತಿರುಗಾಡುತ್ತಿದ್ದಾರೆ.

# ದಲಿತರಿಗೆ ಪ್ರವೇಶ ಸಿಗುತ್ತಿಲ್ಲ ಶಾಸಕ ನಾರಾಯಣಸ್ವಾಮಿ

• **ಉದಯವಾಹಿನಿ, ಬಂಗಾರಪೇಟೆ**

**ಸಹಕಾರಿ ಕ್ಷೇತ್ರದಲ್ಲಿ ಜಾತಿ ನೋಡಿ ಆದ್ಯತೆ ನೀಡಬಾರದು. ಅಧಿಕಾರ ಒಂದು ಜಾತಿಗೆ ಸೀಮಿತವಾಗಬಾರದು. ಈ ಕ್ಷೇತ್ರದಲ್ಲಿ ಪ್ರಬಲರ ದಬ್ಬಾಳಿಕೆ ಹೆಚ್ಚಾಗಿರುವುದರಿಂದ ದಲಿತರು, ಹಿಂದುಳಿದವರು ಸಹಕಾರಿ ಕ್ಷೇತ್ರ ಪ್ರವೇಶಿಸಲು ಸಾಧ್ಯವಾಗುತ್ತಿಲ್ಲ ಎಂದರು.**

ಸಹಕಾರಿ ಕ್ಷೇತ್ರದಲ್ಲಿ ಪ್ರಭಾವಿಗಳ ದಬ್ಬಾಳಿಕೆಯಿಂದ ದಲಿತರು, ಹಿಂದುಳಿದವರ ಪ್ರವೇಶ ಸಾಧ್ಯವಾಗುತ್ತಿಲ್ಲ ಎಂದು ಶಾಸಕ ಎಸ್.ಎನ್.ನಾರಾಯಣಸ್ವಾಮಿ ಆರೋಪಿಸಿದರು. ಪಟ್ಟಣದ ಶಾಸಕರ ಗೃಹ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಸಮೀಕ್ಷೆಯಲ್ಲಿ ಬಲಗೈ ಸಮುದಾಯದವರು ಶೇ 70 ರಷ್ಟು ಮಾತ್ರ ಮಾಹಿತಿ ನೀಡಿದ್ದು, ಉಳಿದವರು ಮಾಹಿತಿಯನ್ನು ನೀಡಿಲ್ಲ. ಹಾಗಾಗಿ ಮುಖ್ಯಮಂತ್ರಿ ಬಳಿ ಮನವಿ ಮಾಡಿ ಸಮೀಕ್ಷೆಗೆ ಮೂರು ದಿನ ವಿಸ್ತರಣೆ ಮಾಡಲಾಗಿದೆ. ಈಗಲಾದರೂ ಸಮೀಕ್ಷೆಯಲ್ಲಿ ನಮ್ಮ ಮೂಲ ಜಾತಿ ಮತ್ತು ಉಪ ಜಾತಿಗಳನ್ನು ಹೊಲೆಯ ಎಂದು ನಮೂದಿಸಿ ನಿರ್ಲಕ್ಷ್ಯ ಮಾಡಬೇಡಿ ಎಂದರು. ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿ ವರ್ಗೀಕರಣ ಮಾಡುವುದರಿಂದ ನಮ್ಮ ಜಾತಿಯನ್ನು ಯಾವುದೇ ಮುಜುಗರವಿಲ್ಲದೆ ಹೊಲೆಯ ಎಂದೇ ನಮೂದಿಸಿ ಎಂದು ಕರೆ ನೀಡಿದರು.

ಸಹಕಾರ ಕ್ಷೇತ್ರದಲ್ಲಿ ಮೀಸಲಾತಿ ಜಾರಿಗೊಳಿಸಲು ವಿಧಾನಸಭೆ ಮತ್ತು ವಿಧಾನ ಪರಿಷತ್‌ನಲ್ಲಿ ಅಂಗೀಕರಿಸಿದ ಶಿಫಾರಸನ್ನು ರಾಜ್ಯಪಾಲರಿಗೆ ಸಲ್ಲಿಸಿದ್ದು, ಬಿಜೆಪಿ ಕೈಗೊಂಬೆಯಾಗಿದ್ದ ರಾಜ್ಯಪಾಲರು ವಜಾ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

**ಚುನಾವಣೆ: ಯಾರೂ ನನ್ನೊಂದಿಗೆ ಚರ್ಚಿಸಿಲ್ಲ:** ಡಿಸಿಸಿ ಬ್ಯಾಂಕ್ ಚುನಾವಣೆ ಮತ್ತು ಕೋಮುಲ್ ಚುನಾವಣೆಗೆ ಸಂಬಂಧಿಸಿದಂತೆ ಯಾರೂ ಸಹ ನನ್ನ ಮತ್ತು ನನ್ನ ಸೋದರಿ ರೂಪಕಲಾ ಅವರೊಂದಿಗೆ ಚರ್ಚಿಸಿಲ್ಲ. ಅವರು ಗುಪ್ತವಾಗಿ ಮಾಜಿ ಶಾಸಕ ರಮೇಶ್ ಕುಮಾರ್ ನೇತೃತ್ವದಲ್ಲಿ ಸಭೆ ನಡೆಸಿದ್ದಾರೆ. ಅನಿಲ್‌ಕುಮಾರ್ ಹೇಳಿದ್ದಂತೆ ಯಾರನ್ನು ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ. ಕೊತ್ತೂರು ಮಂಜುನಾಥ್, ಅನಿಲ ಕುಮಾರ್ ಅವರ ಉದ್ದೇಶ ಒಂದೇ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಯಾವುದೇ ಕಾರಣಕ್ಕೂ ಕೋಮಲ್ ಚುನಾವಣೆಯಲ್ಲಿ ಸ್ಪರ್ಧಿಸದಂತೆ ತಡೆಯುವುದು ಟಾಂಗ್ ನೀಡಿದರು. ಗೋಪಾಲಮೂರ್ತಿ ಡಿ.ಆರ್.ಜೋಷಿ ಅವರು ತುಂಬಾ ಪ್ರಾಮಾಣಿಕರು ಎಂದು ಹೇಳಿಕೊಳ್ಳುತ್ತಾರೆ. ಮಲ್ಲಂಗುರ್ಕಿ ಮತ್ತು ಎಸ್. ಮಾದಮಂಗಳ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಆಡಳಿತ ಮಂಡಳಿಯ ಅಧಿಕಾರ ಅವಧಿ ಮುಗಿದಿದ್ದು ಎರಡೂ ಸಂಘಗಳಿಗೆ ಆಡಳಿತಾಧಿಕಾರಿಗಳಾಗಿ ಡೇಲಿಗೇಟ್ ಅನ್ನು ಆಯ್ಕೆ ಮಾಡಿದ್ದಾರೆ. ಕೋಮಲ್ ವ್ಯವಸ್ಥಾಪಕ ಚೇತನ ಭ್ರಷ್ಟ ಅಧಿಕಾರಿ ಕಾನೂನು ಮೀರಿ ಡೇಲಿಗೇಟ್ ನೀಡಲು ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಆರೋಪಿಸಿದರು.



# ಧ್ವನಿ ಎತ್ತದೆ ಇರುವುದು ಅನುಮಾನಕ್ಕೆ ಎಡೆ

### ಪುರಸಭೆ ಆಸ್ತಿ ತೆರಿಗೆಯಲ್ಲಿ ಅವ್ಯವಹಾರ: ಸಮಗ್ರ ತನಿಖೆ ನಡೆಸಿದಿದ್ದರೆ ಹೋರಾಟದ ಎಚ್ಚರಿಕೆ

• **ಉದಯವಾಹಿನಿ, ಕುಣಿಗಲ್**

ಪುರಸಭೆಯಲ್ಲಿ ಸಾರ್ವಜನಿಕ ಆಸ್ತಿ ತೆರಿಗೆ ಹಣ ಲಕ್ಷಾಂತರ ಅವ್ಯವಹಾರ ನಡೆದು ವಾರ ಕಳೆದರೂ ಸಹ ಶಾಸಕರಾಗಲಿ, ಜಿಲ್ಲಾಧಿಕಾರಿಗಳಾಗಲಿ ಈ ಬಗ್ಗೆ ಧ್ವನಿ ಎತ್ತದೆ ಇರುವುದು ಅನುಮಾನಕ್ಕೆ ಎಡೆಮಾಡಿದೆ. ಈ ಕೂಡಲೇ ಸಮಗ್ರ ತನಿಖೆಗೆ ಒಳಪಡಿಸದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ತಾಲ್ಲೂಕು ಜೆ.ಡಿ.ಎಸ್. ಪಕ್ಷದ ಅಧ್ಯಕ್ಷ ಬಿ.ಎನ್. ಜಗದೀಶ್ ಎಚ್ಚರಿಕೆ ನೀಡಿದ್ದಾರೆ. ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪುರಸಭೆಯ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಇಂತಹ ತೆರಿಗೆ ಹಣ ವಂಚನೆ ಆಗಿದ್ದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಸದಾ ನಾನು ವಿದ್ಯಾವಂತ ಶಾಸಕ ಅಭಿವೃದ್ಧಿ ಚಿಂತಕ ಎಂದು ಹೇಳಿಕೊಳ್ಳುವ ಶಾಸಕ ಡಾ. ರಂಗನಾಥ್ ಅವರ ಏಳು ವರ್ಷದ ಅವಧಿಯಲ್ಲಿ ಇಂತಹ ಘಟನೆ ನಡೆದಿರುವುದು ಸಾಧನೆಯೇ ಎಂದು ಪ್ರಶ್ನಿಸಿ ಕಿಡಿಕಾರಿದರು.

ಪುರಸಭೆಯ ಆಸ್ತಿ ತೆರಿಗೆಯ ವಂಚನೆ ಪ್ರಕರಣ ಜಗಜ್ಜಾಹಿರಾಗಿದ್ದರೂ ಶಾಸಕರು ಕಂಡು ಕೇಳಿದರೂ ಈ ಬಗ್ಗೆ ಧ್ವನಿ ಎತ್ತಿ ಕ್ರಮ ಕೈಗೊಳ್ಳದೆ ಇರುವುದು ನೋಡಿದರೆ ಅನುಮಾನಕ್ಕೆ ಎಡೆಮಾಡಿದೆ. ಈ ಬಗ್ಗೆ ಮಾಧ್ಯಮದಲ್ಲಿ ಪ್ರಚಾರಗೊಂಡ ನಂತರ ಪೊಲೀಸರು ಒಂದಿಷ್ಟು ಕೇಸು ದಾಖಲಿಸಿ ಕ್ರಮ ಕೈಗೊಂಡರೆ ವಿನಃ ಇಲ್ಲಿ ನಡೆದಿರುವ ಪುರಸಭೆಯ ಅವ್ಯವಹಾರ ಮಾಧ್ಯಮದಲ್ಲಿ ಪ್ರಚಾರಗೊಂಡಿದ್ದರೂ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಏಕೆ ಪುರಸಭೆಗೆ ಉನ್ನತ ಅಧಿಕಾರಿಗಳನ್ನು ನೇಮಿಸಿ ತನಿಖೆ ಕೈಗೊಂಡಿಲ್ಲ. ಜಿಲ್ಲಾಧಿಕಾರಿಗಳಿಗೂ ಪುರಸಭೆಗೂ ಸಂಬಂಧವಿಲ್ಲವೇ ಸಾರ್ವಜನಿಕರ ತೆರಿಗೆ ಹಣ ಲೂಟಿಯಾಗುತ್ತಿದ್ದರೂ ಶಾಸಕರಾಗಲಿ, ಜಿಲ್ಲಾಧಿಕಾರಿಗಳಾಗಲಿ ಕೂಡಲೇ ಕ್ರಮ ಕೈಗೊಳ್ಳಬೇಕಿತ್ತು. ನೇರವಾಗಿ ಈ ಹೊಣೆಗಾರಿಕೆಯನ್ನು ಅವರೇ ಹೊರಬೇಕಾಗಿದೆ ಹಾಗೂ ಉತ್ತರಿಸಬೇಕಿದೆ ಎಂದು ಆಗ್ರಹಿಸಿದರು. ಈ ಪ್ರಕರಣದಲ್ಲಿ ಕೇವಲ ಒಬ್ಬ ವ್ಯಕ್ತಿಯನ್ನು ಬಂಧಿಸಿ ಕೈ ತೊಳೆದುಕೊಳ್ಳುವ ಹುನ್ನಾರವೇನಾದರೂ ನಡೆದಿದೆಯೇ ಒಬ್ಬ ವ್ಯಕ್ತಿ ಇಂತಹ ಕೆಲಸವನ್ನು ಮಾಡಲು ಸಾಧ್ಯವೇ? ಈ ಪ್ರಕರಣದಲ್ಲಿ ಮಾಜಿ ಮತ್ತು ಹಾಲಿ ಕೆಲವು ಪುರಸಭಾ ಸದಸ್ಯರುಗಳು ಕೈಜೋಡಿಸಿದ್ದಾರೆ ಎಂಬ ಸಾರ್ವಜನಿಕ ವಲಯದಲ್ಲಿ ಬಾರಿ ಚರ್ಚೆಗೆ ಗ್ರಾಸವನ್ನುಂಟು ಮಾಡಿದೆ. ಕೇವಲ ಹೊರಗಿನ ವ್ಯಕ್ತಿ ಒಬ್ಬನಿಂದ ಇಷ್ಟೊಂದು ಲಕ್ಷಗಟ್ಟಲೆ ಅವ್ಯವಹಾರ ಮಾಡಲು ಸಾಧ್ಯವೇ? ಪುರಸಭಾ ಅಧಿಕಾರಿಗಳು ಸಿಬ್ಬಂದಿಗಳು ಹೊಣೆಗಾರರಲ್ಲವೇ? ಹೊರಗಿನ ವ್ಯಕ್ತಿ ಕೆನರಾ ಬ್ಯಾಂಕ್ ಒಂದರ ನಕಲಿ ಸೀಲ್ ಮಾಡಿಸಿಕೊಂಡು ಚೆಕ್ ಲಿಸ್ಟ್‌ಗಳನ್ನು ಪ್ರಿಂಟಾಕಿಸಿಕೊಂಡು ನಕಲಿ ಸಹಿ ಹಾಕುವ ಮೂಲಕ ಅಕ್ರಮ ಎಸಗಲು ಸಾಧ್ಯವೇ, ಇನ್ನು ಬ್ಯಾಂಕ್ ಅಧಿಕಾರಿಗಳು ನಕಲಿ ಸೀಲು ಮಾಡಿಸಿ ಅವ್ಯವಹಾರ ನಡೆದಿದ್ದರೂ ತಮ್ಮ ಬ್ಯಾಂಕ್‌ನ ನಕಲಿ ಸೀಲು ಮಾಡಿದ್ದರೂ ಇದುವರೆಗೂ ಏಕೆ ಪೊಲೀಸರಿಗೆ ದೂರು ನೀಡಿಲ್ಲ. ಕೆನರಾ ಬ್ಯಾಂಕ್‌ನ ಬಗ್ಗೆಯೂ ಅನುಮಾನ ವ್ಯಕ್ತವಾಗಿದ್ದು, ಇಲ್ಲಿನ ವ್ಯವಸ್ಥಾಪಕರು ಈ ಬಗ್ಗೆ ಏಕೆ ಇನ್ನೂ ಮೀನಾ ಮೇಷ ಎಣಿಸುತ್ತಿದ್ದಾರೆ ಎಂಬುದು ಅನುಮಾನಕ್ಕೆ ಎಡೆಮಾಡಿದೆ ಎಂದು ದೂರಿದರು.

ಲಕ್ಷಾಂತರ ರೂಪಾಯಿಗಳನ್ನು ಸಾರ್ವಜನಿಕರಿಂದ ಪುರಸಭಾ ದಳ್ಳಾಳಿ ಒಬ್ಬ ವಂಚಿಸಲು ಸಾಧ್ಯವೇ, ಈತನಿಗೆ ಪುರಸಭಾ ಕಚೇರಿಯ ಸಿಬ್ಬಂದಿಗಳು ಬ್ಯಾಂಕ್ ಕಚೇರಿಯ ಸಿಬ್ಬಂದಿಗಳು ಏಕೆ ಕೈ ಜೋಡಿಸಿರಬಾರದು, ಇದು ಎಂದಿನಿಂದ ನಡೆದಿದೆ, ಇನ್ನು ಯಾವ್ಯಾವ ಹಗರಣಗಳು ನಡೆದಿದೆ ಎಂಬ ಬಗ್ಗೆ ಸಮಗ್ರ ತನಿಖೆ ಆಗಬೇಕಾಗಿದೆ ಎಂದು ಒತ್ತಾಯಿಸಿದರು.

ಯಾರನ್ನು ರಕ್ಷಿಸಲು ಶಾಸಕರು ಪುರಸಭೆಯ ಅವ್ಯವಾರದ ಬಗ್ಗೆ ಧ್ವನಿ ಎತ್ತುತ್ತಿಲ್ಲ ಎಂದು ಕಿಡಿಕಾರಿದ ಅವರು, ಈ ಹಗರಣದ ಕುರಿತು ಜಿಲ್ಲಾಧಿಕಾರಿಗಳು ಮತ್ತು ಶಾಸಕರು ಈ ಕೂಡಲೇ ಉತ್ತರಿಸಬೇಕು. ಜಿಲ್ಲಾಧಿಕಾರಿಗಳು ಸಮಗ್ರ ತನಿಖೆ ನಡೆಸಲು ಉತ್ತಮ ಅಧಿಕಾರಿಯನ್ನು ನೇಮಿಸಿ ಸಮಗ್ರ ತನಿಖೆ ನಡೆಸಬೇಕು. ಇಲ್ಲವಾದಲ್ಲಿ ಪುರಸಭೆಯ ಮುಂಭಾಗ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ಉದಯವಾಹಿನಿ ಚಿತ್ರ

**ಶಾಸಕರ ಕರ್ತವ್ಯವಾದರೂ ಏನು?**

**ಪುರಸಭೆಯಲ್ಲಿ ನಡೆಯುತ್ತಿರುವ ಅಮೃತ್ ಯೋಜನೆ ಸೇರಿದಂತೆ ಹಲವು ಯೋಜನೆಗಳ ಕಾಮಗಾರಿಗಳು ಮೂಲೆ ಹಿಡಿದಿದ್ದು ಹಾಳಾಗಿವೆ. ಸಾರ್ವಜನಿಕರಿಗೆ ವಂಚಿಸುತ್ತಿರುವ ಪ್ರಕರಣಗಳು ಹೆಚ್ಚಾಗಿದ್ದು, ಅವುಗಳಲ್ಲಿ ನೀರಿನ ಕಂದಾಯ ಟ್ರೇಡಿಂಗ್ ಲೈಸೆನ್ಸ್ ನೀಡುವ ವಿಚಾರವಾಗಿ ಮನೆ ಕಂದಾಯ ವಸೂಲಿ ಮಾಡುವ ವಿಚಾರವಾಗಿ ಅಕ್ರಮಗಳು ನಡೆದಿದೆ. ಟ್ರ್ಯಾಕ್ಟರ್ ಖರೀದಿಯಲ್ಲಿ ಅವ್ಯವಹಾರ ನಡೆದಿದೆ. ಪುರಸಭೆಯಲ್ಲಿರುವ ಕಸ ವಿಲೇವಾರಿ ಆಟೋಗಳಿಗೆ ನಂಬರ್ ಪ್ಲೇಟ್ ಅಳವಡಿಕೆ ಮಾಡಿಲ್ಲ, ಇನ್ನೂ ಶವ ಕೊಂಡೊಯ್ಯುವ ಕೈಲಾಸ ರಥ ನಂಬರ್ ಪ್ಲೇಟ್ ಅಳವಡಿಸಿಲ್ಲ. ಸರ್ಕಾರಿ ವಾಹನ ಅಪಘಾತವಾದರೆ ಯಾರು ಹೊಣೆ, ಇಷ್ಟೆಲ್ಲಾ ಅವ್ಯವಹಾರ ನಡೆಯುತ್ತಿದ್ದರೂ ವಿದ್ಯಾವಂತ ವೈದ್ಯರಾದಂತಹ ಶಾಸಕರ ಕರ್ತವ್ಯವಾದರೂ ಏನು ಎಂದು ಪ್ರಶ್ನಿಸಿದರು.**

**ಏಕೆ ಇನ್ನೂ ಮೀನಾ ಮೇಷ**

**ಇನ್ನೂ ಪುರಸಭೆಯಲ್ಲಿ ಎಲ್ಲಾ ಹಂತದಲ್ಲೂ ಅವ್ಯವಹಾರ ನಡೆದಿದ್ದು, ಈ ಬಗ್ಗೆ ಸಾರ್ವಜನಿಕ ವಲಯದಲ್ಲಿ ಪುರಸಭಾ ಕಾರ್ಯ ವೈಖರಿಯ ಬಗ್ಗೆ ಅನುಮಾನ ಮೂಡಿಸಿದೆ. ಶಾಸಕರು ಕ್ಷೇತ್ರದ ಅಭಿವೃದ್ಧಿಗೆ 24 ಗಂಟೆ ಕ್ರಮ ವಹಿಸಿ ದುಡಿಯುತ್ತೇನೆ ಎಂದು ಭಾಷಣ ಮಾಡಿಕೊಂಡು ಬರೀ ರಾಜಕೀಯ ಮಾಡುತ್ತಿದ್ದಾರೆಯೇ ಹೊರತು ಇವರು ಎಂದಾದರೂ ಪುರಸಭೆಯ ಸಾಮಾನ್ಯ ಸಭೆಗಾಗಲೀ, ಬಜೆಟ್ ಸಭೆಗಾಗಲೀ ಹೋಗಿದ್ದಾರಾ ಎಂದು ಪ್ರಶ್ನಿಸಿದ ಅವರು, ಅವರದೇ ಆಡಳಿತ ಇರುವಂತಹ ಪುರಸಭೆಯಲ್ಲಿ ಇಂತಹ ಕೋಟ್ಯಂತರ ಅವ್ಯವಹಾರ ನಡೆದಿರುವುದು ಇತಿಹಾಸ ಎಂದರು.**

# ಅಳಿವಿನ ಅಂಚಿಗೆ ಜನಪದ ಕಲಾ ಪ್ರಕಾರ

• **ಉದಯವಾಹಿನಿ, ಚನ್ನಪಟ್ಟಣ**

ಅಳವಿನ ಅಂಚಿಗೆ ಸರಿಯುತ್ತಿರುವ ಜನಪದ ಕಲಾ ಪ್ರಕಾರಗಳನ್ನು ವಿದ್ಯಾರ್ಥಿಗಳು ಅರ್ಥೈಸಿಕೊಂಡು ಮುಂದಿನ ತಲೆಮಾರಿಗೆ ಕೊಂಡೊಯ್ಯುವ ಗುರುತರ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಜಾನಪದ ವಿದ್ವಾಂಸ ಡಾ.ಹಿ.ಚಿ.ಬೋರಲಿಂಗಯ್ಯ ಕಿವಿಮಾತು ಹೇಳಿದರು. ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಸಾಂಸ್ಕೃತಿಕ, ರಾಷ್ಟ್ರೀಯ ಸೇವಾ ಯೋಜನೆ, ಕ್ರೀಡೆ, ಎನ್‌ಸಿಸಿ, ರೋವರ್ಸ್ ಮತ್ತು ರೇಂಜರ್ಸ್, ರೆಡ್ ಕ್ರಾಸ್, ಇತರ ಸಮಿತಿ ಚಟುವಟಿಕೆ ಸಮಾರೋಪದಲ್ಲಿ ಮಾತನಾಡಿದರು.

ಯುವ ಜನರು ಜಾನಪದ ಸಂಸ್ಕೃತಿಯಿಂದ ದೂರ ಉಳಿದಿದ್ದಾರೆ. ಅಳಿವಿನಂಚಿಗೆ ತಲುಪಿರುವ ಜಾನಪದ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕು ಎಂದರು. ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಸಿ.ಪಿ. ಯೋಗೇಶ್ವರ್ ಮಾತನಾಡಿ, ವಿದ್ಯಾರ್ಥಿಗಳು ಸಮಯ ಸದುಪಯೋಗಪಡಿಸಿಕೊಂಡು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು.



ಉದಯವಾಹಿನಿ ಚಿತ್ರ

ಚನ್ನಪಟ್ಟಣದ ಪದವಿ ಕಾಲೇಜು ಉತ್ತಮ ಶಿಕ್ಷಣ ನೀಡುವಲ್ಲಿ ಮುಂಚೂಣಿಯಲ್ಲಿದೆ ಎಂದರು. ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕ ಡಾ.ರಾಮಕೃಷ್ಣ ರೆಡ್ಡಿ ಮಾತನಾಡಿ, ವಿದ್ಯಾರ್ಥಿಗಳು ಪಠ್ಯ, ಸಹಪಠ್ಯ ಚಟು ವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ಪರಿಪೂರ್ಣ ವ್ಯಕ್ತಿಗಳಾಗಿ ರೂಪು ಗೊಳ್ಳಬೇಕು ಎಂದರು.

# ಕನ್ನಡದಲ್ಲಿ ವ್ಯವಹರಿಸುವಂತೆ ಬ್ಯಾಂಕ್‌ಗಳಿಗೆ ಕರವೇ ಮನವಿ

• **ಉದಯವಾಹಿನಿ, ಕೊಳ್ಳೇಗಾಲ**

ಚಂದಾಪುರದ ಎಸ್‌ಬಿಐ ಬ್ಯಾಂಕ್ ಮ್ಯಾನೇಜರ್‌ನ ಕನ್ನಡ ವಿರೋಧಿ ವರ್ತನೆ ಖಂಡಿಸಿ ಇಲ್ಲಿನ ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣ ಗೌಡ ಬಣದ) ಪದಾಧಿಕಾರಿಗಳು ನಗರದ ಎಲ್ಲಾ ಬ್ಯಾಂಕ್‌ಗಳಿಗೆ ತೆರಳಿ ಕನ್ನಡದಲ್ಲಿ ವ್ಯವಹರಿಸಬೇಕು ಎಂದು ಮನವಿ ಮಾಡಿದರು. ನಗರದ ಎಸ್‌ಬಿಐ ಬ್ಯಾಂಕ್, ಕೆನರಾ ಬ್ಯಾಂಕ್, ಆಕ್ಸಿಸ್ ಬ್ಯಾಂಕ್, ಬರೋಡ ಬ್ಯಾಂಕ್‌ಗಳಿಗೆ ಭೇಟಿ ನೀಡಿ ವ್ಯವಹಾರಗಳಲ್ಲಿ ಕನ್ನಡ ಭಾಷೆ ಬಳಕೆ ಕಡ್ಡಾಯವಾಗಬೇಕು ಎಂದು ಬಲವಾಗಿ ಆಗ್ರಹಿಸಿದರು.

ತಾಲ್ಲೂಕು ಅಧ್ಯಕ್ಷ ಅಯಾಜ್ ಕನ್ನಡಿಗ ಮಾತನಾಡಿ, ರಾಜ್ಯದಲ್ಲಿ ಕನ್ನಡ ಭಾಷೆಗೆ ಗೌರವ ನೀಡದವರ ವಿರುದ್ಧ ಸರ್ಕಾರ ತಕ್ಷಣ ಕ್ರಮಕೈಗೊಳ್ಳಬೇಕು. ಬ್ಯಾಂಕ್‌ಗಳಲ್ಲಿ ಗ್ರಾಹಕರೊಂದಿಗೆ ಕನ್ನಡದಲ್ಲಿ ಮಾತನಾಡುವುದು, ಎಲ್ಲಾ ಚಲನ್‌ಗಳು ಕನ್ನಡದಲ್ಲಿಯೂ ಲಭ್ಯವಾಗುವಂತೆ ಮಾಡುವುದೂ ಸೇರಿದಂತೆ ಅನೇಕ ನೀತಿ ನಿಯಮ ಜಾರಿ ಮಾಡಬೇಕು.



ಉದಯವಾಹಿನಿ ಚಿತ್ರ

ಕರ್ನಾಟಕದಲ್ಲಿ ಹುಟ್ಟಿ ಕನ್ನಡಕ್ಕೆ ಅವಮಾನ ಮಾಡುವುದನ್ನು ಸಹಿಸುವುದಿಲ್ಲ. ಬ್ಯಾಂಕ್ ವ್ಯವಹಾರ ಮಾಡುವ ಪ್ರತಿಯೊಬ್ಬರೂ ಕನ್ನಡವನ್ನು ಕಡ್ಡಾಯವಾಗಿ ಕಲಿತಿರಬೇಕು. ಇಲ್ಲದಿದ್ದರೆ ಅವರನ್ನು ಕಡ್ಡಾಯವಾಗಿ ರಜೆ ಮೇಲೆ ಮನೆಗೆ ಕಳುಹಿಸುವುದು ಸೂಕ್ತ ಎಂದರು. ವಿದ್ಯಾವಂತರಿಗೆ ಹಿಂದಿ ಇಂಗ್ಲಿಷ್ ಸೇರಿದಂತೆ ಅನೇಕ ಭಾಷೆಗಳು ಬರುತ್ತದೆ. ಆದರೆ, ಕೆಲ ಮುಗ್ಧರಿಗೆ ಕನ್ನಡ ಭಾಷೆ ಬಿಟ್ಟರೆ ಬೇರೆ ಯಾವ ಭಾಷೆಯೂ ಬರುವುದಿಲ್ಲ. ಅಂತವರು ಬ್ಯಾಂಕ್‌ನಲ್ಲಿ ಹೇಗೆ ಮಾತನಾಡಬೇಕು. ಮುಂದಿನ ದಿನಗಳಲ್ಲಿ ಕನ್ನಡಕ್ಕೆ ಅವಮಾನ ಆಗುವುದು ಅಥವಾ ಬ್ಯಾಂಕ್ ಮ್ಯಾನೇಜರ್‌ಗಳು ಸಿಬ್ಬಂದಿ ಇಂಗ್ಲಿಷ್‌ನಲ್ಲಿ ಮಾತನಾಡುವುದನ್ನು ಕಂಡರೆ ತಕ್ಷಣ ಬ್ಯಾಂಕ್ ಸಿಬ್ಬಂದಿಯನ್ನು ವಜಾ ಮಾಡಬೇಕು ಎಂದು ಆಗ್ರಹಿಸಿದರು.

# ರಸ್ತೆ ಕಾಮಗಾರಿ ಅವೈಜ್ಞಾನಿಕ ಆರೋಪ: ಕಾಮಗಾರಿ ತಡೆದು ಪ್ರತಿಭಟನೆ

• **ಉದಯವಾಹಿನಿ, ಶ್ರೀರಂಗಪಟ್ಟಣ**

ತಾಲ್ಲೂಕಿನ ದೊಡ್ಡಪಾಳ್ಯ ಗ್ರಾಮದಲ್ಲಿ ಮಾರಿಗುಡಿ ಬೀದಿ ಇತರ ರಸ್ತೆಗಳ ಕಾಮಗಾರಿ ಅವೈಜ್ಞಾನಿಕವಾಗಿದೆ ಎಂದು ಆರೋಪಿಸಿ ಗ್ರಾಮಸ್ಥರು ಗುರುವಾರ ಕಾಮಗಾರಿಯನ್ನು ತಡೆದು ಪ್ರತಿಭಟನೆ ನಡೆಸಿದರು. ರಸ್ತೆಯ ಎರಡೂ ಬದಿಯಲ್ಲಿ ಚರಂಡಿ ನಿರ್ಮಿಸಿ ಬಳಿಕ ರಸ್ತೆ ಅಭಿವೃದ್ಧಿ ಮಾಡಬೇಕು. ಅಲ್ಲಿಯವರೆಗೆ ಕಾಮಗಾರಿ ನಡೆಸಲು ಅವಕಾಶ ನೀಡುವುದಿಲ್ಲ ಎಂದು ಪಟ್ಟು ಹಿಡಿದರು. ಒಂದು ಹಂತದಲ್ಲಿ ಗುತ್ತಿಗೆದಾರರ ಬೆಂಬಲಿಗರು, ಗ್ರಾಮಸ್ಥರ ನಡುವೆ ಮಾತಿನ ಚಕಮಕಿ ನಡೆಯಿತು.

ಎಂಜಿನಿಯರ್‌ಗಳು, ಗುತ್ತಿಗೆದಾರರು ಸ್ಥಳಕ್ಕೆ ಬರಬೇಕು. ಚರಂಡಿ ನಿರ್ಮಿಸಿದ ಬಳಿಕ ರಸ್ತೆ ಅಭಿವೃದ್ಧಿಪಡಿಸುವ ಭರವಸೆ ನೀಡುವವರೆಗೆ ಕಾಮಗಾರಿ ನಡೆಸಕೂಡದು ಎಂದು ಮುಖಂಡರಾದ ನಾಗರಾಜು, ಕೃಷ್ಣಮೂರ್ತಿ ಇತರರು ಹೇಳಿದರು.



ಉದಯವಾಹಿನಿ ಚಿತ್ರ

ದೊಡ್ಡಪಾಳ್ಯ ಗ್ರಾಮದ ವಿವಿಧೆಡೆ ರಸ್ತೆಗಳ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ. ಇರುವ ಚರಂಡಿಗಳನ್ನು ಮುಚ್ಚಿ ಕಾಂಕ್ರೀಟ್ ಹಾಕುತ್ತಿದ್ದಾರೆ. ಚರಂಡಿ ನಿರ್ಮಿಸದೆ ಸಿಮೆಂಟ್ ರಸ್ತೆ ಮಾಡಿದರೆ ಕೊಳಚೆ ನೀರು ರಸ್ತೆಗೆ ಹರಿಯುತ್ತದೆ. ಹಾಗಾದರೆ ಓಡಾಡುವುದು ಹೇಗೆ ಎಂದು ಸಿದ್ದಪ್ಪ ಪ್ರಶ್ನಿಸಿದರು.

ಗ್ರಾಮ ಪಂಚಾಯಿತಿಗೂ ಈಗ ನಡೆಯುತ್ತಿರುವ ಕಾಮಗಾರಿಗೂ ಸಂಬಂಧವಿಲ್ಲ. ಲೋಕೋಪಯೋಗಿ ಇಲಾಖೆ ರಸ್ತೆ ಅಭಿವೃದ್ಧಿ ಮಾಡುತ್ತಿದೆ ಎಂದು ಮುಂಡುಗದೊರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿಶಾಲಮೂರ್ತಿ ಹೇಳಿದರು.

**ದೊಡ್ಡಪಾಳ್ಯ ಗ್ರಾಮದಲ್ಲಿ, 50 ಲಕ್ಷ ವೆಚ್ಚದಲ್ಲಿ ನಡೆಯುತ್ತಿರುವ ರಸ್ತೆ ಕಾಮಗಾರಿಯ ಮಾರ್ಗದಲ್ಲಿ ಒಳ ಚರಂಡಿ, ಕುಡಿಯುವ ನೀರಿನ ಪೈಪ್‌ಗಳಿವೆ. ಸಮಸ್ಯೆ ಆಗದಂತೆ ಕಾಮಗಾರಿ ನಡೆಸುವ ಭರವಸೆ ನೀಡಿದ್ದೇವೆ. ಮತ್ತೆ ಕಾಮಗಾರಿ ಶುರುವಾಗಿದೆ. ಗುಣಮಟ್ಟದ ಕಾಮಗಾರಿ ನಡೆಸಲು ಸ್ಥಳೀಯ ಗ್ರಾಮ ಪಂಚಾಯಿತಿಯ ಸಹಕಾರ ಅಗತ್ಯ**

**-ಜಸ್ವಂತ್, ಲೋಕೋಪಯೋಗಿ ಇಲಾಖೆ ಎಇಇ**

# ಗ್ರಾಮಸಭೆಯಲ್ಲಿ ಪಿಡಿಒ ವಿರುದ್ಧ ಕ್ರಮಕ್ಕೆ ನಿರ್ಣಯ

• **ಉದಯವಾಹಿನಿ, ಮಡಿಕೇರಿ**

ನಾಗರಹೊಳೆ ಹುಲಿ ರಕ್ಷಿತಾರಣ್ಯದೊಳಗಿನ ಕರಡಿಕಲ್ಲು ಅತ್ತೂರುಕೊಲ್ಲಿ ಪ್ರದೇಶದಲ್ಲಿ ಮೇ 5ರಿಂದ ಪ್ರತಿಭಟನೆ ನಡೆಸುತ್ತಿರುವ ಜೇನು ಕುರುಬ ಸಮುದಾಯಕ್ಕೆ ಸೇರಿದ 52 ಕುಟುಂಬಗಳ ಪ್ರತಿಭಟನೆ ಮಂಗಳವಾರ ಮುಂದುವರಿದಿದೆ. ಈ ಮಧ್ಯೆ ಅತ್ತೂರು ಗುಡಿ ಆವರಣದಲ್ಲಿ ನಡೆದ ಗ್ರಾಮಸಭೆಯಲ್ಲಿ ಕೆ.ಬಾಡಗ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನಿರ್ಣಯಿಸಲಾಯಿತು ಎಂದು ಹಾಡಿ, ಅರಣ್ಯ ಹಕ್ಕು ಸಮಿತಿಯ ಅಧ್ಯಕ್ಷ ಜೆ.ಎ.ಶಿವು ತಿಳಿಸಿದರು. ಕಳೆದ ವರ್ಷ ಅಕ್ಟೋಬರ್ 28, 29 ರಂದು ನಡೆದ 52 ಕುಟುಂಬಗಳ ಅರಣ್ಯ ಹಕ್ಕು ಕಾಯ್ದೆಯ ಅರ್ಜಿಯ ಜಂಟಿ ಸಮೀಕ್ಷೆಯ ನಕ್ಷೆ ಯನ್ನು ಪಿಡಿಒ ಹಾಡಿ ಅರಣ್ಯ ಹಕ್ಕು ಸಮಿತಿ, ಗ್ರಾಮಸಭೆಗೆ ಮಂಡಿಸಿಲ್ಲ. ಅವರು ಏಕಪಕ್ಷೀಯವಾಗಿ ಅರಣ್ಯ ಇಲಾಖೆಗೆ ಕಳುಹಿಸಿದ್ದಾರೆ. ಇದು ನಿಯಮಗಳ ಉಲ್ಲಂಘನೆಯಾಗಿರುವುದರಿಂದ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಈ 52 ಅರ್ಜಿಗಳ ಪೈಕಿ 13 ಅರ್ಜಿಗಳನ್ನು ಮರುಪರಿಶೀಲನೆಗೆ ಅವಕಾಶವೇ ಎಂದು ಹೇಳಿರುವುದು ಸರಿಯಲ್ಲ ಎಂದೂ ಖಂಡಿಸಲಾಯಿತು ಎಂದರು. ಅರಣ್ಯ ಹಕ್ಕು ಕಾಯ್ದೆ, ಗ್ರಾಮಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳನ್ನು ಪಾಲಿಸದೆ ಇರುವ ಇತರೆ ಇಲಾಖೆಗಳ ಅಧಿಕಾರಿಗಳು, ಸಮಿತಿಗಳ ಸದಸ್ಯರ ವಿರುದ್ಧ ಎಎಲ್‌ಎಂಸಿ, ಎಂಒಟಿಎಗೆ ದೂರು ನೀಡಲೂ ನಿರ್ಧರಿಸಲಾಯಿತು ಎಂದು ಹೇಳಿದರು.

ಅತ್ತೂರು ಕೊಲ್ಲಿ ಹಾಡಿಯ ಪೂರ್ವಿಕರ ನೆಲೆಯಲ್ಲಿ ಬದುಕಲು ಸಾಂವಿಧಾನಿಕ ಹಕ್ಕಿನ ಅಡಿಯಲ್ಲಿ ಪರಂಪರಗತವಾಗಿ ನೆಲೆಸುವ ನೆಲೆಗಳನ್ನು ಮಾಡಲು ನಿರ್ಣಯ ಕೈಗೊಳ್ಳಲಾಯಿತು. ಗ್ರಾಮಸಭೆ ಅನುಮತಿ ಇಲ್ಲದೆ ಕಾನೂನು ಬಾಹಿರ ನಿರ್ಬಂಧದ ಫಲಕವನ್ನು ಅರಣ್ಯ ಇಲಾಖೆ ಅಳವಡಿಸಿರುವುದನ್ನು ಖಂಡಿಸಲಾಯಿತು, ಜೇನುಕುರುಬರ ಜಮ್ಮದ ಅರಣ್ಯ ಹಕ್ಕು ಕಾಯ್ದೆ ಹಾಗೂ ಭಾರತದ ಸಂವಿಧಾನ ಅನುಮತಿಯ ಬೋರ್ಡ್ ಅನ್ನು ಅಳವಡಿಸಿರುವುದನ್ನು ಅನುಮೋದಿಸಿ ನಿರ್ಣಯ ಮಾಡಲಾಯಿತು ಎಂದರು.

### ಅನೈತಿಕ ಚಟುವಟಿಕೆಗಳ ತಾಣವಾದ ಪಂಚಾಯಿತಿ ಕಾರ್ಯಾಲಯ ಕಟ್ಟಡ

# ಅರ್ಧಕ್ಕೆ ನಿಂತ ಕಾಮಗಾರಿ ಅನೈತಿಕ ಚಟುವಟಿಕೆ ತಾಣ

• **ಉದಯವಾಹಿನಿ, ಬಂಗಾರಪೇಟೆ**

ಅನುದಾನ ಕೊರತೆಯಿಂದ ಅರ್ಧದಲ್ಲೇ ಸ್ಥಗಿತಗೊಂಡಿರುವ ಗ್ರಾಮ ಪಂಚಾಯಿತಿ ಕಾರ್ಯಾಲಯದ ಕಟ್ಟಡ ನಿರ್ಮಾಣ ಕಾಮಗಾರಿ ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದೆ. ತಾಲ್ಲೂಕಿನ ಹುಲಿಬೆಲೆ ಗ್ರಾಮ ಪಂಚಾಯಿತಿ ಕಟ್ಟಡ ಶಿಥಿಲಗೊಂಡದ್ದು, ಚಿಕ್ಕದಾಗಿದೆ. ಗ್ರಾಮ ಪಂಚಾಯಿತಿ ಕೆಲಸ ಕಾರ್ಯಗಳನ್ನು ಸುಗಮವಾಗಿ ಮಾಡಲು ನೂತನ ಕಟ್ಟಡದ ಅವಶ್ಯಕತೆ ಇದೆ ಎಂದು ಬೇಡಿಕೆ ಇಟ್ಟ ಕಾರಣ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ಕಾಮಗಾರಿ ಪ್ರಾರಂಭ ಮಾಡಿ ಹಲವು ವರ್ಷಗಳು ಕಳೆದರೂ ಅನುದಾನದ ಕೊರತೆಯಿಂದ ಕಾಮಗಾರಿ ಅರ್ಧಕ್ಕೇ ಸ್ಥಗಿತಗೊಂಡಿದೆ.

ಈ ಕಾಮಗಾರಿಗೆ ರಾಜೀವ್ ಗಾಂಧಿ ಪಂಚಾಯತ್ ಸಶಕ್ತಿಕರಣ ಅಭಿಯಾನ ಯೋಜನೆಯಡಿ 15 ಲಕ್ಷ ಮತ್ತು ವಿಧಾನ ಪರಿಷತ್ ಸದಸ್ಯರಾದ ಎಂ.ಎಲ್. ಅನಿಲ್ ಕುಮಾರ್ ಅವರ ವಿಶೇಷ ಅನುದಾನದಲ್ಲಿ 5 ಲಕ್ಷ ಮೂಂಜೂರು ಮಾಡಲಾಗಿತ್ತು. ಗ್ರಾಮ ಪಂಚಾಯಿತಿ ಕಾರ್ಯಾಲಯವನ್ನು ನಿರ್ಮಾಣ ಮಾಡಲು ಕೆಆರ್‌ಡಿಎಲ್ ಸಂಸ್ಥೆ ಗುತ್ತಿಗೆಯನ್ನು ಪಡೆದುಕೊಂಡು ಕಾಮಗಾರಿಯನ್ನು ಪ್ರಾರಂಭಿಸಿತ್ತು. ಆದರೆ ಮುಂದೆ ಅನುದಾನ ನಿಂತು ಹೋದ ಕಾರಣ ಕಾಮಗಾರಿಯನ್ನು ಅರ್ಧಕ್ಕೇ ನಿಲ್ಲಿಸಿದೆ. 20 ಲಕ್ಷ ಅನುದಾನದಲ್ಲಿ ನೆಲ ಮಹಡಿಗೆ ಮೇಲ್ಚಾವಣಿಯನ್ನು ಹಾಕಿದ್ದು, ಮೊದಲ ಮಹಡಿಗೆ ಅರ್ಧ ಗೋಡೆಗಳನ್ನು ನಿರ್ಮಾಣ ಮಾಡಲಾಗಿದೆ.



ಉದಯವಾಹಿನಿ ಚಿತ್ರ

**ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಮುಖ್ಯಮಂತ್ರಿ ವಿಶೇಷ ಅನುದಾನದಲ್ಲಿ 40 ಲಕ್ಷ ಬಿಡುಗಡೆಯಾಗಿದ್ದು ಅತಿ ಶೀಘ್ರದಲ್ಲೇ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು**

**-ಚಿತ್ರಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ**

ಕಾಮಗಾರಿಯನ್ನು ಮುಂದುವರಿಸಲು ಹೆಚ್ಚಿನ ಅನುದಾನಬೇಕು. ಅದಿಲ್ಲದ್ದಕ್ಕೆ ನಿರ್ಮಾಣವಾಗಿರುವ ಅರ್ಧ ಕಟ್ಟಡವೂ ಹಾಳಾಗುತ್ತಿದೆ. ನಿರ್ಮಾಣಕ್ಕೆ ಉಪಯೋಗಿಸಿರುವ ಕಬ್ಬಿಣದ ಕಂಬಿಗಳು, ಕಿಟಕಿಗಳು ತುಕ್ಕು ಹಿಡಿಯುತ್ತಿವೆ ಎಂದು ಗ್ರಾಮಸ್ಥರು ಆರೋಪಿಸಿದರು. ಅಷ್ಟೇ ಅಲ್ಲದೇ, ಅರ್ಧಕ್ಕೆ ನಿಲ್ಲಿಸಿರುವ ಕಟ್ಟಡದಲ್ಲಿ ರಾತ್ರಿ, ಅನೈತಿಕ ಚಟುವಟಿಕೆಗಳು ನಡೆಯುತ್ತಿವೆ. ರಾತ್ರಿ ಕುಡುಕರ ಅಡ್ಡೆಯಾಗುವ ಹಾಗೂ ಹಗಲಿನಲ್ಲಿ ಕುರಿಗಳ ದೊಡ್ಡಿಯಾಗುವ ಈ ಕಟ್ಟಡವನ್ನು ಪೂರ್ಣಗೊಳಿಸಿ ಉಪಯೋಗಕ್ಕೆ ಮುಕ್ತಗೊಳಿಸಬೇಕು ಎಂದು ಸ್ಥಳೀಯರು ಆಗ್ರಹಿಸುತ್ತಿದ್ದಾರೆ. ಗ್ರಾಮ ಪಂಚಾಯಿತಿ ಕಾರ್ಯಾಲಯ ಕಟ್ಟಡ ಕಾಮಗಾರಿಯನ್ನು ಕೂಡಲೇ ಪೂರ್ಣಗೊಳಿಸಿ ಸಾರ್ವಜನಿಕ ಸೇವೆಗೆ ಅನುಕೂಲ ಮಾಡಿಕೊಡಬೇಕು ಎಂದು ಹುಣಸನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಎಚ್.ಆರ್. ಶ್ರೀನಿವಾಸ್ ಒತ್ತಾಯಿಸಿದರು.

ಗ್ರಾಮ ಪಂಚಾಯಿತಿ ಕಟ್ಟಡದ ಕಾಮಗಾರಿಯನ್ನು ಪೂರ್ಣ ಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳನ್ನು ಒತ್ತಾಯಿಸುತ್ತ ಬಂದಿದ್ದೇವೆ. ಅಧಿಕಾರಿಗಳು ಇಲ್ಲಸಲ್ಲದ ಕಾರಣ ಹೇಳುತ್ತ ಕಾಲ ತಳ್ಳುತ್ತಿದ್ದಾರೆ ಎಂದು ಹುಲಿಬೆಲೆ ಗ್ರಾಮ ಪಂಚಾಯಿತಿ ಸದಸ್ಯ ಸುರೇಶ್ ಆರೋಪಿಸಿದರು.

**ಕ್ರಿಯಾ ಯೋಜನೆ ಸಿದ್ಧಪಡಿಸಿ ಅನುಮೋದನೆ ಪಡೆದ ನಂತರ ಅನುದಾನ ಬಿಡುಗಡೆಯಾಗಿರುತ್ತದೆ. ಅದರ ಆಧಾರದ ಮೇಲೆ ಕಾಮಗಾರಿಯನ್ನು ಪ್ರಾರಂಭಿಸಲಾಗುತ್ತದೆ. ಹೀಗಿರುವಾಗ ಕಾಮಗಾರಿ ಪ್ರಗತಿಯ ಹಂತದಲ್ಲಿ ಅನುದಾನ ಕೊರತೆ ಉಂಟಾಗಲು ಹೇಗೆ ಸಾಧ್ಯ? ಇದಕ್ಕೆ ಅಧಿಕಾರಿಗಳ ನಿರ್ಲಕ್ಷ್ಯವೇ ನೇರ ಕಾರಣ**

**-ಬಾಲಕೃಷ್ಣ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ**

## ಮಿನಿ ನ್ಯೂಸ್

### ಹಳ್ಳಿಗಳಲ್ಲಿ ಗ್ರಂಥಾಲಯ ತೆರೆದರೆ ಮನೆಗೊಬ್ಬ ಅಂಬೇಡ್ಕರ್ ಜನಿಸುತ್ತಾರೆ

• **ಉದಯವಾಹಿನಿ, ಚೇಳೂರು**

ಪ್ರತಿಯೊಂದು ಗ್ರಾಮದಲ್ಲೂ ಗ್ರಂಥಾಲಯಗಳನ್ನು ತೆರೆದಾಗ ವಿದ್ಯಾವಂತರ ಸಂಖ್ಯೆ ಹೆಚ್ಚುತ್ತದೆ, ಮನೆಗೊಬ್ಬ ಅಂಬೇಡ್ಕರ್ ಹುಟ್ಟುತ್ತಾರೆ ಎಂದು ತುಮುಲ್ ನಿರ್ದೇಶಕಿ ಭಾರತಿ ಶ್ರೀನಿವಾಸ್ ಹೇಳಿದರು. ಗುಬ್ಬಿ ತಾಲ್ಲೂಕಿನ ಚೇಳೂರು ಹೋಬಳಿಯ ಕೊಡಿಯಾಲ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ, ಡಾ. ಬಾಬು ಜಗಜೀವನ್ ರಾಮ್ ನಾಮ ಫಲಕದ ಉದ್ಘಾಟನೆ ಮಾಡಿ ಅವರು ಮಾತನಾಡಿದರು. ಗ್ರಾಮೀಣ ಪ್ರದೇಶದಲ್ಲಿ ಶೋಷಿತ ಸಮುದಾಯಗಳು ಮೌಢ್ಯತೆಯಿಂದ ಹೊರ ಬಂದು ದೇವಾಲಯಗಳನ್ನು ಕಟ್ಟುವ ಬದಲು ಗ್ರಂಥಾಲಯಗಳನ್ನು ಸ್ಥಾಪನೆ ಮಾಡಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿದರೆ ಹೊಸ ಸಮಾಜ ನಿರ್ಮಾಣವಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿದ್ದು, ಇದರಿಂದ ಹೊರಬಂದು ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಬೇಕು. ಶಿಕ್ಷಣದಿಂದ ಸದೃಢ ಗ್ರಾಮ, ಸದೃಢ ರಾಷ್ಟ್ರ, ಸಮಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಡಿಎಸ್‌ಎಸ್ ಮುಖಂಡ ಚೇಳೂರು ಶಿವನಂಜಪ್ಪ ಮಾತನಾಡಿ, ಶಾಸಕ ಶ್ರೀನಿವಾಸ್, ಅವರ ಧರ್ಮ ಪತ್ನಿ ಇಂದಿಗೂ ದಲಿತರನ್ನು ನಮ್ಮ ಮನೆ ಮಕ್ಕಳಂತೆ ಕಾಣುತ್ತಾರೆ. ದಲಿತರು ಅವರ ಮನೆ ಬಾಗಿಲಿಗೆ ಹೋದರೆ ಊಟ ಮಾಡಿಸದೆ ಕಳುಹಿಸುವುದಿಲ್ಲ, ಶಾಸಕರ ಕುಟುಂಬ ದಲಿತರ ಮೇಲೆ ಇಟ್ಟಿರುವ ಕಾಳಜಿ ತುಂಬಾ ಗೌರವನ್ವಿತ ಎಂದರು. ಇದೇ ಸಂದರ್ಭದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ನೀಡಿ ಗೌರವಿಸಲಾಯಿತು.

### ಸರ್ದಾರ್ ವಲ್ಲಭಭಾಯ್ ಪಟೇಲ್ ತತ್ವಾದರ್ಶ ಪಾಲಿಸಲು ಕರೆ

**ಮಧುಗಿರಿ:** ವಿದ್ಯಾರ್ಥಿಗಳು ಸರ್ದಾರ್ ವಲ್ಲಬಾಯ್ ಪಟೇಲ್ ಅವರ ತತ್ವ- ಆದರ್ಶಗಳನ್ನು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪ್ರಾಂಶುಪಾಲ ಈರಪ್ಪನಾಯಕ ಕರೆ ನೀಡಿದರು. ತಾಲ್ಲೂಕಿನ ಮಿಡಿಗೇಶಿ ಸರ್ಕಾರಿ ಪ್ರಥಮ ದರ್ಜೆ ಇತಿಹಾಸ ವಿಭಾಗದವರು ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಭಾವೈಕ್ಯತೆಯ ಬಗ್ಗೆ ಭಾರತದ ಪ್ರತಿಯೊಬ್ಬ ನಾಗರಿಕನಿಗೂ ಕೂಡ ಅರಿವು ಬಂದಾಗ ಮಾತ್ರ ಭಾರತ ದೇಶವನ್ನು ಸದೃಢವಾಗಿ ನಿರ್ಮಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ಕೆ.ಸಿ. ಬಸವರಾಜು ಮಾತನಾಡಿ, ವಿಶೇಷ ಉಪನ್ಯಾಸಗಳು ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದಾಗ ಎಲ್ಲಾ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸುಲಭವಾಗಿ ಎದುರಿಸಲು ಹಾಗೂ ಜೀವನದ ಎಲ್ಲಾ ಸವಾಲುಗಳನ್ನು ಎದುರಿಸಬಹುದು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

### ಬ್ಯಾಂಕ್ ನಿರ್ದೇಶಕ ಸ್ಥಾನಕ್ಕೆ ರೂಪಕಲಾ ಸುಬ್ಬರೆಡ್ಡಿ ಅವಿರೋಧ ಆಯ್ಕೆ?

• **ಉದಯವಾಹಿನಿ, ಕೋಲಾರ**

ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗೆ ಇಬ್ಬರು ಶಾಸಕರು ಅವಿರೋಧವಾಗಿ ಆಯ್ಕೆಯಾಗಲಿರುವುದು ಬಹುತೇಕ ಖಚಿತ ಎಂದು ವಿಶ್ವಾಸನೀಯ ಮೂಲಗಳು ಖಚಿತಪಡಿಸಿದೆ.



ನಾಮಪತ್ರಗಳ ಸಲ್ಲಿಕೆ ಹಾಗೂ ಪರಿಶೀಲನೆ ಕಾರ್ಯವು ಅಂತ್ಯ ಗೊಂಡಿದ್ದು ನಾಮಪತ್ರಗಳ ವಾಪಾಸಾತಿಗೆ ನಾಳೆ ಕೊನೆಯ ದಿನವಾಗಿದ್ದು ಮೇ 28 ರಂದು ಚುನಾವಣೆ ನಡೆಯಲಿದೆ. ಕೋಲಾರ ಜಿಲ್ಲೆಯ ಕೆ.ಜಿ.ಎಫ್ ತಾಲ್ಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರಕ್ಕೆ ಶಾಸಕಿ ರೂಪಕಲಾ ಶಶಿಧರ್ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಶಾಸಕ ಎಸ್.ಎನ್ ಸುಬ್ಬರೆಡ್ಡಿ ಅವರುಗಳು ನಾಮಪತ್ರ ಸಲ್ಲಿಕೆ ಮಾಡಿದ್ದು ನಾಳೆ ಅವರ ಪ್ರತಿಸ್ಪರ್ಧಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆದು ಅವಿರೋಧ ಆಯ್ಕೆಯನ್ನು ಅಧಿಕೃತವಾಗಿ ಘೋಷಿಸಲಿದ್ದಾರೆ.

ಡಿಸಿಸಿ ಬ್ಯಾಂಕ್ ಚುನಾವಣೆಗೆ ಸಂಬಂಧಿಸಿದಂತೆ ಶಾಸಕರಾದ ಬಾಗೇಪಲ್ಲಿ ಎಸ್.ಎನ್.ಸುಬ್ಬಾರೆಡ್ಡಿ, ಕೆ.ಜಿ.ಎಫ್. ರೂಪಕಲಾ ಶಶಿಧರ್, ಕೋಲಾರದ ಕೊತ್ತೂರು ಜಿ.ಮಂಜುನಾಥ್ ಅವರುಗಳು ನಿರ್ದೇಶಕ ಸ್ಥಾನಕ್ಕೆ ನಾಮಪತ್ರಗಳನ್ನು ಸಲ್ಲಿಸಿದ್ದು ಎಲ್ಲಾ ಶಾಸಕರ ನಾಮಪತ್ರಗಳು ಅಂಗೀಕೃತವಾಗಿದೆ. ಆದರೆ ಈ ಮೂವರು ಮಂದಿ ಶಾಸಕರಲ್ಲಿ ಇಬ್ಬರು ಶಾಸಕರ ಅವಿರೋಧ ಆಯ್ಕೆಯಾಗಲಿದ್ದು ಮತ್ತೊಬ್ಬರು ಚುನಾವಣೆಯನ್ನು ಎದುರಿಸಬೇಕಾಗ ಬಹುದು ಎನ್ನಲಾಗಿದೆ. ಉಳಿದಂತೆ 16 ಕ್ಷೇತ್ರಗಳಿಗೆ ಚುನಾವಣೆ ನಡೆಯಲ್ಲಿದೆ. ಎರಡು ಜಿಲ್ಲೆಯ ಟಿ.ಎ.ಪಿ.ಸಿ.ಎಂ.ಎಸ್. ಕ್ಷೇತ್ರದಿಂದ ಶಾಸಕ ಕೊತ್ತೂರು ಮಂಜುನಾಥ್, ಇತರೆ ಸಹಕಾರ ಸಂಘಗಳ ಕ್ಷೇತ್ರದಿಂದ ಮಾಜಿ ಅಧ್ಯಕ್ಷ ಬ್ಯಾಲಹಳ್ಳಿ ಎಂ.ಗೋವಿಂದಗೌಡ ಚುನಾವಣಾ ಕಣದಲ್ಲಿದ್ದರುವುದು ಕುತೂಹಲಕಾರಿಯಾಗಿದೆ.

### ಚಿಂತಾಮಣಿ ಬಂದ್: ಇಂದು ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಾಜ್ಞೆ

• **ಉದಯವಾಹಿನಿ, ಚಿಂತಾಮಣಿ**

ನಗರದಲ್ಲಿ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗುವ ಸಂಭವವಿರುವುದಾಗಿ ಗುಪ್ತಚರ ಇಲಾಖೆಯ ಮಾಹಿತಿಯ ಹಿನ್ನಲೆಯಲ್ಲಿ ಮೇ 20 ರ ರಾತ್ರಿ 10 ಗಂಟೆಯಿಂದ 23 ರ ಬೆಳಿಗ್ಗೆ 6 ಗಂಟೆಯವರೆಗೆ ತಾಲ್ಲೂಕು ದಂಡಾಧಿಕಾರಿ ಸುದರ್ಶನ ಯಾದವ್ ನಿಷೇಧಾಜ್ಞೆಯನ್ನು ಜಾರಿಗೊಳಿಸಿದ್ದಾರೆ.


ಕಾನೂನು ಸುವ್ಯವಸ್ಥೆ ದೃಷ್ಟಿಯಲ್ಲಿ ಅತಿ ಸೂಕ್ಷ್ಮ ಪ್ರದೇಶವಾಗಿದೆ. ನಗರದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು, ಸಾರ್ವಜನಿಕರ ನೆಮ್ಮದಿ, ಆಸ್ತಿ-ಪಾಸ್ತಿಗಳ ರಕ್ಷಣೆಯ ಸಲುವಾಗಿ ನಗರದ ಅಂಜನಿ ಬಡಾವಣೆ, ಎನ್.ಆರ್.ಬಡಾವಣೆ, ವಿನೋಭಾ ಕಾಲೋನಿ, ಕೆ.ಆರ್. ಬಡಾವಣೆ, ಗಜಾನನ ವೃತ್ತ, ಅಜಾದಚೌಕ, ಬೆಂಗಳೂರು ವೃತ್ತ, ತಪಥೇಶ್ವರ ಕಾಲೋನಿ ಮತ್ತು ಸರ್ಕಾರಿ ಕಚೇರಿಗಳ ವ್ಯಾಪ್ತಿಯಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ-2023 ರ ಕಲಂ 163 ರ ಅನ್ವಯ ನಿಷೇಧಾಜ್ಞೆ ಜಾರಿ ಮಾಡಲು ನಗರಠಾಣೆಯ ಇನ್ಸ್‌ಸ್ಪೆಕ್ಟರ್ ಮನವಿ ಮಾಡಿದ್ದರು ಎಂದು ಆದೇಶದಲ್ಲಿ ತಿಳಿಸಿದೆ.

ನಗರದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತೆ, ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ, ಸಾರ್ವಜನಿಕರ ಹಿತದೃಷ್ಟಿಯಿಂದ ನಿಷೇಧಾಜ್ಞೆ ವಿಧಿಸಿ ಆದೇಶಿಸಲಾಗಿದೆ. ಆದೇಶವನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು. ಉಲ್ಲಂಘನೆ ಮಾಡಿದವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಪೊಲೀಸ್ ಇಲಾಖೆಗೆ ಸೂಚನೆ ನೀಡಲಾಗಿದೆ.

ಅಂತರಾಳದಿಂದ.. EDITORIAL

# ಮುಸ್ತಾಕ್‌ಗೆ ಬೂಕರ್ ಪ್ರಶಸ್ತಿ ವಿಶ್ವ ವೇದಿಕೆಯಲ್ಲಿ ಕನ್ನಡದ ವಿವೇಕ

ಹಾರ್ಟ್ ಲ್ಯಾಂಪ್' ಕಥಾಸಂಕಲನಕ್ಕೆ ಬಹು ನಿರೀಕ್ಷಿತ 'ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ-2025' ಸಲ್ಲುವುದರೊಂದಿಗೆ ಕನ್ನಡ ನಾಡು-ನುಡಿಯ ಹಿರಿಮೆಯನ್ನು ಬಾನು ಮುಷ್ತಾಕ್ ವಿಶ್ವಮಟ್ಟದಲ್ಲಿ ಎತ್ತಿಹಿಡಿದಿದ್ದಾರೆ. ಕಥೆಗಾರ್ತಿ ಬಾನು ಮುಸ್ತಾಕ್ ಹಾಗೂ ಅನುವಾದಕಿ ದೀಪಾ ಭಾಸ್ತಿ ಅವರು ಬೂಕರ್ ಪ್ರಶಸ್ತಿಗೆ ಭಾಜನರಾಗಿರುವುದು ಕನ್ನಡಿಗರ ಹೆಮ್ಮೆಗೆ ಸಹಜವಾಗಿಯೇ ಕಾರಣವಾಗಿದೆ. ವಿಶ್ವದ ಪ್ರತಿಷ್ಠಿತ ಸಾಹಿತ್ಯಕ ಪ್ರಶಸ್ತಿಗಳಲ್ಲೊಂದಾದ 'ಬೂಕರ್ ಪುರಸ್ಕಾರ'ವನ್ನು ಪಡೆಯುವುದು ಯಾವುದೇ ಭಾಷೆಯ ಬರಹಗಾರರಿಗೆ ಕೋಡು ಮೂಡಿಸುವಂತಹದ್ದು. ಬಾನು ಮುಷ್ತಾಕ್ ಅವರ ಮೂಲಕ ಬೂಕರ್ ಪ್ರಶಸ್ತಿ ಮೊದಲ ಬಾರಿಗೆ ಕನ್ನಡಕ್ಕೆ ಸಂದಿದೆ. ಸಾಹಿತ್ಯಕ ಸಾಧನೆಯಾಚೆಗೂ ಹಲವು ಕಾರಣಗಳಿಂದಾಗಿ ಈ ಸಾಲಿನ ಬೂಕರ್ ಪ್ರಶಸ್ತಿಗೆ ಮಹತ್ವವಿದೆ. ಓರ್ವ ಲೇಖಕಿ, ಅದರಲ್ಲೂ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಬರಹಗಾರ್ತಿ ಅಂತರರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದಿರುವುದು ಅಸಾಧಾರಣ ಸಾಧನೆಯೇ ಸರಿ. ಬಾನು ಮುಷ್ತಾಕ್ ಅವರ ಕೃತಿಗೆ ಸಂದಿರುವ ಬೂಕರ್ ಪ್ರಶಸ್ತಿ ಕನ್ನಡದಂಥ ದೇಸಿಭಾಷೆಗಳ ಅನನ್ಯತೆಯನ್ನು ಎತ್ತಿಹಿಡಿಯುವಂತಹದ್ದು. ಕನ್ನಡ ಹಾಗೂ ಕನ್ನಡಿಗರನ್ನು ಅವಮಾನಿಸುವ ಹಿಂದಿ ಯಜಮಾನಿಕೆಯ ಘಟನೆಗಳು ಮತ್ತೆ ಮತ್ತೆ ವರದಿಯಾಗುತ್ತಿರುವ ಸಂದರ್ಭದಲ್ಲಿ, ಹಿಂದಿಯೇತರ ಭಾರತೀಯ ಭಾಷೆಯೊಂದು ಮೊದಲ ಬಾರಿಗೆ ಬೂಕರ್ ಪ್ರಶಸ್ತಿ ಪಡೆಯುತ್ತಿರುವುದು ಕನ್ನಡದ ಸಾಮರ್ಥ್ಯವನ್ನು ಸಂಕೇತಿಸುವಂತಿದೆ. ಹಾಗೂ ಕನ್ನಡ ಸಾಹಿತ್ಯದ ಬಗ್ಗೆ ಹೊಸ ತಲೆಮಾರಿಗೆ ಕನ್ನಡ ನುಡಿ ಒಲವು ಹಾಗೂ ಅಭಿಮಾನವನ್ನು ಮೂಡಿಸಲು ಪ್ರೇರಣೆಯಾಗಿ ಒದಗಿಬರುವ ರೂಪದಲ್ಲೂ ಈ ಪ್ರಶಸ್ತಿಗೆ ಮಹತ್ವವಿದೆ. ಪುರಸ್ಕೃತ ಕೃತಿಯ ಹಾರ್ಟ್ ಲ್ಯಾಂಪ್ ಶೀರ್ಷಿಕೆಗೆ ಪ್ರಚಲಿತ ವಿದ್ಯಮಾನಗಳ ಹಿನ್ನೆಲೆಯಲ್ಲಿ ವಿಶೇಷ ಅರ್ಥವಿದೆ. ಸಾಮಾಜಿಕ ವಿಘಟನೆಗಳ ರಾಜಕಾರಣ ಸಮಾಜದ ಎಲ್ಲಾ ವರ್ಗಗಳನ್ನೂ ಪ್ರಭಾವಿಸುತ್ತಿರುವ ಸಂದರ್ಭದಲ್ಲಿ ಕೃತಿಯ ಶೀರ್ಷಿಕೆ ನಮ್ಮ ಮನಸುಗಳಲ್ಲಿ ಬೆಳಗಬೇಕಾದ ಎದೆಯ ಹಣತೆ'ಯ ಅಗತ್ಯವನ್ನು ಮನಗಾಣಿಸುವಂತಿದೆ. ಸಾಹಿತ್ಯದ ಮೂಲಕ ಸಾಧ್ಯವಾಗಬಹುದಾದ ಸೌಹಾರ್ದವನ್ನು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಬಾನು ಮುಸ್ತಾಕ್ ಅವರು ಆಡಿರುವ ಮಾತುಗಳೂ ಧ್ವನಿಸುತ್ತಿವೆ. ವೈವಿಧ್ಯಕ್ಕಾಗಿ ದುಡಿಯುವ. ಎಲ್ಲರನ್ನೂ ಎಲ್ಲವನ್ನೂ ಒಳಗೊಳ್ಳುವ, ಭಿನ್ನಮತಗಳನ್ನು ಸಂಭ್ರಮಿಸುವ ಹಾಗೂ ಪರಸ್ಪರರ ಏಳಿಗೆಗೆ ಹೆಗಲು ನೀಡುವ ಮನಸ್ಸುಗಳನ್ನು ವಿಶ್ವಗುರುತಿಸಿರುವ ಸಂಕೇತವಾಗಿ ಬೂಕರ್ ಪ್ರಶಸ್ತಿಯನ್ನು ಸ್ವೀಕರಿಸಿ ರುವ ಮೂಲಕ ಅಂತರರಾಷ್ಟ್ರೀಯ ವೇದಿಕೆಯಲ್ಲಿ ಕನ್ನಡ ವಿವೇಕ ಪರಂಪರೆಯನ್ನು ಬಾನು ಮುಷ್ತಾಕ್ ಪ್ರತಿನಿಧಿಸಿದ್ದಾರೆ. ಆದರೆ, ಕನ್ನಡದ ಕೃತಿಗಳು ಭಾರತೀಯ ಭಾಷೆಗಳಿಗೆ ಇಂಗ್ಲಿಷ್‌ಗೆ ಅನುವಾದಗೊಳ್ಳುತ್ತಿರುವುದು ವಿರಳ.




**ಬಾನು ಮುಸ್ತಾಕ್ ಅವರ ಕಥಾಸಂಕಲನಕ್ಕೆ ದೊರೆತಿರುವ ಯಶಸ್ಸು ಸಮರ್ಥ ಅನುವಾದಕ್ಕೆ ದೊರೆತಿರುವ ಮನ್ನಣೆಯೂ ಹೌದು. ಬೂಕರ್ ಪ್ರಶಸ್ತಿ ದೊರೆಯುವಲ್ಲಿ ಬಾನು ಮುಸ್ತಾಕ್ ಅವರ ಕಥೆಗಳ ಅನನ್ಯತೆಯೊಂದಿಗೆ, ದೀಪಾ ಭಾಸ್ತಿ ಅವರ ಸಮರ್ಥ ಅನುವಾದವೂ ಕಾರಣವಾಗಿದೆ. ಇಂಥ ಅನುವಾದಗಳ ಅದೃಷ್ಟ ಎಲ್ಲ ಕೃತಿಗಳಿಗೂ ದೊರೆಯುವುದಿಲ್ಲ. ಜಾಗತಿಕ ಸಾಹಿತ್ಯದ ಕೃತಿಗಳಿಗೆ ಹೆಗಲೆಣೆಯಾದ ಹಲವು ಕೃತಿಗಳು ಕನ್ನಡದಲ್ಲಿದ್ದರೂ ಅನುವಾದದ ಅವಕಾಶ ಲಭ್ಯವಾಗದೆ ಅವುಗಳು ವಿಶ್ವಕ್ಕೆ ಪರಿಚಿತಗೊಂಡಿಲ್ಲ. ಹಲವು ಭಾಷೆಗಳ ಸಾಹಿತ್ಯವನ್ನು ಅನುವಾದದ ಮೂಲಕ ಕನ್ನಡ ಮುಕ್ತವಾಗಿ ಸ್ವೀಕರಿಸುತ್ತಿದೆ.**

ಕನ್ನಡದ ಮಟ್ಟಿಗೆ ಬಹುತೇಕ ಏಕಮುಖಿಯಾಗಿರುವ ಅನುವಾದದ ಅನುಸಂಧಾನ ತನ್ನ ಚೌಕಟ್ಟನ್ನು ವಿಸ್ತರಿಸಿಕೊಳ್ಳಲು ಇದು ಸಕಾಲ. ಕಳೆದೊಂದು ದಶಕದಲ್ಲಿ ಕನ್ನಡದ ಅಭಿಜಾತ ಕೃತಿಗಳನ್ನು ಇಂಗ್ಲಿಷ್‌ಗೆ ಅನುವಾದಿಸುವ ಕೆಲಸ ಬೇರೆ ಬೇರೆ ಸಂಸ್ಥೆಗಳಿಂದ ನಡೆದಿದೆ. ಅದರ ಜೊತೆಗೆ ಆಧುನಿಕ ಹಾಗೂ ಸಮಕಾಲೀನ ಕನ್ನಡ ಸಾಹಿತ್ಯದ ಅತ್ಯುತ್ತಮ ಕೃತಿಗಳನ್ನು ಭಾರತೀಯ ಭಾಷೆಗಳಿಗೆ, ವಿಶೇಷವಾಗಿ ಇಂಗ್ಲಿಷ್‌ಗೆ ಅನುವಾದಿಸುವ ಕೆಲಸ ವ್ಯಾಪಕವಾಗಿ ನಡೆಯಬೇಕಾಗಿದೆ. ಈ ಅನುವಾದ ಯೋಜನೆಗಳಿಗೆ ಸರ್ಕಾರವೂ ಕೈಜೋಡಿಸಬೇಕಾಗಿದೆ. ಮೂವತ್ತು-ನಲವತ್ತು ಕೋಟಿ ರೂಪಾಯಿ ವೆಚ್ಚದಲ್ಲಿ ಸಾಹಿತ್ಯ ಸಮ್ಮೇಳನಗಳನ್ನು ನಡೆಸುವುದಕ್ಕಿಂದಲೂ ಹೆಚ್ಚಿನ ಉಪಯೋಗವು ಸಾಹಿತ್ಯ ಕೃತಿಗಳನ್ನು ಇತರ ಭಾಷೆಗಳಿಗೆ ಮುಟ್ಟಿಸುವುದರಲ್ಲಿದೆ: ಸಮರ್ಥ ಅನುವಾದಗಳಿಂದ ಕನ್ನಡದ ಕಂಪು ನಾಡಿನ ಎಲ್ಲೆಗಳನ್ನು ಮೀರಿ ಪಸರಿಸಲಿಕ್ಕೆ ಸಾಧ್ಯವಿದೆ. ಅನುವಾದ ಚಟುವಟಿಕೆಗಳಿಗೆ ಮೀಸಲಾದ 'ಕುವೆಂಪು ಭಾಷಾ ಭಾರತಿ ಪ್ರಾಧಿಕಾರ' ಕರ್ನಾಟಕದಲ್ಲಿದೆ. ಈ ಪ್ರಾಧಿಕಾರ, ಕನ್ನಡದ ಲೇಖಕರಿಗೆ ಕರ್ನಾಟಕದಾಚೆಗೂ ಓದುಗರು ಮತ್ತು ಗೌರವವನ್ನು ದೊರಕಿಸಿಕೊಡುವ ದಿಸೆಯಲ್ಲಿ ಪ್ರಯತ್ನಗಳನ್ನು ನಡೆಸುವ ಬಗ್ಗೆ ಯೋಚಿಸಬಹುದು. ಬೂಕರ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕನ್ನಡ ನುಡಿಗಿರುವ ಹಾಲು-ಜೇನಿನ ಸವಿಯನ್ನು ಬಣ್ಣಿಸಿರುವ ಅನುವಾದಕಿ ದೀಪಾ ಭಾಸ್ತಿ, ಹಾರ್ಟ್ ಲ್ಯಾಂಪ್ ಕೃತಿಗೆ ದೊರೆತಿರುವ ಪ್ರಶಸ್ತಿ ಕನ್ನಡದ ಮತ್ತಷ್ಟು ಕೃತಿಗಳ ಸೀಮೋಲ್ಲಂಘನಕ್ಕೆ ಪ್ರೇರಣೆಯಾಗಲಿ ಎಂದು ಆಶಿಸಿದ್ದಾರೆ. ಆ ಬಗ್ಗೆ ಪ್ರಜ್ಞಾಪೂರ್ವಕ ಪ್ರಯತ್ನಗಳನ್ನು ನಡೆಸುವ ದಿಸೆಯಲ್ಲಿ ಸಾಹಿತ್ಯ ಕ್ಷೇತ್ರದೊಂದಿಗೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ನಡೆಸಬೇಕಾಗಿದೆ.

# ಪತ್ರಕರ್ತರ ಸಮಸ್ಯೆಗಳು



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಜಗತ್ತಿನ ಎಲ್ಲರ ಕಷ್ಟಗಳ ಬಗ್ಗೆ ಮೂಟೆಗಟ್ಟಲೆ ಬರೆಯುವ ಪತ್ರ ಕರ್ತರ ಕಷ್ಟಗಳು ಮಾತ್ರ ಹೊರಜಗತ್ತಿಗೆ ಸುಲಭಕ್ಕೆ ಗೊತ್ತಾಗುವುದಿಲ್ಲ, ಪತ್ರಕರ್ತರೇ ಅದನ್ನು ಬರೆದುಕೊಂಡರೆ ಸ್ವಹಸ್ತ ಕುಚಮರ್ದನ ಎನ್ನುತ್ತಾರೆ. ಇದರ ಜೊತೆಗೆ, ಪತ್ರಕರ್ತರಿಗೂ ತಾವು ಎಲ್ಲರಂತಲ್ಲ ಎಂಬ ಕೊಂಬು ಇರುವುದರಿಂದ ತಮ್ಮ ವೃತ್ತಿಯ ಬಗ್ಗೆ ಕೆಟ್ಟ ಪ್ರಚಾರ ಕೊಟ್ಟುಕೊಳ್ಳುವ ಗೋಜಿಗೆ ಅವರೂ ಹೋಗುವುದಿಲ್ಲ. ಹಾಗಾಗಿ ಅವರ ನಿಜವಾದ ಹಕೀಕತ್ತೇನು ಎಂಬುದು ಜನರಿಗೆ ತಿಳಿಯುವುದು ಸರ್ಕಾರದ ಸಚಿವ ಸಂಪುಟ ಸಭೆಯ ಸುದ್ದಿ ಜನರಿಗೆ ಎಷ್ಟು ತಿಳಿಯುತ್ತದೆಯೋ ಅಷ್ಟೇ.

ಪತ್ರಕರ್ತರ ಕಷ್ಟಗಳು ಅಂದಾಕ್ಷಣ ಜನರ ಕಣ್ಣಿಗೆ ಬರುವುದು ಯುದ್ಧ ಭೂಮಿಯಲ್ಲಿ ವರದಿ ಮಾಡುವುದು, ಅಂಡರ್‌ವರ್ಲ್ಡ್ ಬಗ್ಗೆ ಬರೆದು ಬೆದರಿಕೆ ಎದುರಿಸುವುದು, ಪ್ರಭಾವಿ ಕುಳಗಳನ್ನು ಎದುರು ಹಾಕಿಕೊಳ್ಳುವುದು, ಹಗರಣ ಬಯಲಿಗೆಳೆದು ಅಪಾಯ ತಂದುಕೊಳ್ಳುವುದು, ಸ್ವಾಮೀಜಿಗಳ ಸೆಕ್ಸ್‌ಸ್ಕ್ಯಾಂಡಲ್ ಹೊರಗೆಡವಿ ನಾಲ್ಕಾರು ದಿನ ತಲೆಮರೆಸಿಕೊಳ್ಳುವುದು ಇಂತಹ ಫ್ಯಾಂಟಸಿಗಳೇ ವಾಸ್ತವವಾಗಿ ಈ ಕಷ್ಟಗಳು ಬರುವುದು ನೂರರಲ್ಲಿ ಅಥವಾ ಸಾವಿರದಲ್ಲಿ ಒಬ್ಬ ಪತ್ರಕರ್ತನಿಗೆ ಮಾತ್ರ. ಇನ್ನುಳಿದ ಶೇ.99 ಮಂದಿಯ ಕಷ್ಟಗಳು ಬೇರೆಯೇ ಇವೆ. ಅವುಗಳನ್ನು ಕೇಳಿದರೆ ಜನಸಾಮಾನ್ಯರಿಗೆ ನಗು ಬಂದುಬಿಡಬಹುದು. ಪತ್ರಕರ್ತರಾಗುವುದು ಈಗಿನ ಹುಡುಗರಿಗೆ ಒಂಥರಾ ಫ್ಯಾಷನ್ನು. ಜರ್ನಲಿಸಂ ಓದಲು ಹೋಗುವ ಉತ್ಸಾಹಿಗಳು ಏನೇನೋ ರಮ್ಯ, ಅವಾಸ್ತವ ಕಲ್ಪನೆಗಳನ್ನು ಇಟ್ಟುಕೊಂಡು ಹೋಗಿರುತ್ತಾರೆ. ಓದು ಮುಗಿಸುವವರೆಗೂ ಅವರ ತಲೆಯಲ್ಲಿ ನಾನು ದೇಶ ಉದ್ಧಾರ ಮಾಡುತ್ತೇನೆ, ಸಮಾಜ ಬದಲಿಸುತ್ತೇನೆ ಎಂಬಂತಹ ಭಯಂಕರ ಯೋಚನೆಗಳಿರುತ್ತವೆ. ಕೆಲಸಕ್ಕೆ ಸೇರಿದ ಮೇಲೆ ಇವತ್ತು ರಾತ್ರಿ ಮನೆಗೆ ಹೋಗೋದು ಹೇಗೆ, ನಾಡಿದ್ದು ಹೆಂಡತಿಯನ್ನು ಚೆಕಪ್‌ಗೆ ಕರೆದುಕೊಂಡು ಹೋಗಲು ರಜೆ ಇಲ್ಲ ಏನ್ಮಾಡೋದು ಎಂಬಂತಹ ಜಾಗತಿಕ ಸಮಸ್ಯೆಗಳು ಎದುರಾಗಿ ಅವರ ಜೀವ ಒದ್ದಾಡಿಬಿಡುತ್ತದೆ. ಸಮಾಜ ಬದಲಿಸುವುದು ಹಾಗಿರಲಿ, ಬಾಡಿಗೆ ಮನೆ ಬದಲಿಸುವುದಕ್ಕೂ ಮೇಲೆ ಕೆಳಗೆ ನೋಡುವ ಪರಿಸ್ಥಿತಿ. ಈ ಭಾಗ್ಯಕ್ಕೆ ನಾನು ಜರ್ನಲಿಸ್ಟ್ ಆಗಬೇಕಾಗಿತ್ತಾ ಎಂದು ಜೀವನದಲ್ಲಿ ಕನಿಷ್ಠ ಎಪ್ಪತ್ತೆಂಟು ಸಲವಾದರೂ ಅವರಿಗೆ ಯೋಚನೆ ಬರಲಿಲ್ಲ ಎಂದಾದರೆ ಅವರು ನಿಜವಾಗಿಯೂ ಪತ್ರಕರ್ತರಾಗಿಯೇ ಇಲ್ಲ ಮತ್ತು ಅವರು ಮಾಡಿದ್ದು ಜರ್ನಲಿಸಮ್ಮೂ ಅಲ್ಲ! ಹಿಂದೆಲ್ಲ ನಾನು ಪತ್ರಕರ್ತ ಅಂದರೆ ಜೀವನಕ್ಕೇ ನ್ಮಾಡ್ತೀಯಾ ಎಂದು ಬೇರೆಯವರು ಕೇಳುವ ಪರಿಸ್ಥಿತಿಯಿತ್ತು.

ಇಂದು ಪತ್ರಿಕೋದ್ಯಮ ಬದಲಾಗಿದೆ. ಪತ್ರಕರ್ತರಿಗೆ ಪರವಾಗಿಲ್ಲ ಎಂಬಂತಹ ಸಂಬಳ ಸಿಗುತ್ತಿದೆ. ಆದರೆ, ಜೀವನಕ್ಕೇನ್ಮಾಡ್ತೀಯಾ ಎಂಬ ಪ್ರಶ್ನೆ ಹಾಗೇ ಉಳಿದಿದೆ. ಏಕೆಂದರೆ, ಎಲ್ಲರಂತೆ ಗೃಹಸ್ಥಾಶ್ರಮ ಕಳೆದು ಮೋಕ್ಷ ಪಡೆಯುವ ದೃಶ್ಯವನ್ನು ಅವರ ಜೀವನದಿಂದ ಡಿಲೀಟ್ ಮಾಡಲಾಗಿದೆ. ಆಗಾಗ ಮನೆಗೆ ಬರುವ ಪತ್ರಕರ್ತ ಅಪ್ಪನನ್ನು ನೋಡಿ ಮಕ್ಕಳು ಅಮ್ಮನ ಬಳಿ 'ಯಾರಿದು, ಮೊನ್ನೆ ಟೀವಿಯಲ್ಲಿ ಮೈಕ್ ಹಿಡಕೊಂಡು ಮಾತಾಡ್ತಿದ್ದ' ಎಂದು ಕೇಳುವುದು ಕೇವಲ ಜೋಕ್ ಅಲ್ಲ. ಸಂಜೆ ಹೊತ್ತು ಹೆಂಡತಿ-ಮಕ್ಕಳ ಕೈ ಹಿಡಿದುಕೊಂಡು ಪಾರ್ಕ್‌ಗೆ ಹೋಗುವುದು, ವರ್ಷಕ್ಕೆ ಒಂದೆರಡು ಸಲ ಫ್ಯಾಮಿಲಿ ಟೂರ್ ಹೋಗುವುದು, ಹೆಂಡತಿಯ ತಂಗಿಯ ಮದುವೆಗೆ ಒಂದು ವಾರ ರಜೆ ಹಾಕಿ ಊರಿಗೆ ಹೋಗುವ ಸೀನ್‌ಗಳೆಲ್ಲ ಪತ್ರಕರ್ತರ ಬದುಕಿನಲ್ಲಿ ಹೆಂಡತಿಯ ಜೊತೆ ಜಗಳ ಆಡುವಾಗ ಮಾತ್ರ ರಪ್ಪನೆ ಬಂದು ಹೋಗುತ್ತವೆ.

**ಪತ್ರಕರ್ತರ ಎಲ್ಲಾ ಕಷ್ಟಗಳನ್ನೂ ಬರೆದರೆ ಓದುವವರಿಗೆ ಬಹಳ ಕಷ್ಟವಾಗುತ್ತದೆ. ಕೆಲ ಘನ-ಗಂಭೀರ ಕಷ್ಟಗಳ ಬಗ್ಗೆ ತಲೆಕೆಡಿಸಿಕೊಳ್ಳುವ ಜವಾಬ್ದಾರಿಯನ್ನು ಭಾರತೀಯ ಪತ್ರಿಕಾ ಮಂಡಳಿಗೆ ಬೇಷರತ್ತಾಗಿ ಬಿಡಲಾಗಿದೆ. ಆ ಮಂಡಳಿ ಬೇರೇನನ್ನೂ ಮಾಡುವುದಿಲ್ಲವಾದ್ದರಿಂದ ಈ ಕೆಲಸವನ್ನಾದರೂ ಮಾಡಲಿ ಎಂದು ಮನಃಪೂರ್ತಿಯಾಗಿ ಹಾರೈಸೋಣ. ಸದ್ಯಕ್ಕೆ, ಜನರಿಗೆ ತಿಳಿದಿಲ್ಲದ, ಆದರೆ ಪತ್ರಕರ್ತರಿಗೆ ನಿಜಕ್ಕೂ ದೊಡ್ಡ ಸಮಸ್ಯೆಯಾಗಿರುವ ಕೆಲ ಸಂಗತಿಗಳನ್ನು ಇಲ್ಲಿ ನೋಡಿದ್ದೀವಿ. ಅವು ನಿಮಗೆ ತಮಾಷೆ ಅನ್ನಿಸಿದರೆ ಕಷ್ಟದಲ್ಲಿರುವವರನ್ನು ನೋಡಿ ನಕ್ಕ ಪಾಪಬರುತ್ತದೆ, ಹುಷಾರು!**

## 21ನೇ ಶತಮಾನದಲ್ಲಿ ಅಪರೂಪ!



ಇನ್ನುಳಿದ ಸಮಯದಲ್ಲಿ ಸಿದ್ದರಾಮಯ್ಯ, ಯಡಿಯೂರಪ್ಪ, ನರೇಂದ್ರ ಮೋದಿ, ಹಾಲಪ್ಪ, ಗೂಳಿಹಟ್ಟಿ ಶೇಖರ್, ಬೆಲೆಯೇರಿಕೆ, ಚುನಾವಣೆ, ಬಜೆಟ್, ರೈಲ್ವೆ ಆಯಕ್ಸಿಡೆಂಟ್, ಸಂಪುಟ ವಿಸ್ತರಣೆ, ಪ್ರವಾಹ, ಆಲಿಕಲ್ಲು ಮಳೆಗಳೇ ಅವರ ತಲೆಯಲ್ಲಿ ಧಾರಾಕಾರ ಸುರಿಯುತ್ತಿರುತ್ತವೆ. ಪತ್ರಕರ್ತರ ಬದುಕು ಅವರಿಗೆ ಯಾವಾಗಲಾದರೂ ಅಪ್ಪಿ ತಪ್ಪಿ ಟೈಮ್ ಸಿಕ್ಕಾಗ ಏಕಾಂಗಿಯಾಗಿ ಕುಳಿತು ಯೋಚನೆ ಮಾಡಿದರೆ ಕಾಮಿಡಿ ಆಫ್ ಎರರ್ಸ್. ಕಾಮಿಡಿ ಅವರ ಬಗ್ಗೆ ಬೇರೆಯವರು ಮಾಡುವುದು, ಎರರ್ಸ್ ಅವರ ಪತ್ರಿಕೆಯಲ್ಲಿ ಅಚ್ಚಾದ ತಪ್ಪು ಫೋಟೋಗಳು ಮತ್ತು ಕಾಗುಣಿತ ದೋಷಗಳು. ಆಧುನಿಕೋತ್ತರ ಭಾರತದಲ್ಲಿ ಪತ್ರಕರ್ತರ ಭವಿಷ್ಯ, ಸವಾಲು, ಕೊರತೆಗಳು ಮತ್ತು ಕಷ್ಟಗಳ ತೌಲನಿಕ ಅಧ್ಯಯನ ಎಂಬ ಪಿಎಚ್‌ಡಿ ಪ್ರಬಂಧವನ್ನು ಯಾರಾದರೂ ಮಂಡಿಸಿದರೆ ಅದು ಇಲ್ಲಿಯವರೆಗೆ ಬಂದಿರುವ ಜೋಕ್ ಪುಸ್ತಕಗಳಲ್ಲಿ ನಂ.1 ಬೆಸ್ಟ್ ಸೆಲ್ಲರ್ ಆಗುವ ಎಲ್ಲಾ ಅಪಾಯಗಳಿವೆ.

ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಡಲು ಅಂದು ಗಾಂಧೀಜಿಯವರು ಪತ್ರಿಕೋದ್ಯಮವನ್ನು ಅಸ್ತ್ರವಾಗಿ ಬಳಸಿದ್ದರು. ಇಂದು ಪತ್ರಕರ್ತರು ತಮ್ಮದೇ ಸ್ವಾತಂತ್ರ್ಯಕ್ಕಾಗಿ ಹೋರಾಡುವ ಪರಿಸ್ಥಿತಿಯಿದೆ. ಮಜಾ ಏನು ಅಂದರೆ ಇವರ ಕೈಲಿ ಅಸ್ತ್ರಗಳೇ ಇಲ್ಲ. ಸಿಗರೇಟ್ ಮತ್ತು ಕೀಬೋರ್ಡ್ ಮಾತ್ರ ಇದೆ. ಅಸ್ತ್ರಗಳನ್ನೆಲ್ಲ ಗಂಟು ಕಟ್ಟಿ ಟೀವಿ ಚಾನಲ್ ಅಥವಾ ಪತ್ರಿಕೆಯ ಮಾಲಿಕರ ಕೈಗೆ ಇವರು ಕೆಲಸಕ್ಕೆ ಸೇರುವಾಗಲೇ ಕೊಟ್ಟಾಗಿದೆ. ರಿಟೈರ್ ಆದಮೇಲೂ ಅವು ವಾಪಸ್ ಸಿಗುವುದಿಲ್ಲ ಎಂಬುದು ಬಹಳ ಪತ್ರಕರ್ತರಿಗೆ ಗೊತ್ತಿಲ್ಲ. ರಿಟೈರಾದ ಮೇಲೆ ಇವರಿಗೆ ಅದರ ಅಗತ್ಯವೂ ಬೀಳುವುದಿಲ್ಲ. ಏಕೆಂದರೆ ಮೂವತ್ತಕ್ಕೇ ಬೀಪಿ, ಶುಗರ್ ಅಂಟಿಸಿಕೊಳ್ಳುವ ಪತ್ರಕರ್ತರು ರಿಟೈರಾಗುವತನಕ ಉಳಿಯುವುದು

# ಸನಾತನ ರಾಷ್ಟ್ರ ಶಂಖನಾದ ಮಹೋತ್ಸವ

• ಉದಯವಾಹಿನಿ, ಫೋಂಡಾ, ಗೋವಾ



ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆನಗರ, ಫೋಂಡಾದಲ್ಲಿ ನಡೆದ 'ಸನಾತನ ರಾಷ್ಟ್ರ ಶಂಖನಾದ ಮಹೋತ್ಸವ'ದಲ್ಲಿ ಶಿವಾಜಿ ಕಾಲದ ಐತಿಹಾಸಿಕ ಮತ್ತು ಅಪರೂಪದ ಶಸ್ತ್ರಾಸ್ತ್ರಗಳ ಭವ್ಯ ಪ್ರದರ್ಶನವು ಧರ್ಮಪ್ರೇಮಿಗಳಿಗೆ ವಿಶೇಷ ಆಕರ್ಷಣೆಯಾಗಿತ್ತು. 6 ಸಾವಿರ ಚದರ ಅಡಿ ಪ್ರದೇಶದಲ್ಲಿ ಆಯೋಜಿಸಲಾದ ಈ ವಿಶಿಷ್ಟ ಪ್ರದರ್ಶನವು ಛತ್ರಪತಿ ಶಿವಾಜಿ ಮಹಾರಾಜರು ಮತ್ತು ಧರ್ಮವೀರ ಸಂಭಾಜಿ ಮಹಾರಾಜರ ಪರಾಕ್ರಮದ ಜೀವಂತ ಚಿತ್ರಣವನ್ನು ಒದಗಿಸಿತು. 30 ಸಾವಿರಕ್ಕೂ ಹೆಚ್ಚು ಧರ್ಮಪ್ರೇಮಿ ನಾಗರಿಕರು, ಹಾಗೆಯೇ ಸಂತರು, ಮಹಂತರು ಮತ್ತು ಆಧ್ಯಾತ್ಮಿಕ ಮಾರ್ಗದರ್ಶಕರ ಉಪಸ್ಥಿತಿಯಲ್ಲಿ ನಡೆದ ಈ ಮಹೋತ್ಸವದಲ್ಲಿ ಶಿವಾಜಿ ಕಾಲದ ಶೌರ್ಯ, ಪರಾಕ್ರಮ ಮತ್ತು ಬಲಿದಾನದ ನೆನಪು ಪ್ರತಿಯೊಬ್ಬರ ಮನಸ್ಸಿನಲ್ಲಿ ಸ್ಪಷ್ಟವಾಗಿ ಮೂಡಿತು.

ಪ್ರದರ್ಶನದಲ್ಲಿ ಕೊಲ್ಲಾಪುರದ ಸವ್ಯಸಾಚಿ ಗುರುಕುಲಂ ಮತ್ತು ಪುಣೆಯ ಶಿವಾಯಿ ಸಂಸ್ಥಾನದ ಶಸ್ತ್ರಾಸ್ತ್ರ ಪ್ರದರ್ಶನ, ಗೋವಾದ ಸೌಂದೇಕರ್ ಕುಟುಂಬದ ಪ್ರಾಚೀನ ಶಸ್ತ್ರಾಸ್ತ್ರಗಳು, ಹಾಗೆಯೇ ಸರ್ದಾರ್ ಯೇಸಾಜಿ ಕಂಕ ಅವರ ಕತ್ತಿ, ಸರ್ದಾರ್ ಕಾನ್ಹೋಜಿ ಜೇಧೆ ಅವರ ಯುದ್ಧ ಕವಚ ಪ್ರಮುಖ ಆಕರ್ಷಣೆಗಳಾಗಿದ್ದವು. ಇವುಗಳಲ್ಲಿ ಅತಿ ಹೆಚ್ಚು ಹೃದಯಸ್ಪರ್ಶಿಯಾದದ್ದು ಛತ್ರಪತಿ ಸಂಭಾಜಿ ಮಹಾರಾಜರನ್ನು ಔರಂಗಜೇಬ್ ಬಂಧಿಸಲು ಬಳಸಿದ ಮೂಲ ಸರಪಳಿ, ಇದನ್ನು ಶಿವಲೆ ಕುಟುಂಬವು ತಲೆಮಾರುಗಳಿಂದ ಸಂರಕ್ಷಿಸಿದೆ. ಈ ಸರಪಳಿಗಳನ್ನು ಇದೇ ಮಹೋತ್ಸವದಲ್ಲಿ ಮೊದಲ ಬಾರಿಗೆ ಸಾರ್ವಜನಿಕವಾಗಿ ಪ್ರದರ್ಶಿಸಲಾಯಿತು.

ಈ ಸಂದರ್ಭದಲ್ಲಿ ಶಿವಲೆ ಕುಟುಂಬದ ವಂಶಸ್ಥರಾದ ಸಾಗರ್ ಶಿವಲೆ, ಕುಮಾರ್ ಶಿವಲೆ, ಸೋಮನಾಥ್ ಶಿವಲೆ, ದೀಪಕ್ ಟಾಕಳ್ಕರ್ ಮತ್ತು ವೇದಾಂತ ಶಿವಲೆ ಅವರನ್ನು ಹಿಂದೂ ಜನಜಾಗೃತಿ ಸಮಿತಿಯ ಈಶಾನ್ಯ ಭಾರತದ ಧರ್ಮಪ್ರಚಾರಕ ಸದ್ಗುರು ನೀಲೇಶ ಸಿಂಗಬಾಳ ಅವರು ಸನ್ಮಾನಿಸಿದರು. ಈ ವೇಳೆ ಶ್ರೀ ಕುಮಾರ್ ಶಿವಲೆ ಮಾತನಾಡಿ, ರಾಜರ ಬಲಿದಾನದಿಂದ ಸ್ಫೂರ್ತಿ ಪಡೆದು ಸಮಾಜದಲ್ಲಿ ಧರ್ಮಪ್ರೇಮವನ್ನು ಜಾಗೃತಗೊಳಿಸಲು ಈ ಪ್ರದರ್ಶನವನ್ನು ಆಯೋಜಿಸಲಾಗಿದೆ ಎಂದರು.

**ಪ್ರದರ್ಶನದಲ್ಲಿ ಶಿವಾಜಿ ಕಾಲದ ಯುದ್ಧಕಲೆಯಲ್ಲಿ ಬಳಸಲಾದ ಅಪರೂಪದ ಶಸ್ತ್ರಾಸ್ತ್ರಗಳು:** ವಿವಿಧ ರೀತಿಯ ಖಡ್ಗಗಳು, ಬಂದೂಕುಗಳು, ಗುರಾಣಿಗಳು, ಜಾಂಬಿಯಾ, ಫಿರಂಗಿಗಳು, ಕಟಾರಿಗಳು, ಯುದ್ಧ ಕವಚಗಳು, ಶಿರಸ್ತ್ರಾಣಗಳು, ಭರ್ಜಿಗಳು, ಕೊಡಲಿಗಳು, ತ್ರಿಶೂಲ, ಅಂಕುಶ, ಸಿಕ್ಕಲ್, ಪುರ್ಬಾ ಇತ್ಯಾದಿಗಳನ್ನು ಪ್ರದರ್ಶಿಸಲಾಯಿತು. ಇದಲ್ಲದೆ, ಛತ್ರಪತಿಗಳ ಸೈನ್ಯದ ಸರ್ದಾರರ ಸಚಿತ್ರ ಪರಾಕ್ರಮದ ಮಾಹಿತಿಯು ಉಪಸ್ಥಿತರಿಗೆ ಇತಿಹಾಸದ ನೇರ ದರ್ಶನ ನೀಡಿತು.

# ನಿಮ್ಮ ಕೂದಲು ಶೈನಿಯಾಗಿರಬೇಕಾದ್ರೆ, ಬಾಳೆ ಹಣ್ಣಿನ ಸಿಪ್ಪೆಯನ್ನು ಹೀಗೆ ಬಳಸಿ ನೋಡಿ!

ಆರೋಗ್ಯಕರ ಕೂದಲು ಅಂದ, ಆತ್ಮವಿಶ್ವಾಸವನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ನಮ್ಮ ಕೂದಲು ಚೆನ್ನಾಗಿದ್ದರೆ ನಮಗೆ ಇಷ್ಟವಾಗುವ ಹೇರ್ ಸ್ಟೈಲ್ ಕೂಡಾ ಮಾಡಬಹುದು. ಕೂದಲ ಬೆಳವಣಿಗೆಗೆ ಬಾಳೆಹಣ್ಣಿನ ಸಿಪ್ಪೆ ಅದ್ಭುತವನ್ನೇ ಮಾಡಬಹುದು ಎಂದರೆ ನಂಬುತ್ತೀರಾ, ತ್ಯಾಜ್ಯವೆಂದು ಬಿಸಾಡುವ ಬಾಳೆಹಣ್ಣಿನ ಸಿಪ್ಪೆ ನಿಮ್ಮ ಕೂದಲಿನ ಆರೈಕೆಗೆ ಉತ್ತಮ ಆಯ್ಕೆಯಾಗಬಹುದು. ನಿಮ್ಮ ಕೂದಲು ಆರೋಗ್ಯಕರವಾಗಿರಬೇಕು, ರೇಷ್ಮೆಯಂತೆ ನಯವಾಗಿರಬೇಕು, ಹೊಳಪು ಪಡೆಯಬೇಕು ಎಂದು ನೀವು ಏನೆಲ್ಲಾ ಪ್ರಯತ್ನ ಗಳನ್ನು ಮಾಡುತ್ತೀರಿ ಆದರೂ ಕೆಲವೊಮ್ಮೆ ಏನಾದರೂ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ, ಕೂದಲು ಉದುರುವ ಸಮಸ್ಯೆ, ತಲೆಹೊಟ್ಟು, ಒಣ ಕೂದಲು ಹೀಗೆ ಒಂದಲ್ಲಾ ಒಂದು ಸಮಸ್ಯೆ ನಿಮ್ಮನ್ನು ಕಾಡುತ್ತದೆ. ಈ ಎಲ್ಲಾ ಸಮಸ್ಯೆಗಳಿಗೆ ಬಾಳೆಹಣ್ಣಿನ ಸಿಪ್ಪೆಯಿಂದ ತಯಾರಿಸಿದ ನೀರು ನೈಸರ್ಗಿಕ ಪರಿಹಾರವಾಗಿದೆ. ಬಾಳೆಹಣ್ಣಿನ ಸಿಪ್ಪೆಯಲ್ಲಿ ಪೊಟ್ಯಾಸಿಯಮ್, ಮೆಗ್ನೀಸಿಯಮ್, ವಿಟಮಿನ್ ಬಿ6 ಮತ್ತು ಸಿ ಮತ್ತು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ. ಬಾಳೆಹಣ್ಣಿನ ಸಿಪ್ಪೆಯ ನೀರನ್ನು ಕೂದಲಿಗೆ ಬಳಸಿದಾಗ, ಅದು ಪೋಷಣೆಯನ್ನು ಒದಗಿಸುತ್ತದೆ, ನೆತ್ತಿಯ ಆರೋಗ್ಯವನ್ನು ಸುಧಾರಿಸುತ್ತದೆ, ಕೂದಲು ಕಿರುಚೀಲಗಳನ್ನು ಬಲಪಡಿಸುವ ಮೂಲಕ, ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ ಅಲ್ಲದೆ ಕೂದಲು ಮತ್ತೆ ಬೆಳೆಯಲು ಸಹಾಯ ಮಾಡುತ್ತದೆ. ಬಾಳೆಹಣ್ಣಿನ ಸಿಪ್ಪೆಯ ನೀರು ಕೂದಲು ಹೇಗೆ ಪ್ರಯೋಜನಕಾರಿ ಮತ್ತು ಇದನ್ನು ತಯಾರಿಸುವುದು ಹೇಗೆ ಎಂಬುದನ್ನು ಇಲ್ಲಿ ತಿಳಿಸಿದ್ದೇವೆ.



**ನೆತ್ತಿಯ ರಕ್ತ ಪರಿಚಲನೆ ಹೆಚ್ಚಿಸುತ್ತದೆ:** ಬಾಳೆಹಣ್ಣಿನ ಸಿಪ್ಪೆಯ ನೀರಿನಲ್ಲಿರುವ ಪೋಷಕಾಂಶಗಳು, ವಿಶೇಷವಾಗಿ ಮೆಗ್ನೀಸಿಯಮ್, ವಿಟಮಿನ್ ಸಿ, ನೆತ್ತಿಯಲ್ಲಿ ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ. ಉತ್ತಮ ರಕ್ತ ಪರಿಚಲನೆಯಿಂದ ಕೂದಲು ಕಿರುಚೀಲಗಳು ಹೆಚ್ಚು ಆಮ್ಲಜನಕ ಪೋಷಕಾಂಶಗಳನ್ನು ಪಡೆಯುತ್ತವೆ, ಇದು ಕೂದಲು ಮತ್ತೆ ಬೆಳೆಯುವುದನ್ನು ಉತ್ತೇಜಿ ಸುತ್ತದೆ. **ಕೂದಲು ಕಿರುಚೀಲಗಳನ್ನು ಬಲಪಡಿಸುತ್ತದೆ:** ಬಾಳೆಹಣ್ಣಿನ ಸಿಪ್ಪೆಯಲ್ಲಿರುವ ಪೊಟ್ಯಾಸಿಯಮ್ ಕೂದಲಿನ ಬೇರುಗಳನ್ನು ಬಲಪಡಿಸುತ್ತದೆ ಕೂದಲು ಒಡೆಯುವಿಕೆಯನ್ನು ಕಡಿಮೆ ಮಾಡಲು ಅಗತ್ಯವಾದ ತೇವಾಂಶವನ್ನು ಉಳಿಸಿಕೊಳ್ಳುವ ನೆತ್ತಿಯ ಸಾಮರ್ಥ್ಯವನ್ನು ಸುಧಾರಿಸುತ್ತದೆ. ಇದು ಆರೋಗ್ಯಕರ ಕೂದಲು ಬೆಳವಣಿಗೆಗೆ ಸೂಕ್ತವಾದ ವಾತಾವರಣವನ್ನು ಸೃಷ್ಟಿಸುತ್ತದೆ. **ನೆತ್ತಿಯ ಆರೋಗ್ಯಕ್ಕೆ ಉತ್ಕರ್ಷಣ ನಿರೋಧಕಗಳು:** ಬಾಳೆಹಣ್ಣಿನ ಸಿಪ್ಪೆಯ ನೀರಿನಲ್ಲಿ ಉತ್ಕರ್ಷಣ ನಿರೋಧಕಗಳು ತುಂಬಿರುತ್ತವೆ, ಇದು ಕೂದಲು ಕಿರುಚೀಲಗಳನ್ನು ಹಾನಿಗೊಳಿಸುವ ಫ್ರೀ ರಾಡಿಕಲ್ಗಳ ವಿರುದ್ಧ ಹೋರಾಡುತ್ತದೆ. ಅಲ್ಲದೆ ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡುವ ಮೂಲಕ, ಇದು ನೆತ್ತಿಯ ಒಟ್ಟಾರೆ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.

**ಹೈಡ್ರೇಟಿಂಗ್ಗೆ ಸಹಾಯಕಾರಿ:** ಬಾಳೆಹಣ್ಣಿನ ಸಿಪ್ಪೆಯಲ್ಲಿರುವ ನೈಸರ್ಗಿಕ ಎಣ್ಣೆಗಳು ಮತ್ತು ನೀರಿನ ಅಂಶವು ನೆತ್ತಿ ಮತ್ತು ಕೂದಲಿನ ಎಳೆಗಳನ್ನು ಹೈಡ್ರೇಟ್ ಮಾಡಲು ಸಹಾಯ ಮಾಡುತ್ತದೆ. ಚೆನ್ನಾಗಿ ತೇವಾಂಶ ಹೊಂದಿರುವ ನೆತ್ತಿಯು ಶುಷ್ಕತೆ, ತುರಿಕೆ ಮತ್ತು ತಲೆಹೊಟ್ಟು ಸಮಸ್ಯೆಗೆ ಒಳಗಾಗುವ ಸಾಧ್ಯತೆ ಕಡಿಮೆ. **ಕೂದಲಿನ ಹೊಳಪನ್ನು ಹೆಚ್ಚಿಸುತ್ತದೆ:** ಬಾಳೆಹಣ್ಣಿನ ಸಿಪ್ಪೆಗಳಲ್ಲಿ ಕಂಡುಬರುವ ಸಿಲಿಕಾ, ಕೂದಲಿನ ಎಳೆಗಳನ್ನು ಬಲಪಡಿಸುತ್ತದೆ ಮತ್ತು ಅವುಗಳ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸುತ್ತದೆ, ವಿಭಜಿತ ತುದಿಗಳು ಮತ್ತು ಒಡೆಯುವಿಕೆಯನ್ನು ಕಡಿಮೆ ಮಾಡುತ್ತದೆ. ಕೂದಲು ಹೆಚ್ಚು ದಪ್ಪವಾಗಿ ಕಾಣುವಂತೆ ಮಾಡುತ್ತದೆ.

**ತಯಾರಿಸುವುದು ಹೇಗೆ:** 2-3 ಮಾಗಿದ ಬಾಳೆಹಣ್ಣಿನ ಸಿಪ್ಪೆಗಳನ್ನು ತೆಗೆದುಕೊಳ್ಳಿ. ಸುಲಭವಾಗಿ ಮಿಶ್ರಣ ಮಾಡಲು ಸಿಪ್ಪೆಗಳನ್ನು ಸಣ್ಣ ತುಂಡುಗಳಾಗಿ ಕತ್ತರಿಸಿ. 4 ಕಪ್ ನೀರನ್ನು ಕುದಿಸಿ ಮತ್ತು ಅದಕ್ಕೆ ಬಾಳೆಹಣ್ಣಿನ ಸಿಪ್ಪೆಗಳನ್ನು ಸೇರಿಸಿ. ಸಿಪ್ಪೆಗಳು 10-15 ನಿಮಿಷಗಳ ಕಾಲ ಕುದಿಯಲು ಬಿಡಿ. ಉರಿಯನ್ನು ಆಫ್ ಮಾಡಿ ಮತ್ತು ನೀರು ಸಂಪೂರ್ಣವಾಗಿ ತಣ್ಣಗಾಗಲು ಬಿಡಿ. ಸೋಸಿ ಸ್ಪ್ರೇ ಬಾಟಲಿ ಅಥವಾ ಪಾತ್ರೆಯಲ್ಲಿ ನೀರನ್ನು ಸಂಗ್ರಹಿಸಿ.



# ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ಬಗ್ಗೆ ಚರ್ಚೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ಎಂದು ಜನಪ್ರಿಯವಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಮೇಲಿನ ಚರ್ಚೆ ಅಪೂರ್ಣವಾಗಿದ್ದು, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಮತ್ತೆ ಚರ್ಚಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಅವರು ಹೇಳಿದ್ದಾರೆ.

ಹೆಚ್ಚಿನ ಸಚಿವರು ಸಮೀಕ್ಷೆಯ ಕುರಿತು ತಮ್ಮ ಅಭಿಪ್ರಾಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಲಿಖಿತವಾಗಿ ಸಲ್ಲಿಸಿದ್ದಾರೆ.

ಮತ್ತೊಮ್ಮೆ ಸಚಿವ ಸಂಪುಟ ಸಭೆಯು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯ ಕುರಿತು ಚರ್ಚಿಸಿತು. ಚರ್ಚೆ ಅಪೂರ್ಣವಾಗಿತ್ತು. ಮುಖ್ಯಮಂತ್ರಿಗಳು ಈ ಹಿಂದೆ ಸಂಪುಟ ಸಚಿವರು ತಮ್ಮ



**ಸಚಿವ ಎಚ್. ಕೆ. ಪಾಟೀಲ್ ಹೇಳಿಕೆ**

ಅಭಿಪ್ರಾಯವನ್ನು ಲಿಖಿತವಾಗಿ ನೀಡುವಂತೆ ಕೇಳಿದ್ದರು ಮತ್ತು ಮೂರು ಅಥವಾ ನಾಲ್ಕು ಸಚಿವರು ಹೊರತುಪಡಿಸಿ ಹೆಚ್ಚಿನ ಸಚಿವರ ತಮ್ಮ ಅಭಿಪ್ರಾಯಗಳು ಮುಖ್ಯಮಂತ್ರಿಗೆ ಲಿಖಿತವಾಗಿ ಸಲ್ಲಿಸಿದ್ದಾರೆ ಎಂದು ಎಚ್ ಕೆ ಪಾಟೀಲ್ ತಿಳಿಸಿದರು.

ಜಾತಿ ಗಣತಿ ಬಗ್ಗೆ ಸಂಪುಟದಲ್ಲಿ ಪರ, ವಿರುದ್ಧ ಅಭಿಪ್ರಾಯಗಳು ವ್ಯಕ್ತವಾದ ಹಿನ್ನೆಲೆಯಲ್ಲಿ ಎಲ್ಲಾ ಸಚಿವರಿಗೂ ತಮ್ಮ ನಿಲುವನ್ನು ಲಿಖಿತವಾಗಿ ತಿಳಿಸಲು ಸಿಎಂ ಸಿದ್ದರಾಮಯ್ಯ ಸೂಚಿಸಿದ್ದರು. ಕೇವಲ 11 ಮಂದಿ ಮಾತ್ರ ಲಿಖಿತ ಅಭಿಪ್ರಾಯ ನೀಡಿದ್ದ ಹಿನ್ನೆಲೆಯಲ್ಲಿ ಮೇ 10 ರಂದು ನಡೆದ ಕ್ಯಾಬಿನೆಟ್‌ನಲ್ಲಿ ಯಾವುದೇ ತೀರ್ಮಾನ ತೆಗೆದುಕೊಳ್ಳದೆ ಮುಂದೂಡಲಾಗಿತ್ತು.

**ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್ ಕೆ ಪಾಟೀಲ್ ಅವರು, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅಥವಾ ಅದರ ನಂತರದ ಸಭೆಯಲ್ಲಿ, ಕೆಲವು ವಿವರಗಳನ್ನು ಪಡೆದು ಅಧ್ಯಯನ ಮಾಡಿದ ನಂತರ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.**



## ರಾಮಾಯಣ
### ದಶರಥ ಕೌಸಲ್ಯಾ ದೇವಿಯರ ಸಂವಾದ

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಆತನು ಆ ಬಾಣದಿಂದ ಮರ್ಮಸ್ಥಾನದಲ್ಲಿ ಗಾಯಪಡೆದು ಹಾ ಹಾಎಂದು ಕೂಗುತ್ತ ಒರಲಿದನು. ಅಕಟಕಟಾ ಬೆಳಗಿನ ಜಾವದಲ್ಲಿ ನೀರು ತೆಗೆದುಕೊಂಡು ಹೋಗಬೇಕೆಂದು ನದೀತೀರಕ್ಕೆ ಬಂದ ತಪಸ್ವಿಯಾದ ನನಗೆ ಈ ಬಾಣವು ಯಾವಕಾರಣ ತಾಕಿತು ನಾನು ಸರ್ವಸಂಗಪರಿತ್ಯಾಗಮಾಡಿ ವನದಲ್ಲಿ ಕಂದ ಮೂಲ ಫಲಾಹಾರಗಳನ್ನು ಮಾಡಿಕೊಂಡಿರುವವನು, ಯಾವ ಅಪರಾಧವನ್ನು ಮಾಡಿದ್ದಕ್ಕೆ ನನ್ನ ಮೇಲೆ ಯಾವಾತತು ಈ ಬಾಣವನ್ನು ಪ್ರಯೋಗಮಾಡಿದನು ವನದಲ್ಲಿ ನಾರುಬಟ್ಟೆಗಳನ್ನುಟ್ಟು ಜಡೆಗಳನ್ನು ಧರಿಸಿ ಈ ವೃತ್ತಿಯಲ್ಲಿರುವ ನನಗೆ ಈ ಶಸ್ತ್ರವಧೆಯು ಹೇಗೆ ಬಂದಿತು ಈತನಿಗೆ ನಾನು ಯಾವ ಅಪರಾಧವನ್ನು ಮಾಡಿದೆನು ನನ್ನ ಕೊಲೆಯಿಂದ ಈತನಿಗೆ ಯಾವ ಕಾರವಾದೀತು ಈತನು ವ್ಯರ್ಥವಾಗಿ ನನ್ನನ್ನು ಕೊಂದನು ಈತನನ್ನು ಗುರುತಲ್ಪಗಮನಮಾಡಿದವನನ್ನು ನಿಂದಿಸುವಂತೆ ನಿಂದಿಸುವರು. ನನ್ನ ಪ್ರಾಣವು ಹೋಗುವುದಕ್ಕಾಗಿ ನಾನು ದುಃಖಪಡುವುದಿಲ್ಲ. ಈತನಿಗೆ ಅಪಕೀರ್ತಿಬಂತಲ್ಲ ಎಂದು ಕಂಗೆಡುತಿದ್ದೇನೆ : ನನ್ನ ತಾಯಿತಂದೆಗಳಿಗೆ ಗತಿ ಯಾರೆಂದು ಚಿಂತಿಸುತ್ತಿದ್ದೇನೆ. ಅಂಧರಾಗಿ ವೃದ್ಧರಾದ ತಂದೆತಾಯಿಗಳನ್ನು ಬಹುಕಾಲ ರಕ್ಷಣೆಮಾಡಿವೆನು. ಇನ್ನು ನಾನು ಲೋಕಾಂತರವನ್ನೈದಿದರೆ ಇವರಿಗೆ ರಕ್ಷಕರಾರು ಈ ಬಾಣದಿಂದ ನಾನೊಬ್ಬನೇ ಹತನಾಗುವುದಿಲ್ಲ. ನಾನೂ ನನ್ನ ತಾಯಿ ತಂದೆಗಳೂ ಈ ಪಾಪಾತ್ಮನಿಂದ ಹತರಾದೆವು ಎಂದು ನುಡಿದನು. ಆ ದೈನ್ಯವಾಕ್ಯಗಳನ್ನು ಕೇಳಿ ಧರ್ಮರಹಸ್ಯಗಳನ್ನು ಬಲ್ಲ ನನ್ನ ಕೈಗಳಿಂದ ಬಿಲ್ಲುಬಾಣಗಳು ಜರಿದು ಬಿದ್ದವು. ನಾನು ದುಃಖಾತಿಶಯದಿಂದ ಕಂಗೆಟ್ಟು ಹರ್ಷಗುಂದಿ ಅಲ್ಲಿಗೆ ಹೋಗಿ ಗಾಯಗೊಂಡು ಕಂಗೆಡುತ್ತಿದ್ದ ಆ ಮುನಿಕುಮಾರನನ್ನು ಕಂಡೆನು. ಆತನು ಜಡೆಗಳನ್ನು ಕೆದರಿ ಕೊಂಡು ಕೈಯಲ್ಲಿ ಉದಕವು ತುಂಬಿದ ಕಮಂಡಲುವನ್ನು ಹಿಡಿದುಕೊಂಡು ರಕ್ತ ಧೂಳುಗಳಿಂದ ಮೈಕೈಯೆಲ್ಲವೂ ಮುಚ್ಚಿರಲು ನೆಟ್ಟಿದ್ದ ಅಂಬಿನಿಂದ ದುಃಖಪಡುತ್ತ ಭಯದಿಂದ ಕಂಗೆಟ್ಟ ನನ್ನನ್ನು ನೋಡಿದನು. ತನ್ನ ತಪೋಜ್ವಾಲೆಯಿಂದ ಸುಟ್ಟುಬಿಡುವಂತೆ ನೋಡಿ ಕರ್ಣಕಠೋರವಾದ ಮಾತುಗಳಿಂದ ಹೀಗೆಂದನು: ಎಲೈ ಅರಸೆ, ವನದಲ್ಲಿರುವ ನಾನು ನಿನಗೆ ಯಾವ ಅಪರಾಧವನ್ನು ಮಾಡಿದೆನು ನನ್ನ ತಾಯಿತಂದೆಗಳಿಗಾಗಿ ಉದಕವನ್ನು ತೆಗೆದುಕೊಂಡು ಹೋಗಬೇಕೆಂದು ಬಂದೆನು. ನನ್ನನ್ನು ಒಂದು ಬಾಣದಿಂದ ಮರ್ಮಸ್ಥಾನದಲ್ಲಿ ಹೊಡೆದು ಕೆಡಹಿದೆ. ಈ ಬಾಣದಿಂದ ನಾನೊಬ್ಬನೇ ಹತನಾಗುವುದಿಲ್ಲ. ನನ್ನ ತಂದೆತಾಯಿಗಳೂ ಹತರಾಗುವರು. ವೃದ್ಧರಾಗಿ ಅಂಧರಾಗಿರುವ ನನ್ನ ತಂದೆತಾಯಿಗಳು ಕಂಗೆಟ್ಟು ತೃಷೆಯಿಂದ ನೀರು ತರಬೇಕೆಂದು ನನ್ನನ್ನು ಕಳುಹಿಸಿ ನನ್ನನ್ನು ಎದುರುನೋಡುತ್ತಿರುವರು. ನನಗೆ ಇಂಥ ಅವಸ್ಥೆಯು ಬಂದಿತು. ಅಕಟಕಟಾ ! ಲೋಕದಲ್ಲಿ ತಪಸ್ಸಿನಿಂದಲೂ ಫಲವಿಲ್ಲ. ಶಾಸ್ತ್ರಾಭ್ಯಾಸದಿಂದಲೂ ಫಲವಿಲ್ಲ. ನನ್ನ ತಂದೆಯು ಗಾಯಪಟ್ಟು ಬಿದ್ದ ನನ್ನ ವೃತ್ತಾಂತವನ್ನು ತಿಳಿದರೂ ಅಂಧನಾದ್ದರಿಂದ ಏಳಲಾರನು. ಬೀಳುವ ಮರವನ್ನು ದೂರದಲ್ಲಿರುವ ಮತ್ತೊಂದು ಮರವು ತಡೆಯಲಾರದಂತೆ ಗಾಯಪಟ್ಟು ಬಿದ್ದ ನಾನು ನನ್ನ ತಂದೆಯ ಸಮೀಪಕ್ಕೆ ಹೋಗಲಾರೆನು ಅಂಧನಾಗಿ ಅಶಕ್ತನಾದ ನನ್ನ ತಂದೆಯು ಇಲ್ಲಿಗೆ ಬರಲಾರನು. ಆದ್ದರಿಂದ ನೀನು ನನ್ನ ತಂದೆಯ ಸಮೀಪಕ್ಕೆ ಹೋಗಿ ಈ ವರ್ತಮಾನವನ್ನು ಹೇಳು.

**ಮುಂದುವರಿಯುವುದು...**

# ಕನ್ನಡಿಗರಿಗೆ ಗೌರವ ನೀಡಿದ ಮಾನ್ಯ ಮುಖ್ಯಮಂತ್ರಿಗಳಿಗೆ ಅಭಿನಂದನೆ ಸಲ್ಲಿಸೋಣ



■ ಚನ್ನೇಗೌಡ ಉಜ್ಜನಿ ಚಲುವಯ್ಯ
• ಉದಯವಾಹಿನಿ, ವಿಶೇಷ



ನಮಸ್ಕಾರ ಬಂಧುಗಳೇ ಮೊನ್ನೆಯಿಂದ ಒಂದು ವಿಷಯ ಹಲವಾರು ಸುದ್ದಿ ಮಾಧ್ಯಮಗಳಲ್ಲಿ ಚರ್ಚೆ ಆಗುತ್ತಲೇ ಇದೆ. ಕನ್ನಡ ಮಾತನಾಡಲ್ಲ ಎಂದು ಉದ್ಧಟತನ ಪ್ರದರ್ಶಿಸಿದ್ದ ಎಸ್‌ಬಿಐ ಮಹಿಳಾ ಮ್ಯಾನೇಜರ್‌ನನ್ನು ಮಾನ್ಯ ಮುಖ್ಯ ಮಂತ್ರಿಗಳು ರಾತ್ರೋರಾತ್ರಿ ವರ್ಗಾವಣೆ ಆದೇಶ ನೀಡಲಾಗಿದೆ ಎಂದು ಪತ್ರಿಕೆಗಳು, ಸುದ್ದಿ ವಾಹಿನಿಗಳು ತಿಳಿಸುತ್ತಿವೆ. ಈ ವಿಷಯ ಈ ನಾಡಿನ ಏಳು ಕೋಟಿ ಕನ್ನಡಿಗರಿಗೆ ನೀಡಿದ ಗೌರವವಾಗಿದೆ.

ಪ್ರಸ್ತುತ ಈ ವ್ಯವಸ್ಥೆ ರಾಜ್ಯದ ಒಂದು ಬ್ಯಾಂಕ್‌ನಲ್ಲಿ ನಡೆಯುತ್ತಿರುವ ಸಮಸ್ಯೆಯಲ್ಲ, ಯಾವ ಬ್ಯಾಂಕ್‌ನಲ್ಲಿ ನೋಡಿದರೂ ಕನ್ನಡ ಮಾತನಾಡಲು, ಓದಲು, ಬರೆಯಲು ಬರದ ಮ್ಯಾನೇಜರ್‌ಗಳೇ ಹೆಚ್ಚು.

ಕನ್ನಡಿಗರಾದ ನಾವುಗಳು ಅವರು ಮಾತನ್ನಾಡುವ ಭಾಷೆಯನ್ನು ಕಲಿತು ಮಾತನಾಡಬೇಕಂತೆ, ಅದರಲ್ಲೂ ಗ್ರಾಮೀಣ ಹೆಣ್ಣುಮಕ್ಕಳು, ತಾಯಂದಿರು, ವಯಸ್ಸಾದ ಅವಿದ್ಯಾವಂತರ ಕಥೆ ಹೇಗೆ, ಯಾವ ಫಾರಂ ನೋಡಿದರೂ ಬರೀ ಇಂಗ್ಲಿಷ್ ಇಲ್ಲವೇ ಹಿಂದಿ, ಕೇಳಿದರೆ ಹಿಂದಿಯಲ್ಲಿ ಮಾತನ್ನಾಡಿ ಇಲ್ಲಾ ಇಂಗ್ಲಿಷ್‌ನಲ್ಲಿ ಎಂದರೆ ಹೇಗೆ ಅದೂ ಕರ್ನಾಟಕದಲ್ಲಿ ಅನ್ನ ತಿಂದು, ಇಲ್ಲಿಯ ಗಾಳಿ, ಇಲ್ಲಿಯ ನೀರು ಕುಡಿದು ಬದುಕುತ್ತಿರುವ ಇವರಿಗೆ ಈ ನೆಲದ ಮಕ್ಕಳಿಗೆ ಗೌರವ ನೀಡದ ಸ್ಥಳೀಯ ಕನ್ನಡಿಗರ ಬಗ್ಗೆ ಇಷ್ಟೊಂದು ತಾತ್ಸಾರ ಎಷ್ಟು ಸರಿ ಅಲ್ಲವಾ ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕದಲ್ಲಿರುವ ಅನ್ಯ ಭಾಷೆಯ ಮ್ಯಾನೇಜರ್‌ಗಳ ಲಿಸ್ಟ್ ಮಾಡುವ ಮೂಲಕ ಅವರೆಲ್ಲರಿಗೂ ಮೂರು ತಿಂಗಳಲ್ಲಿ ಕಡ್ಡಾಯವಾಗಿ ಕನ್ನಡ ಓದಲು ಬರೆಯಲು ಮಾತನಾಡಲು ಕಲಿಯುವ ಮೂಲಕ ಬ್ಯಾಂಕ್‌ಗಳಲ್ಲಿ ಸಂಪೂರ್ಣ ವ್ಯವಹಾರವನ್ನು ಕನ್ನಡದಲ್ಲಿ ನಡೆಸಬೇಕು.

ಇಲ್ಲವಾದಲ್ಲಿ ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಈ ವಿಷಯವನ್ನು ಸೂಕ್ಷ್ಮವಾಗಿ ಪರಿಗಣಿಸಿ, ಸ್ಥಳೀಯ ಕನ್ನಡಿಗರಿಗೆ ಕನ್ನಡದಲ್ಲಿ ಬ್ಯಾಂಕಿಂಗ್ ಪರೀಕ್ಷೆ ನೀಡುವ ಮೂಲಕ ಮೂಲ ಕನ್ನಡಿಗರಿಗೆ, ಕರ್ನಾಟಕದ ಅನ್ನದಾತ ರೈತ ಮಕ್ಕಳಿಗೆ ಬ್ಯಾಂಕ್‌ಗಳಲ್ಲಿ ಕಾರ್ಯ ನಿರ್ವಹಿಸಲು ಅನುಕೂಲ ಮಾಡಿಕೊಡಬೇಕೆಂದು ನಮ್ಮ ರಾಜ್ಯದ ಗೌರವಾನ್ವಿತ ಮುಖ್ಯ ಮಂತ್ರಿಗಳಲ್ಲಿ ಮನವಿ ಮಾಡುತ್ತೇವೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪ್ರೋತ್ಸಾಹಿಸಿ. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ.

**ವೃಷಭ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಹೂಡಿಕೆಗಳು ಬಗ್ಗೆ ನಿಮ್ಮ ಭವಿಷ್ಯದ ಗುರಿಗಳ ಬಗ್ಗೆ ರಹಸ್ಯಮಯವಾಗಿರಿ.

**ಮಿಥುನ** ಸಂತೋಷದ ಸುದ್ದಿ ಪಡೆಯುವ ಸಾಧ್ಯತೆಯಿದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

**ಕರ್ಕಾಟಕ** ನೀವು ದೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ. ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು.

**ಸಿಂಹ** ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಎಲ್ಲಾದರೂ ಹೊರಹೋಗಲು ಯೋಜಿಸುವಿರಿ ಆದರೆ ಯಾವುದೂ ಅಗತ್ಯವಾದ ಕೆಲಸದಿಂದಾಗಿ ಈ ಯೋಜನೆ ಯಶಸ್ವಿಯಾಗುವುದಿಲ್ಲ.

**ಕನ್ಯಾ** ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲು ಒಂದು ಒಳ್ಳೆಯ ದಿನ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ತುಲಾ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ.

**ವೃಶ್ಚಿಕ** ಮಾನಸಿಕ ಒತ್ತಡ ತರುವ ಸುಪ್ತ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಪೋಷಕರ ಆರೋಗ್ಯ ಸುಧಾರಿಸುತ್ತದೆ.

**ಧನಸ್ಸು** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ.


**ಮಕರ** ಕೌಟುಂಬಿಕ ಸಂತೋಷ ಕಾಣುತ್ತಿಲ್ಲ, ಭಿನ್ನಾಭಿಪ್ರಾಯಗಳ ಕಾರಣ ವೈಯಕ್ತಿಕ ಸಂಬಂಧದಲ್ಲಿ ಬಿರುಕು ಬಿಡಬಹುದು. ಯಾವುದೇ ಹೊಸ ಜಂಟಿ ಯೋಜನೆಗಳು ಮತ್ತು ಪಾಲುದಾರಿಕೆಗಳಿಗೆ ಸಹಿ ಹಾಕಬೇಡಿ.

**ಕುಂಭ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ.

**ಮೀನ** ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

## ಪರಿಶಿಷ್ಟ ಜಾತಿ ಒಳ ಮೀಸಲಾತಿ : ಸಮೀಕ್ಷಾ ಕಾರ್ಯ ಅವಧಿ ಮೇ. 28 ರವರೆಗೆ ವಿಸ್ತರಣೆ

• ಉದಯವಾಹಿನಿ ಚಿತ್ರದುರ್ಗ



ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗವನ್ನು ಸರ್ಕಾರ ರಚಿಸಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧದ ವಿವಿಧ ಅಂಶಗಳ ಬಗ್ಗೆ ದತ್ತಾಂಶ ಸಂಗ್ರಹಣೆಗಾಗಿ ಜಿಲ್ಲೆಯಲ್ಲಿ ನಡೆದಿರುವ ಸಮೀಕ್ಷೆ ಕಾರ್ಯದ ಅವಧಿಯನ್ನು ಇದೇ ಮೇ. 28 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಪರಿಶಿಷ್ಟ ಜಾತಿ ಒಳಮೀಸಲಾತಿ ಸಂಬಂಧ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಕಾರ್ಯ ಕಳೆದ ಮೇ. 05ರಂದ ಆರಂಭಗೊಂಡಿದ್ದು, ಸರ್ಕಾರದ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಮೇ.16ರಂದು ಜರುಗಿದ ವಿಡಿಯೋ ಸಂವಾದ ಸಭೆಯಲ್ಲಿ ಸೂಚನೆ ನೀಡಿರುವಂತೆ, ಇದೀಗ ಸಮೀಕ್ಷಾ ಕಾರ್ಯವನ್ನು ಮೇ. 28 ರವರೆಗೆ ವಿಸ್ತರಿಸಲಾಗಿದೆ. ಈ ಹಿಂದಿನ ವೇಳಾಪಟ್ಟಿಯಂತೆ ಒಟ್ಟಾರೆ ಸಮೀಕ್ಷಾ ಕಾರ್ಯ ಮೇ. 23 ರವರೆಗೆ ನಡೆಸಬೇಕಾಗಿತ್ತು. ಇದೀಗ ಮೇ. 28 ರವರೆಗೆ ಅವಧಿ ವಿಸ್ತರಿಸಲಾಗಿದೆ. ಪರಿಷ್ಕೃತ ವೇಳಾಪಟ್ಟಿಯಂತೆ ಮೊದಲನೆ ಹಂತದಲ್ಲಿ ಮನೆ ಮನೆ ಭೇಟಿ ನೀಡಿ ಕೈಗೊಳ್ಳುವ ಸಮೀಕ್ಷಾ ಕಾರ್ಯವು ಮೇ. 25 ರವರೆಗೆ ಜರುಗಲಿದೆ. ಎರಡನೆ ಹಂತದಲ್ಲಿ ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು, ಮನೆ-ಮನೆ ಭೇಟಿ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ಮೇ. 28 ರವರೆಗೆ ಜರುಗಲಿದ್ದು, ಮೂರನೆ ಹಂತದಲ್ಲಿ ಸ್ವಯಂ ಘೋಷಣೆ ಮಾಡಿ, ಆನ್‌ಲೈನ್ ಮೂಲಕ ಸಮೀಕ್ಷೆ ಕಾರ್ಯವು ಮೇ. 28 ರವರೆಗೆ ಜರುಗಲಿದೆ. ಪರಿಷ್ಕೃತ ವೇಳಾಪಟ್ಟಿಯನ್ವಯ ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರಿಗೆ ಮತ್ತು ಮೇಲ್ವಿಚಾರಕರಿಗೆ ಕುಟುಂಬದ ಸಂಪೂರ್ಣ ಮಾಹಿತಿ ನೀಡಿ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ಕೋರಿದ್ದಾರೆ.

● ಅಪಾಯಕಾರಿ ಸ್ಥಳಗಳನ್ನು ಮೊದಲೇ ಗುರುತಿಸಿ ರೆಡ್ ಅಲರ್ಟ್ ಸಮಯದಲ್ಲಿ ಅಲ್ಲಿನ ನಿವಾಸಿಗಳನ್ನು ತೆರವುಗೊಳಿಸಬೇಕು

# ಮಳೆ: ಅಪಾಯಕಾರಿ ಸ್ಥಳಗಳಲ್ಲಿ ನಿರಂತರ ನಿಗಾವಹಿಸಲು ಜಿಲ್ಲಾಧಿಕಾರಿ ಸೂಚನೆ

• ಉದಯವಾಹಿನಿ ಮಂಗಳೂರು

ಜಿಲ್ಲೆಯಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಸಂಭಾವ್ಯ ನೆರೆ ಹಾಗೂ ಮುಳುಗಡೆ ಪ್ರದೇಶಗಳಲ್ಲಿ ನಿರಂತರ ನಿಗಾ ವಹಿಸುವಂತೆ ಪ್ರಭಾರ ಜಿಲ್ಲಾಧಿಕಾರಿ ಡಾ.ಕೆ. ಆನಂದ್ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಿಂದಿನ ಮಳೆಗಾಲದಲ್ಲಿ ಮುಳುಗಡೆಯಾದ ಪ್ರದೇಶಗಳಲ್ಲಿ ನೀರು ನಿಲ್ಲದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಅಂತಹ ಪ್ರದೇಶಗಳಿಗೆ ನಿರಂತರ ಭೇಟಿ ನೀಡಿ ನೀರಿನ ಹರಿವಿಗೆ ತಡೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಅವರು ಸೂಚಿಸಿದರು.

ಮಾನವನ ನಿರ್ಲಕ್ಷ್ಯದಿಂದ ಯಾವುದೇ ಪ್ರಾಣ ಹಾನಿ ಆಗದಂತೆ ಎಚ್ಚರಿಕೆ ವಹಿಸಬೇಕು. ಭೂಕುಸಿತ, ನೆರೆ ಸೇರಿದಂತೆ ಅಪಾಯಕಾರಿ ಸ್ಥಳಗಳನ್ನು ಮೊದಲೇ ಗುರುತಿಸಿ ರೆಡ್ ಅಲರ್ಟ್ ಸಮಯದಲ್ಲಿ ಅಲ್ಲಿನ ನಿವಾಸಿಗಳನ್ನು ತೆರವುಗೊಳಿಸಬೇಕು. ಪ್ರಾಕೃತಿಕ ದುರಂತ ನಡೆದರೆ ತಕ್ಷಣವೇ ಅಧಿಕಾರಿಗಳು ಸ್ಪಂದಿಸಬೇಕು. ವಿಪತ್ತು ನಿರ್ವಹಣೆ ಕಾರ್ಯದಲ್ಲಿ ನಿರ್ಲಕ್ಷ್ಯವನ್ನು ಯಾವುದೇ ಕಾರಣಕ್ಕೂ ಸಹಿಸಲಾಗದು. ನಿರ್ಲಕ್ಷ್ಯ ತೋರುವ ಅಧಿಕಾರಿ ಸಿಬ್ಬಂದಿ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ ಅಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಎಚ್ಚರಿಸಿದರು. ಗ್ರಾಮಕರಣಿಕರು, ಪಿಡಿಒ, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಬೇಕು. ಕಂಟ್ರೋಲ್ ರೂಂ 24 ಗಂಟೆಯೂ ಚಾಲನೆಯಲ್ಲಿರಬೇಕು ಎಂದು ಡಾ. ಆನಂದ್ ಕೆ ಸೂಚಿಸಿದರು.

ಮಳೆಗಾಲದಲ್ಲಿ ಮರ ಹಾಗೂ ವಿದ್ಯುತ್ ಲೈನ್‌ಗಳಿಂದ ಯಾವುದೇ ಸಮಸ್ಯೆ ಅಥವಾ ಪ್ರಾಣ ಹಾನಿ ಆಗದಂತೆ ಅರಣ್ಯ ಇಲಾಖೆ ಹಾಗೂ ಮೆಸ್ಕಾಂ ಕೂಡಲೇ ಕ್ರಮ ಕೈಗೊಳ್ಳಬೇಕು. ಅಪಾಯಕಾರಿ ಮರಗಳನ್ನು ತೆರವುಗೊಳಿಸಿ ವಿದ್ಯುತ್ ಲೈನ್‌ಗಳನ್ನು ತೆರವುಗೊಳಿಸಬೇಕು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಾರ್ಡ್‌ವಾರು ವಿಪತ್ತು ಸಮಿತಿಗಳನ್ನು ಸಕ್ರಿಯಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಅಗ್ನಿಶಾಮಕ ಮತ್ತು ಮೆಸ್ಕಾಂ ಇಲಾಖೆಗಳು ಅಗತ್ಯ ಬಿದ್ದರೆ ಹೆಚ್ಚುವರಿ ವಾಹನ ಬಳಸಿಕೊಳ್ಳಬೇಕು. ಹೆದ್ದಾರಿಗಳಲ್ಲಿ ನೀರು ನಿಲ್ಲದಂತೆ ಎರಡು ಬದಿಗಳಲ್ಲಿ ಚರಂಡಿಗಳನ್ನು ಸ್ವಚ್ಛಗೊಳಿಸಬೇಕು. ಶಾಲೆ ಮತ್ತು ಅಂಗನವಾಡಿಗಳ ಶಿಥಿಲಗೊಂಡಿರುವ ಕಟ್ಟಡಗಳನ್ನು ಕೂಡಲೇ ತೆರವುಗೊಳಿಸಬೇಕು. ಶಾಲೆಗಳಲ್ಲಿ ಮಕ್ಕಳು ವಿದ್ಯುತ್ ಸ್ವಿಚ್, ಕೇಬಲ್‌ಗಳನ್ನು ಮುಟ್ಟದಂತೆ ಶಿಕ್ಷಕರು ನಿಗಾವಹಿಸಲು ಅವರು ಅಧಿಕಾರಿಗಳಿಗೆ ಸೂಚಿಸಿದರು. ಶಿಥಿಲಗೊಂಡಿರುವ ಕೊಠಡಿಗಳಲ್ಲಿ ಯಾವುದೇ ಕಾರಣಕ್ಕೂ ಪಠ್ಯ ಪ್ರವಚನ ಮಾಡಬಾರದು ಎಂದು ತಿಳಿಸಿದರು. ತೀವ್ರ ಮಳೆ ಸಂದರ್ಭದಲ್ಲಿ ಮಲೆನಾಡಿನ ಜಲಪಾತಗಳಿಗೆ ಹಾಗೂ ಸಮುದ್ರ ಕಿನಾರೆಗೆ ಪ್ರವಾಸಿಗರು, ಸಾರ್ವಜನಿಕರು ತೆರಳದಂತೆ ನಿರ್ಭಂಧ ವಹಿಸಬೇಕು. ಅಗತ್ಯವಿದ್ದರೆ ಹೋಂಗಾರ್ಡ್ ಅಥವಾ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

**ತಕ್ಷಣವೇ ಅಧಿಕಾರಿಗಳು ಸ್ಪಂದಿಸಬೇಕು**


ಉದಯವಾಹಿನಿ ಚಿತ್ರ

### ಏರ್‌ಪೋರ್ಟ್ ನೀರು

ಮಂಗಳೂರು ವಿಮಾನ ನಿಲ್ದಾಣದ ರನ್ ವೇಯಿಂದ ಮಳೆ ನೀರು ತಗ್ಗು ಪ್ರದೇಶದ ಬಂದು ತೊಂದರೆಯಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದ್ದು, ಈ ಬಗ್ಗೆ ಅಗತ್ಯ ಕ್ರಮವಹಿಸಿ ಸ್ಥಳೀಯರೊಂದಿಗೆ ವಿಶ್ವಾಸ ಮೂಡಿಸುವಂತೆ ಜಿಲ್ಲಾಧಿಕಾರಿಗಳು ವಿಮಾನ ನಿಲ್ದಾಣದ ಅಧಿಕಾರಿಗಳಿಗೆ ಸೂಚಿಸಿದರು. ಇದಕ್ಕೆ ಉತ್ತರಿಸಿದ ಏರ್ಪೋರ್ಟ್ ಅಧಿಕಾರಿಗಳು, ರನ್ ವೇಯಲ್ಲಿ ಮಳೆ ನೀರು ಸಂಗ್ರಹವಾಗುತ್ತಿಲ್ಲ. ಈ ಸಮಸ್ಯೆ ಬಗ್ಗೆ ಎನ್‌ಐಟಿಕೆ ಯೊಂದಿಗೆ ತಾಂತ್ರಿಕ ಅಧ್ಯಯನ ಮಾಡಲಾಗುತ್ತಿದೆ ಎಂದು ತಿಳಿಸಿದರು.

### ಕುಡಿಯುವ ನೀರು : ಪರೀಕ್ಷೆಗೊಳಪಡಿಸಲು ಡಿಸಿ ಸೂಚನೆ

ನಗರ ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮ ಪಂಚಾಯತ್ ಸರಬರಾಜು ಮಾಡುವ ಕುಡಿಯುವ ನೀರನ್ನು 15 ದಿವಸಕ್ಕೊಮ್ಮೆ ಪ್ರಯೋಗಾಲಯದಲ್ಲಿ ಪರೀಕ್ಷೆಗೊಳಪಡಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು. ಕುಡಿಯುವ ನೀರಿನ ಪೈಪ್ ಹಾಗೂ ಚರಂಡಿ ನೀರು ಸಂಪರ್ಕವಾಗದಂತೆ ಗಮನಹರಿಸಬೇಕು. ನೀರು ಸರಬರಾಜಿಗೆ ಯಾವುದೇ ವಸ್ತು ಸೇರದಂತೆ ಎಲ್ಲಾ ಗ್ರಾಮ ಪಂಚಾಯತ್ ಹಾಗೂ ನಗರ ಸಂಸ್ಥೆಗಳು ನಿಗಾವಹಿಸಲು ಅವರು ತಿಳಿಸಿದರು. ಸಾಂಕ್ರಾಮಿಕ ರೋಗಗಳು ಹರಡದಂತೆ ಕುಡಿಯುವ ನೀರು ಬಿಸಿ ಮಾಡಿ ಸೇವಿಸಲು ಆರೋಗ್ಯ ಇಲಾಖೆ ಜಾಗೃತಿ ಮೂಡಿಸಬೇಕು. ತಮ್ಮದೇ ಬಾವಿ ನೀರನ್ನು ಕೂಡ ಸಾರ್ವಜನಿಕರು ಬಿಸಿ ಮಾಡಿದ ನಂತರ ಕುಡಿಯುವುದು ಆರೋಗ್ಯದ ಹಿತದೃಷ್ಟಿಯಿಂದ ಉತ್ತಮವಾಗಿರುತ್ತದೆ ಎಂದು ಅವರು ತಿಳಿಸಿದರು.

## ಸಾವಿನ ನಂತರವೂ ಜೀವಿಸಲು ಅಂಗಾಂಗ ದಾನ ಮಾಡಿ
## ಡಾ.ಚಂದ್ರಕಾಂತ ನಾಗಸಮುದ್ರ, ಜಿಲ್ಲಾ ಆಯುಷ್ ಅಧಿಕಾರಿ

• ಉದಯವಾಹಿನಿ ಚಿತ್ರದುರ್ಗ

ಅಂಗಾಂಗ ದಾನ ಒಂದು ಪುಣ್ಯ ತರವಾದ ಕೆಲಸ. ಇದು ನಮ್ಮನ್ನು ಸಾವಿನ ನಂತರವೂ ಜೀವಂತವಾಗಿ ಇಟ್ಟಿರುತ್ತದೆ. ಅಂಗಾಂಗ ದಾನದಿಂದ ಇನ್ನೊಬ್ಬರಿಗೆ ಜೀವನ ದಾನ ಮಾಡಿದಂತೆ ಹಾಗೂ ಅವರ ಜೀವನದ ಗುಣಮಟ್ಟವನ್ನು ಹೆಚ್ಚಿಸಿದಂತೆ ಆದ ಕಾರಣ ಎಲ್ಲರೂ ಅಂಗಾಂಗ ದಾನ ಮಾಡಿ ಎಂದು ಚಿತ್ರದುರ್ಗ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಚಂದ್ರಕಾಂತ್ ನಾಗಸಮುದ್ರ ಅವರು ಕರೆ ನೀಡಿದರು. ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದಿಂದ ಹೊಳಲ್ಕೆರೆ ರಸ್ತೆಯಲ್ಲಿರುವ ಸಂಘದ ಕಚೇರಿ ಬಳಿ


ಉದಯವಾಹಿನಿ ಚಿತ್ರ

ಇಂದು ಕಾರ್ಮಿಕ ದಿನಾಚರಣೆ ಮಾಸಾಚರಣೆ ಅಂಗವಾಗಿ ಆಯೋಜಿಸಲಾದ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇದೇ ಸಂಧರ್ಭದಲ್ಲಿ ಹಿರಿಯ ಆಯುಷ್ ವೈದ್ಯಾಧಿಕಾರಿ ಡಾ. ಶಿವಕುಮಾರ್ ಟಿ ಅವರು ಮಾತನಾಡಿ ಅಂಗಾಂಗ ದಾನದ ಮಹತ್ವ ಹಾಗೂ ಅಂಗಾಂಗ ದಾನ ನೀಡುವಾಗ ಪಾಲಿಸಬೇಕಾದ ವಿಧಿ ವಿಧಾನಗಳು ಇತ್ಯಾದಿ ದಾನಕ್ಕೆ ಸಂಬಂಧಿಸಿದ ಮಾಹಿತಿಯನ್ನು ನೀಡಿದರು.

ಕಾರ್ಮಿಕ ನಿರೀಕ್ಷಕ ಟಿ.ಬೀಮೇಶ್, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಉಪ ಸಭಾಪತಿ ಅರುಣ್ ಕುಮಾರ್. ಸಮೃದ್ಧಿ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ವೆಂಕಟೇಶ್ ಟೈಲ್ಸ್ ಮತ್ತು ಗ್ರಾನೈಟ್ ಸಂಘದ ಅಧ್ಯಕ್ಷ ಚಂದ್ರಪ್ಪಟಿ, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಜೆ.ಮಂಜುನಾಥ್, ಉಪಾಧ್ಯಕ್ಷಕೆ. ಗೌಸ್ ಪೀರ್, ಖಜಾಂಚಿ ಈಶ್ವರಪ್ಪ ಅನೇಕರಿದ್ದರು.

## ವಿಮಾನ ದುರಂತಕ್ಕೆ 15 ವರ್ಷ: ಮೃತರಿಗೆ ಶ್ರದ್ಧಾಂಜಲಿ

• ಉದಯವಾಹಿನಿ ಮಂಗಳೂರು

ಬಜಪೆಯ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪಕ್ಕದ ಕೆಂಜಾರಿನಲ್ಲಿ 2010ರ ಮೇ 22ರಂದು ಸಂಭವಿಸಿದ ವಿಮಾನ ದುರಂತಕ್ಕೆ ಗುರುವಾರ 15 ವರ್ಷ ತುಂಬಿದೆ. ದುರಂತದಲ್ಲಿ ಮೃತಪಟ್ಟವರಿಗೆ ದಕ್ಷಿಣ ಕನ್ನಡ ಜಿಲ್ಲಾಡಳಿತದಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕೂಳೂರಿನ ತಣ್ಣೀರುಬಾವಿ ರಸ್ತೆ ಪಕ್ಕದಲ್ಲಿರುವ ಈ ದುರಂತದ ಸ್ಮಾರಕದಲ್ಲಿ ದಕ್ಷಿಣ ಕನ್ನಡದ ಪ್ರಭಾರ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಹೂಗಳನ್ನು ಅರ್ಪಿಸಿ, ಮೌನ ಪ್ರಾರ್ಥನೆ ಸಲ್ಲಿಸಿದರು. ಪಾಲಿಕೆ ಆಯುಕ್ತ ರವಿಚಂದ್ರ ನಾಯಕ್, ಪಶುಪಾಲನಾ ಮತ್ತು ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ


ಉದಯವಾಹಿನಿ ಚಿತ್ರ

ಡಾ.ಅರುಣ್ ಶೆಟ್ಟಿ, ಮಂಗಳೂರು ಉತ್ತರ ಉಪ ವಿಭಾಗದ ಎಸಿಪಿ ಶ್ರೀಕಾಂತ್ ಭಾಗವಹಿಸಿದ್ದರು. ದುಬೈನಿಂದ ಬಂದಿದ್ದ ಐಎಕ್ಸ್ 812 ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನವು 2010ರ ಮೇ 22ರಂದು ಬಜಪೆಯ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಯುವ ವೇಳೆ ಅಪಘಾತಕ್ಕೀಡಾಗಿತ್ತು.

## ಬಿತ್ತನೆ ಬೀಜ ಅಕ್ರಮ ಮಾರಾಟ: ತಡೆಯಾಜ್ಞೆ

• ಉದಯವಾಹಿನಿ ರಾಣೆಬೆನ್ನೂರು

ಬಿತ್ತನೆ ಬೀಜ ಮಾರಾಟ ಪರವಾನಗಿ ಪತ್ರದಲ್ಲಿ ಸೋರ್ಸ್ ಸರ್ಟಿಫಿಕೇಟ್' ನಮೂದಿಸದೆ, ಕಾನೂನು ಬಾಹಿರವಾಗಿ ಬಿತ್ತನೆ ಬೀಜ ಮಾರಾಟ ಮಾಡುತ್ತಿದ್ದ ಮಳಿಗೆಗಳ ಮೇಲೆ ಸಹಾಯಕ ಕೃಷಿ ನಿರ್ದೇಶಕಿ ಜಿ. ಶಾಂತಮಣಿ ನೇತೃತ್ವದ ತಂಡ ದಾಳಿ ನಡೆಸಿತು.

ಮಂಗಳಾ ಸೀಡ್ಸ್, ಮಲ್ಲಿಕಾರ್ಜುನ ಆಗ್ರೋ ಸೆಂಟರ್ ಹಾಗೂ ಹರ್ಷಿತಾ ಹೈಬ್ರಿಡ್ ಸೀಡ್ಸ್ ಮಾರಾಟ ಮಳಿಗೆಗಳ ಮೇಲೆ ದಾಳಿ ನಡೆಸಿದ ಅಧಿಕಾರಿಗಳು ಕಾನೂನು ಬಾಹಿರವಾಗಿ ಬಿತ್ತನೆ ಬೀಜ ಮಾರಾಟ ಮಾಡದಂತೆ ತಡೆಯಾಜ್ಞೆ ಜಾರಿ ಮಾಡಿದರು. ಕೃಷಿ ಅಧಿಕಾರಿಗಳಾದ ಅರವಿಂದ ಮತ್ತು ಮೆಹಬೂಬ್ ಪಾಷಾ ಇದ್ದರು.

## ಕೊಚ್ಚಿ ಹೋದ ಸೇತುವೆ, ನಿಂಬೆ ಹಾಳು

• ಉದಯವಾಹಿನಿ ಬೀದರ್

ಬೀದರ್ ಜಿಲ್ಲೆಯಾದ್ಯಂತ ರಾತ್ರಿಯಿಂದ ಗುರುವಾರ ಬೆಳಗಿನವರೆಗೆ ಧಾರಾಕಾರ ಮಳೆಯಾಗಿದೆ. ಸತತ ಮಳೆಗೆ ಬಸವಕಲ್ಯಾಣ ತಾಲ್ಲೂಕಿನ ಗೌರ ಗ್ರಾಮದಲ್ಲಿ ಸೇತುವೆ ಕೊಚ್ಚಿಕೊಂಡು ಹೋಗಿದ್ದು, ಜನ ಹಾಗೂ ವಾಹನ ಸಂಚಾರ ಸ್ಥಗಿತಗೊಂಡಿದೆ. ಈ ರಸ್ತೆಯು ಬಸವಕಲ್ಯಾಣ, ಹುಲಸೂರ ಹಾಗೂ ಮಹಾರಾಷ್ಟ್ರದ ಶಹಾಜಹಾನಿ ಔರಾದ್ ಗೆ ಸಂಪರ್ಕ ಕಲ್ಪಿಸುತ್ತದೆ. ಔರಾದ್ ತಾಲ್ಲೂಕಿನ ಸುಂದಾಳ ಗ್ರಾಮದಲ್ಲಿ ಬಸವರಾಜ ಎಂಬುವರ ಅರ್ಧ ಎಕರೆ ತೋಟದ ನಿಂಬೆ ಗಿಡಗಳು ಹಾಳಾಗಿವೆ. ಜಿಲ್ಲೆಯ ಹುಮನಾಬಾದ್, ಭಾಲ್ಕಿ ಹಾಗೂ ಔರಾದ್‌ನಲ್ಲಿ ಬುಧವಾರವೂ ಮಳೆಯಾಗಿದೆ. ಬೀದರ್ ನಗರ ಹಾಗೂ ಸುತ್ತ ಮುತ್ತಲಿನ ಭಾಗಗಳಲ್ಲಿ ದಿನವಿಡೀ ಮಳೆ ಬಿಡುವು ಕೊಟ್ಟಿತ್ತು. ಸಂಜೆ ಪುನಃ ದಟ್ಟ ಕಾರ್ಮೋಡ ಕವಿದು ಮಳೆ ಆರಂಭಗೊಂಡಿದೆ.

## ರೆಡ್ಡಿ ಮನವಿಗೆ ಸಿಬಿಐ ಬ್ರೇಕ್

• ಉದಯವಾಹಿನಿ ಬಳ್ಳಾರಿ

ಓಬಳಾಪುರಂ ಮೈನಿಂಗ್ ಕಂಪನಿ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ತಮಗೆ ಸಿಬಿಐ ನ್ಯಾಯಾಲಯ ವಿಧಿಸಿರುವ 7ವರ್ಷದ ಶಿಕ್ಷೆ ರದ್ದುಪಡಿಸುವಂತೆ ತೆಲಂಗಾಣದ ಕೋರ್ಟಿಗೆ ಮನವಿ ಮಾಡಿದ ಗಾಲಿ ಜನಾರ್ಧನರೆಡ್ಡಿ ಮನವಿಗೆ ಸಿಬಿಐ ಬ್ರೇಕ್ ಹಾಕಿದೆ.

ತೆಲಂಗಾಣ ಹೈಕೋರ್ಟಿನಲ್ಲಿ ನಿನ್ನೆ ಜನಾರ್ಧನರೆಡ್ಡಿ ಪರ ವಕೀಲರು ಮಧ್ಯಂತರ ಅರ್ಜಿ ಸಲ್ಲಿಸಿ ಜನಾರ್ಧನರೆಡ್ಡಿ ಅವರು ಶಾಸಕರಾಗಿದ್ದಾರೆ. ಜನಪ್ರತಿನಿಧಿಗಳಾಗಿ ಜನರಿಗೆ ಕೆಲಸ ಮಾಡಬೇಕಿದೆ. ಅದಕ್ಕಾಗಿ ಅವರಿಗೆ ವಿಧಿಸಿರುವ ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ವಿಚಾರಣೆ ಮುಂದುವರಿಸಲು ಕೂಡಲೇ ಆದೇಶಿಸಿ ಎಂದು ಕೋರಿದ್ದರು ರೆಡ್ಡಿ ಪರ ವಕೀಲರು.

ಆದರೆ ವಾದ ಆಲಿಸಿದ ನ್ಯಾಯಮೂರ್ತಿ ನಂದಿಕೊಂಡ ನರಸಿಂಗ ರಾವ್, ಈ ಪ್ರಕರಣ ಶಿಕ್ಷೆ ಹಿನ್ನಲೆಯಲ್ಲಿ ಅನೇಕ ದಾಖಲೆಗಳಿವೆ ಅವುಗಳನ್ನು ಪರಿಶೀಲಿಸದೆ ತಕ್ಷಣ ಆದೇಶ ನೀಡಲು ಆಗದು ಅಲ್ಲದೆ ಈ ವಿಷಯದಲ್ಲಿ ಸಿಬಿಐ ವಾದವನ್ನು ಆಲಿಸಬೇಕಿದೆ. ಅವರು ಆಕ್ಷೇಪಣೆಗಳನ್ನು ಸಲ್ಲಿಸಲು ಎಂದಾಗ ಸಿಬಿಐ ಪರ ವಕೀಲ ಶ್ರೀನಿವಾಸ ಕಪಾಟಿಯ ಆಕ್ಷೇಪಣೆಗಳಿಗೆ ಒಂದು ತಿಂಗಳ ಕಾಲಾವಕಾಶ ಕೋರಿದರೆ, ನ್ಯಾಯಾಲಯ ಕೂಡಲೇ ಸಲ್ಲಿಸಲು ಸೂಚಿಸಿ ವಿಚಾರಣೆಯನ್ನು ಮೇ.28ಕ್ಕೆ ಮುಂದೂಡಿದ್ದಾರೆ. ತ್ವರಿತ ವಿಚಾರಣೆ ರೆಡ್ಡಿ ಪರ ವಕೀಲರು ಕೋರಿದರೆ, ಅ ಪ್ರಕರಣದಲ್ಲಿ ಶಿಕ್ಷೆ ವಿಧಿಸಿರುವುದರಿಂದ ತ್ವರಿತ ವಿಚಾರಣೆಯ ಅವಶ್ಯಕತೆ ಕಂಡುಬರುತ್ತಿಲ್ಲ ಎಂದಿದೆ.

## ರೈತರಿಗೆ ಖಾರವಾದ ಮೆಣಸಿನಕಾಯಿ

• ಉದಯವಾಹಿನಿ ಚನ್ನಮ್ಮನ ಕಿತ್ತೂರು

ಸಗಟು ಮಾರುಕಟ್ಟೆಯಲ್ಲಿ ಹಸಿ ಮೆಣಸಿನಕಾಯಿ ಧಾರಣೆ 140 ರಿಂದ 120ಕ್ಕೆ ಕುಸಿದಿದ್ದು, ಬೆಳೆಗಾರರು ಸಂಕಷ್ಟ ಪರಿಸ್ಥಿತಿ ಎದುರಿಸುವಂತಾಗಿದೆ. ಹಾಕಿದ ಖರ್ಚು ಸಹ ಗಿಟ್ಟುತ್ತಿಲ್ಲ ಎಂದು ತಾಲ್ಲೂಕಿನ ರೈತರು ಅಳಲು ತೋಡಿಕೊಂಡಿದ್ದಾರೆ. ಜಮೀನಿನಲ್ಲಿ ಕಾಯಿ ಬೆಳೆಯಲು ಜಮೀನು ಸಿದ್ದಪಡಿಸುವಿಕೆ, ಮಲ್ಚಿಂಗ್ , ತರುವು ನಾಟಿ, ರಸಗೊಬ್ಬರ, ಕ್ರಿಮಿನಾಶಕ, ಮೇಲು ಗೊಬ್ಬರ ನೀಡಲು 70 ಸಾವಿರ ಅಂದಾಜು ವೆಚ್ಚ ಮಾಡಲಾಗಿದೆ.

ಗಿಡಗಳು ಕಾಯಿಗಳನ್ನು ಬಿಡುತ್ತಿವೆ. ಧಾರಣಿ ಮಾತ್ರ ತೀವ್ರ ಕುಸಿತ ಆಗಿದೆ. ಕಾಯಿ ಕೊಯ್ದು ಮಾಡುವವರಿಗೆ ದಿನದ ಕೂಲಿ 300 ಕೊಡಬೇಕು. ದಿನಕ್ಕೆ 30–35 ಕೆಜಿ ಮೆಣಸಿನಕಾಯಿ ಕೀಳುತ್ತಾರೆ. ನಮಗೆ ಉಳಿಯುವುದು ಕೇವಲ 60 ರಿಂದ 120 ಮಾತ್ರ. ಇದರಲ್ಲಿಯೇ ಸಾಗಾಟದ ವೆಚ್ಚ, ವಾಹನ ಬಾಡಿಗೆಯನ್ನೂ ನೀಡಬೇಕು' ಎಂದು


ಉದಯವಾಹಿನಿ ಚಿತ್ರ

**ಕಳೆದ ವರ್ಷ ಕಾಯಿಗೆ ಭರ್ಜರಿ ಧಾರಣೆ ಇತ್ತು. 10 ಕೆ.ಜಿಗೆ 500ರಿಂದ 700 ವರೆಗೂ ಮಾರಾಟವಾಯಿತು. ಕೈತುಂಬ ಆದಾಯ ಬಂದಿತ್ತು. ಈಗ ನೋಡಿದರೆ ಮಾಡಿದ ವೆಚ್ಚವೂ ದಕ್ಕದಂತಾಗಿದೆ -ಸುಧೀರ ಕ್ಯಾತನವರ**

ತಿಗಡೊಳ್ಳಿಯ ಬೆಳಗಾರ ಸುಧೀರ ಕ್ಯಾತನವರ ಅಳಲು ತೋಡಿ ಕೊಂಡರು.

## 16 ಕೋಟಿ ವೆಚ್ಚ ಮಾಡಿದರೂ ಬರಲಿಲ್ಲ ನೀರು

• ಉದಯವಾಹಿನಿ ರಬಕವಿ ಬನಹಟ್ಟಿ

ಬನಹಟ್ಟಿಯಲ್ಲಿ ದಿನದ 24 ಗಂಟೆ ನೀರು ಸರಬರಾಜು ಮಾಡುವ ಯೋಜನೆ ಆರಂಭವಾಗಿ ಎಂಟು ವರ್ಷಗಳಾದರೂ ಯಶಸ್ವಿಯಾಗಿ ನೀರು ಸರಬರಾಜು ಮಾಡಲು ಸಾಧ್ಯವಾಗಿಲ್ಲ. ಪರಿಣಾಮ ಜನರಿಗೆ ದಿನ ಬಿಟ್ಟು ದಿನ ನೀರು ಸರಬರಾಜು ಮಾಡಲಾಗುತ್ತಿದೆ.

ರಬಕವಿ–ಬನಹಟ್ಟಿಗೆ ದಿನದ 24 ಗಂಟೆ ನೀರು ಸರಬರಾಜು ಮಾಡಲು 2017–18ರಲ್ಲಿ ಯೋಜನೆಯೊಂದನ್ನು ಕೈಗೆತ್ತಿಕೊಳ್ಳಲಾಯಿತು. ಮೊದಲ ಹಂತವಾಗಿ ಬನಹಟ್ಟಿಯಲ್ಲಿ 16 ಕೋಟಿ ವೆಚ್ಚದಲ್ಲಿ ಕಾಮಗಾರಿ ಆರಂಭವಾಯಿತು. ಯೋಜನೆ ಸಂಪೂರ್ಣ ವಿಫಲವಾಗಿರುವುದರಿಂದ ಮನೆಗಳಿಗೆ ನೀರು ಪೂರೈಸಲು ಅಳವಡಿಸಿದ್ದ ನಳಗಳು, ಅವುಗಳಿಗೆ ಅಳವಡಿಸಿದ್ದ ಮೀಟರ್ ಡಬ್ಬಿಗಳು ಹಾಳಾಗಿವೆ. ಕೋಟ್ಯಂತರ ರೂಪಾಯಿ ಹಣ ಪೋಲಾಗಿದೆ. ಬನಹಟ್ಟಿಯಲ್ಲಿ ವಿಫಲವಾದ ಯೋಜನೆಯನ್ನು


ಉದಯವಾಹಿನಿ ಚಿತ್ರ

ರಬಕವಿಯಲ್ಲಿ ಜಾರಿಗೊಳಿಸುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ರಬಕವಿ ನಗರ ಸಭೆಯ ಸದಸ್ಯರು ಮತ್ತು ಸಾರ್ವಜನಿಕರು ಈ ಯೋಜನೆಗೆ ವಿರೋಧ ವ್ಯಕ್ತಪಡಿಸಿದ್ದರು. ಆದರೂ, ಯೋಜನೆ ಆರಂಭಿಸಲಾಗಿದೆ.

**ನಿರ್ಹಣೆಯಾಗದ ಶುದ್ಧ ಕುಡಿಯುವ ನೀರಿನ ಘಟಕಗಳು:** ರಬಕವಿ ಬನಹಟ್ಟಿಯಲ್ಲಿ 16ಕ್ಕೂ ಹೆಚ್ಚು ನಗರಸಭೆಯ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ. ಇವುಗಳ ಜೊತೆಗೆ ಹತ್ತಾರು ಖಾಸಗಿ ಘಟಕಗಳು ಇಲ್ಲಿವೆ.

ಬನಹಟ್ಟಿಯಲ್ಲಿ 4 ಘಟಕಗಳು ಸಂಪೂರ್ಣವಾಗಿ ಬಂದ್ ಆಗಿವೆ. ಈ ಭಾಗದ ಜನರು ಖಾಸಗಿ ಘಟಕಗಳನ್ನು ಅವಲಂಬಿಸಿದ್ದಾರೆ.

ನಗರದ ನೀಲಕಂಠೇಶ್ವರ ಮಠದ ಹತ್ತಿರದ ಅಂದಾಜು ನಿರ್ಮಾಣಗೊಂಡ ಶುದ್ಧ ಕುಡಿಯುವ ನೀರಿನ ಘಟಕವು ಒಂದು ಹನಿ ನೀರು ನೀಡದೆ ನಗರ ಸಭೆಯ ಅಧಿಕಾರಿಗಳ ನಿರ್ಲಕ್ಷದಿಂದ ಹಾಳಾಗಿದೆ. ಇಲ್ಲಿನ ಯಂತ್ರೋಪಕರಣಗಳು ತುಕ್ಕು ಹಿಡಿದಿವೆ.

**ಖಾಸಗಿ ಘಟಕಗಳು ಪೂರೈಕೆ ಮಾಡುವ ನೀರಿನ ಗುಣಮಟ್ಟದ ಪರಿಶೀಲನೆ ನಡೆಯುತ್ತಿಲ್ಲ. ಪರಿಶೀಲನೆ ಮಾಡಬೇಕು -ಬಸವರಾಜ ಗುಡೋಡಗಿ, ಸದಸ್ಯ ನಗರಸಭೆ ರಬಕವಿ-ಬನಹಟ್ಟಿ**

## ನಿಪ್ಪಾಣಿ ಮತಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ: ಶಾಸಕಿ ಶಶಿಕಲಾ ಜೊಲ್ಲೆ

• ಉದಯವಾಹಿನಿ ನಿಪ್ಪಾಣಿ

2024–25ನೇ ಸಾಲಿನ ಮಳೆ ಪರಿಹಾರ ಲೆಕ್ಕ ಶೀರ್ಷಿಕೆ ಯೋಜನೆಯಡಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಗಳಿಗೆ ಸುಮಾರು 10 ಕೋಟಿ ಅನುದಾನ ತರುವ ನಮ್ಮ ಪ್ರಯತ್ನಕ್ಕೆ ಫಲ ಸಿಕ್ಕಿದೆ' ಎಂದು ತಾಲ್ಲೂಕಿನ ಬುದಲಮುಖ ಗ್ರಾಮದ ಜೋತಿರಾಮ ಚವಾನ ಮನೆಯಿಂದ ಮಹಾರಾಷ್ಟ್ರ ಗಡಿಯವರೆಗೆ 1.10 ಕಿ.ಮೀ. ಉದ್ದದ ರಸ್ತೆ ಡಾಂಬರೀಕರಣಕ್ಕೆ 80 ಲಕ್ಷ, ಯರನಾಳದಿಂದ ವಾಗಧಾರಾ ಕೆರೆಯವರೆಗೆ 1.70 ಕಿ.ಮೀ. ಉದ್ದದ ರಸ್ತೆ ಡಾಂಬರೀಕರಣಕ್ಕೆ 90 ಲಕ್ಷ ಅನುದಾನ. ಮಾಂಗೂರ ಬಸ್ ನಿಲ್ದಾಣದಿಂದ ಗರೀಬ ವಸಾಹತುಗಳ ಕಡೆಗೆ ಹೋಗುವ 2 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 90 ಲಕ್ಷ, ಯಮಗರ್ಣಿಯಿಂದ ಬೂದಿಹಾಳ ವರೆಗಿನ 2.03 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 75 ಲಕ್ಷ, ಯಮಗರ್ಣಿಯ ಎನ್.ಎಚ್.4 ರಸ್ತೆಯಿಂದ ನಾಗನೂರ ಮುಖಾಂತರ ಶ್ರೀಪವಾಡಿ ಕ್ರಾಸ್‌ವರೆಗೆ 3.12 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 110 ಲಕ್ಷ ಅನುದಾನ. ಗಾಯಕನವಾಡಿ ಮುಖ್ಯ ರಸ್ತೆಯಿಂದ ಮಹಾರಾಷ್ಟ್ರದ



ಗಡಿಯವರೆಗೆ 0.49 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 30 ಲಕ್ಷ, ಕುನ್ನೂರ ಗ್ರಾಮದ ಕುನ್ನೂರ–ಮಾಂಗೂರ ಮುಖ್ಯ ರಸ್ತೆಯಿಂದ ಶಿವಾಪೂರವಾಡಿವರೆಗಿನ 1 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 50 ಲಕ್ಷ ಅನುದಾನ. ಬುದಲಮುಖ ರಸ್ತೆಗೆ ನಿರ್ಮಿಸಿರುವ ಬಾಕ್ಸ್ ಕಲ್ವರ್ಟಗೆ ಸಂರಕ್ಷಣಾ ಗೋಡೆ ಮತ್ತು ಅಪೂರ್ಣ ರಸ್ತೆಯನ್ನು ಡಾಂಬರೀಕರಣ ಹಾಗೂ ಸಿಸಿ ರಸ್ತೆಯ ಕಾಮಗಾರಿಗೆ 45 ಲಕ್ಷ, ಭಿವಶಿಯ ಥಳೋಬಾ ದೇವಸ್ಥಾನದಿಂದ ಆಡಿವರೆಗಿನ 2.80 ಕಿ.ಮೀ. ಕೂಡು ರಸ್ತೆಯ ಡಾಂಬರೀಕರಣಕ್ಕೆ 140 ಲಕ್ಷ ಅನುದಾನ ಶ್ರೀಪೆವಾಡಿ ರಸ್ತೆಯಿಂದ ಎನ್.ಎಚ್. 4 ರಸ್ತೆಗೆ ಕೂಡುವ 1.50 ಕಿ.ಮೀ. ಉದ್ದದ ರಸ್ತೆ ಡಾಂಬರೀಕರಣಕ್ಕೆ 90 ಲಕ್ಷ, ಯಮಗರ್ಣಿಯ ಸಹಾರಾ ಹೋಟೆಲ್‌ದಿಂದ ವಿ.ಎಸ್.ಎಂ. ಕಾಲೇಜವರೆಗೆ 2.70 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 110 ಲಕ್ಷ ಅನುದಾನ.

ಕುನ್ನೂರನ ಸ್ಮಶಾನ ರಸ್ತೆಯಿಂದ ಹುನ್ನರಗಿ ಸೀಮೆಯವರೆಗೆ 1.90 ಕಿ.ಮೀ. ರಸ್ತೆ ಡಾಂಬರೀಕರಣಕ್ಕೆ 90 ಲಕ್ಷ ಅನುದಾನ ಮಂಜೂರಾಗಿದೆ ಎಂದು ತಿಳಿಸಿದ್ದಾರೆ.

● 4 ಕೋಟಿ ರೂ.ಟೆಂಡರ್ ಪೂರ್ಣ, ದುರಸ್ತಿ ನಿಮಿತ್ತ ಜಲಾಶಯದ ನೀರು ಖಾಲಿ ಮಾಡಿ, ತಡೆಗೋಡೆ ನಿರ್ಮಿಸಲಾಗಿದೆ

# ಮಾಲವಿ ಜಲಾಶಯದ ನೀರು ಖಾಲಿ: 10 ಗೇಟ್ ಗಳ ದುರಸ್ತಿಗೆ ಸಿದ್ಧತೆ

• ಉದಯವಾಹಿನಿ ಹಗರಿಬೊಮ್ಮನಹಳ್ಳಿ

ಹಲವು ವರ್ಷಗಳಿಂದ ದುರಸ್ತಿ ಕಾಣದೆ ಸಂಗ್ರಹವಾಗಿದ್ದ ನೀರು ಪೋಲಾಗಿ ಹರಿಯಲು ಕಾರಣವಾಗಿದ್ದ ಗೇಟ್‌ಗಳ ದುರಸ್ತಿಗೆ ಕೊನೆಗೂ ಮಹೂರ್ತ ಕೂಡಿ ಬಂದಿದೆ. ಒಟ್ಟು 4 ಕೋಟಿ ರೂ.ಅಂದಾಜು ಮೊತ್ತದಲ್ಲಿ ಜಲಾಶಯಕ್ಕೆ ಕಾಯಕಲ್ಪ ಕಲ್ಪಿಸುವ ಕಾಮಗಾರಿ ಆರಂಭಕ್ಕೆ ದಿನಗಣನೆ ಆರಂಭವಾಗಿದೆ.

- ರೈತರ ಜೀವನಾಡಿ ಮಾಲವಿ ಜಲಾಶಯ- 4 ಕೋಟಿ ರೂ.ಟೆಂಡರ್ ಪೂರ್ಣ
- ಹಗರಿಹಳ್ಳದ ಪಾಲಾಗುತ್ತಿದ್ದ ನೀರು- ಗೇಟ್ ದುರಸ್ತಿಗೆ ಮಹೂರ್ತ ಫಿಕ್ಸ್
- ದುರಸ್ತಿ ನಿಮಿತ್ತ ಜಲಾಶಯದ ನೀರು ಖಾಲಿ ಮಾಡಿ, ತಡೆಗೋಡೆ ನಿರ್ಮಿಸಲಾಗಿದೆ

ತಾಲ್ಲೂಕಿನ ರೈತರ ಜೀವನಾಡಿ ಎಂದೇ ಹೆಸರಾದ ಜಲಾಶಯದಲ್ಲಿ ಉತ್ತಮ ಮಳೆಯಾದರೆ ಬರೋಬ್ಬರಿ ಎರಡು ಟಿಎಂಸಿಯಷ್ಟು ನೀರು ಸಂಗ್ರಹ ವಾಗುತ್ತಿದೆ.


ಉದಯವಾಹಿನಿ ಚಿತ್ರ

ಆದರೆ, ಹಲವು ವರ್ಷಗಳಿಂದಲೂ ಭರ್ತಿಯಾಗದ ಜಲಾಶಯ ಈ ಹಿಂದಿನ ಶಾಸಕ ಎಸ್.ಭೀಮನಾಯ್ಕ ಅವಯಲ್ಲಿ ಬರೋಬ್ಬರಿ 13 ವರ್ಷದ ಬಳಿಕ ಮಳೆರಾಯನ ಕೃಪೆ ಮತ್ತು 150 ಕೋಟಿ ರೂ.ಅಂದಾಜು ಮೊತ್ತದಲ್ಲಿ ಜಲಾಶಯಕ್ಕೆ ತುಂಗಭದ್ರಾ ನದಿಯಿಂದ ಶಾಶ್ವತ ನೀರು ಕಲ್ಪಿಸಿದ ಹಿನ್ನೆಲೆಯಲ್ಲಿ ಜಲಾಶಯ ಭರ್ತಿಯಾಗಿತ್ತು. ಆದರೆ, ಜಲಾಶಯದ ಗೇಟ್ ದುರಸ್ತಿಗೊಂಡ ಹಿನ್ನೆಲೆಯಲ್ಲಿ ಸಂಗ್ರಹಗೊಂಡ ನೀರು ಪೋಲಾಗಿ ಹರಿಯಿತು. ನೀರು ಹಿಡಿಟ್ಟುಕೊಳ್ಳುವ ಕುರಿತಂತೆ ರೈತರ ಬೇಡಿಕೆ ಅಧಿಕವಾಯಿತು. ಒಟ್ಟು 4 ಕೋಟಿ ರೂ.ಅಂದಾಜು ಮೊತ್ತದಲ್ಲಿ ಜಲಾಶಯದ ಗೇಟ್‌ಗಳ ದುರಸ್ತಿ ಕೈಗೆತ್ತಿಕೊಳ್ಳಲಾಗುವುದು. ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಏಜೆನ್ಸಿ ಗೊತ್ತುಪಡಿಸಿದೆ. ದುರಸ್ತಿ ನಿಮಿತ್ತ ಜಲಾಶಯದ ನೀರು ಖಾಲಿ ಮಾಡಿ, ತಡೆಗೋಡೆ ನಿರ್ಮಿಸಲಾಗಿದೆ. ನಿಗದಿತ ಅವಧಿಯೊಳಗೆ ಕಾಮಗಾರಿ ಮುಗಿಯಲಿದೆ ಎಂದಿದ್ದಾರೆ ಧರ್ಮರಾಜ. ಎಇಇ. ಬೃಹತ್ ನೀರಾವರಿ ಇಲಾಖೆ. ಈ ಹಿಂದಿನ ಶಾಸಕ ಎಸ್.ಭೀಮನಾಯ್ಕರ ಅವಧಿಯಲ್ಲೇ 4 ಕೋಟಿ ರೂ.ಅನುದಾನ ಒದಗಿತ್ತು. ಆದರೆ, ಇದೇ ಅನುದಾನದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲು ಶಾಸಕರು 2 ವರ್ಷ ವಿಳಂಬ ಮಾಡಿದ್ದಾರೆ. ಇದೀಗ ಸಂಗ್ರಹಗೊಂಡ ನೀರು ಖಾಲಿ ಮಾಡಿರುವುದು ಬೇಸರ ತರಿಸಿದೆ. ತ್ವರಿತವಾಗಿ ದುರಸ್ತಿಗೊಳಿಸಲಿ ಎಂದಿದ್ದಾರೆ ಚನ್ನಬಸಪ್ಪ ಹ್ಯಾಳ್ಯಾದ ಮಾಜಿ ಅಧ್ಯಕ್ಷ ಮಾಲವಿ ಗ್ರಾಪಂ.

### ಕಾಯ್ದಿರಿಸಿದ ಅನುದಾನ

ಮುಳುಗು ತಜ್ಞರು ಮತ್ತು ಭದ್ರಾ ಮೇಲ್ದಂಡೆ ಯೋಜಯೆಯಡಿ ಕಾರ್ಯನಿರ್ವಹಿಸಿದ ತಜ್ಞರ ನೆರವಿನೊಂದಿಗೆ ಕೆಲ ತಿಂಗಳ ಹಿಂದೆ ಇಂದಿನ ಶಾಸಕ ನೇಮರಾಜನಾಯ್ಕ ಬೃಹತ್ ನೀರಾವರಿ ಇಲಾಖೆ ಮೂಲಕ ಜಖಂಗೊಂಡಿದ್ದ ಗೇಟ್ ದುರಸ್ತಿಗೊಳಿಸಿದರು. ಆದರೆ, ಜಲಾಶಯದ 10 ಗೇಟ್‌ಗಳ ಪೈಕಿ 5,7 ಮತ್ತು 9ನೇ ಗೇಟ್ ಮೂಲಕ ನೀರು ಸೋರಿಕೆ ನಿರಂತರವಾಗಿತ್ತು. ಸಂಗ್ರಹಗೊಂಡ ಬಹುಪಾಲು ನೀರು ಹಗರಿಹಳ್ಳದ ಪಾಲಾಗಿತ್ತು. ಪರೋಕ್ಷವಾಗಿ ಹಲವು ಗ್ರಾಮಗಳಲ್ಲಿ ಅಂತರ್ಜಲ ಹೆಚ್ಚಾದರೂ, ಜಲಾಶಯ ನಿರ್ಮಾಣದ ಮೂಲ ಉದ್ದೇಶ ಈಡೇರದಾಗಿತ್ತು. ಅಲ್ಲದೆ ಈ ಹಿಂದೆಯೆ ಕಾಯ್ದಿರಿಸಿದ್ದ 4 ಕೋಟಿ ರೂ.ಅನುದಾನದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳುವ ಕುರಿತಂತೆ ಕನಿಷ್ಠ ನೀಲನಕ್ಷೆ ರೂಪಿಸಲು ಇಲಾಖೆಗೆ 2 ವರ್ಷ ಕಾಲಾವಕಾಶ ಹಿಡಿದಿದ್ದು, ಇದೀಗ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿದ ಇಲಾಖೆ ದುರಸ್ಥಿ ಕಾರ್ಯಕ್ಕೆ ಸಿದ್ಧತೆ ನಡೆಸಿದೆ.

### ದುರಸ್ತಿ ಹೀಗಿದೆ


ಜಲಾಶಯದ 10 ಗೇಟ್‌ಗಳನ್ನು ದುರಸ್ತಿ ಕೈಗೆತ್ತಿಕೊಳ್ಳುವ ಹಿನ್ನೆಲೆಯಲ್ಲಿ ಈಗಾಗಲೇ ಜಲಾಶಯದಲ್ಲಿ ಸಂಗ್ರಹವಾಗಿದ್ದ ಉಳಿದಿದ್ದ 4 ಅಡಿಗಳಷ್ಟು ನೀರು ಖಾಲಿ ಮಾಡಲಾಗಿದೆ. ಸತತ 3 ದಿನ 2 ಗೇಟ್‌ಗಳನ್ನೆತ್ತಿ ನೀರು ಹೊರಬಿಡಲಾಗಿದೆ. ಪರಿಣಾಮವಾಗಿ ಹಗರಿಹಳ್ಳದ ಮೂಲಕ ಕಡಲಬಾಳು ಹಿನ್ನೀರು ಕಾಲುವೆಗಳ ಬಳಿ ನೀರು ಹರಿದಿದೆ. ಮಳೆಯಿಂದಾಗಿ ಜಲಾಶಯದ ಗೇಟ್‌ಗಳ ಬಳಿ ನೀರು ಸಂಗ್ರಹಗೊಂಡು ಕಾಮಗಾರಿಗೆ ಅಡ್ಡಿಯಾಗದಂತೆ ತಡೆಗೋಡೆ ನಿರ್ಮಿಸಲಾಗುತ್ತಿದೆ. ಒಟ್ಟು 10 ಗೇಟ್‌ಗಳು, ಬ್ರೇಕರ್‌ಗಳು ಮತ್ತು ಗೇಟ್‌ಗಳ ಬಳಿ ನೀರು ಸೋರಿಕೆ ತಡೆಯಾಗದಂತೆ ಎಡದಂಡೆ ಮತ್ತು ಬಲದಂಡೆ ವಾಲ್‌ಗಳ ಅಳವಡಿಕೆ ಸೇರಿ ನಾನಾ ಕಾಮಗಾರಿ ಕೈಗೆತ್ತಿಕೊಳ್ಳುವುದು ಯೋಜನೆಯಲ್ಲಿದೆ.

# ಡಿಸಿಯ ಯಹೂದಿ ಮ್ಯೂಸಿಯಂನಲ್ಲಿ ಗುಂಡಿನ ದಾಳಿ

## ಇಬ್ಬರು ಇಸ್ರೇಲಿ ರಾಯಭಾರಿ ಕಚೇರಿ ಸಿಬ್ಬಂದಿ ಸಾವು | ಇಸ್ರೇಲ್ ರಾಯಭಾರ ಕಚೇರಿಗೆ ಹೆಚ್ಚಿನ ಭದ್ರತೆ

**ವಾಷಿಂಗ್ಟನ್ ಡಿಸಿ:** ಅಮೆರಿಕದ ರಾಜಧಾನಿ ವಾಷಿಂಗ್ಟನ್ ಡಿಸಿಯಲ್ಲಿರುವ ಯಹೂದಿ ಮ್ಯೂಸಿಯಂ ಮೇಲೆ ನಡೆದ ಗುಂಡಿನ ದಾಳಿಯಲ್ಲಿ, ಇಬ್ಬರು ಇಸ್ರೇಲಿ ರಾಯಭಾರಿ ಕಚೇರಿ ಸಿಬ್ಬಂದಿ ಸಾವನ್ನಪ್ಪಿದ್ದಾರೆ. ಈ ಘಟನೆ ಇಸ್ರೇಲ್ ಮತ್ತು ಅಮೆರಿಕವನ್ನು ಅಕ್ಷರಶಃ ನಡುಗಿಸಿದೆ. ಎಫ್‌ಬಿಐನ ವಾಷಿಂಗ್ಟನ್ ಫೀಲ್ಡ್ ಆಫೀಸ್ ಬಳಿ ಇರುವ ಯಹೂದಿ ವಸ್ತುಸಂಗ್ರಹಲಾಯದ ಬಳಿ, ಇಸ್ರೇಲಿ ರಾಯಭಾರಿ ಕಚೇರಿ ಸಿಬ್ಬಂದಿಯನ್ನೇ ಗುರಿಯಾಗಿಸಿಕೊಂಡು ಗುಂಡಿನ ದಾಳಿ ನಡೆಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. 2023ರಲ್ಲಿ ಚೀನಾ ರಾಜಧಾನಿ ಬೀಜಿಂಗ್‌ನಲ್ಲಿರುವ ಇಸ್ರೇಲ್ ರಾಯಭಾರ ಕಚೇರಿ ಮೇಲೆ ದಾಳಿ ಮಾಡಿ ಸಿಬ್ಬಂದಿಯನ್ನು ಚಾಕುವಿನಿಂದ ಇರಿಯಲಾಗಿತ್ತು. ಘಟನೆಯನ್ನು ಸೆಮಿಟಿಸಂ ವಿರೋಧಿ ಭಯೋತ್ಪಾದಕ ಗುಂಪಿನ ಕೃತ್ಯ ಎಂದು ಕರೆದಿರುವ ಇಸ್ರೇಲ್, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದೆ. ಘಟನೆಯ ಕುರಿತು ಮಾಹಿತಿ ನೀಡಿರುವ ಯುಎಸ್ ಹೋಮ್‌ಲ್ಯಾಂಡ್ ಸೆಕ್ಯುರಿಟಿ ಕಾರ್ಯದರ್ಶಿ ಕ್ರಿಸ್ಟಿ ನೋಮ್, ಇಸ್ರೇಲಿ ರಾಯಭಾರಿ ಕಚೇರಿ ಸಿಬ್ಬಂದಿಯನ್ನೇ ಗುರಿಯಾಗಿಸಿ ಗುಂಡಿನ ದಾಳಿ ನಡೆಸಲಾಗಿದೆ. ಘಟನೆಯಲ್ಲಿ ಇಬ್ಬರು ಇಸ್ರೇಲಿ ರಾಯಭಾರಿಗಳು ಸಾವನ್ನಪ್ಪಿದ್ದು, ಘಟನೆಯ ಕುರಿತು ತನಿಖೆ ನಡೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇನ್ನು ಗುಂಡಿನ ದಾಳಿಗೆ ಬಲಿಯಾದ ಇಬ್ಬರು ಇಸ್ರೇಲಿ ರಾಯಭಾರಿ ಕಚೇರಿ ಸಿಬ್ಬಂದಿಗಳ ಗುರುತನ್ನು ಇದುವರೆಗೂ ಬಹಿರಂಗಪಡಿಸಿಲ್ಲ. ಇದೊಂದು ಇಸ್ರೇಲ್ ವಿರೋಧಿ ಭಯೋತ್ಪಾದಕ ಗುಂಪಿನ ಕೃತ್ಯ ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ ಎಂದು ಕ್ರಿಸ್ಟಿ ನೋಮ್ ಮಾಹಿತಿ ನೀಡಿದ್ದಾರೆ.

2021ರಲ್ಲಿ ಭಾರತದ ರಾಜಧಾನಿ ಹೊಸದಿಲ್ಲಿಯಲ್ಲಿರುವ ಇಸ್ರೇಲ್ ರಾಯಭಾರ ಕಚೇರಿ ಬಳಿ ಬಾಂಬ್ ಸ್ಫೋಟ ಸಂಭವಿಸಿದ್ದನ್ನು ಇಲ್ಲಿ ಸ್ಮರಿಸಬಹುದು.



**ಅಮೆರಿಕ ಇಸ್ರೇಲ್ ಮೇಲೆ ಆಕ್ರೋಶ**

### ತಪ್ಪಿತಸ್ಥರಿಗೆ ಶಿಕ್ಷೆಯ ಭರವಸೆ

**ಇಸ್ರೇಲ್‌ನ ರಾಯಭಾರಿ ಡ್ಯಾನಿ ಡಾನನ್ ಈ ದಾಳಿಯನ್ನು ಖಂಡಿಸಿದ್ದಾರೆ. ಇದು ಸೆಮಿಟಿಸಂ ವಿರೋಧಿ ಭಯೋತ್ಪಾದಕ ಕೃತ್ಯ ಎಂದು ಅವರು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಘಟನೆಯು ಇಸ್ರೇಲ್ ಮತ್ತು ಅಮೆರಿಕದಲ್ಲಿ ತೀವ್ರ ಆಘಾತವನ್ನುಂಟು ಮಾಡಿದೆ. ತನಿಖೆ ಚುರುಕುಗೊಂಡಿದ್ದು, ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದ್ದಾರೆ. 2024ರಲ್ಲಿ ಅಮೆರಿಕದಲ್ಲಿರುವ ಭಾರತದ ರಾಯಭಾರ ಕಚೇರಿಯಲ್ಲಿ ಭಾರತದ ರಾಯಭಾರಿ ಅಧಿಕಾರಿ ನಿಗೂಢವಾಗಿ ಸಾವನ್ನಪ್ಪಿದ್ದನ್ನು ಇಲ್ಲಿ ಸ್ಮರಿಸಬಹುದು.**

ಯಹೂದಿ ವಸ್ತುಸಂಗ್ರಹಲಾಯದ ಬಳಿ ಗುಂಡಿನ ದಾಳಿ ನಡೆಯುತ್ತಿದ್ದಂತೇ, ವಾಷಿಂಗ್ಟನ್ ಡಿಸಿ ಪೊಲೀಸರು ಘಟನಾ ಸ್ಥಳಕ್ಕೆ ತಕ್ಷಣ ಧಾವಿಸಿದರು. ವಸ್ತು ಸಂಗ್ರಹಾಲಯದ ಸುತ್ತಲೂ ಭದ್ರತೆಯನ್ನು ಹೆಚ್ಚಿಸಿದ್ದಾರೆ. ಸಾಕ್ಷಿಗಳು ಮತ್ತು ಸಿಸಿಟಿವಿ ದೃಶ್ಯಗಳನ್ನು ಹುಡುಕುತ್ತಿದ್ದಾರೆ ಎಂದು ಪೊಲೀಸ್ ವಕ್ತಾರರು ತಿಳಿಸಿದ್ದಾರೆ. ವರದಿಗಳ ಪ್ರಕಾರ, ಕ್ಯಾಪಿಟಲ್ ಜ್ಯೂಯಿಷ್ ಮ್ಯೂಸಿಯಂನಲ್ಲಿ ಅಮೆರಿಕನ್ ಜ್ಯೂಯಿಷ್ ಕಮಿಟಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ಆ ಸಮಯದಲ್ಲಿ ಗುಂಡಿನ ದಾಳಿ ನಡೆದಿದೆ.

ಈ ಕುರಿತು ಮಾತನಾಡಿರುವ ಎಜೆಸಿಯ ಸಿಇಓ ಟೆಡ್ ಡ್ಯೂಚ್, ನಮ್ಮ ಆವರಣದ ಹೊರಗೆ ಹಿಂಸಾಚಾರ ನಡೆದಿದ್ದು ದುಃಖಕರ ವಾಗಿದೆ ಎಂದು ಕಂಬನಿ ಮಿಡಿದಿದ್ದಾರೆ. ಯುಎಸ್ ಅಟಾರ್ನಿ ಜನರಲ್ ಪ್ಯಾಮ್ ಬೊಂಡಿ, ಯುಎಸ್ ಅಟಾರ್ನಿ ಜೀನೀನ್ ಪಿರೊ ಅವರು ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಪೊಲೀಸ್ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಸಾರ್ವಜನಿಕರಿಗೆ ಹೆಚ್ಚಿನ ಮಾಹಿತಿ ನೀಡಲಾಗುವುದು ಎಂದು ಬೊಂಡಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ. ಅಮೆರಿಕದಲ್ಲಿ ಇಸ್ರೇಲ್ ರಾಯಭಾರಿಗಳ ಹತ್ಯೆ ಜಾಗತಿಕ ಮಟ್ಟದಲ್ಲಿ ಸುದ್ದಿಯಾಗಿದ್ದು, ಘಟನೆಯನ್ನು ಹಲವು ದೇಶಗಳು ತೀವ್ರವಾಗಿ ಖಂಡಿಸಿವೆ. ಈ ಕುರಿತು ಮತ್ತಷ್ಟು ಮಾಹಿತಿಗಳು ಲಭ್ಯವಾಗಬೇಕಿದೆ.

# ಭಾರತೀಯ ಹೈಕಮಿಷನ್ ಸಿಬ್ಬಂದಿಯನ್ನು ಉಚ್ಚಾಟಿಸಿದ ಪಾಕ್



**ಇಸ್ಲಾಮಾಬಾದ್:** ಪಾಕಿಸ್ತಾನ ಸರ್ಕಾರ ಗುರುವಾರ ಭಾರತೀಯ ಹೈಕಮಿಷನ್ ಸಿಬ್ಬಂದಿ ಯೊಬ್ಬರನ್ನು ಉಚ್ಚಾಟನೆ ಮಾಡುವುದಾಗಿ ಘೋಷಿಸಿದೆ. ಒಂದು ವಾರದಲ್ಲಿ ಎರಡನೇ ಬಾರಿಗೆ ಪಾಕಿಸ್ತಾನ ಹೈಕಮಿಷನ್‌ನಲ್ಲಿ ಕೆಲಸ ಮಾಡುತ್ತಿದ್ದ ಪಾಕಿಸ್ತಾನಿ ಅಧಿಕಾರಿಯನ್ನು ಭಾರತ ಉಚ್ಚಾಟಿಸಿತ್ತು. ಪಾಕಿಸ್ತಾನ ಕಾರ್ಯಾಚರಣೆಯ ಸಿಬ್ಬಂದಿಯನ್ನು ಅವರ ಅಧಿಕೃತ ಸ್ಥಾನಮಾನಕ್ಕೆ ಹೊಂದಿಕೆಯಾಗದ ಚಟುವಟಿಕೆಗಳಲ್ಲಿ ತೊಡಗಿದ್ದಕ್ಕಾಗಿ ವ್ಯಕ್ತಿತ್ವ ರಹಿತ ಎಂದು ಘೋ ಷಿಸಲಾಗಿದೆ, ಅವರಿಗೆ ಭಾರತವನ್ನು ತೊರೆಯಲು 24 ಗಂಟೆಗಳ ಕಾಲಾವಕಾಶ ನೀಡಲಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಮೇ 13 ರಂದು, ಬೇಹುಗಾರಿಕೆಯಲ್ಲಿ ತೊಡಗಿದ್ದಾರೆ ಎಂಬ ಆರೋಪದ ಮೇಲೆ ಭಾರತ ಮತ್ತೊಬ್ಬ ಪಾಕಿಸ್ತಾನಿ ಅಧಿಕಾರಿಯನ್ನು ಉಚಾಟಿಸಿತ್ತು. ಭಾರತದ ಕ್ರಮದ ನಂತರ, ಪಾಕಿಸ್ತಾನವು ಇಸ್ಲಾಮಾಬಾದ್‌ನಲ್ಲಿರುವ ಭಾರತೀಯ ಹೈಕಮಿಷನ್‌ನಲ್ಲಿ ನಿಯೋಜಿಸಲಾದ ಭಾರತೀಯ ಸಿಬ್ಬಂದಿಯನ್ನು ಸಹ ಉಚ್ಚಾ ಇಸ್ಲಾಮಾಬಾದ್‌ನ ಭಾರತದ ಹೈಕಮಿಷನ್‌ನ ಸಿಬ್ಬಂದಿಯೊಬ್ಬರು ತಮ್ಮ ವಿಶೇಷ ಸ್ಥಾನಮಾನಕ್ಕೆ ವಿರುದ್ಧವಾದ ಚಟುವಟಿಕೆಗಳಲ್ಲಿ ತೊಡಗಿದ್ದಕ್ಕಾಗಿ ಪಾಕಿಸ್ತಾನ ಸರ್ಕಾರ ಅವರನ್ನು ಪರ್ಸನಾ ನಾನ್ ಗ್ರಾಟಾ ಎಂದು ಘೋಷಿಸಿದೆ.

ಸಂಬಂಧಪಟ್ಟ ಅಧಿಕಾರಿಯನ್ನು 24 ಗಂಟೆಗಳ ಒಳಗೆ ಪಾಕಿಸ್ತಾನ ತೊರೆಯುವಂತೆ ನಿರ್ದೇಶಿಸಲಾಗಿದೆ ಎಂದು ವಿದೇಶಾಂಗ ಕಚೇರಿಯ ಹೇಳಿಕೆ ತಿಳಿಸಿದೆ. ಈ ನಿರ್ಧಾರವನ್ನು ತಿಳಿಸಲು ಭಾರತೀಯ ಚಾರ್ಜ್ ಡಿ ಅಫೇರ್ಸ್ ಅವರನ್ನು ವಿದೇಶಾಂಗ ಸಚಿವಾಲಯಕ್ಕೆ ಕರೆಯಲಾಗಿತ್ತು. ಭಾರತದ ಹೈಕಮಿಷನ್‌ನ ಯಾವುದೇ ರಾಜತಾಂತ್ರಿಕರು ಅಥವಾ ಸಿಬ್ಬಂದಿ ಸದಸ್ಯರು ತಮ್ಮ ಸವಲತ್ತುಗಳು ಮತ್ತು ಸ್ಥಾನಮಾನವನ್ನು ಯಾವುದೇ ರೀತಿಯಲ್ಲಿ ದುರುಪಯೋಗಪಡಿಸಿ ಕೊಳ್ಳಬಾರದು ಎಂದು ಒತ್ತಿ ಹೇಳಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

## ಇಸ್ರೇಲ್‌ನ ಮಾಜಿ ಶಾಸಕ ಮೊಶೆ ಫೀಗ್ಲಿನ್ ಆಘಾತಕಾರಿ ಹೇಳಿಕೆ

# ಗಾಜಾದಲ್ಲಿರುವ ಪ್ರತಿಯೊಂದು ಮಗುವೂ ಇಸ್ರೇಲ್‌ನ ಶತ್ರು

**ಇಸ್ರೇಲ್:** ಗಾಜಾದಲ್ಲಿರುವ ಪ್ರತಿಯೊಂದು ಮಗುವೂ, ಪ್ರತಿಯೊಂದು ಶಿಶುವೂ ನಮ್ಮ ಶತ್ರು? ಎಂದು ಇಸ್ರೇಲ್‌ನ ಮಾಜಿ ಶಾಸಕ ಮೊಶೆ ಫೀಗ್ಲಿನ್ ಆಘಾತಕಾರಿ ಹೇಳಿಕೆ ನೀಡಿದ್ದಾರೆ. ಇಸ್ರೇಲ್‌ನ ಮಾಜಿ ಶಾಸಕ ಮೊಶೆ ಫೀಗ್ಲಿನ್ ಮಾಧ್ಯಮವೊಂದರಲ್ಲಿ ಮಾತನಾಡುತ್ತಾ, ಗಾಜಾದಲ್ಲಿನ ಪ್ರತಿ ಮಗುವು ಶತ್ರು. ಗಾಜಾವನ್ನು ವಶಪಡಿಸಿ ಕೊಂಡು ಅಲ್ಲಿ ಇಸ್ರೇಲ್ ವಸಾಹತುಗಳನ್ನು ಸ್ಥಾಪಿಸಬೇಕು. ಗಾಜಾದಲ್ಲಿ ಒಂದೇ ಒಂದು ಮಗು ಕೂಡ ಇರಬಾರದು. ಇದೊಂದೇ ಪರಿಹಾರ? ಎಂದು ಹೇಳಿದ್ದಾರೆ. ಇಸ್ರೇಲ್ ಮಕ್ಕಳನ್ನು ಕೊಲ್ಲುವುದನ್ನೇ ಹವ್ಯಾಸ ಮಾಡಿಕೊಂಡಿದೆ? ಎಂದು ಇಸ್ರೇಲ್‌ನ ನಿವೃತ್ತ ಸೇನಾ ಮುಖ್ಯಸ್ಥ ಹೊಸದಾಗಿ ರೂಪುಗೊಂಡ ರಾಜಕೀಯ ಪಕ್ಷದ ದಿ ಡೆಮೋಕ್ರಾಟ್‌ಗಳ ಮುಖ್ಯಸ್ಥ ಯೈರ್ ಗೋಲನ್ ಆರೋಪಿಸಿದ ನಂತರ ಫೀಗ್ಲಿನ್ ಹೇಳಿಕೆ ನೀಡಿದ್ದಾರೆ. ಇಸ್ರೇಲ್‌ನ ನಿವೃತ್ತ ಸೇನಾ ಮುಖ್ಯಸ್ಥ ಯೈರ್ ಗೋಲನ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸರ್ಕಾರದ ಕ್ರಮಗಳನ್ನು ತೀವ್ರವಾಗಿ ಖಂಡಿಸಿದ್ದಾರೆ. 'ನಾವು ಸರಿ ದಾರಿಗೆ ಬರದಿದ್ದರೆ, ಇಸ್ರೇಲ್ ದಕ್ಷಿಣ ಆಫ್ರಿಕಾದಂತೆ ಆಗುತ್ತದೆ. ಸರಿ ಇರುವ ದೇಶವು ನಾಗರಿಕರ ವಿರುದ್ಧ ಹೋರಾಡುವುದಿಲ್ಲ. ಮಕ್ಕಳನ್ನು ಕೊಲ್ಲುವುದನ್ನು ಹವ್ಯಾಸ ಮಾಡಿಕೊಳ್ಳುವುದಿಲ್ಲ. ಜನರನ್ನು ಸ್ಥಳಾಂತರಿಸುವುದಿಲ್ಲ? ಎಂದು ಹೇಳಿದ್ದಾರೆ. ಈಗಿನ ಸರ್ಕಾರದಲ್ಲಿರುವವರು ಸೇಡು ತೀರಿಸಿಕೊಳ್ಳುವ ಮನೋಭಾವದವರಾಗಿದ್ದಾರೆ, ಅವರಿಂದ ದೇಶವನ್ನು ನಡೆಸಲು ಸಾಧ್ಯವಿಲ್ಲ ಎಂದು ಟೀಕಿಸಿದ್ದಾರೆ. ಗೋಲನ್ ಹೇಳಿಕೆಗೆ ಪ್ರಧಾನಿ ಬೆಂಜಮಿನ್ ನೆತನ್ಯಾಹು ಪ್ರತಿಕ್ರಿಯಿಸಿದ್ದು, ಗೋಲನ್ ಹೇಳಿಕೆಗಳು ಪ್ರಚೋದನೆಯಾಗಿದ್ದು, ಸುಳ್ಳು ಆರೋಪ. ನಮ್ಮ ಸೈನಿಕರು ವೀರರಂತೆ ಹೋರಾಡುತ್ತಿದ್ದಾರೆ. ಇಸ್ರೇಲ್ ಜಗತ್ತಿನಲ್ಲೇ ಅತ್ಯಂತ ನೈತಿಕ ಸೈನ್ಯವನ್ನು ಹೊಂದಿದೆ ಎಂದು ಸಮರ್ಥಿಸಿ ಕೊಂಡಿದ್ದಾರೆ.

**ಮಕ್ಕಳನ್ನು ಕೊಲ್ಲುವುದೇ ಇಸ್ರೇಲ್ ಹವ್ಯಾಸ**

ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ದಾಳಿ ಹೆಚ್ಚಾಗಿದೆ. ಕಳೆದ ನಾಲ್ಕು ದಿನಗಳಲ್ಲಿ 600ಕ್ಕೂ ಹೆಚ್ಚು ಪ್ಯಾಲೆಸ್ಟೀನಿಯನ್ನರು ಮೃತಪಟ್ಟಿದ್ದಾರೆ. ಇದರಿಂದಾಗಿ ಇಸ್ರೇಲ್‌ನ ಮಿಲಿಟರಿ ಕ್ರಮಗಳ ಬಗ್ಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಟೀಕೆಗಳು ಹೆಚ್ಚಾಗಿವೆ. ಬ್ರಿಟನ್ ಇಸ್ರೇಲ್‌ನೊಂದಿಗೆ ವ್ಯಾಪಾರ ಮಾತುಕತೆಯನ್ನು ಸ್ಥಗಿತಗೊಳಿಸಿದೆ. ಗಾಜಾಕ್ಕೆ ನೆರವು ತಲುಪಿಸುವುದನ್ನುತಡೆಯಲಾಗಿದೆ. ಇದರಿಂದ ಅಲ್ಲಿ ಆಹಾರದ ಕೊರತೆ ಉಂಟಾಗಿದೆ. ಇಸ್ರೇಲ್ ಗಾಜಾ ಪಟ್ಟಿಯ ಮೇಲೆ ದಾಳಿಯನ್ನು ತೀವ್ರಗೊಳಿಸಿದೆ. ಹಮಾಸ್ ಅನ್ನು ಸೋಲಿಸಲು, ಉಳಿದ ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು ಗಾಜಾವನ್ನು ವಶಪಡಿಸಿಕೊಳ್ಳುವುದಾಗಿ ನೆತನ್ಯಾಹು ಹೇಳಿದ್ದಾರೆ. ಗಾಜಾದಲ್ಲಿನ ಆಸ್ಪತ್ರೆಗಳ ಮುಖ್ಯಸ್ಥ ಡಾ. ಮಾರ್ವಾನ್ ಅಲ್-ಹಮ್ಸ್ ಪ್ರಕಾರ, ಕಳೆದ ನಾಲ್ಕು ದಿನಗಳಲ್ಲಿ 600ಕ್ಕೂ ಹೆಚ್ಚು ಪ್ಯಾಲೆಸ್ಟೀನಿಯನ್ನರು ಮೃತಪಟ್ಟಿದ್ದಾರೆ. ಪ್ಯಾಲೆ ಸ್ಟೀನ್ ಆರೋಗ್ಯ ಸಚಿವಾಲಯದ ಪ್ರಕಾರ, ಅಕ್ಟೋಬರ್ 7 ರಂದು ಇಸ್ರೇಲ್ ದಾಳಿ ಆರಂಭಿಸಿದಾಗಿನಿಂದ ಸುಮಾರು 53 ಸಾವಿರ ಜನರು ಮೃತಪಟ್ಟಿದ್ದಾರೆ. ಅನೇಕರು ಗಾಯಗೊಂಡಿದ್ದಾರೆ. ಇಸ್ರೇಲ್‌ನ ಕ್ರಮ ಗಳಿಂದ ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು ಸಾಧ್ಯವಿಲ್ಲ ಎಂದು ಬ್ರಿಟನ್ ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ಹೇಳಿದ್ದಾರೆ.



ಗಾಜಾಕ್ಕೆ ಮಾನವೀಯ ನೆರವು ತಲುಪಿಸುವುದನ್ನು ನಿಲ್ಲಿಸದಂತೆ ಇಸ್ರೇಲ್‌ಗೆ ಒತ್ತಾಯಿಸಿದ್ದಾರೆ. ಅಂತಾರಾಷ್ಟ್ರೀಯ ಒತ್ತಡದಿಂದಾಗಿ ಐದು UN ನೆರವಿನ ಟ್ರಕ್‌ಗಳನ್ನು ಗಾಜಾಕ್ಕೆ ಕಳುಹಿಸಲಾಗಿದೆ. ಮಾ. 2 ರಿಂದ ನೆರವು ತಡೆಯಲಾಗಿದೆ. ಆಹಾರ, ಔಷಧಿ, ಅಗತ್ಯ ವಸ್ತುಗಳ ಕೊರತೆಯಿಂದಾಗಿ ಗಾಜಾದಲ್ಲಿ ಲಕ್ಷಾಂತರ ಜನರು ತೊಂದರೆ ಅನುಭವಿಸುತ್ತಿದ್ದಾರೆ.


### ಸಾಕಷ್ಟು ಚರ್ಚೆ ಹುಟ್ಟು ಹಾಕಿದೆ

**ಗಾಜಾದಲ್ಲಿರುವ ಪ್ರತಿಯೊಂದು ಮಗುವೂ, ಪ್ರತಿಯೊಂದು ಶಿಶುವೂ ನಮ್ಮ ಶತ್ರು. ಗಾಜಾವನ್ನು ವಶಪಡಿಸಿಕೊಂಡು ಅಲ್ಲಿ ಇಸ್ರೇಲ್ ವಸಾಹತುಗಳನ್ನು ಸ್ಥಾಪಿಸಬೇಕು ಎಂದು ಇಸ್ರೇಲ್‌ನ ಮಾಜಿ ಶಾಸಕ ಮೊಶೆ ಫೀಗ್ಲಿನ್ ಆಘಾತಕಾರಿ ಹೇಳಿಕೆ ನೀಡಿದ್ದಾರೆ. 'ಇಸ್ರೇಲ್ ಮಕ್ಕಳನ್ನು ಕೊಲ್ಲುವುದನ್ನೇ ಹವ್ಯಾಸ ಮಾಡಿಕೊಂಡಿದೆ ಎಂದು ಇಸ್ರೇಲ್‌ನ ನಿವೃತ್ತ ಸೇನಾ ಮುಖ್ಯಸ್ಥ ಮತ್ತು ಹೊಸದಾಗಿ ರೂಪುಗೊಂಡ ರಾಜಕೀಯ ಪಕ್ಷದ ದಿ ಡೆಮೋಕ್ರಾಟ್‌ಗಳ ಮುಖ್ಯಸ್ಥ ಯೈರ್ ಗೋಲನ್ ಆರೋಪಿಸಿದ ನಂತರ ಫೀಗ್ಲಿನ್ ಹೇಳಿಕೆ ನೀಡಿದ್ದಾರೆ. ಈ ಆಘಾತಕಾರಿ ಹೇಳಿಕೆ ವಿಶ್ವದಲ್ಲಿ ಸಾಕಷ್ಟು ಚರ್ಚೆ ಹುಟ್ಟು ಹಾಕಿದೆ.**

# ಇ.ಡಿ.ವಿರುದ್ಧ ಸುಪ್ರೀಂಕೋರ್ಟ್ ಕಿಡಿ

**ನವದೆಹಲಿ** ಇತ್ತೀಚಿನ ದಿನಗಳಲ್ಲಿ ಜಾರಿ ನಿರ್ದೇಶನಾಲಯ ( ಇಡಿ ) ಎಲ್ಲಾ ಮಿತಿ ಗಳನ್ನು ದಾಟುತ್ತಿದೆ. ಇದರಿಂದಾಗಿ ಒಕ್ಕೂಟ ವ್ಯವಸ್ಥೆಯ ರಚನೆಯನ್ನು ಉಲ್ಲಂಘಿಸುತ್ತಿದೆ ಎಂದು ಸುಪ್ರೀಂಕೋರ್ಟ್ ಕಿಡಿ ಕಾರಿದೆ. ತಮಿಳುನಾಡಿನ ಸರ್ಕಾರಿ ಸ್ವಾಮ್ಯದ ಮದ್ಯ ಸಂಸ್ಥೆ ಟಾಸ್ಮಾಕ್ ವಿರುದ್ಧ ಜಾರಿ ನಿರ್ದೇಶನಾಲಯ ನಡೆಸು ತ್ತಿದ್ದ ತನಿಖೆ, ದಾಳಿಗಳಿಗೆ ಸುಪ್ರೀಂ ಕೋರ್ಟ್ ತೀವ್ರ ಕಿಡಿಕಾರಿದ್ದು, ತಾತ್ಕಾಲಿಕ ತಡೆ ನೀಡಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ಇ.ಡಿ ವರ್ತನೆಯನ್ನು ಕಟು ಶಬ್ದಗಳಲ್ಲಿ ಖಂಡನೆ ಮಾಡಿದರು. ಕಾನೂನು, ಸುವ್ಯವಸ್ಥೆ ರಾಜ್ಯ ವಿಷಯವಾಗಿರುವುದರಿಂದ ಇಡಿಯ ಕ್ರಮಗಳು ಅಸಾಂವಿಧಾನಿಕವಾಗಿದೆ. ಇತ್ತೀಚಿಗೆ ಇಡಿ ಎಲ್ಲಾ ಮಿತಿಗಳನ್ನು ದಾಟುತ್ತಿದೆ ಮತ್ತು ರಾಜ್ಯ ನಿಗಮವನ್ನು ಗುರಿಯಾಗಿಸಿಕೊಂಡು ಒಕ್ಕೂಟ ಫೆಡರಲ್ ರಚನೆಯನ್ನು ಉಲ್ಲಂಘಿಸುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.



ಮದ್ರಾಸ್ ಹೈಕೋರ್ಟ್‌ನ ಆದೇಶದ ವಿರುದ್ಧ ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ ನಂತರ ಈ ಆದೇಶ ಬಂದಿದೆ. ಏಪ್ರಿಲ್ 23ರಂದು ಮದ್ರಾಸ್ ಹೈಕೋರ್ಟ್ ಇ.ಡಿ ತನಿಖೆ ಮುಂದುವರಿಸಲು ಅವಕಾಶ ನೀಡಿದ ನಂತರ ಈ ಮೇಲನವಿ ಸಲ್ಲಿಸಲಾಗಿತ್ತು. ತಮಿಳುನಾಡಿನಲ್ಲಿ 1,000 ಕೋಟಿ ರೂಪಾಯಿಗಳ ಮದ್ಯ ಹಗರಣ ನಡೆದಿದೆ ಎಂದು ಇ.ಡಿ ಆರೋಪಿಸಿದೆ, ಅಲ್ಲಿ ಡಿಸ್ಟಿಲರಿಗಳು ಮದ್ಯ ಪೂರೈಕೆ ಆದೇಶಗಳನ್ನು ಪಡೆಯಲು ಲೆಕ್ಕವಿಲ್ಲದ ಹಣವನ್ನು ನೀಡಿವೆ. ಆದಾಗ್ಯೂ, ತಮಿಳುನಾಡು ಸರ್ಕಾರವು 2014 ರಿಂದ 2021 ರವರೆಗೆ ವಿಜಿಲೆನ್ಸ್ ಮತ್ತು ಭ್ರಷ್ಟಾಚಾರ ನಿಗ್ರಹ ನಿರ್ದೇಶನಾಲಯದ ಮೂಲಕ ವೈಯಕ್ತಿಕ ಔಟ್‌ಲೆಟ್ ನಿರ್ವಾಹಕರ ವಿರುದ್ಧ 41 ಎಫ್‌ಐಆರ್ ಗಳನ್ನು ದಾಖಲಿಸಿದೆ ಎಂದು ಸುಪ್ರೀಂಕೋರ್ಟ್‌ಗೆ ತಿಳಿಸಿದೆ. ಟಾಸ್ಮಾಕ್ ಮೇಲಿನ ಇಡಿ ದಾಳಿಗಳ ಕುರಿತು ತಮಿಳುನಾಡು ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಮೊಕದ್ದಮೆ ಹೂಡಿದ್ದು, ಇದು ಕೇಂದ್ರ ಸಂಸ್ಥೆಯ ಅಧಿಕಾರವನ್ನು ಅತಿಕ್ರಮಿಸಿದೆ ಮತ್ತು ಸಂವಿಧಾನದ ಉಲ್ಲಂಘನೆಯಾಗಿದೆ ಎಂದು ಹೇಳಿದೆ. ತಮಿಳುನಾಡು ಕೂಡ ಇಡಿ ರಾಜಕೀಯ ದ್ವೇಷದ ಕೃತ್ಯ ಎಂದು ಆರೋಪಿಸಿದೆ, ದಾಳಿಗಳು ಕಾನೂನುಬಾಹಿರ ಎಂದು ಪ್ರತಿಪಾದಿಸಿದೆ. ಮಾ. 14, ಮೇ 16ರಂದು ನಡೆದ ದಾಳಿಗಳಲ್ಲಿ ಸಂಸ್ಥೆಯ ಹಲವಾರು ಮೊಬೈಲ್ ಫೋನ್ ಗಳನ್ನು ವಶಪಡಿಸಿಕೊಂಡು ಮುಚ್ಚಲಾಗಿದೆ ಎಂದು ಹಿರಿಯ ವಕೀಲ ಕಪಿಲ್ ಸಿಬಲ್ ನ್ಯಾಯಾಲಯಕ್ಕೆ ತಿಳಿಸಿದ ನಂತರ ಜಾರಿ ನಿರ್ದೇಶನಾಲಯದ ಕಾರ್ಯವೈಖರಿಯನ್ನು ಕಟುವಾಗಿ ಟೀಕಿಸಿದೆ.

ರಾಜ್ಯದಲ್ಲಿ ಮದ್ಯ ವ್ಯಾಪಾರದ ಮೇಲೆ ಏಕಸ್ವಾಮ್ಯ ಹೊಂದಿರುವ ತಮಿಳುನಾಡು ರಾಜ್ಯ ಮಾರ್ಕೆಟಿಂಗ್ ಕಾರ್ಪೊರೇಷನ್ ಲಿಮಿಟೆಡ್. 1,000 ಕೋಟಿ ರೂ. ಮೌಲ್ಯದ ಲೆಕ್ಕವಿಲ್ಲದ ನಗದು ಪತ್ತೆಯಾಗಿದೆ.

ನಿರ್ದಿಷ್ಟವಾಗಿ ಹೇಳುವುದಾದರೆ, ಕಾರ್ಪೊರೇಟ್ ಪೋಸ್ಟಿಂಗ್‌ಗಳು, ಸಾರಿಗೆ ಮತ್ತು ಬಾರ್ ಪರವಾನಗಿ ಟೆಂಡರ್‌ಗಳಿಗೆ ಸಂಬಂಧಿಸಿದ ಆಪಾದಿತ ದತ್ತಾಂಶಗಳು ಹಾಗೂ ಕೆಲವು ಡಿಸ್ಟಿಲರಿಗಳಿಗೆ ಅನುಕೂಲಕರ ಇಂಡೆಂಟ್ ಆದೇಶಗಳು ಕಂಡುಬಂದಿವೆ. ಅಧಿಕಾರಿಗಳ ಪಾಲುದಾರಿಕೆಯೊಂದಿಗೆ ಔಟ್ ಲೆಟ್ ಮಳಿಗೆಗಳು ಮಾರಾಟ ಮಾಡುವ ಪ್ರತಿ ಬಾಟಲಿಗೆ 10ರಿಂದ 30 ರೂ. ಗಳವರೆಗೆ ಹೆಚ್ಚುವರಿ ಶುಲ್ಕವನ್ನು ವಿಧಿಸಲಾಗಿದ್ದ ವಂಚನೆಯ ಬೆಲೆಗಳ ಬಗ್ಗೆ ಪುರಾವೆಗಳು ಸಹ ಇದ್ದವು ಎಂದು ಇ.ಡಿ ಹೇಳಿದೆ.

# ಸಿಂಧೂರ ಅಳಿಸಿದವರನ್ನು ಮಣ್ಣಲ್ಲಿ ಮುಚ್ಚಿದ್ದೇವೆ: ಮೋದಿ

**ಬಿಕನೇರ್:** ಜಮ್ಮು, ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ನರಮೇಧಕ್ಕೆ ಪ್ರತೀಕಾರವಾಗಿ ಭಾರತೀಯ ಸೇನಾ ಪಡೆ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಕೇವಲ 22 ನಿಮಿಷದಲ್ಲಿ ಸೇಡು ತೀರಿಸಿಕೊಂಡಿದ್ದೇವೆ ಎಂದು ಪ್ರಧಾನಿ ನರೇಂದ್ರಮೋದಿ ಕೊಂಡಾಡಿದ್ದಾರೆ. ಪಾಕಿಸ್ತಾನ ಹಾಗೂ ಪಿಓಕೆ ಮೇಲೆ ನಡೆದ ಆಪರೇಷನ್ ಸಿಂಧೂರ್ ನಂತರ ರಾಜಸ್ಥಾನದ ಬಿಕನೇರ್‌ನಲ್ಲಿ ಮಾತನಾಡಿದ ಮೋದಿ ಅವರು, ಏ.22ರ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತವು 22 ನಿಮಿಷದಲ್ಲೇ ಸೇಡು ತೀರಿಸಿಕೊಂಡಿದೆ. ಇದು ನಮ ಸೇನಾ ಪಡೆಯ ತಾಕತ್ತು ಎಂದು ಬಣ್ಣಿಸಿದರು. ಏ.22ರ ದಾಳಿಗೆ ಪ್ರತಿಯಾಗಿ ನಾವು ಭಯೋತ್ಪಾದಕರ 9 ಅಡಗುತಾಣಗಳನ್ನು 22 ನಿಮಿಷದಲ್ಲಿ ನಾಶಪಡಿಸಿದೆವು.



ಸಿಂಧೂರವು ಪುಡಿಯಾಗಿ ಬದಲಾದರೆ ಏನಾಗುತ್ತದೆ ಎಂಬುದಕ್ಕೆ ವಿಶ್ವಕ್ಕೆ, ನಮ್ಮ ಶತ್ರುಗಳಿಗೆ ತೋರಿಸಿದ್ದೇವೆ ಎಂದು ಸೇನಾಪಡೆಯ ಕಾರ್ಯಾಚರಣೆ ಬಗ್ಗೆ ಕೊಂಡಾಡಿದರು. ನನ್ನ ರಕ್ತನಾಳಗಳಲ್ಲಿ ಕುದಿಯುತ್ತಿರುವುದು ರಕ್ತವಲ್ಲ. ಅದು ಸಿಂಧೂರ ಎಂದು ಮೋದಿ ಹೇಳುತ್ತಿದ್ದಂತೆ ಜನಸ್ತೋಮದಿಂದ ಮೋದಿ.. ಮೋದಿ.. ಎಂಬ ಜೈಕಾರದ ಘೋಷಣೆಗಳು ಮೊಳಗಿದವು. ಏ.22ರಂದು ನಮ್ಮ ಸಹೋದರಿಯರ ಧರ್ಮವನ್ನು ಕೇಳಿ ಭಯೋತ್ಪಾದಕರು ಅಮಾನುಷವಾಗಿ ಪ್ರವಾಸಿಗರನ್ನು ಕೊಂದು ಹಾಕಿದರು. ಅವರ ಹಣೆಯಲ್ಲಿದ್ದ ಸಿಂಧೂರವನ್ನು ಅಳಿಸಿ ಹಾಕಿದ್ದಕ್ಕೆ 140 ಕೋಟಿ ಭಾರತೀಯರು ಕಣ್ಣೀರು ಹಾಕಿದರು. ನಾವು ಅದೇ ಸಿಂಧೂರದ ಮೂಲಕವೇ ಭಯೋತ್ಪಾದಕರಿಗೆ ಮುಟ್ಟಿ ನೋಡಿಕೊಳ್ಳುವಂತೆ ಮಾಡಿದ್ದೇವೆ. ಭಾರತದ ತಂಟೆಗೆ ಬರುವ ಮುನ್ನ ನೂರು ಬಾರಿ ಯೋಚಿಸಿ ಎಂದು ಪಾಕ್‌ಗೆ ಎಚ್ಚರಿಕೆ ಕೊಟ್ಟರು.

ವಾಯುಸೇನೆ, ನೌಕಾಸೇನೆ, ಭೂಸೇನೆಗಳಿಗೆ ನಾವು ಮುಕ್ತ ಸ್ವಾತಂತ್ರ್ಯ ನೀಡಿದ್ದೇವೆ. ಸಿಂಧೂರವನ್ನು ಅಳಿಸಿ ಹಾಕಿದ ಪಾತಕಿಗಳನ್ನು ನೆಲದಲ್ಲೇ ಹೂತುಹಾಕಿ ಎಂದು ಹೇಳಿದ್ದೆವು. ಅದರಂತೆ ಸಶಸ್ತ್ರ ಪಡೆಗಳು ಅದೇ ಕೆಲಸವನ್ನು ಮಾಡಿವೆ ಎಂದು ಪ್ರಸಂಶಿಸಿದರು. ಸಿಂಧೂರವನ್ನು ಅಳಿಸಲು ಹೊರಟವರಿಗೆ ಸೇನಾಪಡೆ ತಕ್ಕ ಶಾಸ್ತಿ ಮಾಡಿದೆ. ಭಾರತದಲ್ಲಿ ರಕ್ತ ಚೆಲ್ಲುವವರ ಆಟ ಮುಗಿದಿದೆ. ಭಾರತವು ನಮ್ಮ ಆಟವನ್ನು ನೋಡಿ ಮೌನವಾಗಿರುತ್ತದೆ ಎಂದು ಕೊಂಡವರಿಗೆ ಮುಟ್ಟಿ ನೋಡಿಕೊಳ್ಳುವ ಹಾಗೆ ಪಾಠ ಕಲಿಸಿದ್ದೇವೆ. ಇದು ನಮ್ಮ ಸೇನಾ ಪಡೆಯ ತಾಕತ್ತು. ಇಡೀ ವಿಶ್ವವೇ ಆಪರೇಷನ್ ಸಿಂಧೂರವನ್ನು ಕೊಂಡಾಡುತ್ತಿದೆ ಎಂದರು.

ಭಾರತವು ಎಲ್ಲದಕ್ಕೂ ಮೌನವಾಗಿರುತ್ತದೆ ಎಂದವರಿಗೆ ಉತ್ತರ ಕೊಟ್ಟಿದ್ದೇವೆ. ತಮ್ಮ ಶಸ್ತ್ರಾಸ್ತ್ರ ಬಗ್ಗೆಯ ಹೆಮ್ಮೆ ಪಡೆದುತ್ತಿದ್ದವರು ಇಂದು ಅದರ ಅವಶೇಷಗಳಲ್ಲೇ ಹೂತುಹೋಗಿದ್ದಾರೆ. ಜನದಲ್ಲೂ ಅವರು ನಮ್ಮ ಕಡೆ ಬರಲು ಹಲವು ಬಾರಿ ಯೋಚಿಸುವಂತಾಗಿದೆ. ನಾವು ಯಾವುದೇ ರಾಷ್ಟ್ರದ ಪರಮಾಣುಗಳಿಗೆ ಹೆದರುವುದಿಲ್ಲ. ಹಾಗಂತ ಪರಿಸ್ಥಿತಿ ಕೈ ಮೀರಿದರೆ ಸುಮನೆ ಕೂರುವುದಿಲ್ಲ. ಕ್ರಿಯೆಗೆ ಪ್ರತಿಕ್ರಿಯೆ ಇರುತ್ತದೆ ಎಂದು ಮೋದಿಯವರು ಪರೋಕ್ಷವಾಗಿ ಶತ್ರು ರಾಷ್ಟ್ರಕ್ಕೆ ಎಚ್ಚರಿಕೆ ಕೊಟ್ಟರು.

# ಕಾಶ್ಮೀರದಲ್ಲಿ ಮತ್ತಿಬ್ಬರು ಉಗ್ರರು ಫಿನಿಷ್

**ಶ್ರೀನಗರ:** ಕಣಿವೆ ರಾಜ್ಯ, ಜಮು, ಕಾಶ್ಮೀರದ ಸಿಂಗ್‌ಪೋರಾ ಚತ್ರೂದಲ್ಲಿ ನಡೆದ ಎನ್ ಕೌಂಟರ್‌ನಲ್ಲಿ ಇಬ್ಬರು ಭಯೋತ್ಪಾದಕರನ್ನು ಭಾರತೀಯ ಸೇನಾ ಪಡೆ ಹೊಡೆದುರುಳಿಸಿದೆ. ಈ ಪ್ರದೇಶದಲ್ಲಿ ಇನ್ನೂ ಕೆಲವು ಉಗ್ರರು ಅಡಗಿರಬಹುದೆಂಬ ಶಂಕೆಯ ಹಿನ್ನೆಲೆ ಯಲ್ಲಿ ಶೋಧ ಕಾರ್ಯವನ್ನು ಮುಂದುವರೆಸಲಾಗಿದೆ. ಕಿಶಾತ್ವರ್ ಜಿಲ್ಲೆಯ ಚತ್ರೂವಿನ ಸಿಂಗ್‌ಪೋರಾ ಪ್ರದೇಶದಲ್ಲಿ ಭದ್ರತಾ ಪಡೆ, ಭಯೋತ್ಪಾದಕರ ನಡುವೆ ನಡೆದ ಎನ್‌ಕೌಂಟರ್ ವೇಳೆ ಇಬ್ಬರನ್ನು ಹತ್ಯೆ ಗೈಯ್ಯುವಲ್ಲಿ ಸೇನಾ ಪಡೆ ಯಶಸ್ವಿಯಾಗಿದೆ.



ಆಪರೇಷನ್ ಟ್ರಾಶಿ ಎಂಬ ಹೆಸರನಡಿ ಹೊಂದಿರುವ ಈ ಜಂಟಿ ಕಾರ್ಯಾಚರಣೆಯಲ್ಲಿ ಭಯೋತ್ಪಾದಕರನ್ನು ತಟಸ್ಥಗೊಳಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ಸೇನೆಯ ವೈಟ್ ನೈಟ್ ಕಾರ್ಪ್ಸ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಸಿಂಗ್‌ಪೋರಾ ಚಟ್ರುದಲ್ಲಿ ಎರಡು ಪ್ಯಾರಾ ಎಸ್‌ಎಫ್, ಸೇನೆಯ 11 ಆರ್ ಆರ್, 7 ನೇ ಅಸ್ಸಾಂ ರೈಫಲ್ಸ್, ಎಸ್‌ಒಜಿ ಕಿಶಾತ್ವರ್ ಪಡೆಗಳು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದ ನಂತರ ಬೆಳಿಗ್ಗೆ 7 ಗಂಟೆ ಸುಮಾರಿಗೆ ಎನ್‌ಕೌಂಟರ್ ಪ್ರಾರಂಭವಾಯಿತು., ಭದ್ರತಾ ಪಡೆಗಳು ಈ ಪ್ರದೇಶದಲ್ಲಿ ಮೂರರಿಂದ ನಾಲ್ಕು ಭಯೋತ್ಪಾದಕರ ಗುಂಪನ್ನು ಹಿಡಿದಿಟ್ಟುಕೊಂಡಿವೆ ಎಂದು ಹೇಳಲಾಗಿದ್ದು, ಅವರಲ್ಲಿ ಇಬ್ಬರು ಈಗ ಸಾವನ್ನಪ್ಪಿದ್ದಾರೆ. ಒಂದು ವಾರದ ಹಿಂದೆ ಜಮ್ಮು, ಕಾಶ್ಮೀರದ ಪುಲ್ವಾಮಾ ಜಿಲ್ಲೆಯ ಟ್ರಾಲ್ ಪ್ರದೇಶದ ನಾದಿರ್ ಗ್ರಾಮದಲ್ಲಿ ಪ್ರತ್ಯೇಕ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳಲ್ಲಿ ಮೂವರು ಜೈಶ್-ಎ-ಮೊಹಮದ್ ಭಯೋತ್ಪಾದಕರನ್ನು ನಿರ್ನಾಮ ಮಾಡಿದ ನಂತರ ಭದ್ರತಾ ಪಡೆಗಳ ಜಂಟಿ ತಂಡವು ಇಂದಿನ ಕಾರ್ಯಾಚರಣೆಯನ್ನು ನಡೆಸಿದೆ.

ಎನ್‌ಕೌಂಟರ್ ನಲ್ಲಿ ಹತರಾದ ಮೂವರು ಭಯೋತ್ಪಾದಕರನ್ನು ಆಸಿಫ್ ಅಹದ್ ಶೇಖ್, ಅಮೀರ್ ನಜೀರ್ ವಾನಿ, ಯಾವರ್ ಅಹದ್ ಭಟ್ ಎಂದು ಗುರುತಿಸಲಾಗಿದ್ದು, ಎಲ್ಲರೂ ಜಮ್ಮು, ಕಾಶ್ಮೀರದ ಪುಲ್ವಾಮಾ ಜಿಲ್ಲೆಯ ನಿವಾಸಿಗಳು. ಏತನಧ್ಯೆ, ಕಳೆದ ವಾರ ಶೋಪಿಯಾನ್‌ನ ಕೆಲ್ಲರ್ ಪ್ರದೇಶದಲ್ಲಿ, ಗುರುವಾರ ಪುಲ್ವಾಮಾದ ಟ್ರಾಲ್‌ನ ನಾಡರ್ ಪ್ರದೇಶದಲ್ಲಿ ಎನ್‌ಕೌಂಟರ್ ಗಳು ನಡೆದಿವೆ. ಏಪ್ರಿಲ್ 22ರಂದು 26 ನಾಗರೀಕರ ಜೀವವನ್ನು ಬಲಿ ಪಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ದಕ್ಷಿಣ ಕಾಶೀರದ ಕೆಲವು ಭಾಗಗಳಲ್ಲಿ ಭದ್ರತಾ ಪ್ರಯತ್ನಗಳನ್ನು ಹೆಚ್ಚಿಸಿದ ಮಧ್ಯೆ ಈ ಕಾರ್ಯಾಚರಣೆಗಳು ನಡೆಯುತ್ತಿವೆ.

# ಭಾರತ-ಪಾಕಿಸ್ತಾನ ಜಗಳ ಬಿಡಿಸಿದ್ದು ನಾನೇ

## ದಕ್ಷಿಣ ಆಫ್ರಿಕಾ ಅಧ್ಯಕ್ಷರ ಮುಂದೆಯೂ ಡೊನಾಲ್ಡ್ ಟ್ರಂಪ್ ಬಿಲ್ಡಪ್

**ವಾಷಿಂಗ್ಟನ್ ಡಿಸಿ:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಶ್ರೇಷ್ಠತೆಯ ವ್ಯಸನ ಅಂಟಿಕೊಂಡಂತಿದೆ. ತಾನೇ ಶ್ರೇಷ್ಠ ಉಳಿದವರೆಲ್ಲಾ ಕನಿಷ್ಠ ಎಂಬ ಅವರ ನಡುವಳಿಕೆ ಕೆಲವೊಮ್ಮೆ ಅಮೆರಿಕರನ್ನೂ ಮುಜುಗರಕ್ಕೀಡು ಮಾಡುತ್ತದೆ. ಭಾರತ- ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದದಲ್ಲಿ ತಮ್ಮ ಪಾತ್ರವಿದೆ ಎಂದು ವಾದಿಸುತ್ತಲೇ ಇರುವ ಡೊನಾಲ್ಡ್ ಟ್ರಂಪ್, ಉಭಯ ರಾಷ್ಟ್ರಗಳ ನಡುವೆ ಶಾಂತಿ ಸ್ಥಾಪಿಸಿದ್ದು ನಾನೇ ಎಂದು ಹೇಳಿಕೊಂಡು ತಿರುಗಾಡುತ್ತಿದ್ದಾರೆ. ಅಮೆರಿಕಕ್ಕೆ ಭೇಟಿ ನೀಡಿರುವ ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಪೋಸಾ ಅವರೊಂದಿಗಿನ ಮಾತುಕತೆ ವೇಳೆಯೂ, ಡೊನಾಲ್ಡ್ ಟ್ರಂಪ್ ಅವರು ಭಾರತ-ಪಾಕಿಸ್ತಾನ ನಡುವಿನ ಸಂಘರ್ಷ ವಾತಾ ವರಣವನ್ನು ಉಲ್ಲೇಖಿಸಿದ್ದಾರೆ. ಅಲ್ಲದೇ ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಒಪ್ಪಂದವೇ ಮಾರ್ಪಡಲು ನಮ್ಮ ಆಡಳಿತವೇ ಕಾರಣ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

- ದಕ್ಷಿಣ ಆಫ್ರಿಕಾ ಅಧ್ಯಕ್ಷರೊಂದಿಗಿನ ಮಾತುಕತೆಯಲ್ಲಿ ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಪ್ರಸ್ತಾಪ
- ಅಮೆರಿಕದ ಸಕಾಲಿಕ ಮಧ್ಯಪ್ರವೇಶದಿಂದ ಭಾರತ-ಪಾಕಿಸ್ತಾನ ಪರಮಾಣು ಯುದ್ಧ ತಪ್ಪಿತು ಎಂದ ಡೊನಾಲ್ಡ್ ಟ್ರಂಪ್

ಸಿರಿಲ್ ರಾಮಪೋಸಾ ಅವರೊಂದಿಗಿನ ಮಾತುಕತೆಯಲ್ಲಿ ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಉಲ್ಲೇಖಿಸಿದ ಡೊನಾಲ್ಡ್ ಟ್ರಂಪ್, ನಮ್ಮ ಸಕಾಲಿಕ ಮಧ್ಯಪ್ರವೇಶದಿಂದ ಉಭಯ ರಾಷ್ಟ್ರಗಳ ನಡುವಿನ ಸಂಭಾವ್ಯ ಪರಮಾಣುಯುದ್ಧದ ಆತಂಕ ದೂರವಾಯಿತು ಎಂದು ಹೇಳಿದ್ದಾರೆ.



**ಟ್ರಂಪ್ ಹೇಳಿದ್ದೇನು?:** ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಪೋಸಾ ಅವರೊಂದಿಗೆ ಓವಲ್ ಕಚೇರಿಯಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ನಾವು ಪಾಕಿಸ್ತಾನ ಮತ್ತು ಭಾರತದೊಂದಿಗೆ ಏನು ಮಾಡಿದ್ದೇವೆ ಎಂಬುದನ್ನು ನೀವು ನೋಡಿದರೆ, ನಾವು ಆ ಇಡೀ ವಿಷಯವನ್ನು ವ್ಯಾಪಾರದ ಮೂಲಕ ಇತ್ಯರ್ಥಪಡಿಸಿಕೊಂಡಿದ್ದೇವೆ. ನಾವು ಭಾರತ ಮತ್ತು ಪಾಕಿಸ್ತಾನದೊಂದಿಗೆ ದೊಡ್ಡ ವ್ಯಾಪಾರ ಒಪ್ಪಂದವನ್ನು ಮಾಡುತ್ತಿದ್ದೇವೆ. ಮುಂದುವರೆದು, ಭಾರತ-ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದ ಜಾರಿಯಾಗುವಲ್ಲಿ ಅಮೆರಿಕದ ಪಾತ್ರವಿದೆ. ಪಾಕಿಸ್ತಾನವು ಕೆಲವು ಅತ್ಯುತ್ತಮ ಜನರನ್ನು ಮತ್ತು ನಿಜವಾಗಿಯೂ ಒಳ್ಳೆಯ ನಾಯಕರನ್ನು ಹೊಂದಿದೆ. ಅದೇ ರೀತಿ ಭಾರತ ನಮ್ಮ ಸ್ನೇಹಿರಾಷ್ಟ್ರವಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ದಕ್ಷಿಣ ಆಫ್ರಿಕಾದೊಂದಿಗಿನ ಅಮೆರಿಕದ ವ್ಯಾಪಾರ ಸಂಬಂಧ ಅಷ್ಟೇನೂ ಸುಮಧುರವಾಗಿಲ್ಲ. ಹೊಸ ಸುಂಕ ನೀತಿಯನ್ವಯ ಅಮೆರಿಕವು ದಕ್ಷಿಣಾ ಆಫ್ರಿಕಾದ ಸರಕುಗಳ ಮೇಲೆ ಶೇ. 31ರಷ್ಟು ಸುಂಕವನ್ನು ವಿಧಿಸುತ್ತಿದೆ. ಇದರ ಹೊರತಾಗಿ ದಕ್ಷಿಣ ಆಫ್ರಿಕಾದಲ್ಲಿ ನಡೆಯುತ್ತಿದೆ ಎನ್ನಲಾದ ಬಿಳಿಯರ ಮೇಲಿನ ದೌರ್ಜನ್ಯವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಖಂಡಿಸಿದ್ದಾರೆ.

**ಭಾರತ-ಪಾಕಿಸ್ತಾನ ನಡುವೆ ಕದನ ವಿರಾಮ ಒಪ್ಪಂದ ಜಾರಿಯಾಗಿದ್ದು ಹೇಗೆಂದು ಇಡೀ ಜಗತ್ತಿಗೆ ಗೊತ್ತಿದೆ. ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾತ್ರ, ಕದನ ವಿರಾಮ ಒಪ್ಪಂದ ಜಾರಿಯಾಗಲು ತಾವು ಕಾರಣ ಎಂಬ ತಮ್ಮ ವಾದವನ್ನು ಮುಂದುವರೆಸಿದ್ದಾರೆ. ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಪೋಸಾ ಅವರೊಂದಿಗಿನ ಮಾತುಕತೆ ವೇಳೆಯೂ, ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷಮಯ ವಾತಾವರಣವನ್ನು ನಾವು ತಿಳಿಗೊಳಿಸಿದ್ದೇವೆ**
**-ಡೊನಾಲ್ಡ್ ಟ್ರಂಪ್**

ಈ ವಿಚಾರವಾಗಿ ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಪೋಸಾ ಅವರೊಂದಿಗೆ ಬಹಿರಂಗ ವಾಗ್ವಾದ ನಡೆಸಿರುವ ಡೊನಾಲ್ಡ್ ಟ್ರಂಪ್, ಬಿಳಿಯರ ರಕ್ಷಣೆಗೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಆದರೆ ದಕ್ಷಿಣ ಆಫ್ರಿಕಾ ಅಧ್ಯಕ್ಷರು ಈ ಆರೋಪಗಳನ್ನು ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ಒಟ್ಟಿನಲ್ಲಿ ಟ್ರಂಪ್ ಅವರು ಭಾರತ-ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದದಲ್ಲಿ ಮಧ್ಯಸ್ಥಿಕೆವಹಿಸಿರುವುದಾಗಿ ವಾದಿಸುತ್ತಿದ್ದಾರೆ. ಆದರೆ ಭಾರತವು ಈ ವಾದವನ್ನು ಸ್ಪಷ್ಟವಾಗಿ ತಳ್ಳಿಹಾಕಿದ್ದು, ಅಮೆರಿಕ ಕೇವಲ ಶಾಂತಿ ಸ್ಥಾಪನೆಗೆ ಪ್ರಯತ್ನ ನಡೆಸಿತೇ ವಿನಃ ಮಧ್ಯಸ್ಥಿಕೆವಹಿಸಿಲ್ಲ ಎಂದು ಸ್ಪಷ್ಟವಾಗಿ ಹೇಳಿದೆ.

# ಮಿನಿ ನ್ಯೂಸ್

## 11 ಭಾರತೀಯ ಮೀನುಗಾರರನ್ನು ಬಿಡುಗಡೆ ಮಾಡಿದ ಶ್ರೀಲಂಕಾ

**ಚೆನ್ನೈ:** ಹನ್ನೊಂದು ಭಾರತೀಯ ಮೀನುಗಾರರನ್ನು ಶ್ರೀಲಂಕಾ ಬಿಡುಗಡೆ ಮಾಡಿದೆ. ಶ್ರೀಲಂಕಾದ ಜೈಲಿನಿಂದ ಬಿಡುಗಡೆಯಾದ ಹನ್ನೊಂದು ಭಾರತೀಯ ಮೀನುಗಾರರು ಗುರುವಾರ ತಾಯ್ನಾಡಿಗೆ ಹಿಂತಿರುಗಿದರು. ತಮಿಳುನಾಡಿನ ರಾಮನಾಥಪುರಂ ಜಿಲ್ಲೆಯ ಮೀನುಗಾರರನ್ನು ಸಮುದ್ರ ಉಲ್ಲಂಘನೆ ಆರೋಪದ ಮೇಲೆ ಈ ವರ್ಷದ ಜನವರಿಯಲ್ಲಿ ಶ್ರೀಲಂಕಾ ನೌಕಾಪಡೆ ಬಂಧಿಸಿತ್ತು. ಶ್ರೀಲಂಕಾದ ನ್ಯಾಯಾಲಯವು ಇತ್ತೀಚೆಗೆ ಅವರನ್ನು ಬಿಡುಗಡೆ ಮಾಡಿತ್ತು. ಅವರು ಗುರುವಾರ ಮುಂಜಾನೆ ಕೊಲಂಬೊದಿಂದ ವಿಮಾನದ ಮೂಲಕ ಇಲ್ಲಿಗೆ ಆಗಮಿಸಿ ರಸ್ತೆ ಮೂಲಕ ತಮ್ಮ ಊರಿಗೆ ತೆರಳಿದರು.

## ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ಕೋಬ್ರಾ ಕಮಾಂಡೋ ಹುತಾತ್ಮ

**ರಾಯ್ಪುರ:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ಗುರುವಾರ ನಡೆದ ಮಾವೋವಾದಿ ವಿರೋಧಿ ಕಾರ್ಯಾಚರಣೆಯಲ್ಲಿ ಸಿಆರ್‌ಪಿಎಫ್‌ನ ಕೋಬ್ರಾ ಕಮಾಂಡೋ ಒಬ್ಬರು ಹುತಾತ್ಮರಾಗಿದ್ದು, ಓರ್ವ ನಕ್ಸಲೀಯನನ್ನು ಹತ್ಯೆ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲೆಯ ಉಸೂರ್ ಪೊಲೀಸ್ ಠಾಣೆ ವ್ಯಾಪ್ತಿಯ ತುಮ್ರೆಲ್ ಪ್ರದೇಶದಲ್ಲಿ ಸಿಆರ್‌ಪಿಎಫ್‌ನ ಕೋಬ್ರಾ ಘಟಕದ 210ನೇ ಬೆಟಾಲಿಯನ್, ಛತ್ತೀಸ್‌ಗಢ ಪೊಲೀಸ್ ಡಿಆರ್‌ಜಿ ಮತ್ತು ಎಸ್‌ಟಿಎಫ್‌ನ ಪಡೆಗಳ ನೇತೃತ್ವದಲ್ಲಿ ನಕ್ಸಲ್ ವಿರೋಧಿ ಕಾರ್ಯಾಚರಣೆ ಮುಂದುವರೆದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಕಾರ್ಯಾಚರಣೆಯಲ್ಲಿ ಕೋಬ್ರಾ ಕಮಾಂಡೋ ಒಬ್ಬರು ಹುತಾತ್ಮರಾಗಿದ್ದಾರೆ, ಇನ್ನೊಬ್ಬರು ಗಾಯಗೊಂಡಿದ್ದಾರೆ ಎಂದು ಅವರು ತಿಳಿಸಿದರು. ಗುಂಡಿನ ಚಕಮಕಿಯಲ್ಲಿ ಒಬ್ಬ ನಕ್ಸಲೀಯನನ್ನು ತಟಸ್ಥಗೊಳಿಸಲಾಗಿದೆ ಮತ್ತು ಶಸ್ತ್ರಾಸ್ತ್ರ ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಗಾಯಾಳುಗಳನ್ನು ಸ್ಥಳಾಂತರಿಸಲು ಐಎಎಫ್ ಹೆಲಿಕಾಪ್ಟರ್ ಅನ್ನು ಸೇವೆಗೆ ನಿಯೋಜಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಮಾಂಡೋ ಬೆಟಾಲಿಯನ್ ಫಾರ್ ರೆಸಲ್ಯೂಟ್ ಆಕ್ಷನ್ ಎಂಬುದು ಕೇಂದ್ರ ಮೀಸಲು ಪೊಲೀಸ್ ಪಡೆಯ ವಿಶೇಷ ಅರಣ್ಯ ವಾರ್ ಘಟಕವಾಗಿದ್ದು, ಇದು ಎಡಪಂಥೀಯ ಉಗ್ರವಾದ ಪೀಡಿತ ರಾಜ್ಯಗಳಲ್ಲಿ ಕಾರ್ಯಾಚರಣೆ ನಡೆಸುತ್ತಿದೆ.

## ಪಾಕಿಸ್ತಾನಕ್ಕೆ ಇನ್ನಷ್ಟು ಬುದ್ಧಿ ಕಲಿಸಬೇಕಿತ್ತು ಸುಬ್ರಮಣಿಯನ್ ಸ್ವಾಮಿ

**ಪಾಟ್ನಾ:** ಆಪರೇಷನ್ ಸಿಂಧೂರ್ ಕಾರ್ಯಾಚರಣೆ ವೇಳೆಯಲ್ಲಿ ಪಾಕಿಸ್ತಾನಕ್ಕೆ ಇನ್ನಷ್ಟು ಬುದ್ಧಿ ಕಲಿಸಬೇಕಿತ್ತು ಎಂದು ಕೇಂದ್ರದ ಮಾಜಿ ಸಚಿವ ಸುಬ್ರಮಣಿಯನ್ ಸ್ವಾಮಿ ಗುರುವಾರ ಹೇಳಿದ್ದಾರೆ. ಪಾಟ್ನಾದ ಜಯಪ್ರಕಾಶ್ ನಾರಾಯಣ್ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಹಲ್ಗಾಮ್ ಭಯೋತ್ಪಾದಕ ದಾಳಿಯು ನಮ್ಮ ನಾಗರಿಕತೆಯ ಇತಿಹಾಸದಲ್ಲಿ ಅತ್ಯಂತ ಕ್ರೂರ ಘಟನೆಗಳಲ್ಲಿ ಒಂದಾಗಿದೆ ಎಂದರು. ಆಪರೇಷನ್ ಸಿಂಧೂರ್ ತದನಂತರದ ಬೆಳವಣಿಗೆ ಕುರಿತು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಪಾಕಿಸ್ತಾನ ಪಹಲ್ಗಾಮ್ ಹತ್ಯಾಕಾಂಡಕ್ಕೆ ಸಂಚು ರೂಪಿಸುವ ಮೂಲಕ ಸಂಘರ್ಷವನ್ನು ಆರಂಭಿಸಿತು. ಇದು ನಮ್ಮ ನಾಗರೀಕತೆಯ ಇತಿಹಾಸದಲ್ಲಿ ಅತ್ಯಂತ ಕ್ರೂರ ಘಟನೆಯಾಗಿದೆ. ಹಾಗಾಗಿ, ಪಾಕಿಸ್ತಾನಕ್ಕೆ ಇನ್ನಷ್ಟು ಬುದ್ಧಿ ಕಲಿಸಬೇಕಿತ್ತು ಎಂದು ಹೇಳಿದರು. ಗಡಿಯಾಚೆಗಿನ ಪಾಕ್ ಪ್ರೇರಿತ ಭಯೋತ್ಪಾದನೆಯನ್ನು ವಿವರಿಸಲು ವಿವಿಧ ದೇಶಗಳಿಗೆ ತೆರಳುತ್ತಿರುವ ಸರ್ವ ಪಕ್ಷ ನಿಯೋಗ ಕುರಿತ ಪ್ರಶ್ನೆಗೆ ಉತ್ತರಿಸಿದ ಸುಬ್ರಮಣಿಯನ್ ಸ್ವಾಮಿ, ಈ ನಿಯೋಗಗಳು ಯಾವುದೇ ಪರಿಣಾಮ ಬೀರುವುದಿಲ್ಲ. ಸದಸ್ಯರು ಸರ್ಕಾರಿ ಹಣದಲ್ಲಿ ಎಂಜಾಯ್ ಮಾಡಲಿದ್ದಾರೆ ಎಂಬುದು ಎಲ್ಲರಿಗೂ ತಿಳಿದಿರುವ ವಿಷಯವಾಗಿದೆ ಎಂದರು.

## ಎನ್‌ಕೌಂಟರ್ ಮುಗಿಸಿ ಹಿಂತಿರುಗುತ್ತಿದ್ದ ಡಿಆರ್‌ಜಿ ಯೋಧ ಹುತಾತ್ಮ

**ನಾರಾಯಣಪುರ:** ಛತ್ತೀಸಗಢದ ನಾರಾಯಣಪುರ ಜಿಲ್ಲೆಯಲ್ಲಿ ನಕ್ಸಲರು ಇರಿಸಿದ್ದ ಸುಧಾರಿತ ಸ್ಫೋಟಕ ಸಾಧನ ಸ್ಫೋಟಗೊಂಡು ರಾಜ್ಯ ಪೊಲೀಸ್‌ನ ಜಿಲ್ಲಾ ಮೀಸಲು ಪಡೆ ಯೋಧ ಸಾವಿಗೀಡಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಂಜೆ ದಟ್ಟ ಅರಣ್ಯದ ಅಭುಜ್‌ಮದ್ ಪ್ರದೇಶದಲ್ಲಿ ಮಾವೋವಾದಿಗಳೊಂದಿಗೆ ನಡೆದ ಪ್ರಮುಖ ಎನ್‌ಕೌಂಟರ್ ನಂತರ ಭದ್ರತಾ ಸಿಬ್ಬಂದಿ ಹಿಂತಿರುಗುತ್ತಿದ್ದ ವೇಳೆ ಐಇಡಿ ಸ್ಫೋಟಗೊಂಡಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ನಾರಾಯಣಪುರ ಮತ್ತು ಬಿಜಾಪುರ ಜಿಲ್ಲೆಗಳ ಗಡಿಯಲ್ಲಿರುವ ಕಾಡುಗಳಲ್ಲಿ ನಡೆದ ಈ ಎನ್‌ಕೌಂಟರ್‌ನಲ್ಲಿ ನಿಷೇಧಿತ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ ಪ್ರಧಾನ ಕಾರ್ಯದರ್ಶಿ ನಂಬಲ ಕೇಶವ ರಾವ್ ಅಲಿಯಾಸ್ ಬಸವರಾಜು (70) ಸೇರಿದಂತೆ ಕನಿಷ್ಠ 27 ನಕ್ಸಲರು ಸಾವಿಗೀಡಾಗಿದ್ದಾರೆ. ಎನ್‌ಕೌಂಟರ್‌ನಿಂದ ಹಿಂದಿರುಗುತ್ತಿದ್ದ ವೇಳೆ ಬಿಜಾಪುರ ಡಿಆರ್‌ಜಿಗೆ ಸೇರಿದ ಯೋದ ರಮೇಶ್ ಹೆಮ್ಲಾ ಎಂಬುವವರು ಒತ್ತಡ-ಸಕ್ರಿಯಗೊಳಿಸಿದ ಐಇಡಿ ಮೇಲೆ ಹೆಜ್ಜೆ ಇಟ್ಟಿದ್ದಾರೆ. ಇದರಿಂದಾಗಿ ಸ್ಫೋಟ ಸಂಭವಿಸಿ, ಸ್ಥಳದಲ್ಲೇ ಅವರು ಮೃತಪಟ್ಟಿದ್ದಾರೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

## ಪಾಕ್ ಡ್ರೋನ್ ಉರುಳಿಸಲು 15 ಲಕ್ಷದ ಕ್ಷಿಪಣಿ ಏಕೆ?: ಕೈ ನಾಯಕ

**ನಾಗುರ:** ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಸಂದರ್ಭದಲ್ಲಿ ಚೀನಾ ನಿರ್ಮಿತ ಕಡಿಮೆ ಬೆಲೆಯ ಪಾಕಿಸ್ತಾನದ ಡ್ರೋನ್‌ಗಳನ್ನು ಹೊಡೆದುರುಳಿಸಲು 15 ಲಕ್ಷ ಮೌಲ್ಯದ ಕ್ಷಿಪಣಿಗಳನ್ನು ಏಕೆ ಬಳಸಲಾಯಿತು ಎಂದು ಕಾಂಗ್ರೆಸ್ ನಾಯಕರೊಬ್ಬರು ಪ್ರಶ್ನೆ ಮಾಡಿದ್ದಾರೆ. 'ಬಹುಶಃ ಪಾಕಿಸ್ತಾನ ಹಾರಿಸಿರುವ ಚೀನಾ ನಿರ್ಮಿತ ಡ್ರೋನ್‌ಗಳ ಬೆಲೆ ತಲಾ 15,000 ಆಗಿರುವ ಸಾಧ್ಯತೆಯಿದೆ. ಇವುಗಳನ್ನು ಹೊಡೆದುರುಳಿಸಲು ಭಾರತ ತಲಾ 15 ಲಕ್ಷ ಬೆಲೆಬಾಳುವ ಕ್ಷಿಪಣಿಗಳನ್ನು ಬಳಕೆ ಮಾಡಿದೆ. ಹಾಗಾಗಿ ನಮಗೆ ಆದ ನಷ್ಟದ ಕುರಿತು ಸರ್ಕಾರ ಮಾಹಿತಿ ನೀಡಬೇಕು' ಎಂದು ಮಹಾರಾಷ್ಟ್ರದ ಕಾಂಗ್ರೆಸ್ ನಾಯಕ ವಿಜಯ್ ವಡೆಟ್ಟಿವಾರ್ ಆಗ್ರಹಿಸಿದ್ದಾರೆ. ನಾಗ್ಪುರದಲ್ಲಿ ಮಾತನಾಡಿದ ಅವರು, ಪಾಕ್ ವಿರುದ್ಧದ ಸಂಘರ್ಷದಲ್ಲಿ ಉಂಟಾಗಿರುವ ನಷ್ಟದ ಕುರಿತು ಕೇಳುವುದು ತಪ್ಪೇ ಎಂದು ಪ್ರಶ್ನಿಸಿದ್ದಾರೆ. ಸೇನಾ ಕಾರ್ಯಾಚರಣೆಯನ್ನು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, 'ಚುಟ್‌ಪುಟ್' (ಸಣ್ಣಯುದ್ಧ) ಎಂದು ಕರೆದಿದ್ದಾರೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, 'ಸಂಘರ್ಷದಲ್ಲಿ ದೇಶಕ್ಕೆ ಆದ ನಷ್ಟ ಹಾಗೂ ಯೋಧರ ಸಾವು-ನೋವುಗಳ ಕುರಿತು ಸರ್ಕಾರವನ್ನು ಪ್ರಶ್ನಿಸುವುದು ತಪ್ಪಲ್ಲ ಎಂದು ತಿಳಿಸಿದ್ದಾರೆ. ಪಾಕ್ ವಿರುದ್ಧದ ಯುದ್ಧದಲ್ಲಿ ನಮ್ಮ ರಫೇಲ್ ಯುದ್ಧ ವಿಮಾನ ನಷ್ಟವಾಗಿದೆಯೇ?' ಎಂದೂ ಕೇಳಿದ್ದಾರೆ.

# ರೇಪ್ ಕೇಸ್ ದಾಖಲಾದ ಬಳಿಕ ಮಡೆನೂರು ಮನು ಬಾಂಬ್

ಅತ್ಯಾಚಾರ ಪ್ರಕರಣದ ದಾಖಲಾದ ಬಳಿಕ ನಾಪತ್ತೆಯಾಗಿದ್ದ ನಟ ಮಡೆನೂರು ಮನು ವಿಡಿಯೋವೊಂದನ್ನು ಹರಿಬಿಟ್ಟಿದ್ದಾರೆ. ಈ ವಿಡಿಯೋನಲ್ಲಿ ನನ್ನ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಿರುವ ಸಹ ಕಲಾವಿದೆ ಹಿಂದೆ ಇಬ್ಬರು ಹೀರೋಗಳು ಹಾಗೂ ಓರ್ವ ಲೇಡಿ ಡಾನ್ ಇದ್ದಾಳೆ ಎಂದು ಬಾಂಬ್ ಸಿಡಿಸಿದ್ದಾರೆ.

ಸಂಭಾವನೆ ನೀಡುವ ನೆಪದಲ್ಲಿ ಬಂದು ನನ್ನ ಮೇಲೆ ಕಾಮಿಡಿ ಕಿಲಾಡಿ ಖ್ಯಾತಿಯ ಮಡೆನೂರು ಮನು ಅತ್ಯಾಚಾರ ಎಸಗಿದ್ದಾನೆ ಎಂದು ಆರೋಪಿಸಿ ಸಹ ಕಲಾವಿದೆ ದೂರು ನೀಡಿದ್ದರು. ಈ ಸಂಬಂಧ ಅತ್ಯಾಚಾರ ಪ್ರಕರಣದ ದಾಖಲಿಸಿಕೊಂಡಿದ್ದ ಬೆಂಗಳೂರಿನ ಅನ್ನಪೂರ್ಣೇಶ್ವರಿ ನಗರ ಪೊಲೀಸರು ಬಂಧಿಸಿದ್ದಾರೆ. ಈ ಬೆನ್ನಲ್ಲೇ ಮನು ಮಾತನಾಡಿರುವ ವಿಡಿಯೋವೊಂದು ಲಭ್ಯವಾಗಿದೆ. ಇದು ಉದ್ದೇಶಪೂರ್ವಕವಾಗಿ ಅಂತ ನಾನೇನು



ಅವಳ ಹಿಂದೆ ಇಬ್ಬರು ಹೀರೋ, ಒಬ್ಬಳು ಲೇಡಿ ಡಾನ್

ಹೇಳಬೇಕಿಲ್ಲ ಎಲ್ಲಾರಿಗೂ ಗೊತ್ತಾಗಿದೆ. ಕಷ್ಟಪಟ್ಟು, ಇಷ್ಟಪಟ್ಟು ಮಾಡಿರುವ ಕುಲದಲ್ಲಿ ಕೀಳ್ಯಾವುದೋ ಸಿನಿಮಾ ನಾಳೆ ರಾಜ್ಯಾದ್ಯಂತ ರಿಲೀಸ್ ಆಗ್ತಿದೆ. ಹೀಗಿರುವಾಗ ಎಫ್‌ಐಆರ್ ಮಾಡುವಂತಹ ಅವಶ್ಯಕತೆ ಇರಲಿಲ್ಲ. ಇತ್ತೀಚೆಗೆ ನಾನು ಆಕೆಯೊಂದಿಗೆ ಮಾತನಾಡಿದ್ದೆ. ಆಗ ನಾನು ಸುಮ್ಮನಿದ್ರೂ ಬೇರೆಯವರು ಬಿಡ್ತಿಲ್ಲ. ಈ ರೀತಿ ಮಾಡು ಅಂತ ಹೇಳಿಕೊಡ್ತಿದ್ದಾರೆ ಅಂತ ಅವಳೇ ಹೇಳಿದ್ದಳು. ಯಾರ ಯಾರು ಹೇಳಿಕೊಡ್ತಿದ್ದಾರೆ ಅಂತ ಕೂಡ ಬಾಯಿಬಿಟ್ಟಿದ್ದಾಳೆ ಎಂದಿದ್ದಾರೆ. ಮುಂದುವರಿದು.. ಅವಳ ಜೊತೆಯಲ್ಲಿದ್ದವರೇ ಹೇಳಿಕೊಟ್ಟಿದ್ದಾರೆ. ಆಕೆ ಹಿಂದೆ ಇಬ್ಬರು ಹೀರೋ, ಓಬ್ಬಳು ಲೇಡಿ ಡಾನ್ ಸೇರಿ 12 ಜನ ಇದ್ದಾರೆ. ಇತ್ತೀಚೆಗೆ ಕೂಡ ನನ್ನ ಸಾವು ಬಯಸಿ ನಗುತ್ತಿದ್ದರಂತೆ. ನಾನು ಯಾರಿಗೇನು ಮಾಡಿದ್ದೇನೆ ಅಂತ ಗೊತ್ತಿಲ್ಲ. ನಾನಾಯ್ತು ಸಿನಿಮಾ ಕೆಲಸ ಆಯ್ತು ಅಂತ ಇರ್ತೀನಿ. ಇಲ್ಲದಿದ್ರೆ ಜಮೀನು ಕೆಲಸ ಮಾಡ್ತೀನಿ. ಆದ್ರೆ ನನ್ನ ವಿರುದ್ಧ ಪ್ರತಿಯೊಂದು ಆರೋಪಕ್ಕೂ ಸಾಕ್ಷಿ ಕೊಡ್ತೀನಿ ಅಂತ ಹೇಳಿದ್ದಾರೆ. ಈಗ 2 ತಿಂಗಳಿಂದ ಸಿನಿಮಾಗೆ ಎಲ್ಲಾರನ್ನೂ ಕರೆದಿದ್ದೇನೆ. ಪಾಪ ನಿರ್ಮಾಪಕರು ದುಡ್ಡು ಎಲ್ಲಿಂದ ತಂದಿರ್ತಾರೆ ಗೊತ್ತಿಲ್ಲ. ಈ ಕೇಸ್ ನಿಂದ ಅವರಿಗೆ ಸಮಸ್ಯೆ ಆಗಬಾರದು. ಶೀಘ್ರದಲ್ಲೇ ನಾನು ಕಾನೂನಿನ ಮೂಲಕ ಉತ್ತರ ಕೊಡುವ ಕೆಲಸ ಮಾಡ್ತೀನಿ ಅಂತ ವಿಡಿಯೋನಲ್ಲಿ ಹೇಳಿದ್ದಾರೆ.

# ಸಿಂಧೂರ ಹಣೆಗಿಟ್ಟು ರೆಡ್ ಕಾರ್ಪೆಟ್‌ನಲ್ಲಿ ಮಿಂಚಿದ ಐಶ್ವರ್ಯಾ ರೈ

## ಗಾಸಿಪ್ ಹಬ್ಬಿಸುವವರಿಗೆ ತಕ್ಕ ಉತ್ತರ



ಕಾನ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ಬಾಲಿವುಡ್ ಬೆಡಗಿ ಐಶ್ವರ್ಯಾ ರೈ ಮಿಂಚಿದ್ದಾರೆ. ಸಿಂಧೂರ ಹಣೆಗಿಟ್ಟು ರೆಡ್ ಕಾರ್ಪೆಟ್‌ನಲ್ಲಿ ನಟಿ ಹೆಜ್ಜೆ ಹಾಕಿದ್ದಾರೆ. ಈ ಮೂಲಕ ಡಿವೋರ್ಸ್ ವದಂತಿ ಹಬ್ಬಿಸುವವರಿಗೆ ನಟಿ ತಕ್ಕ ಉತ್ತರ ನೀಡಿದ್ದಾರೆ. 378ನೇ ಕಾನ್ ಫಿಲ್ಮ್ ಫೆಸ್ಟಿವಲ್ ಮೇ 13ರಿಂದ ಆರಂಭ ಗೊಂಡಿದ್ದು, 24ರವರೆಗೆ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಭಾಗಿಯಾಗಲು ಫಿಲ್ಮ್ ಫೆಸ್ಟಿವಲ್ ಟೀಮ್ ಅಳೆದು ತೂಗಿ ಕೆಲವೇ ಕೆಲವು ತಾರೆಯರಿಗೆ ಮಾತ್ರ ಆಮಂತ್ರಣ ನೀಡುತ್ತಾರೆ. ದೇಶ ವಿದೇಶದ ಕಲಾವಿದರಿಗೆ ಆಹ್ವಾನಿಸುತ್ತಾರೆ. ಈ ಕಾರ್ಯಕ್ರಮಕ್ಕೆ ಖ್ಯಾತ ನಟಿ ಐಶ್ವರ್ಯಾ ರೈ ಕೂಡ ಭಾಗಿಯಾಗಿದ್ದಾರೆ.

ಬಿಳಿ ಬಣ್ಣದ ಸೀರೆಯಲ್ಲಿ ನಟಿ ಕಂಗೊಳಿಸಿದ್ದಾರೆ. ಹಣೆಗೆ ಸಿಂಧೂರವಿಟ್ಟು ಸಾಂಪ್ರದಾಯಿಕ ಲುಕ್ ನಲ್ಲಿ ಐಶ್ವರ್ಯಾ ಮಿಂಚಿದ್ದಾರೆ. ರೆಡ್ ಕಾರ್ಪೆಟ್‌ನಲ್ಲಿ ಹೆಜ್ಜೆ ಹಾಕುವಾಗ ನಗುತ್ತಾ ಕೈ ಮುಗಿದು ನಟಿ ನಮಸ್ಕರಿಸಿದ್ದಾರೆ. ಇದು ಅಭಿಮಾನಿಗಳ ಗಮನ ಸೆಳೆದಿದೆ. ಅಭಿಷೇಕ್ ಬಚ್ಚನ್ ಜೊತೆಗಿನ ನಟಿಯ ದಾಂಪತ್ಯ ಸರಿಯಿಲ್ಲ ಎಂದು ಗಾಸಿಪ್ ಹಬ್ಬಿಸುವವರಿಗೆ ತಕ್ಕ ಉತ್ತರ ಕೊಟ್ಟಿದ್ದಾರೆ.

ಈ ಕಾರ್ಯಕ್ರಮಕ್ಕೆ ಕನ್ನಡತಿ ದಿಶಾ ಮದನ್, ಪ್ರಣಿತಾ ಸುಭಾಷ್, ಜಾನ್ವಿ ಕಪೂರ್, ರುಚಿ ಗುಜ್ಜರ್, ಆದಿತಿ ರಾವ್ ಹೈದರಿ, ಮೌನಿ ರಾಯ್ ಸೇರಿದಂತೆ ಅನೇಕರು ಭಾಗಿಯಾಗಿದ್ದಾರೆ. ಐಶ್ವರ್ಯಾ ರೈ ಭಾಗಿ ಯಾಗ್ತಿರೋದು ಇದೇ ಮೊದಲೇನಲ್ಲ. ಕಳೆದ ವರ್ಷ ಕೂಡ ನಟಿ ಭಾಗಿಯಾಗಿದ್ದರು. ಮಗಳು ಆರಾಧ್ಯ ಈ ಕಾರ್ಯಕ್ರಮಕ್ಕೆ ಸಾಕ್ಷಿಯಾಗಿದ್ದರು. ಅಮ್ಮನ ರೆಡ್ ಕಾರ್ಪೆಟ್‌ನಲ್ಲಿ ವಾಕ್ ನೋಡಿ ಖುಷಿಪಟ್ಟಿದ್ದರು.

ಬಾಲಿವುಡ್ ಚಿತ್ರರಂಗದ ಸೌಂದರ್ಯದ ಗಣಿ ಐಶ್ವರ್ಯಾ ರೈ ಅವರು ಕಳೆದ ವರ್ಷ ತೆರೆಕಂಡ 'ಪೊನ್ನಿಯನ್ ಸೆಲ್ವನ್ 2'ರಲ್ಲಿ ನಟಿಸಿದ್ದರು. ಇದನ್ನು ಖ್ಯಾತ ನಿರ್ದೇಶಕ ಮಣಿರತ್ನಂ ನಿರ್ದೇಶನ ಮಾಡಿದ್ದರು.

# 'ಜೇಮ್ಸ್' ಡೈರೆಕ್ಟರ್ ಚೇತನ್ ಚಿತ್ರದಲ್ಲಿ ಗೋಲ್ಡನ್ ಸ್ಟಾರ್

'ಕೃಷ್ಣಂ ಪ್ರಣಯ ಸಖಿ' ಸಿನಿಮಾ ಸಕ್ಸಸ್ ಬಳಿಕ ಗೋಲ್ಡನ್ ಸ್ಟಾರ್ ಗಣೇಶ್ ಅವರು 'ಜೇಮ್ಸ್' ಡೈರೆಕ್ಟರ್ ಚೇತನ್ ಕುಮಾರ್ ನಿರ್ದೇಶನದ ಚಿತ್ರದಲ್ಲಿ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಗಣೇಶ್ ಈಗೀಗ ಸ್ಕ್ರಿಪ್ಟ್ ಆಯ್ಕೆ ಮಾಡೋದ್ರಲ್ಲಿ ಸಖತ್ ಬ್ಯೂಸಿಯಾಗಿದ್ದಾರೆ. ಗಣೇಶ್‌ಗೆ ಒಂದು ವರ್ಷದ ಹಿಂದೆಯೇ ಚೇತನ್ ಕಥೆ ಹೇಳಿದ್ದರು.

ಕಥೆ ಇಷ್ಟವಾಗಿ ಸಿನಿಮಾಗೆ ಓಕೆ ಎಂದಿದ್ದರು. ಆದರೆ ನಿರ್ಮಾಣ ಸಂಸ್ಥೆ ಅಂತಿಮಗೊಂಡಿರಲಿಲ್ಲ. ಇದೀಗ ಎಲ್ಲಾವೂ ಅಂತಿಮವಾಗಿದ್ದು, ಆಗಸ್ಟ್ ಅಥವಾ ಸೆಪ್ಟೆಂಬರ್‌ನಲ್ಲಿ ಚಿತ್ರೀಕರಣ ಶುರುವಾಗಲಿದೆ. ಪಿನಾಕ, ಯುವರ್ಸ್ ಸಿನ್ಸಿಯರ್ಲಿ ರಾಮ್, 'ಹನುಮಾನ್' ಖ್ಯಾತಿಯ ನಟಿ ಅಮೃತಾ ಅಯ್ಯರ್ ಜೊತೆಗಿನ ಚಿತ್ರದ ಶೂಟಿಂಗ್‌ನಲ್ಲಿ ನಟ ತೊಡಗಿಸಿಕೊಂಡಿದ್ದಾರೆ.

ಆ ನಂತರ ಚೇತನ್ ಜೊತೆ ಗಣೇಶ್ ಸಿನಿಮಾ ಮಾಡಲಿದ್ದಾರೆ. ಇತ್ತ 'ಗಟ್ಟಿಮೇಳ' ನಟ ರಕ್ಷ್ ಜೊತೆ ಚೇತನ್ ಬರ್ಮ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ.

ಹೀಗಾಗಿ ಒಪ್ಪಿಕೊಂಡ ಚಿತ್ರಗಳು ಇಬ್ಬರೂ ಪೂರ್ಣಗೊಳಿಸಿದ್ಮೇಲೆ ಆಗಸ್ಟ್‌ನಲ್ಲಿ ಚಿತ್ರ ಸೆಟ್ಟೇರಲಿದೆ. ಗಣೇಶ್‌ಗಾಗಿ ವಿಭಿನ್ನ ಕಥೆಯನ್ನೇ ಚೇತನ್ ಬರೆದಿದ್ದಾರೆ.

ಸಿನಿ ವಾಹಿನಿ

# ಸೂರ್ಯ ಸಿನಿಮಾದಲ್ಲಿ ವಿಜಯ್ ದೇವರಕೊಂಡ



ಭಾಗ್ಯಶ್ರೀ ಜೊತೆ ನಟ ರೊಮ್ಯಾನ್ಸ್

ತಮಿಳು ನಟ ಸೂರ್ಯ ನಟನೆಯ 46ನೇ ಚಿತ್ರದಲ್ಲಿ ವಿಜಯ್ ದೇವರಕೊಂಡ ನಟಿಸಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಇತ್ತೀಚೆಗೆ ಸೂರ್ಯ ನಟನೆಯ 46ನೇ ಚಿತ್ರಕ್ಕೆ ಅದ್ದೂರಿಯಾಗಿ ಚಾಲನೆ ನೀಡಲಾಗಿತ್ತು. ಈ ಸಿನಿಮಾದಲ್ಲಿ ನಾಯಕಿಯಾಗಿ 'ಪ್ರೇಮಲು' ನಟಿ ಮಮಿತಾ ಬೈಜು ನಟಿಸಲಿದ್ದಾರೆ.

ಚಿತ್ರದಲ್ಲಿ ವಿಜಯ್ ದೇವರಕೊಂಡ ಕೂಡ ನಟಿಸಲಿದ್ದಾರೆ ಎನ್ನಲಾಗಿದೆ. ಹೀಗೊಂದು ಸುದ್ದಿಯೊಂದು ಟಾಲಿವುಡ್ ಗಲ್ಲಿಯಲ್ಲಿ ಚರ್ಚೆಗೆ ಗ್ರಾಸವಾಗಿದೆ. ಚಿತ್ರದಲ್ಲಿ ತಿರುವು ಕೊಡುವ ಪಾತ್ರದಲ್ಲಿ ವಿಜಯ್ ನಟಿಸಲಿದ್ದಾರೆ ಎನ್ನಲಾಗಿದೆ. ನಟನೊಂದಿಗೆ ಚಿತ್ರತಂಡ ಮಾತುಕತೆ ನಡೆಸಿದೆಯಂತೆ. ಆದರೆ ವಿಜಯ್ ದೇವರ ಕೊಂಡ ಕಡೆಯಿಂದ ಗ್ರೀನ್ ಸಿಗ್ನಲ್ ಸಿಕ್ಕಿದೆಯಾ ಎಂಬುದನ್ನು ಚಿತ್ರತಂಡವೇ ಅಧಿಕೃತವಾಗಿ ತಿಳಿಸಬೇಕಿದೆ. ವಿಜಯ್ ಸದ್ಯ 'ಕಿಂಗ್‌ಡಮ್' ಚಿತ್ರದ ರಿಲೀಸ್‌ಗಾಗಿ ಎದುರು ನೋಡ್ತಿದ್ದಾರೆ. ಭಾಗ್ಯಶ್ರೀ ಜೊತೆ ನಟ ರೊಮ್ಯಾನ್ಸ್ ಮಾಡಿದ್ದಾರೆ. ಈ ಚಿತ್ರ ಜುಲೈ 4ರಂದು ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ.



# ಮುಂಬೈ ಇಂಡಿಯನ್ಸ್ ಫಿಕ್ಸಿಂಗ್ ಮಾಡಿ ಗೆದ್ರಾ...

ಇಂಡಿಯನ್ ಪ್ರೀಮಿಯರ್ ಲೀಗ್‌ನ 63ನೇ ಪಂದ್ಯದ ಮುಕ್ತಾಯದ ಬೆನ್ನಲ್ಲೇ ಸೋಷಿಯಲ್ ಮೀಡಿಯಾದಲ್ಲಿ ಫಿಕ್ಸಿಂಗ್ ಆರೋಪ ಕೇಳಿ ಬಂದಿದೆ. ಅದು ಕೂಡ ಮುಂಬೈ ಇಂಡಿಯನ್ಸ್ ವಿರುದ್ಧ. ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಅಂಪೈರ್ ಮುಂಬೈ ಇಂಡಿಯನ್ಸ್ ಪರ ತೀರ್ಪು ನೀಡಿದ್ದಾರೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಆರೋಪಿಸಲಾಗುತ್ತಿದೆ. ಆದರೆ ಈ ಆರೋಪಗಳಿಗೆ ಹುರುಳಿಲ್ಲ ಎಂಬುದಕ್ಕೆ ಸಾಕ್ಷಿ ಇಲ್ಲಿದೆ...

ಸೋಷಿಯಲ್ ಮೀಡಿಯಾದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಕೇಳಿ ಬರುತ್ತಿರುವ ಮೊದಲ ಆರೋಪ ಮಿಚೆಲ್ ಸ್ಯಾಂಟ್ನರ್ ಅವರ ನೋಬಾಲ್. ಸೈಡ್ ಲೈನ್‌ಗೆ ಅವರ ಕಾಲು ತಾಗಿದ್ದರಿಂದ ಅದನ್ನು ಅಂಪೈರ್ ನೋಬಾಲ್ ನೀಡಬೇಕಿತ್ತು ಎಂದು ಅನೇಕರು ವಾದಿಸುತ್ತಿದ್ದಾರೆ. ಆದರೆ ಇಲ್ಲಿ ಸ್ಯಾಂಟ್ನರ್ ಅವರ ಮುಂಬದಿಯ ಕಾಲು ಸೈಡ್ ಲೈನ್‌ಗೆ ತಾಗಿರುವುದನ್ನು ಗಮನಿಸಬೇಕು. ಅಂದರೆ ರಿಟರ್ನ್ ಕ್ರೀಸ್‌ಗೆ (ಸೈಡ್ ಲೈನ್) ಅವರ ಹಿಂಬದಿಯ ಕಾಲು ತಾಗಿದರೆ ಮಾತ್ರ ನೋಬಾಲ್ ಎಂದು ಪರಿಗಣಿಸಲಾಗುತ್ತದೆ. ಇಲ್ಲಿ ಸ್ಯಾಂಟ್ನರ್ ಅವರ ಮುಂಬದಿಯ ಕಾಲು ಮಾತ್ರ ತಾಗಿದೆ. ಇದೇ ಎಸೆತದಲ್ಲಿ ಅವರ ಹಿಂಬದಿಯ ಕಾಲು ಎಲ್ಲಿತ್ತು ಎಂಬುದನ್ನು 2ನೇ ಚಿತ್ರದಲ್ಲಿ ನೋಡಬಹುದು. ಹಾಗೆಯೇ ಮಿಚೆಲ್ ಸ್ಟಾರ್ಕ್ ಅವರ ಹಿಂಬದಿಯ ಕಾಲು ಸೈಡ್ ಲೈನ್‌ಗೆ ತಾಗಿರುವುದಕ್ಕೆ ನೋ ಬಾಲ್ ನೀಡಲಾಗಿತ್ತು ಎಂಬುದನ್ನು ಸಹ ಇಲ್ಲಿ ಗಮನಿಸಬಹುದು. ಹೀಗಾಗಿ ಮಿಚೆಲ್ ಸ್ಯಾಂಟ್ನರ್ ಎಸೆದ ಚೆಂಡು ನೋಬಾಲ್ ಆಗಿರಲಿಲ್ಲ.

ಆರೋಪಕ್ಕೆ ಯಾವುದೇ ಹುರುಳಿಲ್ಲ

ಇನ್ನು ವಿಪ್ರಾಜ್ ನಿಗಮ್ ಬಾರಿಸಿದ ಚೆಂಡನ್ನು ಅಂಪೈರ್ ಸಿಕ್ಸ್ ಬದಲಿಗೆ ಫೋರ್ ನೀಡಿದ್ದಾರೆ ಎಂಬ ಆರೋಪವನ್ನು ಸಹ ಸೋಷಿಯಲ್ ಮೀಡಿಯಾದಲ್ಲಿ ಮುಂದಿಡಲಾಗುತ್ತಿದೆ. ಆದರೆ ಅದು ಫೋರ್ ಆಗಿದ್ದರಿಂದ ಫೋರ್ ರನ್ ನೀಡಿದ್ದರು ಎಂಬುದೇ ಸತ್ಯ. ಏಕೆಂದರೆ ಚೆಂಡು ಬೌಂಡರಿ ಲೈನ್ ಬಳಿ ಪಿಚ್ ಆಗಿತ್ತು. ಇಲ್ಲಿ ಚೆಂಡು ಪಿಚ್ ಆಗಿರುವ ಫೋಟೋವನ್ನು ನೀಡಲಾಗಿದೆ. ಆದರೆ ಸೋಷಿಯಲ್ ಮೀಡಿಯಾದಲ್ಲಿ ಪಿಚ್ ಆದ ಬಳಿಕ ಬೌಂಡರಿ ಲೈನ್ ದಾಟಿದ ಚೆಂಡಿನ ಫೋಟೋವನ್ನು ಮಾತ್ರ ಹಂಚಿಕೊಳ್ಳಲಾಗಿದೆ. ಹೀಗಾಗಿ ಈ ಆರೋಪ ಕೂಡ ಸತ್ಯಕ್ಕೆ ದೂರ,

ಹಾಗೆಯೇ ಅಭಿಷೇಕ್ ಪೊರೆಲ್ ಅವರ ಸ್ಟಂಪ್ ಔಟ್ ಬಗ್ಗೆಯೂ ಆರೋಪಗಳು ಕೇಳಿ ಬರುತ್ತಿವೆ. ಇಲ್ಲಿ ಅಭಿಷೇಕ್ ಪೊರೆಲ್ ಕಾಲು ನೆಲಕ್ಕೆ ತಾಗುವ ಮುಂಚೆ ಬೇಲ್ಸ್ ಎಗರಿದ್ದರಿಂದ ಮೂರನೇ ಅಂಪೈರ್ ಅದನ್ನು ಔಟ್ ನೀಡಿದ್ದಾರೆ ಎಂಬುದೇ ಸತ್ಯ. ಅಂದರೆ ಇಲ್ಲಿ ಸ್ಟಂಪ್ ಬೇಲ್ಸ್ ಎಗರುವುದನ್ನು ಪರಿಗಣಿಸಲಾಗುತ್ತದೆ ಹೊರತು ಕೆಳಗೆ ಬೀಳುವುದನ್ನಲ್ಲ. ಅದರಂತೆ ಬೇಲ್ಸ್ ಸ್ಟಂಪ್ ಮೇಲಿಂದ ಎಗರುವಾಗ ಅಭಿಷೇಕ್ ಅವರ ಕಾಲು ಗಾಳಿಯಲ್ಲಿತ್ತು. ಇದೇ ಕಾರಣದಿಂದಾಗಿ ಟಿವಿ ಅಂಪೈರ್ ಔಟ್ ಎಂದು ತೀರ್ಪು ನೀಡಿದ್ದರು. ಹೀಗಾಗಿ ಮುಂಬೈ ಇಂಡಿಯನ್ಸ್ ಮ್ಯಾಚ್ ಫಿಕ್ಸಿಂಗ್ ಮಾಡಿದ್ದಾರೆ ಎಂಬ ಆರೋಪಕ್ಕೆ ಯಾವುದೇ ಹುರುಳಿಲ್ಲ.

# ಆರ್‌ಸಿಬಿ ತಂಡಕ್ಕೆ ಸ್ಫೋಟಕ ದಾಂಡಿಗ ಎಂಟ್ರಿ

ಬೆಥೆಲ್ ಬದಲಿಯಾಗಿ ಟಿಮ್ ಸೈಫರ್ಟ್



ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ನ್ಯೂಝಿಲೆಂಡ್‌ನ ವಿಕೆಟ್ ಕೀಪರ್ ಬ್ಯಾಟರ್ ಟಿಮ್ ಸೈಫರ್ಟ್ ಎಂಟ್ರಿ ಕೊಟ್ಟಿದ್ದಾರೆ. ಆರ್‌ಸಿಬಿ ತಂಡದ ಮುಂದಿನ ಪಂದ್ಯಗಳಿಂದ ಯುವ ದಾಂಡಿಗ ಜೇಕಬ್ ಬೆಥೆಲ್ ಹೊರಗುಳಿಯುವುದು ಖಚಿತವಾಗಿದೆ. ಹೀಗಾಗಿ ಬದಲಿ ಆಟಗಾರನಾಗಿ ಸೈಫರ್ಟ್ ಅವರನ್ನು ಆಯ್ಕೆ ಮಾಡಲಾಗಿದೆ. ವೆಸ್ಟ್ ಇಂಡೀಸ್ ವಿರುದ್ಧದ ಸರಣಿಗಾಗಿ ಆಯ್ಕೆ ಮಾಡಲಾದ ಇಂಗ್ಲೆಂಡ್ ತಂಡದಲ್ಲಿ ಜೇಕಬ್ ಬೆಥೆಲ್ ಸ್ಥಾನ ಪಡೆದಿದ್ದು, ಹೀಗಾಗಿ ಮೇ 26ರ ಬಳಿಕ ಅವರು ಇಂಗ್ಲೆಂಡ್‌ಗೆ ಮರಳಲಿದ್ದಾರೆ. ಇದೀಗ ಅವರ ಸ್ಥಾನಕ್ಕೆ ಬದಲಿಯಾಗಿ ಟಿಮ್ ಸೈಫರ್ಟ್ ಅವರನ್ನು ಆರ್‌ಸಿಬಿ ಆಯ್ಕೆ ಮಾಡಿಕೊಂಡಿದೆ.

ಟಿಮ್ ಸೈಫರ್ಟ್ ನ್ಯೂಝಿಲೆಂಡ್‌ನ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್. ಕಿವೀಸ್ ಪರ ಈವರೆಗೆ 66 ಟಿ20 ಪಂದ್ಯಗಳನ್ನಾಡಿರುವ ಸೈಫರ್ಟ್ 63 ಇನಿಂಗ್ಸ್‌ಗಳಿಂದ 1540 ರನ್ ಕಲೆಹಾಕಿದ್ದಾರೆ. ಇದರ ನಡುವೆ 10 ಅರ್ಧಶತಕಗಳನ್ನು ಬಾರಿಸಿದ್ದಾರೆ. ಅಲ್ಲದೆ ಟಿ20ಐ ಕ್ರಿಕೆಟ್‌ನಲ್ಲಿ ಟಿಮ್ ಸೈಫರ್ಟ್ ಬ್ಯಾಟ್‌ನಿಂದ ಈವರೆಗೆ 80 ಸಿಕ್ಸ್ ಹಾಗೂ 131 ಫೋರ್‌ಗಳು ಮೂಡಿಬಂದಿವೆ.

ಸದ್ಯ ಆರ್‌ಸಿಬಿ ತಂಡದ ಭಾಗವಾಗಿರುವ ಟಿಮ್ ಸೈಫರ್ಟ್ ಈ ಹಿಂದೆ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳಲ್ಲಿ ಕಾಣಿಸಿಕೊಂಡಿದ್ದರು. ಈ ವೇಳೆ 3 ಐಪಿಎಲ್ ಪಂದ್ಯಗಳನ್ನಾಡಿರುವ ಅವರು 26 ರನ್‌ಗಳಿಸಲಷ್ಟೇ ಶಕ್ತರಾಗಿದ್ದರು. ಹೀಗಾಗಿ ಈ ಬಾರಿ ಅವರನ್ನು ಯಾವುದೇ ಫ್ರಾಂಚೈಸಿ ಖರೀದಿಸಿರಲಿಲ್ಲ. ಇದೀಗ ಬದಲಿ ಆಟಗಾರನಾಗಿ ಸ್ಥಾನ ಪಡೆಯುವಲ್ಲಿ ಕಿವೀಸ್ ದಾಂಡಿಗ ಯಶಸ್ವಿಯಾಗಿದ್ದಾರೆ.

ಅಂದಹಾಗೆ ಐಪಿಎಲ್ ಪ್ಲೇಆಫ್ ಪಂದ್ಯಗಳಿಗೂ ಮುನ್ನ ಇದು ಆರ್‌ಸಿಬಿ ತಂಡದ 2ನೇ ರೀಪ್ಲೇಸ್‌ಮೆಂಟ್. ಇದಕ್ಕೂ ಮುನ್ನ ಲುಂಗಿ ಎನ್‌ಗಿಡಿ ಬದಲಿಗೆ ಝಿಂಬಾಬ್ವೆ‌ವೇಗಿ ಬ್ಲೆಸಿಂಗ್ ಮುಝುರಬಾನಿಯನ್ನು ಆಯ್ಕೆ ಮಾಡಿಕೊಂಡಿದೆ. ಮುಂಬುರುವ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯದ ಸಿದ್ಧತೆಗಾಗಿ ಎನ್‌ಗಿಡಿ ಈ ವಾರ ಸೌತ್ ಆಫ್ರಿಕಾಗೆ ಮರಳಲಿದ್ದಾರೆ. ಹೀಗಾಗಿ ಎನ್‌ಗಿಡಿ ಬದಲಿಗೆ ಆರ್‌ಸಿಬಿ ಮುಝುರಬಾನಿಯನ್ನು ಆಯ್ಕೆ ಮಾಡಿ ಕೊಂಡಿದೆ.

# ಜಿಟಿ ವಿರುದ್ಧ ಗೆದ್ದು ಬೀಗಿದ ಎಲ್‌ಎಸ್‌ಜಿ



ಮಿಚೆಲ್ ಶತಕದ ಮಿಂಚು

ಮಿಚೆಲ್ ಮಾರ್ಷ್ ಅವರು 10 ಬೌಂಡರಿ, 8 ಸಿಕ್ಸರ್ ಒಳಗೊಂಡಂತೆ 117 ರನ್ ಬಾರಿಸಿ ಔಟ್ ಆದರು. ಇದು ಮಿಚೆಲ್ ಮಾರ್ಷ್ ಅವರ ಐಪಿಎಲ್ ವೃತ್ತಿ ಜೀವನದ ಮೊದಲ ಶತಕವಾಗಿದೆ. ಇಂಡಿಯನ್ ಪ್ರೀಮಿಯರ್ ಲೀಗ್‌ನ 64ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಪ್ರಬಲ ಗುಜರಾತ್ ಟೈಟಾನ್ಸ್ ತಂಡ ವಿರುದ್ಧ ಭರ್ಜರಿ ಗೆಲುವು ಸಾಧಿಸಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಗುಜರಾತ್ ಟೈಟಾನ್ಸ್ ತಂಡ, ಮೊದಲು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು.

ಟಾಸ್ ಸೋತರೂ ಮೊದಲು ಬ್ಯಾಟಿಂಗ್ ಮಾಡುವ ಅವಕಾಶ ಪಡೆದ ಲಕ್ನೋ ಸೂಪರ್ ಜೈಂಟ್ಸ್, ಆರಂಭಿಕರಾದ ಮಿಚೆಲ್ ಮಾರ್ಷ್(117 ) ಅವರ ಅಬ್ಬರದ ಶತಕ ಹಾಗೂ ನಿಕೋಲಸ್ ಪೂರನ್ (56) ಅವರ ಅರ್ಧಶತಕದ ನೆರವಿನಿಂದ ನಿಗದಿತ 20 ಓವರ್‌ಗಳಲ್ಲಿ ಎರಡು ವಿಕೆಟ್ ಕಳೆದುಕೊಂಡು 235 ರನ್ ಗಳ ಬೃಹತ್ ಮೊತ್ತ ಕಲೆ ಹಾಕಿತು.


**ಮಿಚೆಲ್ ಮಾರ್ಷ್:** ಮಿಚೆಲ್ ಮಾರ್ಷ್ ಅವರು 10 ಬೌಂಡರಿ, 8 ಸಿಕ್ಸರ್ ಒಳಗೊಂಡಂತೆ 117 ರನ್ ಬಾರಿಸಿ ಔಟ್ ಆದರು. ಇದು ಮಿಚೆಲ್ ಮಾರ್ಷ್ ಅವರ ಐಪಿಎಲ್ ವೃತ್ತಿ ಜೀವನದ ಮೊದಲ ಶತಕವಾಗಿದೆ. ಗೆಲುವಿಗೆ 236ರನ್ ಗಳ ಬೃಹತ್ ಗುರಿ ಬೆನ್ನತ್ತಿದ ಗುಜರಾತ್ ಟೈಟಾನ್ಸ್ ತಂಡ, 20 ಓವರ್ ಗಳಲ್ಲಿ 9 ವಿಕೆಟ್ ಕಳೆದುಕೊಂಡು 202 ರನ್ ಗಳಿಸುವ ಮೂಲಕ ಸೋಲು ಒಪ್ಪಿಕೊಂಡಿತು.

# ಟಿ20 ಕ್ರಿಕೆಟ್‌ನ ವಿಶ್ವ ದಾಖಲೆ ಸರಿಗಟ್ಟಿದ ಸೂರ್ಯಕುಮಾರ್

ಮುಂಬೈ ಇಂಡಿಯನ್ಸ್ ತಂಡದ ಹೊಡಿಬಡಿ ದಾಂಡಿಗ ಸೂರ್ಯಕುಮಾರ್ ಯಾದವ್ ಟಿ20 ಕ್ರಿಕೆಟ್‌ನಲ್ಲಿ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಅದು ಕೂಡ ಸೌತ್ ಆಫ್ರಿಕಾದ ಟೆಂಬಾ ಬವುಮಾ ಅವರ ವರ್ಲ್ಡ್ ರೆಕಾರ್ಡ್ ಅನ್ನು ಸರಿಗಟ್ಟುವ ಮೂಲಕ ಎಂಬುದು ವಿಶೇಷ. ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಐಪಿಎಲ್‌ನ 63ನೇ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಸೂರ್ಯಕುಮಾರ್ ಯಾದವ್ 43 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ 73 ರನ್ ಬಾರಿಸಿದ್ದರು. ಈ ಭರ್ಜರಿ ಬ್ಯಾಟಿಂಗ್‌ನೊಂದಿಗೆ ಟಿ20 ಕ್ರಿಕೆಟ್‌ನಲ್ಲಿ ಅಪರೂಪದ ವಿಶ್ವ ದಾಖಲೆಯನ್ನು ತಮ್ಮದಾಗಿಸಿಕೊಂಡರು.

ಅಂದರೆ ಟಿ20 ಕ್ರಿಕೆಟ್‌ನಲ್ಲಿ ಸತತವಾಗಿ ಅತ್ಯಧಿಕ ಬಾರಿ 25+ ರನ್‌ಗಳಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಸೂರ್ಯಕುಮಾರ್ ಯಾದವ್ ಮೊದಲ ಸ್ಥಾನಕ್ಕೇರಿದ್ದಾರೆ. ಸೂರ್ಯ ಕಳೆದ 13 ಇನಿಂಗ್ಸ್‌ಗಳಲ್ಲಿ ಕ್ರಮವಾಗಿ 73, 35, 48, 54, 40, 68, 26, 40, 28, 67, 27, 48 ಹಾಗೂ 29 ರನ್‌ಗಳನ್ನು ಬಾರಿಸಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ ಸತತವಾಗಿ 13 ಬಾರಿ 25+ ರನ್ ಗಳಿಸಿದ ವಿಶ್ವದ 2ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಇಂತಹದೊಂದು ಸಾಧನೆ ಮಾಡಿದ್ದು ಸೌತ್ ಆಫ್ರಿಕಾ ಟೆಂಬಾ ಬವುಮಾ. 2019-20 ರಲ್ಲಿ ಬವುಮಾ ಸತತ 13 ಇನಿಂಗ್ಸ್‌ಗಳಲ್ಲಿ 25+ ಸ್ಕೋರ್‌ಗಳಿಸಿ ವಿಶ್ವ ದಾಖಲೆ ನಿರ್ಮಿಸಿದ್ದರು. ಇದೀಗ ಈ ದಾಖಲೆಯನ್ನು ಸರಿಗಟ್ಟುವಲ್ಲಿ ಸೂರ್ಯಕುಮಾರ್ ಯಾದವ್ ಯಶಸ್ವಿಯಾಗಿದ್ದಾರೆ.

ಅಲ್ಲದೆ ಮೇ 26 ರಂದು ನಡೆಯಲಿರುವ ಪಂಜಾಬ್ ಕಿಂಗ್ಸ್ ವಿರುದ್ಧದ ಪಂದ್ಯದಲ್ಲಿ ಸೂರ್ಯಕುಮಾರ್ ಯಾದವ್ 25 ಕ್ಕಿಂತ ಹೆಚ್ಚಿನ ರನ್‌ಗಳಿಸಿದರೆ ಟಿ20 ಕ್ರಿಕೆಟ್‌ನಲ್ಲಿ ಹೊಸ ವಿಶ್ವ ದಾಖಲೆ ನಿರ್ಮಾಣವಾಗಲಿದೆ. ಅಂದರೆ ಟಿ20 ಕ್ರಿಕೆಟ್‌ನಲ್ಲಿ ಸತತ 14 ಇನಿಂಗ್ಸ್‌ನಲ್ಲಿ 25+ ಸ್ಕೋರ್‌ಗಳಿಸಿದ ವಿಶ್ವದ ಮೊದಲ ಬ್ಯಾಟರ್ ಎನಿಸಿಕೊಳ್ಳಲು ಸೂರ್ಯಕುಮಾರ್ ಯಾದವ್ ಮುಂದಿನ ಪಂದ್ಯದಲ್ಲಿ ಇಪ್ಪತ್ತೈದಕ್ಕಿಂತ ಹೆಚ್ಚಿನ ರನ್ ಗಳಿಸಿದರೆ ಸಾಕು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966